ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜುಲೈ 13 ಶನಿವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 88 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಜು.15ರಂದು ವಿಶೇಷ 'ಸ್ವಾತಿ' ಪೂಜೆ



ಮೈಸೂರು, ಜು.12–ನಗರದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜು.15ರಂದು ಸೋಮವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಚಂಪಕ ರಾಷ್ಟ್ರೀಯ ಕಲಾ ಉತ್ಸವ



ಮೈಸೂರು, ಜು. 12– ಮೈಸೂರಿನ ಚಂಪಕ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್ ವತಿಯಿಂದ ಭಾರತೀಯ ಪ್ರದರ್ಶಕ ಕಲೆಗಳ ಕಲಾವಿದರಿಗೆ ವೇದಿಕೆಯನ್ನು ನೀಡಲು 'ಚಂಪಕ ರಾಷ್ಟ್ರೀಯ ಕಲಾ ಉತ್ಸವ'ವನ್ನು ಮೈಸೂರು ಮತ್ತು ಬೆಂಗಳೂರಿನ ನುರಿತ ಕಲಾವಿದರಿಂದ ಭರತನಾಟ್ಯ ಪ್ರದರ್ಶನದೊಂದಿಗೆ ರಾಮಕೃಷ್ಣನಗರದ ಚಂಪಕ ಅಕಾಡೆಮಿ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಚಂಪಕ ಅಕಾಡೆಮಿಯ ಸಂಸ್ಥಾಪಕಿ ವಿದುಷಿ ಡಾ|| ನಾಗಲಕ್ಷ್ಮಿ ನಾಗರಾಜನ್ ಅವರ ಶಿಷ್ಯೆ, ಕುಮಾರಿ ಶ್ರೇಯ ಕಶ್ಯಪ್ ಅವರ ಭರತನಾಟ್ಯದೊಂದಿಗೆ ಆರಂಭ ಗೊಂಡಿತು. ಅವರು ಮೇಳ ಪ್ರಾಪ್ತಿ ಯೊಂದಿಗೆ ಕಾರ್ಯಕ್ರಮವನ್ನು ಪ್ರಾರಂಭಿಸಿ ಶ್ರೀರಾಮ ಸ್ತೋತ್ರ, ಕೃಷ್ಣ ಕೌತ್ವಂ ಮುಂತಾದ ಪ್ರಸಿದ್ಧ ಸಂಯೋಜನೆಗಳಿಗೆ ಪ್ರದರ್ಶನ ನೀಡಿ ಕಾರ್ಯಕ್ರಮವನ್ನು ತಿಲ್ಲಾನದೊಂದಿಗೆ ಮುಕ್ತಾಯಗೊಳಿಸಿದರು. ಕುಮಾರಿ ಶ್ರೇಯ ಕಶ್ಯಪ್ ಅವರು ಕಾಳಿಂಗ ಮರ್ದನವನ್ನು ಅತ್ಯಂತ ಆಕರ್ಷಕವಾಗಿ ಪ್ರದರ್ಶಿಸಿದರು.

ಬೆಂಗಳೂರಿನ ಶ್ರೀ ಕೃಷ್ಣ ಕಲಾಲಯದ ಸಂಸ್ಥಾಪಕರು ಮತ್ತು ನಿರ್ದೇಶಕರಾದ ವಿದುಷಿ ಸುನೀತ ಸುಕುಮಾರನ್ ಅವರ ಶಿಷ್ಯರಿಂದ ಗಣೇಶ ಸ್ತುತಿ 'ಶ್ರೀ ವಿಘ್ನ ರಾಜಂ ಭಜೆ' ಪ್ರಸಿದ್ಧ ಕೃತಿಗೆ ಭರತ ನಾಟ್ಯ ಪ್ರದರ್ಶನ ಪ್ರಾರಂಭಿಸಿ ನಂತರ ಪುಷ್ಪಾಂಜಲಿ, "ಆಕಾಶೇ ಕೈಲಾಸ ನಾಥನೆ" ಮುಂತಾದ ಪ್ರಸಿದ್ಧ ಕೃತಿಗಳಿಗೆ ಪ್ರದರ್ಶನ ನೀಡಿದರು.

ನಂದಿನಿ ನೃತ್ಯಾಲಯದ ನಿರ್ದೇಶಕರು ಗುರು ವಿದ್ವಾನ್ ಆರ್.ಕಣ್ಣನ್ ಅವರ ಶಿಷ್ಯರ ಭರತನಾಟ್ಯ ಪ್ರದರ್ಶನದೊಂದಿಗೆ ಮುಕ್ತಾಯವಾಯಿತು. ಸಿದ್ಧಾರ್ಥ ಆರ್ ವಸತಿ ಪಿಯು ಕಾಲೇಜು ಸ್ಥಾಪಕ ಪ್ರಾಂಶು ಪಾಲರಾದ ಪ್ರೊ.ಎಂ.ಎಸ್.ಕೆ. ನರಹರಿ ಬಾಬು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಬಳಿಕ ಮಾತನಾಡಿದ ಅವರು, ನಮ್ಮ ಪ್ರದೇಶದ ಸಂಸ್ಕೃತಿಯ ಮೌಲ್ಯಗಳನ್ನು ಎತ್ತಿ ಹಿಡಿಯುವ ಕಲಾ ಪ್ರಕಾರಗಳನ್ನು ಉತ್ತೇಜಿಸುವಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಮಹತ್ವ ಮತ್ತು ಯುವ ಪೀಳಿಗೆಯನ್ನು ಇಂತಹ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸುವ ಜವಾಬ್ದಾರಿ ಹಿರಿಯರ ಮೇಲಿದೆ ಎಂದು ಹೇಳಿದರು. ಟ್ರಸ್ಟಿಗಳಾದ ನಾಗರಾಜನ್ ಶ್ರೀನಿವಾಸನ್ ಮತ್ತು ದೀಪಾಮಣಿ ಕೆ.ಎ. ಉಪಸ್ಥಿತರಿದ್ದರು.

ಕರ್ನಾಟಕ ಏಕೀಕರಣಕ್ಕೆ ಆಲೂರು ವೆಂಕಟರಾಯರ ಕೊಡುಗೆ ಅಪಾರ



ಮೈಸೂರು, ಜು. 12– ಕರ್ನಾಟಕದ ಏಕೀಕರಣಕ್ಕೆ ಆಲೂರು ವೆಂಟಕರಾಯರ ಕೊಡುಗೆ ಅಪಾರವಾಗಿದ್ದು, ನಾಡಿನ ಗತ ವೈಭವದ ಬಗ್ಗೆ ತಿಳಿಸಿಕೊಡುವುದರ ಜೊತೆಗೆ ಏಕೀಕರಣದ ಕಿಚ್ಚನ್ನು ಹೊತ್ತಿಸಿ, ಬಡಿದೆಬ್ಬಿಸಿದ ಕೀರ್ತಿ ಸಲ್ಲುತ್ತದೆ ಎಂದು ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ತಿಳಿಸಿದರು.

ಮೈಸೂರಿನ ಚಾಮುಂಡಿಪುರಂ ವೃತ್ತದಲ್ಲಿರುವ ರಾಮಚಂದ್ರರಾವ್ ಉದ್ಯಾನವನದಲ್ಲಿ ಆಯೋಜಿಸಿದ್ದ ಆಲೂರು ವೆಂಕಟರಾಯರ 144ನೇ ಜನುಮದಿನದ ಅಂಗವಾಗಿ ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಮಾತನಾಡಿದರು.

ಏಕೀಕರಣಕ್ಕೂ ಮೊದಲು ಕರ್ನಾಟಕ ರಾಜ್ಯ ಹೈದರಾಬಾದ್ ಕರ್ನಾಟಕ, ಮುಂಬೈ ಕರ್ನಾಟಕ, ಮದ್ರಾಸ್ ಕರ್ನಾಟಕಗಳಲ್ಲಿ ಹರಿದು ಹಂಚಿ ಹೋಗಿತ್ತು. ಅದರಂತೆ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚಾಗಿ ಮರಾಠಿ ಶಿಕ್ಷಣ ನೀಡಲಾಗುತ್ತಿತ್ತು. ಇದನ್ನು ಮನಗಂಡ ವೆಂಕಟರಾಯರು ಏಕೀಕರಣ ಚಳವಳಿ ನಡೆಸಲು ತಮ್ಮ ಶಾಲಾ ವಿದ್ಯಾರ್ಥಿ ಸಮಯದಲ್ಲೇ ಮುಂದಾಗಿದ್ದರು. ನಾಡಿನಲ್ಲಿ ರಾಜ್ಯದ ಒಗ್ಗೂಡಿಕೆಗೆ ಪೂರಕ ಕಾರ್ಯಕ್ರಮ ನಡೆಸಿದರು ಎಂದರು. ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷರಾದ ನಾರಾಯಣಗೌಡ ಮಾತನಾಡಿ, ವೆಂಕಟರಾಯರು ರಾಷ್ಟ್ರೀಯ ಶಾಲೆ ಪ್ರಾರಂಭಿಸಿ ಕನ್ನಡಿಗರಿಗೆ ಸ್ವ ಉದ್ಯೋಗ ಮಾಡುವ ಅವಕಾಶ ಮಾಡಿಕೊಟ್ಟಿದ್ದರು. ಕರ್ನಾಟಕ ಏಕೀಕರಣ ಪರಿಷತ್ ಮೂಲಕ ಕರ್ನಾಟಕದ ಏಕೀಕರಣ ಮಾಡುವ ಮಹತ್ಕಾರ್ಯ ಮಾಡಿದ್ದರು. ತಮ್ಮ ಬಹುಮುಖ ವ್ಯಕ್ತಿತ್ವದ ಮೂಲಕ ಕನ್ನಡಿಗರನ್ನು ಒಂದುಗೂಡಿಸುವ ಕೆಲಸ ಮಾಡಿದ್ದಾರೆ ಎಂದರು.

ನಗರ ಪಾಲಿಕೆ ಮಾಜಿ ಸದಸ್ಯ ಮಾವಿ ರಾಮ್ ಪ್ರಸಾದ್, ಹಿರಿಯ ಸಾಹಿತಿ ಪುಷ್ಪ ಅಯ್ಯಂಗಾರ್, ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಸಮಾಜ ಸೇವಕರಾದ ವಿದ್ಯಾ, ವೈದೇಹಿ, ಭುವನೇಶ್ವರಿ ಸೇವಾ ಟ್ರಸ್ಟ್ ಅಧ್ಯಕ್ಷರಾದ ನಾಗಶ್ರೀ ಸುಚಿಂದ್ರ, ಸುಚಿಂದ್ರ, ಚಕ್ರಪಾಣಿ, ಬೈರತಿ ಲಿಂಗರಾಜು, ರಾಘವೇಂದ್ರ, ಸೇತುರಾವ್, ವಿರ್ಲೆ ಮನೀಶ್ ಇನ್ನಿತರರು ಹಾಜರಿದ್ದರು.

ಜು.20ರಂದು ಅಂತರಶಾಲಾ ಸಂಸ್ಕೃತೋತ್ಸವ ಸ್ಪರ್ಧೆ

ಮೈಸೂರು, ಜು. 12– ಮೈಸೂರಿನ ವಿಜಯನಗರ 1ನೇ ಹಂತದಲ್ಲಿರುವ ಭಾರತೀಯ ವಿದ್ಯಾಭವನದ ವತಿಯಿಂದ ಜು.20ರಂದು ಬೆಳಗ್ಗೆ 9.30ಕ್ಕೆ ಭಾರತೀಯ ವಿದ್ಯಾಭವನದ ಆವರಣದಲ್ಲಿ ಅಂತರಶಾಲಾ ಸಂಸ್ಕೃತೋತ್ಸವ ಸ್ಪರ್ಧೆ ಆಯೋಜಿಸಲಾಗಿದೆ. ಮಹಾಜನ ಪ್ರೌಢಶಾಲೆ ಸಂಸ್ಕೃತ ಮುಖ್ಯಸ್ಥೆ ಶ್ರೀಮತಿ ಸುಕನ್ಯಾ ರಾಮಶೇಷಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಭಾರತೀಯ ವಿದ್ಯಾಭವನ, ಮೈಸೂರು ಕೇಂದ್ರದ ಅಧ್ಯಕ್ಷರಾದ ಡಾ. ಕೆ.ಬಿ. ಗಣಪತಿ ಅಧ್ಯಕ್ಷತೆ ವಹಿಸಲಿದ್ದಾರೆ.

ಉಪಾಧ್ಯಕ್ಷ ಡಾ. ಸಿ. ನಾಗಣ್ಣ, ಖಜಾಂಚಿ ಡಾ. ಎ.ಟಿ. ಭಾಷ್ಯಂ, ಕಾರ್ಯದರ್ಶಿ ಪಿ.ಎಸ್. ಗಣಪತಿ, ಪ್ರಿನ್ಸಿಪಾಲ್ ಶ್ರೀಮತಿ ಎಸ್. ಲೇಖ ನಾಯರ್ ಉಪಸ್ಥಿತರಿರುವರು.

ಪ್ರಶಸ್ತಿ ಪ್ರದಾನ ಸಮಾರಂಭ

ಮೈಸೂರು, ಜು.12(ಬಿಎಲ್‌ಯು)– ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಸುವರ್ಣ ಕರ್ನಾಟಕ ಕಾರ್ಮಿಕರ ವೇದಿಕೆ ಜುಲೈ 14 ರಂದು ರಾಜ್ಯ ವಿಭೂಷಣ ಪ್ರಶಸ್ತಿ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಿದೆ. ಅಂದು ಬೆಳಿಗ್ಗೆ 10.30 ಗಂಟೆಗೆ ನಗರದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಸಮಾರಂಭ ನಡೆಯಲಿದ್ದು, ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಶ್ರೀ ವಿಜಯಾನಂದ ತೀರ್ಥ ಸ್ವಾಮೀಜಿ, ಡಾ.ರಾಘವೇಂದ್ರ ಮೋಕ್ಷಗುಂಡಂ ಸ್ವಾಮೀಜಿ, ಸಂಸದ ಯದುವೀರ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಅಂದು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಗಣ್ಯರಿಗೆ ಎರಡು ರೀತಿಯ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು.

ನಿಧನ



ಎ.ರಾಜೇಂದ್ರ ಪ್ರಸಾದ್

ಮೈಸೂರು, ಜು. 12– ಕೆಎಸ್‌ಆರ್‌ಟಿಸಿ ನಿವೃತ್ತ ಚಾಲಕ ಮತ್ತು ರಾಮಕೃಷ್ಣನಗರದ ನಿವಾಸಿ ಎ.ರಾಜೇಂದ್ರ ಪ್ರಸಾದ್ (64) ಶುಕ್ರವಾರ ಬೆಳಗ್ಗೆ ಬೆಂಗಳೂರಿನ ನಾಗರಬಾವಿಯಲ್ಲಿರುವ ತಮ್ಮ ಸಂಬಂಧಿಕರ ನಿವಾಸದಲ್ಲಿ ನಿಧನರಾದರು. ಅವಿವಾಹಿತರಾದ ಇವರು ಅಪಾರ ಸ್ನೇಹಿತರು, ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚನ್ನಪಟ್ಟಣದ ರಾಮಮ್ಮನಕೆರೆ ರಸ್ತೆಯಲ್ಲಿರುವ ಹಿಂದೂ ರುದ್ರಭೂಮಿಯಲ್ಲಿ ಜು. 14 ರಂದು ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ

ನನ್ನ ಮೇಲಿನ ಆರೋಪಕ್ಕೆ ದಾಖಲೆ ಇದ್ದರೆ ಚರ್ಚೆಗೆ ಬನ್ನಿ

ವಿಧಾನ ಪರಿಷತ್ ಸದಸ್ಯ ವಿಶ್ವನಾಥ್‌ಗೆ ಎಂಎಲ್‌ಸಿ ಸಿ.ಎನ್.ಮಂಜೇಗೌಡ ಸವಾಲು

ಮುಡಾದಿಂದ 104 ನಿವೇಶನ ಅಲ್ಲ, 104 ಇಂಚು ಜಾಗ ಪಡೆದಿಲ್ಲ

ಮೈಸೂರು, ಜು.12(ಜಿಎ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ದಿಂದ ನಾನು 104 ನಿವೇಶನ ಅಲ್ಲ, 104 ಇಂಚು ಜಾಗ ಕೂಡ ಪಡೆದಿಲ್ಲ. ನಿಮ್ಮ ಬಳಿ ಇದಕ್ಕೆ ಸಂಬಂಧಿಸಿದ ದಾಖಲೆಗಳಿದ್ದರೆ ಚರ್ಚೆಗೆ ಬನ್ನಿ ಎಂದು ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್‌ಗೆ, ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಸವಾಲು ಹಾಕಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮುಡಾದಿಂದ 104 ನಿವೇಶನ ಪಡೆದುಕೊಂಡಿದ್ದಾರೆ ಮತ್ತು ಸಿಎ ನಿವೇಶನವನ್ನು ನಿವೇಶನ ಗಳಾಗಿ ಮಾಡಿ ಮಾರಾಟ ಮಾಡಿದ್ದಾರೆ ಎಂದು ವಿಶ್ವನಾಥ್‌ರವರು ಮಾಡಿರುವ ಆರೋಪ ಸತ್ಯಕ್ಕೆ ದೂರವಾಗಿದೆ ಎಂದರು.

ಸಿಎ ನಿವೇಶನದಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್ ನಿರ್ಮಾಣವಾಗುತ್ತಿದೆ. ಪಾರ್ಕ್ ಜಾಗಕ್ಕೆ ಮುಡಾ ಬೇಲಿ ಹಾಕಿದೆ. ಅಲ್ಲದೆ, ಇದನ್ನು ಸುಮಾರು 30 ವರ್ಷ ಹಿಂದೆಯೇ ಮುಡಾಕ್ಕೆ ಹಸ್ತಾಂತರಿಸಲಾಗಿದೆ. ಮುಡಾದಿಂದ 104 ನಿವೇಶನ ಪಡೆದಿರುವುದಾಗಿ ಆರೋಪಿಸಿದ್ದಾರೆ.

> **"ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಡೆದಿರುವ ಬದಲಿ ನಿವೇಶನ ಕಾನೂನು ಬದ್ಧವಾಗಿದೆ. ನಿಯಮಾನುಸಾರ ನಿವೇಶನ ಪಡೆದು ಕೊಂಡಿದ್ದಾರೆ. ಆದರೆ ಎಲ್ಲಿ ನಿವೇಶನ ಕಳೆದು ಕೊಂಡರು ಅಲ್ಲಿ ನಿವೇಶನ ಕೊಡಬೇಕಿತ್ತು ಅಷ್ಟೇ. ಕೇಂದ್ರ ಆದೇಶದನ್ವಯ 50:50 ಅನುಪಾತಕ್ಕೆ ಅವಕಾಶವಿದೆ.**
> **–ಸಿ.ಎನ್.ಮಂಜೇಗೌಡ, ಎಂಎಲ್‌ಸಿ**



ನಿವೇಶನ ಏಕೆ ಕೇವಲ 104 ಇಂಚು ಜಾಗ ಪಡೆದಿದ್ದರೂ ತೋರಿಸಲಿ ಎಂದ ಅವರು ಸವಾಲಾಕಿದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ಕ್ಕೆ ನಿವೇಶನ ನೀಡಿ ಎಂದು ನಾನು ಯಾವುದೇ ಅರ್ಜಿ ಸಲ್ಲಿಸಿಲ್ಲ. ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ದಾಖಲೆ ಇಟ್ಟುಕೊಂಡು ಆರೋಪ ಮಾಡಲಿ ಅದನ್ನು ಬಿಟ್ಟು ಸುಮ್ಮ ಸುಮ್ಮನೆ ಮಾತನಾಡುವುದು ಸರಿಯಲ್ಲ. ನನ್ನ ಮೇಲಿನ ಆರೋಪಕ್ಕೆ ಸಂಬಂಧಿಸಿದಂತೆ ಸೂಕ್ತ ದಾಖಲೆ ಇದ್ದರೆ ಚರ್ಚೆಗೆ ಬನ್ನಿ ಎಂದು ಪುನರ್ ಸವಾಲು ಹಾಕಿದರು

ವಿಶ್ವನಾಥ್ ಪ್ರಧಾನಿ ಮೋದಿ, ಸಿಎಂ ಸಿದ್ದರಾಮಯ್ಯ, ಹೆಚ್.ಡಿ.ಕುಮಾರಸ್ವಾಮಿ, ಅಮೇರಿಕಾದ ಅಧ್ಯಕ್ಷ ಜೋಬೈಡನ್ ಸೇರಿದಂತೆ ಎಲ್ಲರನ್ನು ಟೀಕಿಸಿದ್ದಾರೆ. ಹಾವೇಟ್ಬರೇ ಸತ್ಯ ಹರಿಶ್ಚಂದ್ರ ಎಂಬ ಭ್ರಮೆಯಲ್ಲಿದ್ದು, ಮಾನಸಿಕ ಅಸ್ವಸ್ಥತೆ ಯಿಂದ ಬಳಲುತ್ತಿದ್ದಾರೆ ಅನಿಸುತ್ತಿದೆ. ಚಿಕಿತ್ಸೆ ಪಡೆಯುವುದು ಉತ್ತಮ. ಇದೇ ರೀತಿ ತೇಜೋವಧೆ ಮಾಡುತ್ತಿದ್ದರೆ, ಮಾನನಷ್ಟ ಮೊಕದ್ದಮೆ ಹೂಡುತ್ತೇನೆ ಎಂದರು.

ಮುಡಾದಲ್ಲಿ ಸಾಕಷ್ಟು ಅಕ್ರಮಗಳು ನಡೆದಿದ್ದು, ದಟ್ಟಗಳ್ಳಿಯ ಸರ್ವೆ ನಂಬರ್ 15/1, 19/1,2, 18/4, 20/1,2,3, 27/ 1,2,3 38/1,2,3 ಮತ್ತು 41/2ಗಳ ಸುಮಾರು 27 ಎಕರೆಯ ನಿವೇಶನಗಳನ್ನು ಯಾರಿಗೂ ಕೊಡಬಾರದೆಂದು ನ್ಯಾಯಾಲಯದಿಂದ ವೀರಕುಮಾರ್ ಜೈನ್ ಎಂಬುವರು ಸ್ಟೇ ತಂದಿದ್ದರೂ ಚಾಮುಂಡೇಶ್ವರಿ ಸೊಸೈಟಿಯೊಂದಕ್ಕೆ ನೀಡಲಾಗಿದೆ. ಇದು ಸುಮಾರು ಎರಡು ಸಾವಿರ ಕೋಟಿ ರೂ., ಮೊತ್ತದ್ದಾಗಿದೆ. ಅಧಿಕಾರಿಗಳಿಂದ ಈ ರೀತಿ ಅಕ್ರಮಗಳು ನಡೆಯುತ್ತಿದೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ದಿವಾಕರ್, ದಿನೇಶ್‌ಕುಮಾರ್, ಜಗದೀಶ್ ಉಪಸ್ಥಿತರಿದ್ದರು.

ವಾರದೊಳಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮದಿನ ಆಚರಿಸುವಂತೆ ಒತ್ತಾಯ

ಮೈಸೂರು, ಜು.12(ಜಿಎ)–ಮೈಸೂರು ಸಂಸ್ಥಾನ ಕಂಡ ಅತ್ಯಂತ ಶ್ರೇಷ್ಠ ಅರಸ, ದಾರ್ಶನಿಕ ಹಾಗೂ ಪ್ರಜಾಹಿತ ಚಿಂತಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮ ದಿನ ಆಚರಿಸುವ ಬಗ್ಗೆ ಸರ್ಕಾರ ಹಾಗೂ ಜಿಲ್ಲಾಡಳಿತ ನಿರ್ಲಕ್ಷ್ಯ ಧೋರಣೆ ತೋರಿದ್ದು, ಒಂದು ವಾರದೊಳಗೆ ಆಚರಿಸದಿದ್ದರೆ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದಲೇ ಆಚರಿಸಬೇಕಾಗುತ್ತದೆ ಎಂದು ಒಕ್ಕೂಟ ಎಚ್ಚರಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ರಾಜ್ಯಕ್ಕೆ ಅತ್ಯುನ್ನತ ಕೊಡುಗೆ ನೀಡಿದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿ ಕಾರ್ಯಕ್ರಮಕ್ಕಾಗಿ ಸರ್ಕಾರದ ವತಿಯಿಂದ ಪ್ರತಿ ವರ್ಷ ಐದು ಲಕ್ಷ ರೂ. ಬಿಡುಗಡೆ ಮಾಡಿ, ಜಯಂತಿ ಕಾರ್ಯಕ್ರಮ ಆಯೋಜಿಸಬೇಕೆಂಬ ಆದೇಶವಿದೆ. ಈ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆದು ದಿನಾಂಕ ನಿಗದಿ ಮಾಡಲಾಗಿತ್ತು ಆದರೆ ಲೋಕಸಭಾ ಚುನಾವಣೆ ನೆಪಹೇಳಿ ಕಾರ್ಯಕ್ರಮ ಮುಂದೂಡಲಾಯಿತು. ಇದಾದ ನಂತರ ಹಲವಾರು ಬಾರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರನ್ನು ಭೇಟಿ ಮಾಡಿ ಜುಲೈ 10ರೊಳಗೆ ಕಾರ್ಯಕ್ರಮ ರೂಪಿಸಿ ಎಂದು ಮನವಿ ಸಲ್ಲಿಸಲಾಗಿತ್ತು. ಆದರೂ ನಿರ್ಲಕ್ಷಿಸಲಾಗಿದೆ ಹೀಗಾಗಿ ಕೂಡಲೇ ಈ ಬಗ್ಗೆ ಸ್ಪಷ್ಟ ನಿರ್ಧಾರ ತಿಳಿಸದಿದ್ದಲ್ಲಿ ಒಕ್ಕೂಟದ ವತಿಯಿಂದಲೇ ಆಚರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಸೋಸಲೆ ಸಿದ್ದರಾಜು, ಸಿದ್ಧಸ್ವಾಮಿ, ಅರವಿಂದ ಶರ್ಮ, ಹೊಸಕೋಟೆ ಬಸವರಾಜು, ಬಾನು ಮೋಹನ್ ಮತ್ತಿತರರು ಉಪಸ್ಥಿತರಿದ್ದರು.

ಐಎಎಸ್, ಕೆಎಎಸ್ ಪಾಸ್ ಆಗಲಿಲ್ಲವೆಂದರೆ ಪ್ಲಾನ್ ಬಿಗೆ ಸಿದ್ಧರಾಗಿ

ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಸಲಹೆ

ಮೈಸೂರು, ಜು.12(ಬಿಎಲ್‌ಯು)– ಐಎಎಸ್ ಮತ್ತು ಕೆಎಎಸ್‌ನಲ್ಲಿ ಕೆಲವರಿಗೆ ಯಶಸ್ಸು ಸಿಗುತ್ತದೆ. ಆದರೆ ಹಲವರಿಗೆ ಯಶಸ್ಸು ಸಿಗುವುದಿಲ್ಲ, ಆಗ ಪ್ಲಾನ್ ಬಿಗೆ ಸಿದ್ಧವಾಗಿರಬೇಕು ಎಂದು ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯೂ ಆದ ಅಭಿವೃದ್ಧಿ ಆಯುಕ್ತೆ ಡಾ. ಶಾಲಿನಿ ರಜನೀಶ್ ಸಲಹೆ ನೀಡಿದರು.

ನಗರದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆ ಅಭ್ಯರ್ಥಿಗಳ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಯಾವುದನ್ನು ಎಷ್ಟು ಓದಬೇಕು ಎಂಬ ಯೋಜನಾ ಪಟ್ಟಿ ತಯಾರಿಸಿಕೊಳ್ಳಿ ಎಂದು ಹೇಳಿದರು.

ಇಂದು ಕಲಿಕಾ ಬೋಧನೆಯಲ್ಲಿ ಬಹಳಷ್ಟು ಬದಲಾವಣೆ ಆಗಿದ್ದು, ವಿದ್ಯಾರ್ಥಿಗಳು ಗ್ರಂಥಾಲಯದಲ್ಲಿ ಹೆಚ್ಚು ಪುಸ್ತಕ ಓದಬೇಕು. ಈ ಮೂಲಕ ಜ್ಞಾನಾರ್ಜನೆ ಹೆಚ್ಚಿಸಿಕೊಳ್ಳಬೇಕು ಎಂದು ತಿಳಿಸಿದರು.

ಪರೀಕ್ಷೆ ಬರೆಯುವ ವಿದ್ಯಾರ್ಥಿಗೆ ತನ್ನ ಗುರಿಯೆಡೆಗೆ ಸ್ಪಷ್ಟತೆ ಇರಬೇಕು. ವ್ಯಕ್ತಿತ್ವ ವಿಕಸನ ವೃದ್ಧಿಸಲು ಸಾಮಾನ್ಯ ಜ್ಞಾನ ತುಂಬಾ ಇರಬೇಕು ಎಂದು ಡಾ.ಶಾಲಿನಿ ರಜನೀಶ್ ಸಲಹೆ ನೀಡಿದರು. ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಶರಣಪ್ಪ ಹಲಸೆ, ಐಎಫ್‌ಎಸ್ ಅಧಿಕಾರಿ ಮನೋಜ್ ರಾಜನ್, ಐಪಿಎಸ್ ಅಧಿಕಾರಿ ಗೀತಾ ಪ್ರಸನ್ನ, ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ, ಶೈಕ್ಷಣಿಕ ಡೀನ್ ಪ್ರೊಎನ್.ಲಕ್ಷ್ಮಿ, ತರಬೇತಿ ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯ ನಾರಾಯಣ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನಾಳೆ ಮೈಸೂರಲ್ಲಿ ಮಾಜಿ ಸೈನಿಕರ ಪೂರ್ವಭಾವಿ ಸಭೆ

ಮೈಸೂರು–ಕೊಡಗು ಜಿಲ್ಲಾ ಹಾಲಿ, ಮಾಜಿ ಸೈನಿಕರ ಗೃಹನಿರ್ಮಾಣ ಸಹಕಾರ ಸಂಘ ಸ್ಥಾಪನೆ ಕುರಿತು ಚರ್ಚೆ

ಮೈಸೂರು, ಜು.12(ಜಿಎ)–ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಘಟಕದ ನಿವೇಶನ ಕುರಿತು ಚರ್ಚಿಸಲು ಜು.14 ರಂದು ಬೆಳಗ್ಗೆ 10ಗಂಟೆಗೆ ನಗರದ ವಿಜಯನಗರ 3ನೇ ಹಂತ 19ನೇ ಮೇನ್ ಬಿ ಬ್ಲಾಕ್ 265ರ ವಿಳಾಸದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಘಟಕದ ಜಿಲ್ಲಾಧ್ಯಕ್ಷ ಕೆ.ಪಿ.ದಿವಾಕರ್ ಈ ವಿಷಯ ತಿಳಿಸಿ, ಮೈಸೂರು, ಕೊಡಗು ಜಿಲ್ಲೆಯ ಹಲವಾರು ಸೈನಿಕರು, ಮಾಜಿ ಸೈನಿಕರು, ವೀರನಾರಿಯರು ನಿವೇಶನಕ್ಕಾಗಿ ಖಾಸಗಿ ಡೆವಲಪರ್‌ಗಳನ್ನು ನಂಬಿ ಮೋಸ ಹೋಗುತ್ತಿದ್ದಾರೆ. ಹೀಗಾಗಿ ಈ ಸಮಸ್ಯೆ ತಪ್ಪಿಸಲು ಎರಡೂ ಜಿಲ್ಲೆ ಒಳಗೊಂಡಂತೆ ಮಾಜಿ ಸೈನಿಕರ ವಿವಿಧ ಸಂಘ ಸಂಸ್ಥೆಗಳನ್ನು ವ್ಯಾಪ್ತಿಗೆ ತಂದುಕೊಂಡು ಮೈಸೂರು– ಕೊಡಗು ಜಿಲ್ಲಾ ಹಾಲಿ ಮತ್ತು ಮಾಜಿ ಸೈನಿಕರ ಗೃಹ ನಿರ್ಮಾಣ ಸಹಕಾರ ಸಂಘ ಸ್ಥಾಪನೆಗೆ ಉದ್ದೇಶಿಸಲಾಗಿದ್ದು, ಈ ಬಗ್ಗೆ ಚರ್ಚಿಸಲಾಗುವುದು ಎಂದರು. ಮೈಸೂರು ಜಿಲ್ಲೆಯಲ್ಲಿ ಸುಮಾರು ಏಳು ಸಾವಿರ ಹಾಗೂ ಕೊಡಗು ಜಿಲ್ಲೆಯಲ್ಲಿ ಸುಮಾರು 15 ಸಾವಿರ ಮಾಜಿ ಸೈನಿಕರು, ವೀರ ನಾರಿಯರ ಕುಟುಂಬಗಳಿವೆ. ಹೀಗಾಗಿ ಇವರನ್ನು ವ್ಯಾಪ್ತಿಗೆ ತಂದುಕೊಂಡು ಈ ಸಹಕಾರ ಸಂಘ ಸ್ಥಾಪಿಸುತ್ತಿದ್ದು, ಪೂರ್ವಭಾವಿ ಸಭೆ ಕರೆಯಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 96636 00029, 94838 62050 ಸಂಪರ್ಕಿಸಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಹೆಚ್.ಎಸ್. ನಂಜುಂಡಸ್ವಾಮಿ, ಚಿತ್ರ ಸುಬ್ಬಯ್ಯ, ಬಸಪ್ಪ ಚಂಡೀರ, ಲಿಂಗರಾಜು ಉಪಸ್ಥಿತರಿದ್ದರು.

ಇಂಡಿಯನ್ ಮೆಥಡ್ ಇನ್ ಆಕ್ಟಿಂಗ್ ಪರಿಷ್ಕೃತ ಆವೃತ್ತಿಯ ಪುಸ್ತಕ ಬಿಡುಗಡೆ

ಮೈಸೂರು, ಜು. 12–ರಂಗವಲ್ಲಿ ಹಾಗೂ ಮೈಸೂರು ಆರ್ಟ್ ಸೆಂಟರ್ ಸಹಯೋಗದೊಂದಿಗೆ ಪ್ರಸನ್ನ ಅವರ 'ಇಂಡಿಯನ್ ಮೆಥಡ್ ಇನ್ ಆಕ್ಟಿಂಗ್' ಪರಿಷ್ಕೃತ ಆವೃತ್ತಿಯ ಪುಸ್ತಕ ಬಿಡುಗಡೆ ಸಮಾರಂಭವನ್ನು ಜು. 14 ರಂದು ಸಂಜೆ 4 ಗಂಟೆಗೆ ಹಾರ್ಡ್ವಿಕ್ ಶಾಲೆ ಆವರಣದಲ್ಲಿರುವ ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಕುಲಪತಿಗಳು ಪ್ರೊ. ನಾಗೇಶ್ ಉಪಸ್ಥಿತರಿರುವರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.07.2024 ಶನಿವಾರ, ಮಳೆ ನಕ್ಷತ್ರ : ಪುನರ್ವಸು 6.07.2024 ರಿಂದ 19.07.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಶುಕ್ಲ ಪಕ್ಷ,
ತಿಥಿ: ಸಪ್ತಮಿ, ನಕ್ಷತ್ರ: ಹಸ್ತ, ರಾಹುಕಾಲ: ಬೆಳಗ್ಗೆ 9 ರಿಂದ 10.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆಲ್ಕೋಹಾಲ್‌ನಿಂದ ಉಂಟಾಗುವ ಯಕೃತ್ತಿನ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ಜೆಎಸ್‌ಎಸ್ ಪ್ರೌಢಶಾಲೆ :** ವಿದ್ಯಾರ್ಥಿ ಸಂಘದ ಉದ್ಘಾಟನೆ, ಅಧ್ಯಕ್ಷತೆ : ಶಾಲೆ ಮುಖ್ಯೋಪಾಧ್ಯಾಯ ಮಹದೇವಪ್ಪ, ಉದ್ಘಾಟನೆ : ನಿವೃತ್ತ ಪ್ರಾಂಶುಪಾಲ ಪ್ರೊ. ಮಲ್ಲಿಕಾರ್ಜುನ ಶಾಸ್ತ್ರಿ, ಪ್ರತಿಭಾ ಪುರಸ್ಕಾರ: ಉಪನ್ಯಾಸಕಿ ಕು. ಅಮೂಲ್ಯ, ಸ್ಥಳ: ನವಜ್ಯೋತಿ ಸಭಾಂಗಣ, ಸರಸ್ವತಿಪುರಂ, ಬೆಳಗ್ಗೆ 9ಕ್ಕೆ.

■ **ಜೆಎಸ್‌ಎಸ್ ಮಹಾ ವಿದ್ಯಾಪೀಠ, ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್:** ಗುಜರಾತ್ ಕರಕುಶಲ ಉತ್ಸವ–2024, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ವರ್ತುಲ ರಸ್ತೆ, ಬೆಳಗ್ಗೆ 10 ರಿಂದ.

■ **ನಯನ ಕುಮಾರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ :** ರಕ್ತದಾನ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಬೆಳಗ್ಗೆ 10 ರಿಂದ

■ **ಸಹಾರ ಮಹಿಳಾ ಸ್ವ ಸಹಾಯ ಸಂಘ, ಸಹಾರ ಹ್ಯಾಂಡಿಕ್ರಾಫ್ಟ್, ಹ್ಯಾಂಡ್‌ಲೂಮ್ ಅಸೋಸಿಯೇಷನ್:** ಸಹಾರ ಆರ್ಟ್ ಅಂಡ್ ಕ್ರಾಫ್ಟ್ ಶಾಪಿಂಗ್ ಫೆಸ್ಟಿವಲ್–2024 ಪ್ರದರ್ಶನ ಮತ್ತು ಮಾರಾಟ, ಸ್ಥಳ: ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ, ಹಳೇ ಜಿಲ್ಲಾಧಿಕಾರಿ ಕಚೇರಿ ಹಿಂಭಾಗ, ಬೆಳಗ್ಗೆ 10 ಗಂಟೆಯಿಂದ.

■ **ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಕಿವಿ, ಮೂಗು, ಗಂಟಲು ವಿಭಾಗ :** ಲ್ಯಾರಿಂಗಾಲಜಿ ಸಮ್ಮೇಳನ, ಸ್ಥಳ: ಜೆಎಸ್‌ಎಸ್ ಆಸ್ಪತ್ರೆ ರಾಜೇಂದ್ರ ಶತಮಾನೋತ್ಸವ ಸಭಾಂಗಣ, ಬೆಳಗ್ಗೆ 10ಕ್ಕೆ

■ **ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ :** ನೂತನವಾಗಿ ಆಯ್ಕೆಯಾದ ಸಂಸದರು ಮತ್ತು ವಿಧಾನ ಪರಿಷತ್ ಸದಸ್ಯರಿಗೆ ಅಭಿನಂದನೆ, ಪ್ರತಿಭಾ ಪುರಸ್ಕಾರ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಪ್ರತಿಭಾ ಪುರಸ್ಕಾರ : ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ, ಅಭಿನಂದಿತರು : ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ವಿಧಾನ ಪರಿಷತ್ ಸದಸ್ಯರಾದ ಯತೀಂದ್ರ ಸಿದ್ದರಾಮಯ್ಯ, ಕೆ. ವಿವೇಕಾನಂದ, ಅಧ್ಯಕ್ಷತೆ : ಸಂಘದ ಜಿಲ್ಲಾಧ್ಯಕ್ಷ ಜೆ.ಗೋವಿಂದರಾಜು, ಸ್ಥಳ: ಕರ್ನಾಟಕ ಕಲಾಮಂದಿರ, ಬೆಳಗ್ಗೆ 10ಕ್ಕೆ.

■ **ವಿದ್ಯಾವರ್ಧಕ ಕಾನೂನು ಕಾಲೇಜು :** ಪ್ರೊ. ಪಿ.ಎಂ.ಚಿಕ್ಕಬೋರಯ್ಯ ಸ್ಮರಣಾರ್ಥ ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಹೈಕೋರ್ಟ್ ನ್ಯಾಯಾಧೀಶ ಎಂ.ಜಿ. ಶುಕುರೆ ಕಮಲ್, ಪ್ರಾಸ್ತಾವಿಕ ನುಡಿ : ಯೂನಿವರ್ಸಿಟಿ ಕಾನೂನು ಕಾಲೇಜು ಪ್ರಿನ್ಸಿಪಾಲ್ ಡಾ.ವಿ. ಸುದೇಶ್, ಅಧ್ಯಕ್ಷತೆ: ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಗೌರವ ಅತಿಥಿಗಳು : ಸಂಘದ ಕಾರ್ಯದರ್ಶಿ ಪಿ.ವಿಶ್ವನಾಥ್, ಕಾಲೇಜು ಅಧ್ಯಕ್ಷ ಎಸ್. ಶಿವಲಿಂಗಯ್ಯ, ಸ್ಥಳ: ಪಿ.ಎಂ.ಚಿಕ್ಕಬೋರಯ್ಯ ಹಾಲ್, ಬೆಳಗ್ಗೆ 10ಕ್ಕೆ.

■ **ಶ್ರೀ ಕಲಾನಿಕೇತನ ಸ್ಕೂಲ್ ಆಫ್ ಆರ್ಟ್ :** ಫೌಂಡೇಷನ್ ಮತ್ತು ಬಿವಿ.ಎ. ವಿದ್ಯಾರ್ಥಿಗಳಿಂದ ಮಂಡಲ ಚಿತ್ರಕಲಾ ಪ್ರದರ್ಶನ, ಸ್ಥಳ: ಶ್ರೀಕಲಾನಿಕೇತನ ಸ್ಕೂಲ್ ಆಫ್ ಆರ್ಟ್, ವಿಜಯನಗರ, ಬೆಳಗ್ಗೆ 10 ರಿಂದ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್ :** ಅಕ್ಯೂಪ್ರೆಶರ್, ಸುಜೋಕ್, ಅಕ್ಯು ಡಿಜಿಟಲ್ ಫಿಶೀಯೋಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಶ್ರೀ ಸಂಕಷ್ಟಹರ ಗಣಪತಿ ಸೇವಾ ಸಮಿತಿ ಆವರಣ, ಶ್ರೀರಾಂಪುರ 2ನೇ ಹಂತ, ಬೆಳಗ್ಗೆ 10.30 ರಿಂದ.

■ **ಭಾರತೀಯ ಬಹುಶಿಸ್ತೀಯ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆ :** ಹದಿಹರೆಯದ ಮಕ್ಕಳಲ್ಲಿ ಮೊಬೈಲ್ ಫೋನ್ ವ್ಯಸನ : ಸಮಸ್ಯೆಗಳು ಮತ್ತು ಪರಿಹಾರ ಕುರಿತು ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಉದಯ್ ಶಂಕರ್, ಸಂಪನ್ಮೂಲ ವ್ಯಕ್ತಿ : ಪ್ರಾಧ್ಯಾಪಕ ಡಾ. ಬಿ.ಎನ್. ರವೀಶ್, ಅಧ್ಯಕ್ಷತೆ : ಮಹಾರಾಜ ಸರ್ಕಾರಿ ಪ್ರೌಢಶಾಲೆ ಉಪ ಪ್ರಾಂಶುಪಾಲ ಡಾ. ಮಹೇಶ್, ಸ್ಥಳ: ಮಹಾರಾಜ ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಅನ್ವೇಷಣಾ ಸೇವಾ ಟ್ರಸ್ಟ್ :** ವೈದ್ಯರ ದಿನಾಚರಣೆ ಅಂಗವಾಗಿ ವೈದ್ಯಕೀಯ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಸಾಧಕರಿಗೆ ವೈದ್ಯಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ, ಉಪಸ್ಥಿತರು : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕರಾದ ಡಾ.ಎಂ. ಪುಷ್ಪಾವತಿ, ಪ್ರಶಸ್ತಿ ಪ್ರದಾನ : ವಿಧಾನ ಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಸ್ಥಳ: 'ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್' ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 CFTRI ಶೋಧ – ಅನುಶೋಧ– ಪ್ರಾಯೋಜಿತ ಬಾನುಲಿ ಸರಣಿ, ಪ್ರಾಯೋಜಕರು : CSIR, CFTRI, Mysuru, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಪಿ. ಸುರಭಿ ಹಾಗೂ ಡಿ. ಪುರುಷೋತ್ತಮ್, ವ್ಯಾಖ್ಯಾನ : ಡಾ. ಜಿ. ಆರ್. ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಎನ್. ಎಸ್. ಲಕ್ಷ್ಮೀನಾರಾಯಣಭಟ್ಟರ ರಚನೆಗಳು, 8.30 ಹಾದಿಯಲ್ಲಿ ಕಂಡ ಮುಖ– ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಲ್ಲಾಡಿ ಸೂರಿಬಾಬು – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ನಿಮ್ಮೂರ್ ಹೆಸರು, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಟಿ. ಎಸ್. ಸ್ನೇಹಾ, 3.00 ಹಳ್ಳಿ ಹಾಡು, 3.30 ಮಕ್ಕಳ ಮಂಟಪ–ಪ್ರತಿಭಾ ಪಲ್ಲವ–ಬಹುಮುಖ ಪ್ರತಿಭೆ ಬಿ. ಆರ್. ಶ್ರಾವ್ಯಳ ಪರಿಚಯ. ಪ್ರಸ್ತುತಿ : ಎಂ.ಎಸ್. ಭಾರತಿ, 4.00 ನಾಟಕ–ಟಿಪ್ಪುವಿನ ಮಕ್ಕಳು, ರಚನೆ : ನಾ. ಡಿಸೋಜ, ನಿರ್ಮಾಣ : ಡಾ. ಎನ್. ಸುಧೀಂದ್ರ, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ: ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ: ಮದ್ದೂರು ತಾಲೂಕು ಮಾದನಾಯಕನಹಳ್ಳಿಯ ಕೃಷಿಕ ದಂಪತಿ ಎಂ. ಕೆ. ದೇವರಾಜು ಹಾಗೂ ಮಂಜುಳಾ, ಪ್ರಸ್ತುತಿ : ಎನ್. ಕೇಶವಮೂರ್ತಿ, 8.00 ಯುವವಾಣಿ, 9.30 ಸವಿನೆನಪು–ಹಳೆಯ ಕನ್ನಡ ಚಿತಗೀತೆಗಳು, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ : ಆಯುಷ್ ಮೊರನೆ–ಸಿತಾರ್ ವಾದನ

■ **ಶರಣ ಸಾಹಿತ್ಯ ಪರಿಷತ್ತು, ನಗರ ಘಟಕ, ಕದಳಿ ಮಹಿಳಾ ವೇದಿಕೆ :** ಡಾ. ಫ.ಗು. ಹಳಕಟ್ಟಿಯವರ ಜಯಂತಿ, ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ, ಎನ್‌ವೈಕೆಎಸ್ ಉಪನಿರ್ದೇಶಕ ಎಸ್. ಸಿದ್ದರಾಮಪ್ಪ ಅವರಿಂದ ವಚನ ಪಿತಾಮಹ ಫ.ಗು. ಹಳಕಟ್ಟಿ ಹಾಗೂ ವಚನ ಸಂರಕ್ಷಣೆ ಕುರಿತು ಉಪನ್ಯಾಸ, ಬಹುಮಾನ ವಿತರಣೆ : ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಹೆಚ್.ಎನ್. ನಿರಂಜನ, ಅಧ್ಯಕ್ಷತೆ: ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಉಪಸ್ಥಿತರು : ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶಾರದಾ ಶಿವಲಿಂಗಸ್ವಾಮಿ, ಸ್ಥಳ: ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಸಭಾಂಗಣ, ಜೆ.ಪಿ.ನಗರ, ಬೆಳಗ್ಗೆ 11ಕ್ಕೆ.

■ **ಮೈಸೂರು ಆರ್ಟ್ ಗ್ಯಾಲರಿ :** ಸಾಧಕರೊಂದಿಗೆ ಸಂವಾದ–94, ತಿಂಗಳ ಸಾಧಕರು ಅಮರಶಿಲ್ಪಿ ಜಕಣಾಚಾರ್ಯ ಪ್ರಶಸ್ತಿ ಪುರಸ್ಕೃತ ಶಿಲ್ಪಿ ವೆಂಕಟಾಚಲಪತಿ ಮತ್ತು ಕರ್ನಾಟಕ ಶಿಲ್ಪಕಲಾ ಅಕಾಡೆಮಿ ನೂತನ ಅಧ್ಯಕ್ಷ ಎಂ.ಸಿ. ರಮೇಶ್, ಅಧ್ಯಕ್ಷತೆ : ಮೈಸೂರು ಆರ್ಟ್ ಗ್ಯಾಲರಿ ಸ್ಥಾಪಕ ಅಧ್ಯಕ್ಷ ಎಲ್. ಶಿವಲಿಂಗಪ್ಪ, ಉಪಸ್ಥಿತರು : ಅರಸಿಕುಮಾರ್, ಸಂಗಪ್ಪ, ಶ್ರೀಮತಿ ಕೆ.ಎಸ್. ಉಮಾದೇವಿ, ಬಿ. ಕಿಶೋರ್, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11ಕ್ಕೆ

■ **ಸುರುಚಿ ರಂಗಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ – 836, ಕಥೆ ಹೇಳುವವರು: ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನ್ಯಾಸಕರಾದ ಶ್ರೀಮತಿ ಎಂ.ವಿ.ನಿರ್ಮಲಾ, ಸ್ಥಳ: ಸುರುಚಿ ರಂಗಮನೆ, 476, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ

■ **ತ್ರಯೀನ್ಯಾಸ್ ಶ್ರೀವಿದ್ಯಾ ಫೌಂಡೇಷನ್ :** ಶ್ರೀ ಮಹಾವಾರಾಹಿ ಗುಪ್ತ (ಆಷಾಢ) ನವರಾತ್ರಿ ಮಹೋತ್ಸವ, ಬೆಳಗ್ಗೆ 8.30 ರಿಂದ ಮಹಾಭಿಷೇಕ, ಸಪ್ತಶತಿ ಪಾರಾಯಣ, ಶ್ರೀಚಕ್ರಾರ್ಚನೆ, ನವಾವರಣ ಪೂಜಾ, ಸಂಜೆ 5.30 ರಿಂದ ಶ್ರೀ ಮೃತ್ಯುಂಜಯ ಅಮೃತೇಶ್ವರಿ ಹೋಮ ಮತ್ತು ಶ್ರೀ ಅಸಿತಾಂಗ ಬ್ರಾಹ್ಮಾದಿ ಅಷ್ಟಮಿಥುನ ಭೈರವಾದಿ ಹೋಮ, ಸ್ಥಳ: ಫೌಂಡೇಷನ್ ಆವರಣ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹಾಮೇದಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ರಂಗಾಂತರಂಗ ಮೈಸೂರು, ಶ್ರೀ ಕೃಷ್ಣ ಟ್ರಸ್ಟ್ :** ಭರತನಾಟ್ಯ ಕಾರ್ಯಕ್ರಮ ಸಮರ್ಪಣ, ಸ್ಥಳ: ಶ್ರೀ ಕೃಷ್ಣಧಾಮ, ಸರಸ್ವತಿಪುರಂ, ಸಂಜೆ 6.30ಕ್ಕೆ.

■ **ಕಲಾಸುರುಚಿ, ಕುತೂಹಲಿ–ಕನ್ನಡ, ದಿ ಅಕಾಡೆಮಿ ಟ್ರಸ್ಟ್ :** ಸೈನ್ಸ್ ಸಂಜೆ ಸೂಪರ್ ಸೌರಕೋಶ ಹಾಗೂ ಎಲ್‌ಇಡಿ : ನ್ಯಾನೋಜಗತ್ತಿನಲ್ಲಿ ಹುಡುಕಾಟ ಕುರಿತು ಧಾರವಾಡ ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಡೀನ್ ಪ್ರೊ. ಎಂ.ಎಸ್. ಶಿವಪ್ರಸಾದ್ ಅವರಿಂದ ಉಪನ್ಯಾಸ, ಸ್ಥಳ: ಸುರುಚಿ ರಂಗಮನೆ, ಕುವೆಂಪುನಗರ, ಸಂಜೆ 6.30 ರಿಂದ.

■ **ನಟನ ರಂಗಶಾಲೆ :** ವಾರಾಂತ್ಯ ನಾಟಕ, ದೊಡ್ಡಬ್ಯಾಡರಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಮಕ್ಕಳಿಂದ 'ಕರ್ಣ ಅರ್ಜುನರ ಕಾಳಗ' (ಮೂಡಲಪಾಯ ಯಕ್ಷಗಾನ ಪ್ರಸಂಗ), ನಿರ್ದೇಶನ : ಮಂಜುನಾಥ ಎಲ್. ಬಡಿಗೇರ, ಸ್ಥಳ: ನಟನ ರಂಗಶಾಲೆ, ರಾಮಕೃಷ್ಣನಗರ, ಸಂಜೆ 6.30ಕ್ಕೆ

■ **ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ :** ಶ್ರೀ ಗಿರಿಜಾ ಕಲ್ಯಾಣ ಮಹೋತ್ಸವ, ಸಪ್ತಮಿ ಶನಿವಾರ ಹಗಲು ರಾತ್ರಿ ಔಪಾಸನೆ, ಉಯ್ಯಾಲೋತ್ಸವ, ರಾತ್ರಿ 7ಕ್ಕೆ ಹೊರೆಯಲ್ಲಿ ಪಾಕಿನಿ ಉತ್ಸವ, ಸ್ಥಳ: ಕೋಟೆ ತ್ರಿನೇಶ್ವರ ದೇವಸ್ಥಾನ, ಅರಮನೆ ಆವರಣ.

■ **ಲಯನ್ಸ್ ಅಂಬಾಸಿಡರಸ್ ಸಂಸ್ಥೆ :** ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ, ಮುಖ್ಯ ಅತಿಥಿಗಳು : ನಿವೃತ್ತ ಅಧಿಕಾರಿ ಸಿ. ಚಂದ್ರಶೇಖರ್, ಲಯನ್ ಕೆ. ದೇವೇಗೌಡ, ಲಯನ್ ಆರ್.ಡಿ. ಕುಮಾರ್, ಪ್ರತಿಷ್ಠಾಪನಾ ಬೋಧನೆ : ಲಯನ್ ಎಂ. ಅನಿಲ್‌ಕುಮಾರ್, ಸ್ಥಳ: ಹೋಟೆಲ್ ಕಲ್ಯಾಣ್, ಸಂಜೆ 7ಕ್ಕೆ.



ಮೈಸೂರು ಮಿತ್ರ


ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಜುಲೈ 13 ಶನಿವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 88 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ

ಇಡಿ ಹಿಡಿತಕ್ಕೆ ಶಾಸಕ ನಾಗೇಂದ್ರ

- ಎಸ್‌ಐಟಿ ಮೊರೆ ಹೋಗಿರುವ ಶಾಸಕ ಬಸನಗೌಡ ದದ್ದಲ್‌ಗೆ ಬಲೆ ಬೀಸಿ ಕಾದಿದ್ದ ಇಡಿ
- ಕಳೆದೆರಡು ದಿನಗಳ ಹಿಂದೆ ಈ ಇಬ್ಬರಲ್ಲದೆ ಹಲವರ ಮನೆ ಮೇಲೆ ಇಡಿ ದಾಳಿ ಮಾಡಿತ್ತು



ಬೆಂಗಳೂರಲ್ಲಿ ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ವಶಕ್ಕೆ ತೆಗೆದುಕೊಂಡರು.

ಬೆಂಗಳೂರು, ಜು.12(ಕೆಎಂಶಿ)– ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ. ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ, ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಶುಕ್ರವಾರ ವಶಕ್ಕೆ ತೆಗೆದುಕೊಂಡಿದೆ.

ನಾಗೇಂದ್ರ ವಶಕ್ಕೆ ಪಡೆದ ಬೆನ್ನಲ್ಲೇ ನಿಗಮದ ಅಧ್ಯಕ್ಷ ಹಾಗೂ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್, ಎಸ್‌ಐಟಿ ಕಚೇರಿಯಲ್ಲಿ ಅಡಗಿ ಕುಳಿತಿದ್ದರು.

ಇವರನ್ನು ವಶಕ್ಕೆ ಪಡೆಯಲು ಇಡಿ ಅಧಿಕಾರಿಗಳು ಮುಂಜಾನೆಯಿಂದಲೇ ನಡೆಸಿದ ಪ್ರಯತ್ನ ಫಲ ನೀಡಲಿಲ್ಲ. ನಾಗೇಂದ್ರ ಅವರನ್ನು ನಗರದ ಡಾಲರ್ಸ್ ಕಾಲೋನಿ ನಿವಾಸದಲ್ಲಿ ವಶಕ್ಕೆ ಪಡೆದುಕೊಂಡ ನಂತರ ದದ್ದಲ್ ಅವರನ್ನು ಬಂಧಿಸಲು ಯಲಹಂಕಕ್ಕೆ ತೆರಳಿದ್ದರು. ಇದರ ಸುಳಿವರಿತ ದದ್ದಲ್ ರಾಯಚೂರಿಗೆ ಹೊರಟವರು ನಗರಕ್ಕೆ ಸೀದಾ ಹಿಂತಿರುಗಿ ಎಸ್‌ಐಟಿ ಕಚೇರಿ ಒಳಹೊಕ್ಕು, ತಮ್ಮನ್ನು ಬಂಧಿಸುವಂತೆ ವಿಚಾರಣಾಧಿಕಾರಿ ಡಿವೈಎಸ್‌ಪಿ ಶ್ರೀನಿವಾಸ ಮುಂದೆ ಅವಲತ್ತುಕೊಂಡರು.

ನನ್ನನ್ನು ಬಂಧಿಸಿ ಎಂದು ಸ್ವಯಂ ಪ್ರೇರಿತವಾಗಿ ದದ್ದಲ್ ಮನವಿ ಮಾಡಿಕೊಂಡರೂ, ನಿಮ್ಮ ಬಂಧನದ ಅವಶ್ಯಕತೆ ಇಲ್ಲ, ನಾವು ಈಗಾಗಲೇ ತನಿಖೆ ನಡೆಸಿದ್ದೇವೆ. ನಮಗೆ ಅಗತ್ಯ ಇದ್ದವರನ್ನಷ್ಟೇ ವಶಕ್ಕೆ ಪಡೆಯುತ್ತೇವೆ ಎಂದು ಎಸ್‌ಐಟಿ ಹೇಳಿದರೂ ಮಹಾಶಯ ಕೆಲ ಸಮಯ ಅಲ್ಲೇ ಕುಳಿತಿದ್ದು, ನಂತರ ಅಲ್ಲಿಂದ ಹೊರಟರು. ಹಗರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಪ್ರಕರಣವನ್ನು ಸಿಬಿಐಗೆ ವಹಿಸಿದ ನಂತರ ಭಾರೀ ಮೊತ್ತದ ಹಣಕಾಸು ಅವ್ಯವಹಾರ ಆಗಿರುವುದು ಕಂಡು ಬಂದ ಹಿನ್ನೆಲೆಯಲ್ಲಿ ಇಡಿ ತನಿಖೆಯನ್ನು ಕೈಗೆತ್ತಿಕೊಂಡಿದೆ.

ಪ್ರಕರಣವನ್ನು ರಾಜ್ಯ ಸರ್ಕಾರ ಎಸ್‌ಐಟಿ ತನಿಖೆಗೆ ನೀಡಿದ್ದರೂ ಸಿಬಿಐ ಮತ್ತು ಇಡಿ ಸಹಾ ತನಿಖೆ ಮುಂದುವರಿಸಿವೆ. ಇದರ ಬೆನ್ನಲ್ಲೇ ಕಳೆದ ಎರಡು ■ 6ನೇ ಪುಟಕ್ಕೆ



ಮೊದಲ ಆಷಾಢ ಶುಕ್ರವಾರದ ವಿಶೇಷ

ಚಾಮುಂಡೇಶ್ವರಿ ಸನ್ನಿಧಿಗೆ ಹರಿದು ಬಂದ ಭಕ್ತ ಗಣ



ಚಾಮುಂಡಿಬೆಟ್ಟದಲ್ಲಿ ಆಷಾಢ ಮಾಸದ ಮೊದಲ ಶುಕ್ರವಾರ ವಿಶೇಷ ಪೂಜಾ ಮಹೋತ್ಸವದಲ್ಲಿ ಪಾಲ್ಗೊಂಡಿರುವ ಭಾರಿ ಭಕ್ತ ಸಮೂಹ.

ಮೈಸೂರು, ಜು.12(ಎಂಟಿವೈ)– ಆಷಾಢ ಮಾಸದ ಮೊದಲ ಶುಕ್ರವಾರವಾದ ಇಂದು ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಾಲಯದಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತರು ನಾಡದೇವಿ ಚಾಮುಂಡೇಶ್ವರಿ ದರ್ಶನ ಪಡೆದು ಪುನೀತರಾದರು.

- ಲಕ್ಷ್ಮಿ ಅಲಂಕಾರದಲ್ಲಿ ಕಂಗೊಳಿಸಿದ ನಾಡದೇವಿ
- ಸರದಿ ಸಾಲಿನಲ್ಲಿ ನಿಂತವರಿಗೆ ಮುಂಜಾನೆಯಿಂದಲೇ ದೇವಿ ದರ್ಶನ ಭಾಗ್ಯ
- ಉಚಿತ ಬಸ್ ಸೌಕರ್ಯದಿಂದ ಅಪಾರ ಸಂಖ್ಯೆಯಲ್ಲಿ ಧಾವಿಸಿ ಬಂದ ಮಹಿಳಾ ಭಕ್ತರು
- ಅಚ್ಚುಕಟ್ಟಾದ ವ್ಯವಸ್ಥೆಯಿಂದ ಯಾವುದೇ ಗೊಂದಲವಿಲ್ಲ
- ದೇವಿ ದರ್ಶನಕ್ಕೆ ಸಚಿವರು, ಶಾಸಕರಿಂದ ಶಿಫಾರಸು ಪತ್ರ ತಂದವರು ಪೊಲೀಸರೊಂದಿಗೆ ವಾಗ್ವಾದ

ಶಕ್ತಿ ದೇವತೆಯ ಆರಾಧನೆಯ ಮಾಸ ಎನಿಸಿರುವ ಆಷಾಢ ಮಾಸದ ಶುಕ್ರವಾರದಂದು ಚಾಮುಂಡಿಬೆಟ್ಟದ ದೇವಾಲಯದಲ್ಲಿ ನಡೆಯುವ ಪೂಜಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ನಾಡಿನ ವಿವಿಧೆಡೆಯಿಂದ ಭಕ್ತರು ಆಗಮಿಸುವ ವಾಡಿಕೆ. ಅದರಂತೆ ಮೊದಲ ಶುಕ್ರವಾರವಾದ ಇಂದು ಬೆಟ್ಟದಲ್ಲಿ ಅಪಾರ ಸಂಖ್ಯೆಯ ಭಕ್ತರು ದೇವಿಯ ದರ್ಶನ ಪಡೆದರು. ಇಬ್ಬನಿ, ಸ್ವಲ್ಪ ಚಳಿ, ತುಂತುರು ಮಳೆ ಲೆಕ್ಕಿಸದೆ ಸಾಲುಗಟ್ಟಿ ನಿಂತಿದ್ದ ಅಪಾರ ಭಕ್ತರು ದೇವಿ ದರ್ಶನದ ತವಕದಲ್ಲಿದ್ದರು. ಮುಂಜಾನೆ 3 ಗಂಟೆಯಿಂದಲೇ ಬೆಟ್ಟದಲ್ಲಿ ಬೀಡು ಬಿಟ್ಟಿದ್ದ ಭಕ್ತರು, ನಾಡದೇವಿಯ ದರ್ಶನಕ್ಕೆ ಕಾದಿದ್ದರು.

ಮೆಟ್ಟಿಲು ಏರಿ ಬಂದರು: ಮೈಸೂರಿನ ವಿವಿಧ ಬಡಾವಣೆಗಳಿಂದ ಆಗಮಿಸಿದ್ದ ಹರಕೆ ಹೊತ್ತ ಕೆಲ ಭಕ್ತರು ■ 6ನೇ ಪುಟಕ್ಕೆ

“ ಆಷಾಢ ಶುಕ್ರವಾರದ ಪೂಜಾ ಮಹೋತ್ಸವದ ಹಿನ್ನೆಲೆಯಲ್ಲಿ ಚಾಮುಂಡಿ ಬೆಟ್ಟಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸುವುದರಿಂದ ಭಕ್ತರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದೆ. ಭಕ್ತರು ಬೆಳಗ್ಗೆಯಿಂದಲೇ ಆಗಮಿಸಿ ಚಾಮುಂಡೇಶ್ವರಿಯ ದರ್ಶನ ಪಡೆಯುತ್ತಿದ್ದಾರೆ. ಚಾಮುಂಡಿ ಬೆಟ್ಟಕ್ಕೆ ಸಾರ್ವಜನಿಕರ ವಾಹನ ಪ್ರವೇಶ ನಿಷೇಧಿಸಲಾಗಿದೆ. ಚಾಮುಂಡಿ ಬೆಟ್ಟದ ತಪ್ಪಲಿನ ಲಲಿತ ಮಹಲ್ ಬಳಿಯಿರುವ ಮೈದಾನದಿಂದ 40 ಉಚಿತ ಸಾರಿಗೆ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. **–ಜಿ.ಲಕ್ಷ್ಮಿಕಾಂತರೆಡ್ಡಿ, ಜಿಲ್ಲಾಧಿಕಾರಿ**



ನಕ್ಕರೆ ಅದೇ ಸ್ವರ್ಗ

ಶಿಕ್ಷಕ : ಪ್ರಪಂಚದಲ್ಲಿ ಎಷ್ಟು ದೇಶಗಳಿವೆ?

ವಿದ್ಯಾರ್ಥಿ : ಪ್ರಪಂಚದಲ್ಲಿ ಇರೋದು ಒಂದು ದೇಶ, ಅದು ಭಾರತ. ಮಿಕ್ಕಿದ್ದೆಲ್ಲಾ ವಿದೇಶ

ಮೈಸೂರು ಮಿತ್ರ

ಶನಿವಾರ, 13 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಮಾತು ಬರದ ನಾಯಿಯನ್ನು ನಂಬು, ಆದರೆ ಮಾತಿನಲ್ಲೇ ಮರಳು ಮಾಡುವ ಮನುಷ್ಯನನ್ನು ನಂಬಬೇಡ – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಾಳೆ ಎಂದವನಿಗೆ ಹಾಳು, ಇಂದೇ ಎಂದವನಿಗೆ ಬೀಳಾಗದು ಬಾಳು.

ನಿಮ್ಮ ಪತ್ರಗಳು

ಬಾಲ್ಯ ವಿವಾಹ ಒಂದು ಸಾಮಾಜಿಕ ಪಿಡುಗು...!

ಮಾನ್ಯರೆ,

ಇತ್ತೀಚೆಗೆ ಬಿಡುಗಡೆಗೊಂಡ ಅಂಕಿ ಅಂಶಗಳ ಪ್ರಕಾರ ದೇಶದಲ್ಲಿಯೇ ಅತಿ ಹೆಚ್ಚು ಬಾಲ್ಯ ವಿವಾಹವಾಗುತ್ತಿರುವ ರಾಜ್ಯಗಳ ಪೈಕಿ ನಮ್ಮ ಕರ್ನಾಟಕ ರಾಜ್ಯ ಎರಡನೇ ಸ್ಥಾನ ಪಡೆದುಕೊಂಡಿರುವುದು ಆಘಾತಕಾರಿಯಾಗಿದೆ. ಅದರಲ್ಲೂ ಹಳ್ಳಿಗಳಲ್ಲಿ ಇದು ಹೆಚ್ಚಾಗಿ ಕಂಡು ಬರುತ್ತಿದೆ. ಮನೆಯ ಆರ್ಥಿಕ ಪರಿಸ್ಥಿತಿಯಿಂದಾಗಿಯೂ ಇತರೆ ಕಾರಣಗಳಿಂದಾಗಿ ಹಳ್ಳಿಗಳಲ್ಲಿ ಬಾಲ್ಯ ವಿವಾಹಗಳು ಹೆಚ್ಚಾಗಿ ಕಂಡುಬರುತ್ತಿದೆ. ಕರ್ನಾಟಕದಲ್ಲಿ 8,348 ಇದು ಬೆಳಕಿಗೆ ಬಂದ ಬಾಲ್ಯ ವಿವಾಹಗಳ ಲೆಕ್ಕ, ಇನ್ನು ಬೆಳಕಿಗೆ ಬಾರದೇ ಇರುವುದು ಇದರ ಹತ್ತು ಪಟ್ಟು ಇದೆ ಎನ್ನಲಾಗಿದೆ. ಇದು ಬಾಲ್ಯ ವಿವಾಹದಿಂದ ಆಗುವ ಸಮಸ್ಯೆಗಳ ಬಗ್ಗೆ ಜನರಲ್ಲಿ ಅರವಿನ ಕೊರತೆ ಇರುವುದನ್ನು ಎತ್ತಿ ಹೇಳುತ್ತದೆ. ಬಾಲ್ಯ ವಿವಾಹದಿಂದ ಹೆಣ್ಣು ಮಕ್ಕಳು ಸಾಮಾಜಿಕ, ದೈಹಿಕ ಹಾಗೂ ಆರ್ಥಿಕ ಅಭದ್ರತೆ ಮತ್ತು ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಅವರ ಶೈಕ್ಷಣಿಕ ಭವಿಷ್ಯ ನಾಶವಾಗುತ್ತದೆ. ಮಹಿಳಾ ಸಬಲೀಕರಣಕ್ಕೆ ಬಾಲ್ಯ ವಿವಾಹ ದೊಡ್ಡ ಅಡ್ಡಿ. ಇದಕ್ಕಿರುವ ಏಕೈಕ ಪರಿಹಾರವೆಂದರೆ ಜನರಲ್ಲಿ ಈ ಪಿಡುಗಿನ ಬಗ್ಗೆ ಅರಿವು ಮೂಡಿಸುವುದು. ಬಾಲ್ಯ ವಿವಾಹದ ಕುರಿತಾಗಿ ಹಳ್ಳಿ ಹಳ್ಳಿಗಳಲ್ಲಿ ಬೀದಿ ನಾಟಕಗಳನ್ನು ಆಡಿಸುವುದು, ಸಮಸ್ಯೆಯ ಕುರಿತಾದ ಜಾನಪದ ಶೈಲಿಯ ಹಾಡುಗಳನ್ನು ಹಾಡುವುದು ಹಾಗೂ ಉಪನ್ಯಾಸಗಳನ್ನು ಏರ್ಪಡಿಸುವುದು. ಸರ್ಕಾರ ಸಾಕಷ್ಟು ಪ್ರಯತ್ನಗಳನ್ನು ಮಾಡುತ್ತಿದ್ದರು ಅವು ಸಾಲುತ್ತಿಲ್ಲ. ಸಮಾಜ ಇದರ ಬಗ್ಗೆ ಎಚ್ಚೆತ್ತುಕೊಂಡರೆ ಇನ್ನಷ್ಟು ಪರಿಣಾಮಕಾರಿಯಾಗಿ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಲು ಸಾಧ್ಯವಿದೆ. ಬಾಲ್ಯ ವಿವಾಹ ಕ್ರಿಮಿನಲ್ ಅಪರಾಧ. ಯುವಕರಿಗೆ 21 ವರ್ಷ ಹಾಗೂ ಯುವತಿಯರಿಗೆ 18 ವರ್ಷ ತುಂಬುವುದರ ಒಳಗೆ ಮದುವೆ ಮಾಡುವಂತಿಲ್ಲ. ಅಕ್ಕಪಕ್ಕದಲ್ಲಿ ಎಲ್ಲೇ ಬಾಲ್ಯ ವಿವಾಹ ನಡೆಯುತ್ತಿದ್ದರು ತಕ್ಷಣ ಅದನ್ನು ಪೊಲೀಸರಿಗೆ ತಿಳಿಸುವುದು ತಮ್ಮ ಸಾಮಾಜಿಕ ಜವಾಬ್ದಾರಿ ಎಂದು ಎಲ್ಲರೂ ಭಾವಿಸಿದರೆ ಮಾತ್ರ ಈ ಸಾಮಾಜಿಕ ಪಿಡುಗನ್ನು ಹೊಡೆದೋಡಿಸಬಹುದು.

–ಹೊ.ನಂ.ಅಂಕರಾಜು, ಮೈಸೂರು

ವಿದ್ಯಾರ್ಥಿಗಳ ಭವಿಷ್ಯದ ಗತಿ ಏನು?

ಮಾನ್ಯರೆ,

ಈ ಸಲದ ಯುಜಿ– ನೀಟ್ ಪರೀಕ್ಷೆಯ ಹಗರಣದಿಂದ ವೈದ್ಯಕೀಯ ಪ್ರವೇಶಾತಿ ತಡವಾಗಿ, ಶೈಕ್ಷಣಿಕ ವರ್ಷ ನಿಧಾನಗತಿ ಆಗುತ್ತಿದೆ. ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ದೇಶದ ಎಲ್ಲಾ ಕಡೆ ಸೋರಿಕೆಯಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದ್ದು, ಸಿಬಿಐ ತನಿಖೆ ನಡೆಸುತ್ತಿದೆ. ಸರ್ಕಾರ ಮತ್ತು ಎನ್‌ಟಿಎ 2 ಕೇಂದ್ರಗಳಲ್ಲಿ ಮಾತ್ರ ಸೋರಿಕೆಯಾಗಿದೆ ಎಂದು ಸ್ವತಃ ತಾನೇ ಒಪ್ಪಿಕೊಂಡಿವೆ. ಹೀಗಿದ್ದು ಸಹ ಸರ್ಕಾರ ಹಾಗೂ ಎನ್‌ಟಿಎ ಮರು ಪರೀಕ್ಷೆ ನಡೆಸಲು ಹಿಂದೇಟು ಹಾಕುತ್ತಿವೆ. ಜುಲೈ 11ಕ್ಕೆ ಇದ್ದ ಸುಪ್ರೀಂಕೋರ್ಟ್‌ನ ವಿಚಾರಣೆಯು ಮತ್ತೆ ಒಂದು ವಾರಗಳ ಕಾಲ ಅಂದರೆ ಜುಲೈ 18ಕ್ಕೆ ಮುಂದಕ್ಕೆ ಹೋಗಿದೆ. ಹೀಗೆ ತಡವಾದಲ್ಲಿ ಶೈಕ್ಷಣಿಕ ವರ್ಷದ ಗತಿ ಏನು? ವಿಚಾರಣೆಯು ಈಗಾಗಲೇ ಎರಡು ಬಾರಿ ಮುಂದಕ್ಕೆ ಹೋಗಿದ್ದು, ಮತ್ತೆ ಮರು ಪರೀಕ್ಷೆ ನಡೆಸುವ ಸಂದರ್ಭ ಬಂದಲ್ಲಿ ಪರೀಕ್ಷಾ ಪ್ರಕ್ರಿಯೆ ತಡವಾಗಿ ಶೈಕ್ಷಣಿಕ ವರ್ಷ ಹಿಂದೆ ಬೀಳುವುದರಲ್ಲಿ ಸಂಶಯವಿಲ್ಲ. ವಿರೋಧ ಪಕ್ಷಗಳ ವೈರುಧ್ಯದ ನಡುವೆಯೂ, ಸರ್ಕಾರವು ಸಹ ಏನು ಕ್ರಮ ಕೈಗೊಳ್ಳದೆ ಕೋರ್ಟ್‌ನಲ್ಲಿ ವಿಚಾರಣೆಯ ನೆಪ ಹೇಳಿ ಜಾರಿಕೊಳ್ಳುತ್ತಿದೆ. ಈ ಎಲ್ಲದರ ನಡುವೆ ವಿದ್ಯಾರ್ಥಿಗಳ ಭವಿಷ್ಯ ಮಂಕಾಗುತ್ತಿದೆ.

– ದೇವರಹಳ್ಳಿ ಲೋಕೇಶ್, ಪಾಂಡವಪುರ.

ಅಪರ್ಣಾ ಎಂಬ ಶ್ರೇಷ್ಠ ನಿರೂಪಕಿಯ ಸುತ್ತ

ಮಾನ್ಯರೆ,



ನಿರೂಪಕಿ, ಚಲನ ಚಿತ್ರ ನಟಿ, ಗಾಯಕಿ ಶ್ರೀಮತಿ ಅಪರ್ಣಾ ವಸ್ತಾರೆ ಶ್ವಾಸಕೋಶದ ಕ್ಯಾನ್ಸರ್‌ನಿಂದಾಗಿ ತಮ್ಮ 58ನೇ ವಯಸ್ಸಿನಲ್ಲಿ ನಿಧನ ಹೊಂದಿರುವುದು ತುಂಬಾ ದುಃಖಕರ ಸಂಗತಿಯಾಗಿದೆ.

ರಾಜ್ಯ ಕಂಡ ಓರ್ವ ಶ್ರೇಷ್ಠ ಹಾಗೂ ಸತ್ವಪೂರ್ಣ ನಿರೂಪಕಿಯಾಗಿ ವಿಶಿಷ್ಟವಾದ ಛಾಪು ಮೂಡಿಸಿದ್ದ ಅಪರ್ಣಾ, ಕನ್ನಡ ಭಾಷೆಯಲ್ಲಿ ಅತ್ಯಂತ ಸರಳವಾಗಿ ಅಷ್ಟೇ ಸುಂದರವಾಗಿ ನಿರೂಪಣೆ ಮಾಡುತ್ತಿದ್ದ ರೀತಿ ಅನನ್ಯವಾಗಿತ್ತು. ಅವರಿಗೆ ಅವರೇ ಸಾಟಿಯಾಗಿದ್ದರು. ಅಷ್ಟರ ಮಟ್ಟಿಗೆ ಅವರು ಕನ್ನಡದ ಬಹು ಬೇಡಿಕೆಯ ನಿರೂಪಕಿಯಾಗಿದ್ದರು ಎಂದರೆ ತಪ್ಪಾಗಲಾರದು. ರಾಜ್ಯದ ನಂಬರ್ ಒನ್ ನಿರೂಪಕಿಯಾಗಿ 2000ಕ್ಕೂ ಅಧಿಕ ಕಾರ್ಯಕ್ರಮಗಳನ್ನು ನಿರೂಪಿಸಿದ ಕೀರ್ತಿ ಸಹ ಅವರಿಗೆ ಸಲ್ಲುತ್ತದೆ ಪ್ರಸಾರ ಭಾರತಿಯ ವಿವಿಧ ಅಂಗ ಸಂಸ್ಥೆಗಳಾದ ಆಕಾಶವಾಣಿ, ದೂರದರ್ಶನ, ವಿವಿಧ ಭಾರತಿ ಮುಂತಾದವುಗಳಲ್ಲಿ ಬಹಳಷ್ಟು ವರ್ಷಗಳ ಕಾಲ ನಿರೂಪಕಿ ಹಾಗೂ ಉದ್ಘೋಷಕಿಯಾಗಿ ಸೇವೆ ಸಲ್ಲಿಸಿದ್ದ ಅಪರ್ಣಾ, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಬಹುತೇಕ ಕಾರ್ಯಕ್ರಮಗಳ ನಿರೂಪಕಿಯಾಗಿ ಸೇವೆ ಸಲ್ಲಿಸಿದ್ದರು. ಅವರ ಹೆಸರು ರಾಜ್ಯದಲ್ಲಿ ಮನೆ ಮಾತಾಗಿತ್ತು. ಏಕೆಂದರೆ, ಭಾಷೆಯ ಮೇಲೆ, ಪ್ರಭುತ್ವ, ಸ್ಪಷ್ಟತೆ, ಹಿಡಿತ ಮುಂತಾದವು ಅವರ ನಿರೂಪಣೆಯನ್ನು ಮತ್ತಷ್ಟು ಚಂದಗೊಳಿಸುತ್ತಿದ್ದವು. ಅವರು ನಾಡಿನ ಸಾಂಸ್ಕೃತಿಕ ರಾಯಭಾರಿಯಾಗಿ ಭಾಷೆಯ ಕಂಪನ್ನು ಎಲ್ಲೆಡೆ ಪಸರಿಸಿದರು. ಯಾವುದೇ ಕಾರ್ಯಕ್ರಮದ ಯಶಸ್ಸು ಅದರ ನಿರೂಪಣೆಯ ಮೇಲೆ ಅವಲಂಬಿತವಾಗಿರುತ್ತದೆ.

ಕಿರಿ ತೆರೆಯ ಸಾಕಷ್ಟು ಪ್ರಮುಖ ದಾರಾವಾಹಿಗಳಲ್ಲಿ ನಟಿಸಿದ್ದ ಅಪರ್ಣಾ, ಟಿ.ಎನ್.ಸೀತಾರಾಮ್ ಅವರ ಮುಕ್ತ, ಮುಕ್ತ ಮುಕ್ತ ದಾರಾವಾಹಿಗಳ ಮೂಲಕ ಜನರ ಗಮನ. ಸೆಳೆದರು. ವೈಶಾಲಿ ಕಾಸರವಳ್ಳಿ ನಿರ್ದೇಶನದ 'ಮೂಡಲ ಮನೆ' ಯಲ್ಲಿ ಕೂಡ ಅವರಿಗೆ ಪ್ರಮುಖ ಪಾತ್ರ ದೊರಕಿತ್ತು. ಸೃಜನ್ ಲೋಕೇಶ್ ನಿರ್ದೇಶನದ 'ಮಜಾ ಟಾಕೀಸ್' ಸೇರಿದಂತೆ ಹಲವಾರು ಜನಪ್ರಿಯ ಕಾರ್ಯಕ್ರಮಗಳಲ್ಲಿ ಸಹ ಅವರು ನಟಿಸಿ ಓರ್ವ ಪ್ರತಿಭಾವಂತ ನಟಿಯಾಗಿ ರೂಪುಗೊಂಡಿದ್ದರು. ಅಪರ್ಣಾ ನಟಿಗಿಂತ ಹೆಚ್ಚಿಗೆ ಓರ್ವ ಶ್ರೇಷ್ಠ ನಿರೂಪಕಿಯಾಗಿ ಕನ್ನಡಿಗರ ಪ್ರೀತ್ಯಾಭಿಮಾನಗಳಿಗೆ ಭಾಜನರಾಗಿದ್ದರು.

ಕ್ಯಾನ್ಸರ್ ಎಂಬ ಭೀಕರ ಕಾಯಿಲೆಗೆ ತುತ್ತಾಗಿದ್ದರೂ ಸಹ ಅವರು ಲವಲವಿಕೆಯಿಂದಲೇ ಇದ್ದರು. ಅವರ ಜೀವನೋತ್ಸಾಹ, ಆತ್ಮ ವಿಶ್ವಾಸಗಳಿಂದಾಗಿ ಅವರು ಸುಮಾರು ಎರಡು ವರ್ಷಗಳಷ್ಟು ಕಾಲ ಕ್ಯಾನ್ಸರ್ ವಿರುದ್ಧ ಹೋರಾಟ ನಡೆಸಿದ್ದರು. ಅಂತಿಮವಾಗಿ, ವಿಧಿಯ ಕೈ ಮೇಲಾಗಿ ಅಪರ್ಣಾ ಎಂಬ ಕಲಾ ಕುಸುಮ ಮರಳಿ ಬಾರದ ಲೋಕಕ್ಕೆ ಪಯಣಿಸಿದೆ. ಇಂತಹ ಮಹಾನ್ ನಿರೂಪಕಿ ಮತ್ತು ಉತ್ತಮ ನಟಿಗೆ ಗೌರವಪೂರ್ವಕ ಶ್ರದ್ಧಾಂಜಲಿಗಳು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ನೋಡುವ ನೋಟ ಸರಿಯಾಗಿದ್ದರೆ ಎಲ್ಲವೂ ಸರಿಯಾಗಿಯೇ ಇರುತ್ತೆ!



ಜಗತ್ತು ಕನ್ನಡಿ ಇದ್ದಂತೆ. ನೋಡಿ ಹಲ್ಲು ಕಿರಿದರೆ ತಾನು ಹಲ್ಲು ಕಿರಿಯುವುದು, ಅತ್ತರೆ ಅಳುವುದು ಎಂಬ ಮಾತು ಅಕ್ಷರಶಃ ಸತ್ಯವಾದರೂ ಮನುಷ್ಯನಾದವನು ಒಂದು ಹೆಜ್ಜೆ ಮುಂದೆ ಹೋಗಿ ಯೋಚಿಸುತ್ತಾನೆ. ತಾನು ಪರಿಶುದ್ಧನೆಂದು ಭಾವಿಸುತ್ತಾನೆ. ಇತರರಲ್ಲಿರುವ ಹುಳುಕುಗಳ ಬಗ್ಗೆ ಚಿಂತಿಸುತ್ತಾ ಮೊಸರಲ್ಲಿ ಕಲ್ಲು ಹುಡುಕುವ ಚಾಳಿಯನ್ನು ಮಾತ್ರ ಬಿಡಲಾರನು. ಕುತೂಹಲ ಮನುಷ್ಯನ ಸಹಜ ಗುಣ. ತನ್ನ ಬಗ್ಗೆ ತಾನು ಯೋಚಿಸುವುದಕ್ಕಿಂತ ಹೆಚ್ಚಾಗಿ ಇತರರ ಬಗ್ಗೆ, ಅವರ ನಡವಳಿಕೆಯ ಬಗ್ಗೆ, ಅವರ ಜೀವನದ ಆಗು ಹೋಗುಗಳ ಬಗ್ಗೆ ತಿಳಿಯುವ ಪ್ರಯತ್ನವನ್ನು ಮಾಡುತ್ತಲೇ ಇರುತ್ತಾನೆ. ತನಗೆ ಗೋಚರವಾಗಿರುವುದನ್ನೇ ಸತ್ಯವೆಂದು ಭ್ರಮಿಸಿ. ಆ ನಿಟ್ಟಿನಲ್ಲಿ ತನ್ನ ಆಲೋಚನೆಯನ್ನು ಕೂಡ ಬದಲಿಸಿಕೊಳ್ಳುತ್ತಾನೆ. ಕೆಲವೊಮ್ಮೆ ಈ ಆಲೋಚನೆಗಳು ಎಷ್ಟರ ಮಟ್ಟಿಗೆ ಪ್ರಭಾವವನ್ನು ಬೀರುತ್ತವೆ ಎಂದರೆ ತಾನು ಯೋಚಿಸಿದ್ದೆ ಸರಿ ಅದನ್ನು ಬಿಟ್ಟು ಬೇರೆ ಸತ್ಯ ಇಲ್ಲ ಎಂಬ ತೀರ್ಮಾನಕ್ಕೆ ಬಂದಿರುತ್ತಾನೆ. ವಾಸ್ತವದ ಸಂಗತಿಯನ್ನು ತಿಳಿಯುವ ಪ್ರಯತ್ನವನ್ನೇ ಮಾಡುವುದಿಲ್ಲ.

ನೋಡುವ ನೋಟ ಸರಿಯಾಗಿದ್ದರೆ ಕಾಣುವ ದೃಶ್ಯವು ಸರಿಯಾಗಿಯೇ ಇರುತ್ತದೆ. ಎಲ್ಲಿಯವರೆಗೆ ನಾವು ಕಾಮಾಲೆಯ ಕಣ್ಣಿನಿಂದ ನೋಡುವುದನ್ನು ಬಿಡುವುದಿಲ್ಲವೋ ಅಲ್ಲಿಯವರೆಗೆ ನಮಗೆ ಹಳದಿ ಬಣ್ಣವೇ ಗೋಚರಿಸುತ್ತದೆ ಹೊರತು ಇತರ ಬಣ್ಣವಲ್ಲ.

ಹೀಗೆ ಒಬ್ಬರ ಬಗ್ಗೆ ತಿಳಿದು/ತಿಳಿಯದೆಯೋ ಮಾತನಾಡುವ ನಾವು ಎಂದಿಗೂ ಸಹ ನೋಡುವ ನಮ್ಮ ದೃಷ್ಟಿ ಕೋನವನ್ನು ಬದಲಿಸಿಕೊಳ್ಳಬೇಕು ಎಂದು ಅಂದುಕೊಳ್ಳುವುದೇ ಇಲ್ಲ. ಈ ಮಾತನ್ನು ಹೇಳುವಾಗ ಸಂಸ್ಕೃತದಲ್ಲಿ ಇರುವ ಒಂದು ಮಾತು ನೆನಪಿಗೆ ಬರುತ್ತದೆ **'ಯದ್ಭಾವಂ ತದ್ಭವತಿ'** ಅಂದರೆ ನಾವು ಹೇಗೆ ನೋಡುತ್ತೇವೆ, ಹಾಗೆ ನಮಗೆ ಆ ದೃಶ್ಯ ಅಥವಾ ಸನ್ನಿವೇಶಗಳು ಗೋಚರಿಸುತ್ತದೆ. **'ದೃಷ್ಟಿಯಂತೆ ಸೃಷ್ಟಿ'** ಎನ್ನುವ ಮಾತು ಕೂಡ ಇದನ್ನೇ ಸಾಬೀತುಪಡಿಸುತ್ತದೆ. ನೋಡುವ ನೋಟ ಸರಿಯಾಗಿದ್ದರೆ ಎಲ್ಲವೂ ಸರಿಯಾಗಿಯೇ ಇರುತ್ತವೆ.

ನನಗೆ ಈ ಮಾತನ್ನು ಹೇಳುವಾಗ ಹಿಂದೆ ಎಲ್ಲೋ ಓದಿದ್ದ ಘಟನೆಯೊಂದು ನೆನಪಿಗೆ ಬರುತ್ತದೆ.

ಘಟನೆ: ಒಂದು ಊರಿನಲ್ಲಿ ತಾಯಿ, ಮಗ ನೆಲೆಸಿದ್ದರು. ಮನೆ ಕೆಲಸವನ್ನು ಮಾಡಲು ಕೆಲಸದಾಕೆ ಇದ್ದಳು. ಪ್ರತಿನಿತ್ಯ ಆ ಮನೆಯ ಕೆಲಸದಾಕೆ ಬಟ್ಟೆ ಒಗೆದು ಹೊರಗಡೆ ಒಣಗಲು ಹಾಕುತ್ತಿದ್ದಳು. ಪ್ರತಿ ಬಾರಿಯೂ ಅವಳು ಬಟ್ಟೆ ಒಣಗಿ ಹಾಕಿ ಹೋದ ಮೇಲೆ ಆ ಮನೆಯ ಯಜಮಾನಿ ತನ್ನ ಮಗನ ಮುಂದೆ 'ನಮ್ಮ ಕೆಲಸದವಳಿಗೆ ಏನೋ ರೋಗ ಅನ್ನಿಸುತ್ತದೆ! ತನ್ನ ಕೆಲಸವನ್ನು ಸರಿಯಾಗಿ ಮಾಡುವುದಿಲ್ಲ, ನೋಡು ಬಟ್ಟೆಯಲ್ಲಿ ಕೊಳೆ ಹಾಗೆಯೇ ಕಾಣಿಸುತ್ತದೆ. ಅವಳು ಸರಿಯಾಗಿಯೇ ಬಟ್ಟೆ ಒಗೆಯುವುದೇ ಇಲ್ಲ!' ಎಂದು ಹೇಳುತ್ತಿದ್ದಳು. ಒಂದು ದಿನ ಮಾಮೂಲಿಯಾಗಿ ಮಗನ ಜೊತೆ ಮಾತನಾಡುವಾಗ 'ಪರವಾಗಿಲ್ಲವೇ! ಇವತ್ತು ಏನೋ ವಿಶೇಷ ಅನ್ನಿಸುತ್ತದೆ. ನಮ್ಮ ಮನೆ ಕೆಲಸದವಳು ಕೊಳೆ ಕಾಣದಾಗೇ ಬಟ್ಟೆ ಒಗೆದಿದ್ದಾಳೆ' ಎಂದು ಹೇಳಿದಾಗ ಆಗ ಅವಳ ಮಗ ಹೇಳುತ್ತಾನೆ– 'ಇಲ್ಲ ಅಮ್ಮ ಅವಳು ದಿನ ಸರಿಯಾಗಿಯೇ ಬಟ್ಟೆ ಒಗೆಯುತ್ತಿದ್ದಳು. ನೀನು ಕಿಟಕಿಯಿಂದ ಹೊರಗಡೆ ನೋಡುತ್ತಿದ್ದೆ. ಕಿಟಕಿಯಲ್ಲಿ ಕೊಳೆ ಇದ್ದ ಕಾರಣ ನಿನಗೆ ಬಟ್ಟೆ ಕೊಳೆಯಾಗಿ ಕಾಣಿಸುತ್ತಿತ್ತು, ನಾನು ಈ ದಿನ ಕಿಟಕಿಯನ್ನು ಸ್ವಚ್ಛಗೊಳಿಸಿದೆ, ಕಿಟಕಿ ಸ್ವಚ್ಛವಾಗಿರುವುದರಿಂದ ಬಟ್ಟೆಯೂ ಸ್ವಚ್ಛವಾಗಿ ಕಾಣುತ್ತಿದೆ ಎಂದು ಹೇಳಿದ.

ಈ ಪ್ರಸಂಗದಲ್ಲಿ ಬರುವ ತಾಯಿಯ ಹಾಗೆಯೇ ನಾವೆಲ್ಲರೂ ಪ್ರತಿಯೊಬ್ಬರ ತಪ್ಪನ್ನು ಹುಡುಕುವ ಪ್ರಯತ್ನದಲ್ಲಿಯೇ ನಮ್ಮ ಅತಿ ಅಮೂಲ್ಯವಾದ ಸಮಯವನ್ನು ವ್ಯರ್ಥಗೊಳ್ಳುತ್ತೇವೆ. ನಮ್ಮ ತಪ್ಪುಗಳು ನಮಗೆ ಗೋಚರವಾಗುವುದೇ ಇಲ್ಲ. ತನ್ನ ಬೆನ್ನು ತನಗೆ ಕಾಣದು ಎಂಬ ಮಾತಿನಂತೆ ಯಾವಾಗಲೂ ಬೇಡದ ವಿಷಯಗಳ ಬಗ್ಗೆ ಗಮನ ಹರಿಸುತ್ತಾ ಇರುತ್ತೇವೆ. ನೋಡುವ ನೋಟವನ್ನು ಆಲೋಚಿಸುವ ರೀತಿಯನ್ನು ಬದಲು ಮಾಡಿಕೊಂಡರೆ ಸಾಕು ಪ್ರತಿಯೊಂದರಲ್ಲೂ, ಪ್ರತಿಯೊಬ್ಬರಲ್ಲೂ ಒಳ್ಳೆಯದನ್ನು ಮಾತ್ರ ಗುರುತಿಸಬಹುದು.

ಮನುಷ್ಯ ಅವಕಾಶವಾದಿ ಮತ್ತು ಸ್ವಾರ್ಥಿ. ಒಪ್ಪದಿದ್ದರೂ ಒಪ್ಪಲೇಬೇಕಾದ ಸತ್ಯವಿದು. ತನಗೆ ದಕ್ಕದ, ಇತರರಿಗೆ ಸುಲಭವಾಗಿ ದಕ್ಕಿರುವ ವಿಚಾರ ಗೋಚರವಾದರೆ ಅಸೂಯೆಯಿಂದ ಅಥವಾ ನಿರ್ಲಕ್ಷದಿಂದ ಮಾತನಾಡುವುದು ಮನುಷ್ಯನ ಸಹಜ ಗುಣ. ಹೀಗಾಗಿಯೇ ನಾವು ಪ್ರತಿಯೊಂದು ಘಟನೆಯಲ್ಲಿಯೂ ನಮ್ಮ ನೋಟವೇ ಅಥವಾ ಆಲೋಚನೆಯೇ ಸರಿಯೆಂದು ಭಾವಿಸಿಕೊಂಡಿರುತ್ತೇವೆ. ಅದರ ಆಚೆಗೆ ಆಲೋಚನೆಯನ್ನು ಕೂಡ ಮಾಡುವುದಿಲ್ಲ ಒಂದು ವೇಳೆ ಆಲೋಚನೆ ಮಾಡಿ ಸತ್ಯ ತಿಳಿದರೂ ಕೂಡ ಅದರ ಬಗ್ಗೆ ಪ್ರಸ್ತಾಪಿಸುವುದಿಲ್ಲ.

ಉದಾಹರಣೆಗೆ ಹೇಳುವುದಾದರೆ ನನಗೆ ಯಾವುದೋ ವ್ಯಕ್ತಿಯ ಮೇಲೆ ದ್ವೇಷ ಅಥವಾ ಅಸೂಯೆ ಭಾವನೆ ಇದೆ ಎಂದು ಭಾವಿಸಿಕೊಂಡರೆ ಅವನು ಎಷ್ಟೇ ಒಳ್ಳೆಯ ಕೆಲಸಗಳನ್ನು ಮಾಡಿದರು ಕೂಡ ಎಲ್ಲದರಲ್ಲೂ ನನಗೆ ನಕರಾತ್ಮಕತೆಯೇ ಕಾಣಿಸುತ್ತದೆಯೇ ವಿನಃ ಆ ಒಳ್ಳೆಯತನ ಗೋಚರವಾಗುವುದೇ ಇಲ್ಲ. ಇದು ಸರ್ವೇಸಾಮಾನ್ಯವಾಗಿ ನಮ್ಮೆಲ್ಲರ ನಡುವೆ ತಿಳಿದು ಕೆಲವೊಮ್ಮೆ ತಿಳಿಯದೆ ಅಡಕವಾಗಿರುವ ವಾಸ್ತವದ ಸಂಗತಿ.

ಒಂದು ಘಟನೆ ಜರುಗಿದಾಗ ಸತ್ಯ ಎಂಬುದು ಘಟನೆ ನಡೆದ ವ್ಯಕ್ತಿಗಳಿಗೆ ಮಾತ್ರ ಸಂಬಂಧಪಟ್ಟಿರುತ್ತದೆ. ಸತ್ಯ–ಅಸತ್ಯ ಆ ಇಬ್ಬರಿಗೆ ಮಾತ್ರ ತಿಳಿದಿರುತ್ತದೆ. ಇದೇ ಘಟನೆ ನಾಲ್ಕು ಜನರಿಗೆ ತಿಳಿದಾಗ ಬೇರೆ ಬೇರೆ ಆಯಾಮದಿಂದ ಘಟನೆಯನ್ನು ತಮ್ಮದೇ ಆದ ರೀತಿಯಲ್ಲಿ ತರ್ಕಿಸುವ ಕೆಲಸವನ್ನು ಮಾಡುತ್ತಾರೆ. ತವಕದಲ್ಲಿ ನಡೆದಿರುವುದು ಏನು, ಸತ್ಯ ಏನು ಎಂಬುದನ್ನು ತಿಳಿಯದೆ ತಾವು ಅಂದುಕೊಂಡಿರುವುದೇ ಸತ್ಯವೆಂದು ಭಾವಿಸಿ, ತಮ್ಮ ತರ್ಕದ ಆಲೋಚನೆಯನ್ನು ಅಂತಿಮ ಸತ್ಯವೆಂದು ಭಾವಿಸುತ್ತಾರೆ. ನೋಡುವ ನೋಟವನ್ನು ಬದಲಿಸಿಕೊಳ್ಳದೆ, ಆಲೋಚಿಸುವ ಲಹರಿಯನ್ನು ಮಾರ್ಪಡಿಸಿಕೊಳ್ಳದೆ ನಾವು ಕಂಡದ್ದೇ ಸತ್ಯ, ಇದರಾಚೆಗೆ ಜೀವನವಿಲ್ಲ ಎಂದು ಭಾವಿಸಿಕೊಂಡಾಗ ನಾವು ಬಾವಿಯ ಕಪ್ಪೆಯಂತೆ ಆಗುತ್ತೇವೆ.

> **ಸಂಸ್ಕೃತದಲ್ಲಿ ಇರುವ ಒಂದು ಮಾತು ನೆನಪಿಗೆ ಬರುತ್ತದೆ 'ಯದ್ಭಾವಂ ತದ್ಭವತಿ' ಅಂದರೆ ನಾವು ಹೇಗೆ ನೋಡುತ್ತೇವೆ, ಹಾಗೆ ನಮಗೆ ಆ ದೃಶ್ಯ ಅಥವಾ ಸನ್ನಿವೇಶಗಳು ಗೋಚರಿಸುತ್ತದೆ. 'ದೃಷ್ಟಿಯಂತೆ ಸೃಷ್ಟಿ' ಎನ್ನುವ ಮಾತು ಕೂಡ ಇದನ್ನೇ ಸಾಬೀತುಪಡಿಸುತ್ತದೆ. ನೋಡುವ ನೋಟ ಸರಿಯಾಗಿದ್ದರೆ ಎಲ್ಲವೂ ಸರಿಯಾಗಿಯೇ ಇರುತ್ತವೆ.**

ನಾವು ಪ್ರತಿಯೊಬ್ಬ ಮನುಷ್ಯರ ತಪ್ಪುಗಳನ್ನು ಹುಡುಕುವ ಬದಲು ಅವರಲ್ಲಿರುವ ಒಳ್ಳೆಯತನಗಳನ್ನು ಗುರುತಿಸಿದ್ದಲ್ಲಿ ನಾವು ಒಳ್ಳೆಯತನದಿಂದ ಬದುಕಲು ಸಾಧ್ಯ. ಇರುವ ಸಮಯವನ್ನು ಅನವಶ್ಯಕವಾಗಿ ಬೇರೆಯವರ ಬಗ್ಗೆ ಚಿಂತಿಸುತ್ತಾ ಕಾಲ ಹರಣ ಮಾಡುವ ಬದಲು ನಾವು ನೋಡುವ ದೃಷ್ಟಿಯನ್ನೇ ಬದಲಿಸಿಕೊಂಡು ಅವರಲ್ಲಿರುವ ಒಳ್ಳೆಯತನವನ್ನು ಮಾತ್ರ ಗ್ರಹಿಸುವಂತಾದರೆ ನಾವು ಉನ್ನತವಾಗಿ ಬೆಳೆಯಬಹುದು. ಜೊತೆಗೆ ಇತರರಲ್ಲೂ ಕೂಡ ಉನ್ನತವಾದ ಆದರ್ಶವನ್ನು ಬೆಳೆಯಲು ಸಹಕಾರಿಯಾಗಬಹುದು. ನನ್ನ ದೃಷ್ಟಿಯಿಂದ ಮತ್ತೊಬ್ಬ ಕೆಟ್ಟವನು ಎಂದು ಭಾವಿಸಿದ್ದಲ್ಲಿ ಅವನ ದೃಷ್ಟಿಯಲ್ಲಿ ನಾನು ಕೆಟ್ಟವನಾಗಿಯೇ ಇರುತ್ತೇನೆ ಹೊರತು ಒಳ್ಳೆಯವನಾಗಲು ಸಾಧ್ಯವಿಲ್ಲ. ಒಳ್ಳೆಯ ದೃಷ್ಟಿಕೋನದಿಂದ ನೋಡಿದಾಗ ಒಳ್ಳೆಯ ಅಂಶಗಳಷ್ಟೇ ಗೋಚರವಾಗುತ್ತದೆ. ಅದೇ ಕೆಟ್ಟ ಗುಣಗಳನ್ನಷ್ಟೇ ನೋಡಿದಾಗ ಕೆಟ್ಟ ಗುಣಗಳಷ್ಟೇ ಎದ್ದು ಕಾಣುತ್ತದೆ.

ನಾನೊಬ್ಬ ನನ್ನ ಆಲೋಚನೆಯನ್ನು ಬದಲಿಸಿಕೊಂಡರೆ ಸಾಕಾ; ಉಳಿದವರು ಹಾಗೆ ಆಲೋಚಿಸಿಕೊಳ್ಳುತ್ತಾರೆಯೇ ಎಂದು ಪ್ರಶ್ನಿಸುವ ಬದಲು ನಾವು ಬದಲಾಗಬೇಕು. ಸಕರಾತ್ಮಕತೆಯ ದೃಷ್ಟಿಯಿಂದ ಪ್ರಪಂಚವನ್ನು ನೋಡುವ ಗುಣ ನಮ್ಮದಾಗಬೇಕು. ನಮ್ಮಿಂದ ಇಡೀ ದೇಶವೇ ಬದಲಾಗದಿದ್ದರೂ ನಾಲ್ಕು ಜನರಾದರೂ ಕೂಡ ಪ್ರೇರಣೆಯನ್ನು ಪಡೆಯಬಲ್ಲರು. ಬದಲಾವಣೆ ಅನ್ನುವುದು ಯಾವಾಗಲೂ ಸಹಜವಾಗಿ ನಿಧಾನವಾಗಿ ನಡೆಯುವ ಪ್ರಕ್ರಿಯೆ. ಹಾಗೆಯೇ ಒಳ್ಳೆಯ ದೃಷ್ಟಿಯನ್ನು ಬೆಳೆಸಿಕೊಂಡಾಗ ನಮಗೆ ಒಳ್ಳೆಯ ಗುಣಗಳೇ ಗೋಚರವಾಗಿ ಕಾಣಬಲ್ಲದು. ಇದನ್ನೇ ನಮ್ಮ ಕನ್ನಡದ ಕವಿಗಳು ಕೂಡ ತಮ್ಮ ಕೃತಿಗಳಲ್ಲಿ ಗುರುತಿಸಿದ್ದಾರೆ. ಉದಾಹರಣೆಗೆ ದುರ್ಯೋಧನ ಮೂಲತಃ ಮಹಾಭಾರತದಲ್ಲಿ ಕೆಟ್ಟವನಂತೆ ಚಿತ್ರತನಾದರೂ ಪಂಪ, ರನ್ನನ ಕೃತಿಗಳಲ್ಲಿ ಅವನೊಬ್ಬ ಛಲವಾದಿಯಾಗಿ, ಹಠವಾದಿಯಾಗಿ, ಸ್ನೇಹಕ್ಕೆ ಹೆಚ್ಚು ಪ್ರಾಧ್ಯಾನತೆಯನ್ನು ಕೊಟ್ಟಂತಹ ಶ್ರೇಷ್ಠ ಗೆಳೆಯನಾಗಿ ಗೋಚರಿಸುತ್ತಾನೆ.

ಪ್ರತಿಯೊಬ್ಬರಲ್ಲೂ ಒಳ್ಳೆಯ ಮತ್ತು ಕೆಟ್ಟ ಗುಣಗಳು ಇರುತ್ತವೆ. ನಮಗೆ ಬೇಕಾದ ಗುಣವನ್ನು ಆರಿಸಿಕೊಂಡು ಅದನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಅವಕಾಶವೂ ನಮ್ಮಲ್ಲಿಯೇ ಇರುತ್ತದೆ. ಆದ್ದರಿಂದ ಸಾಧ್ಯವಾದಷ್ಟು ಒಳ್ಳೆಯ ಗುಣಗಳನ್ನು, ಆಲೋಚನೆಗಳನ್ನು ಮಾಡುವ ಮೂಲಕ ಸುಂದರವಾದ ಸಮಾಜವನ್ನು ಒಳ್ಳೆಯತನದಿಂದ ನೋಡುವ ಶಕ್ತಿಯನ್ನು ಬೆಳೆಸಿಕೊಳ್ಳೋಣ.

ಪ್ರಕೃತಿಯಲ್ಲಿರುವ ಪ್ರತಿಯೊಂದು ಪ್ರಾಣಿ–ಪಕ್ಷಿಯಿಂದಲೂ ಕಲಿಯುವಂತಹ ವಿಷಯಗಳು ಸಾಕಷ್ಟು ಇರುತ್ತವೆ. ಆದರೆ ಅವುಗಳನ್ನು ಗ್ರಹಿಸುವ ಶಕ್ತಿ ನಮ್ಮಲ್ಲಿರಬೇಕಷ್ಟೇ.

ಒಂದು ದಿನ ಚಿಲ್ಲರೆ ಅಂಗಡಿಯಲ್ಲಿ ಅಕ್ಕಿಹಿಟ್ಟು, ಗೋದಿಹಿಟ್ಟು, ಸಕ್ಕರೆ ಎಲ್ಲವೂ ಮಿಶ್ರಣವಾಗಿ ನೆಲದ ಮೇಲೆ ಹರಡಿತು. ಸ್ವಲ್ಪ ಸಮಯದಲ್ಲೇ ಇರುವೆಗಳ ಗುಂಪು ಆ ಕಡೆ ಸಾಗುವುದನ್ನು ಗಮನಿಸಿದೆ.


ಆ ಮಿಶ್ರಣದಲ್ಲಿಯೂ ಸಹ ಇರುವೆಗಳು ತಮಗೆ ಬೇಕಾದ ಸಕ್ಕರೆಯನ್ನು ಮಾತ್ರ ಹುಡುಕಿ ತೆಗೆದುಕೊಂಡು ಹೋಗುತ್ತಿರುವುದು ಸೋಜಿಗವನ್ನುಂಟು ಮಾಡಿತು. ಪ್ರತಿಯೊಬ್ಬ ಮನುಷ್ಯನಲ್ಲಿಯೂ ಒಳ್ಳೆಯದು, ಕೆಟ್ಟದ್ದು ಇರುತ್ತದೆ. ನಾವು ಆ ಇರುವೆಯಂತೆ ನಮಗೆ ಬೇಕಾದ ಒಳ್ಳೆಯತನವನ್ನು ಮಾತ್ರ ತೆಗೆದುಕೊಂಡು ಅದನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನ ಎಷ್ಟು ಸುಮಧುರವಾಗಿರುತ್ತದೆ, ಆಲೋಚಿಸಿ ! ನಾವು ಈ ಗುಣವನ್ನು ನಮ್ಮಲ್ಲಿ ಮೈಗೂಡಿಸಿಕೊಂಡರೆ ತುಂಬಾ ಒಳಿತು. ನಮಗೆ ತಿಳಿಯದ, ಸಂಬಂಧಪಡದ ವಿಚಾರಗಳ ಬಗ್ಗೆ ಅನಾವಶ್ಯಕ ಚರ್ಚೆಗಳ ಮಾಡುವ ಬದಲು ಅಥವಾ ಆಲೋಚಿಸುವ ಬದಲು ನಮ್ಮ ಗುಣವನ್ನು ದೃಷ್ಟಿಕೋನವನ್ನು ಬದಲಿಸಿಕೊಂಡಿದ್ದಲ್ಲಿ ಪ್ರತಿಯೊಂದು ವಿಷಯದಲ್ಲಿಯೂ ಸಕರಾತ್ಮಕತೆ ಕಾಣಿಸುತ್ತದೆ. ಅಂತಿಮವಾಗಿ ಎಲ್ಲೋ ಓದಿದ ಸಾಲು ನೆನಪಾಗುತ್ತಿದೆ.

ಹವ್ಯಾಸ ಬದಲಿಸು ಹಣೆ ಬರಹ ಬದಲಾದೀತು
ದೃಷ್ಟಿ ಬದಲಿಸು ದೃಶ್ಯ ಬದಲಾದೀತು,
ಹಡಗು ಬದಲಿಸಬೇಕೆಂದು ಇಲ್ಲ ದಿಕ್ಕು ಬದಲಿಸಿದರೆ ಸಾಕು
ಗುರಿ ತಲುಪುವುದು ಸಾಧ್ಯ

ಈ ಶ್ರೇಷ್ಠ ಚಿಂತನೆಯ ಮೂಲಕ ಅರಿತುಕೊಳ್ಳಬೇಕು. ನಮ್ಮ ನಮ್ಮ ಓರೆ–ಕೋರೆಗಳನ್ನು ಸ್ವತಃ ತಿದ್ದಿ ತೀಡಿಕೊಂಡು ಯೋಗ್ಯವಾದ ಹಾದಿಯಲ್ಲಿ ನಡೆದರೆ ಲೋಕಕಲ್ಯಾಣ ಪ್ರಾಪ್ತವಾಗುವುದರಲ್ಲಿ ಸಂಶಯವಿಲ್ಲ ನೋಡುವ ನೋಟ ಬದಲಿಸಿದರೆ ಸಾಕು ಹೊಸ ದೃಶ್ಯ ,ಹೊಸ ಅರ್ಥ ಕಾಣಬಲ್ಲದು.

ಆರಂಭ ಶೂರತ್ವದ ನೈಟ್‌ರೈಡ್ ಕಾರ್ಯಾಚರಣೆ

ಬನ್ನಿಮಂಟಪದ ಸ್ಮಶಾನ ರಸ್ತೆ ಸೇರಿದಂತೆ ಎಲ್ಲೆಡೆ ಕಣ್ಣಿಗೆ ರಾಚುತ್ತಿದೆ ರಾಶಿ ರಾಶಿ ಕಸ!







ಮೈಸೂರು, ಜು.12(ಎಂಕೆ)– 'ಕುಣಿಯ ಲಾರದವನಿಗೆ ನೆಲ ಡೊಂಕು' ಎಂಬಂತೆ ಕಸ ವಿಲೇವಾರಿಯಲ್ಲಿ ಮೈಸೂರು ಮಹಾನಗರ ಪಾಲಿಕೆ ಜನರ ವಿಶ್ವಾಸ ಕಳೆದು ಕೊಳ್ಳುತ್ತಿದೆ...!

ರಾತ್ರಿ ವೇಳೆ ರಸ್ತೆಬದಿ ಮತ್ತು ಖಾಲಿ ನಿವೇಶನಗಳಲ್ಲಿ ಕಸ ಎಸೆದು ಹೋಗುವವರ ವಿರುದ್ಧ ಕ್ರಮಕ್ಕೆ ಮೊನ್ನೆಯಷ್ಟೇ ಹೊಸದಾಗಿ 'ನೈಟ್ ರೈಡ್'(ರಾತ್ರಿ ಗಸ್ತು) ಆರಂಭಿಸಿದ್ದ ಪಾಲಿಕೆ ಅಧಿಕಾರಿ–ಸಿಬ್ಬಂದಿ, ಕಸವನ್ನು ಅಲ್ಲಿಯೇ ಬಿಟ್ಟು, ಕತ್ತಲಲ್ಲಿ ಕಳೆದೊಗುತ್ತಿದ್ದಾರೆಯೇ ಹೊರತು ಕಸ ವಿಲೇವಾರಿ ಮಾಡುತ್ತಿಲ್ಲ.

ಬನ್ನಿಮಂಟಪ ಜೋಡಿ ತೆಂಗಿನಮರ ರಸ್ತೆಯಲ್ಲಿ ಕಳೆದ ನಾಲ್ಕೈದು ದಿನಗಳಿಂದ ಹಳೇ ಸೋಫಾ ಸಹಿತ ಮೂಟೆ ಗಟ್ಟಲೆ ಕಸ ತುಂಬಿ ತಂದು ಎಸೆದಿದ್ದು, ವಿಲೇವಾರಿ ಮಾಡುವವರೇ ಇಲ್ಲವಾಗಿದ್ದಾರೆ. ಅಲ್ಲದೆ ಕಂಡ ಕಂಡಲ್ಲಿ, ರಸ್ತೆ ಬದಿಯಲ್ಲಿ ಕಸ ರಾಶಿ ರಾಶಿ ನೋಡುಗರ ಕಣ್ಣಿಗೆ ರಾಚುತ್ತಿದ್ದು ವಿಲೇವಾರಿಯಾಗುತ್ತಿಲ್ಲ.

ಪಾಲಿಕೆಯ ಆಯುಕ್ತರಾದಿಯಾಗಿ ಕಸ ವಿಲೇವಾರಿ ಮಾಡುತ್ತೇವೆ. ಹಸಿಕಸ–ಒಣಕಸ ಬೇರ್ಪಡಿಸುತ್ತೇವೆ. ಮೈಸೂರಿಗೆ ಮತ್ತೊಮ್ಮೆ ಸ್ವಚ್ಛ ನಗರದ ಕಿರೀಟ ತೊಡಿಸುತ್ತೇವೆ ಎಂದು ಹೇಳುತ್ತಾರೆಯೇ ವಿನಃ ಕಾರ್ಯರೂಪಕ್ಕೆ ತರುತ್ತಿಲ್ಲ. ಹೊಸದಾಗಿ ಆರಂಭಿಸಿದ ರಾತ್ರಿ ಗಸ್ತು ಕಾರ್ಯಾಚರಣೆ ಕೂಡ ಫೋಟೋ ಶೂಟ್‌ಗಾಗಿಯೇ ಎಂದು ಮೈಸೂರಿನ ಪ್ರಜ್ಞಾವಂತ ನಾಗರಿಕರು ಛೀಮಾರಿ ಹಾಕುತ್ತಿದ್ದಾರೆ.

ವಾರ್ಡಿಗೊಬ್ಬರು ಸಾಕೇ: 'ನೈಟ್ ರೈಡ್' ಕಾರ್ಯಾಚರಣೆಯಲ್ಲಿ ವಾರ್ಡಿಗೆ ಒಬ್ಬರು ಪೌರಕಾರ್ಮಿಕರು ಮತ್ತು ಒಬ್ಬ ಮೇಲ್ವಿಚಾರಕರನ್ನು ನಿಯೋಜಿಸಲಾಗುವುದು. ಸಿಬ್ಬಂದಿ ವಾಹನದಲ್ಲಿ ರೌಂಡ್ಸ್ ಮಾಡಲಿದ್ದು, ಕಸ ಎಸೆಯುವವರು ಸಿಕ್ಕಿ ಬಿದ್ದರೆ ತಮ್ಮ ಸಿಬ್ಬಂದಿ ಮಾಹಿತಿ ಮೇರೆಗೆ ಹೆಲ್ತ್ ಇನ್ಸ್‌ಪೆಕ್ಟರ್‌ಗಳು ಸ್ಥಳಕ್ಕೆ ಬಂದು ದಂಡ ವಿಧಿಸಲಿದ್ದಾರೆ ಎಂಬ ಪಾಲಿಕೆ ಅಧಿಕಾರಿಗಳ ಮಾತು ಹಾಸ್ಯಾಸ್ಪದವಾಗಿದೆ. ಇಡೀ ಒಂದು ವಾರ್ಡಿನ ಕಸವನ್ನು ಓರ್ವ ಪೌರಕಾರ್ಮಿಕ ವಿಲೇವಾರಿ ಮಾಡಲು, ರೌಂಡ್ಸ್ ಮಾಡಲು ಸಾಧ್ಯವೇ. ಇಡೀ ವಾರ್ಡ್‌ಗೆ ಒಬ್ಬರು ಸಾಕೇ ಎಂದು ಪ್ರಶ್ನಿಸಿದ್ದಾರೆ.

ಇದೆಲ್ಲವೂ ಪ್ರಚಾರಕಷ್ಟೇ. ಒಂದೆರಡು ದಿನ ಅಡ್ಡಾಡುತ್ತಾರೆ. ರಾತ್ರಿ 10–12 ಗಂಟೆಯವರೆಗೆ ವಾರ್ಡಿನ ಒಂದೆರಡು ಕಡೇ ತಿರುಗಿ ಯಾವುದೋ ಅಜ್ಞಾತ ಸ್ಥಳದಲ್ಲಿ ಕಾಲ ಕಳೆದು ಹೋಗುತ್ತಾರೆಂಬುದಕ್ಕೆ ಬೆಳಗಿನ ಜಾವ ಕಂಡ ಕಂಡಲ್ಲಿ ಕಸ ಬಿದ್ದಿರುವುದೇ ಸಾಕ್ಷಿ. ಕಸ ವಿಲೇವಾರಿಗೆ ಸಾಕಷ್ಟು ಮಾರ್ಗಗಳಿವೆ. ಆದರೂ 'ಕುಣಿಯಲಾರದವನಿಗೆ ನೆಲ ಡೊಂಕು' ಎಂಬಂತೆ ವ್ಯರ್ಥ ಕಾರ್ಯಾಚರಣೆಗಳು ಬೇಕೆ. ಈ ಹಿಂದೆಲ್ಲಾ ಮೈಸೂರು ಸ್ವಚ್ಛ ನಗರಿ ಪ್ರಶಸ್ತಿ ಪಡೆದಾಗ ರಾತ್ರಿ ಗಸ್ತು ಇತ್ತೆ. ಇಚ್ಛಾಶಕ್ತಿ ಇಲ್ಲದಿದ್ದರೆ ಎಲ್ಲವೂ ಮಾಡುವ ಕೆಲಸ ವ್ಯರ್ಥ ಎಂದು ಲೇವಡಿ ಮಾಡಿದ್ದಾರೆ.

ಇದೊಂದು ಕೆಟ್ಟ ಚಾಳಿ: ಕಂಡ ಕಂಡಲ್ಲಿ ಕಸ ಎಸೆಯುವ ಕೆಟ್ಟ ಚಾಳಿ ಬಿಟ್ಟರೆ ಒಳಿತು. ಮನೆಯಲ್ಲಿಯೇ ಕಸ ವಿಂಗಡಿಸಿ, ಗೂಡ್ಸ್ ಆಟೋದಲ್ಲಿ ಬರುವ ಪೌರಕಾರ್ಮಿಕರಿಗೆ ನೀಡಿದರೆ ಎಲ್ಲೆಡೆ ಸ್ವಚ್ಛತೆ ಕಾಣುತ್ತದೆ. ಎಲ್ಲವನ್ನೂ ಪಾಲಿಕೆ ಅಧಿಕಾರಿ–ಸಿಬ್ಬಂದಿಗಳೇ ಮಾಡಲಿ. ನಾವು ಕಸ ಎಸೆಯುತ್ತಲೇ ಇರುತ್ತೇವೆ ಎಂಬ ದುರ್ವರ್ತನೆಯನ್ನು ಬಿಡಬೇಕು ಎಂದು ಮೈಸೂರಿನ ಪ್ರಜ್ಞಾವಂತ ನಾಗರಿಕರು 'ಮೈಸೂರು ಮಿತ್ರ'ನ ಮೂಲಕ ಮನವಿ ಮಾಡಿದ್ದಾರೆ.

ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಅಭಿನಂದನೆ



ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾಗಿ ನೇಮಕಗೊಂಡ ಶ್ರೀಮತಿ ಆಯೇಷಾ ಖಾನಂ ಅವರು ಶುಕ್ರವಾರ ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆ ಸಲ್ಲಿಸಿದರು. ಚಿತ್ರದಲ್ಲಿ ಡಿ.ಕೆ. ಶಿವಕುಮಾರ್ ಅವರ ಆಪ್ತ ಸಹಾಯಕ ತ್ಯಾಗರಾಜ್ ಅವರನ್ನು ಕಾಣಬಹುದು.

ಉದ್ಯಮಿ ಅಂಬಾನಿ ಪುತ್ರ ಅನಂತ್ ಅಂಬಾನಿ ವಿಜೃಂಭಣೆಯ ವಿವಾಹ ಮಹೋತ್ಸವ

ಮುಂಬೈ: ಭಾರತದ ಶ್ರೀಮಂತ ಉದ್ಯಮಿ ಮುಖೇಶ್ ಅಂಬಾನಿ ಮಗ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಅವರ ಮದುವೆ ಇಂದು (ಜು.12) ವಿಜೃಂಭಣೆಯಿಂದ ನಡೆಯಿತು. ಮುಂಬೈನ ಜಿಯೋ ವರ್ಲ್ಡ್ ಸೆಂಟರ್‌ನಲ್ಲಿ ಮೂರು ದಿನಗಳ ಕಾಲ ಮದುವೆ ಕಾರ್ಯಗಳು ನಡೆಯಲಿದ್ದು, ಮದುವೆಗೆ ಡ್ರೆಸ್ ಕೂಡ ಇದೆ. ಎಲ್ಲರೂ ಭಾರತೀಯ ಟ್ರೆಡಿಷನಲ್ ಡ್ರೆಸ್ ಹಾಕಿಕೊಂಡು ಬರಬೇಕು ಎಂದು ತಿಳಿಸಲಾಗಿದೆ.



ಎರಡನೇ ದಿನ ಜುಲೈ 13ಕ್ಕೆ 'ಶುಭ ಆಶೀರ್ವಾದ್' ನಡೆಯಲಿದ್ದು, ಈ ಕಾರ್ಯಕ್ರಮಕ್ಕೆ ಭಾರತೀಯ ಶೈಲಿಯ ಫಾರ್ಮಲ್ ಉಡುಪುಗಳನ್ನು ಧರಿಸಬೇಕಿದೆ. ಮೂರನೇ ದಿನ ಜುಲೈ 14ಕ್ಕೆ 'ಮಂಗಳ ಉತ್ಸವ್' ನಡೆಯಲಿದೆ. ಇದು ಆರತಕ್ಷತೆಯಾಗಿರುತ್ತದೆ. ಮೂರು ದಿನಗಳು ನಡೆಯುವ ಮದುವೆಗೆ ಕ್ರೀಡಾ ಲೋಕದ ದಿಗ್ಗಜರು, ಕ್ರಿಕೆಟರ್ಸ್, ಬಾಲಿವುಡ್ ಸೆಲೆಬ್ರಿಟಿಗಳು, ದೇಶದ ಪ್ರತಿಷ್ಠಿತ ಉದ್ಯಮಿಗಳು ಮತ್ತು ರಾಜಕಾರಣಿಗಳು ಸೇರಿದಂತೆ ವಿವಿಧ ರಂಗದ ಗಣ್ಯರು ಭಾಗಿಯಾಗಲಿದ್ದಾರೆ ಎಂದು ತಿಳಿದು ಬಂದಿದೆ.

ಇನ್ನು, ಮದುವೆ, ವಿಡಿಯೋ ಶೂಟ್, ಊಟ, ಗಣ್ಯರ ಸ್ಟೇಯಿಂಗ್‌ಗೆ ವ್ಯವಸ್ಥೆ, ಡೆಕೋರೇಷನ್, ಮ್ಯೂಸಿಕಲ್ ಪ್ರೋಗ್ರಾಮ್ಸ್, ಸ್ಟೇಜ್ ಪ್ರೋಗ್ರಾಮ್ಸ್, ಟ್ರಾವೆಲಿಂಗ್ ವೆಚ್ಚ ಸೇರಿದಂತೆ ಬರೋಬ್ಬರಿ 5 ಸಾವಿರ ಕೋಟಿ ಖರ್ಚಾಗಲಿದೆ ಎಂದು ತಿಳಿದು ಬಂದಿದೆ. ಇದು ಸಹಸ್ರಾರು ಕೋಟಿ ಮದುವೆ ಎಂದೇ ಖ್ಯಾತಿ ಪಡೆದಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಮುಡಾ ಹಗರಣ; ಕಾಂಗ್ರೆಸ್, ಬಿಜೆಪಿ ಆರೋಪ-ಪ್ರತ್ಯಾರೋಪ; ಮುತ್ತಿಗೆ-ಪ್ರತಿ ಮುತ್ತಿಗೆ ಹೈಡ್ರಾಮಾ

ಮುಡಾ ಹಗರಣ ಸಿಬಿಐ ತನಿಖೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

ವಿಪಕ್ಷ ನಾಯಕ ಅಶೋಕ್, ಮಾಜಿ ಡಿಸಿಎಂ ಡಾ.ಅಶ್ವಥ್‌ನಾರಾಯಣ್, ಸಂಸದ ಯದುವೀರ್ ಸೇರಿ ಹಲವರಿಂದ ಮುಡಾ ಮುತ್ತಿಗೆ ಯತ್ನ, ಬಂಧನ







ಮುಡಾ ಹಗರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಮೈಸೂರಿನಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದ ವೇಳೆ ಮುಡಾಗೆ ಮುತ್ತಿಗೆ ಹಾಕಲು ಯತ್ನಿಸಿದ ಸಂಸದ ಯದುವೀರ್, ವಿರೋಧ ಪಕ್ಷದ ನಾಯಕ ಅಶೋಕ್ ಸೇರಿದಂತೆ ಇತರರನ್ನು ಪೊಲೀಸರು ಬಂಧಿಸಿದರು.

ಮೈಸೂರು, ಜು.12(ಬಿಎಲ್‌ಯು)- ಮುಡಾದಲ್ಲಿ ನಡೆದಿರುವ ಸಾವಿರಾರು ಕೋಟಿ ರೂಪಾಯಿ ಹಗರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಮೈಸೂರಿನಲ್ಲಿ ಇಂದು ಭಾರೀ ಪ್ರತಿಭಟನೆ ನಡೆಸಿದರು. ಮುಡಾ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ವೇಳೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಮಾಜಿ ಉಪ ಮುಖ್ಯಮಂತ್ರಿ ಡಾ.ಅಶ್ವಥ್ ನಾರಾಯಣ್, ಸಂಸದ ಯದುವೀರ್ ಸೇರಿದಂತೆ ನೂರಾರು ಬಿಜೆಪಿ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ಅಕ್ರಮವಾಗಿ ಬದಲಿ ನಿವೇಶನ ನೀಡಿರುವುದು ಸೇರಿದಂತೆ ಮುಡಾದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರವನ್ನು ಸಿಬಿಐ ತನಿಖೆಗೆ ವಹಿಸುವಂತೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಇಂದು ಪ್ರತಿಭಟನೆ ನಡೆಸಿದರು.

ನಗರದ ಮಹಾರಾಜ ಕಾಲೇಜು ಮೈದಾನದಿಂದ ಹೊರಟ ಬಿಜೆಪಿ ಕಾರ್ಯಕರ್ತರು ಕೃಷ್ಣರಾಜ ಬುಲೆವಾರ್ಡ್ ರಸ್ತೆಯಲ್ಲಿ ಪ್ರತಿಭಟನಾ ಧರಣಿ ನಡೆಸಿದರು. ಈ ವೇಳೆ ಮಾತನಾಡಿದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸತ್ ಅಧಿವೇಶನದಲ್ಲಿ ಭಾಗಿಯಾಗಿ ಬಂದ ನಂತರ ಇಡೀ ಲೋಕಸಭಾ ಕ್ಷೇತ್ರದಲ್ಲಿ ನಾನು ಪ್ರವಾಸ ಮಾಡುತ್ತಿದ್ದೇನೆ. ಕಾಂಗ್ರೆಸ್ ಸರ್ಕಾರ ಹೊಸದಾಗಿ ಡಾಂಬರೀಕರಣ ಮಾಡುವುದಿರಲಿ, ರಸ್ತೆಗಳ ಗುಂಡಿ ಕೂಡ ಮುಚ್ಚಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ರಾಜ್ಯ ಸರ್ಕಾರದ ಖಜಾನೆ ತುಂಬಿತ್ತು. ಆದರೆ ಈಗ ಖಾಲಿಯಾಗಿದ್ದು, ಸರ್ಕಾರ ಸಾಲ ಮಾಡುವ ಪರಿಸ್ಥಿತಿ ಬಂದಿದೆ. ವಾಲ್ಮೀಕಿ ಹಗರಣ, ಮುಡಾ ಹಗರಣವನ್ನು ಸರ್ಕಾರ ಈ ಕೂಡಲೇ ಸಿಬಿಐಗೆ ವಹಿಸಬೇಕು ಎಂದು ಯದುವೀರ್ ಆಗ್ರಹಿಸಿದರು.

ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಬಂದ ನಂತರ ಮುಡಾಗೆ ಮುತ್ತಿಗೆ ಹಾಕೋಣ ಎಂದು ಬಿಜೆಪಿ ನಾಯಕರು ನಿರ್ಧರಿಸಿದರು. ಆದರೆ ದಿಢೀರ್ ಮಳೆ ಬಂದ ಕಾರಣ ಮಳೆಯಲ್ಲೇ ಮುಡಾ ಕಚೇರಿಯತ್ತ ಧಾವಿಸಿದರು. ಈ ಸಂದರ್ಭದಲ್ಲಿ ಪೊಲೀಸರು ಯದುವೀರ್, ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಸಚಿವ ಎನ್.ಮಹೇಶ್ ಸೇರಿದಂತೆ ನೂರಾರು ಕಾರ್ಯ ಕರ್ತರನ್ನು ಬಂಧಿಸಿದರು. ಪೊಲೀಸರು ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ತಳ್ಳಾಟ ನೂಕಾಟವಾದ ಕಾರಣ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಕೆಎಸ್ ಆರ್‌ಟಿಸಿ ಬಸ್‌ಗಳಲ್ಲಿ ಬಿಜೆಪಿ ಕಾರ್ಯಕರ್ತರನ್ನು ಸಿಎಆರ್ ಮೈದಾನಕ್ಕೆ ಕರೆದೊಯ್ದ ಪೊಲೀಸರು, ನಂತರ ಬಿಡುಗಡೆ ಮಾಡಿದರು.

ಗೂಡ್ಸ್ ಆಟೋದಲ್ಲಿ ಬಂದ ಅಶೋಕ್, ಡಾ.ಅಶ್ವಥ್ ನಾರಾಯಣ

ಮುಡಾ ಹಗರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸಿ ಮೈಸೂರಿನಲ್ಲಿ ಬಿಜೆಪಿ ನಡೆಸುತ್ತಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಲು ರಾಜ್ಯ ಬಿಜೆಪಿ ನಾಯಕರು ಬೆಂಗಳೂರಿನಿಂದ ಮೈಸೂರಿಗೆ ಆಗಮಿಸುತ್ತಿದ್ದರು. ಆದರೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವರನ್ನು ಪೊಲೀಸರು ಮಾರ್ಗ ಮಧ್ಯೆಯೇ ಬಂಧಿಸಿದ್ದರಿಂದ ಅವರ್‍ಯಾರು ಮೈಸೂರಿಗೆ ಬರಲು ಸಾಧ್ಯವಾಗಲಿಲ್ಲ. ಆದರೆ ಅಶೋಕ್ ಹಾಗೂ ಡಾ.ಅಶ್ವಥ್ ನಾರಾಯಣ್ ಪೊಲೀಸರ ಕಣ್ತಪ್ಪಿಸಿ ಗೂಡ್ಸ್ ಆಟೋದಲ್ಲಿ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದರು. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಅಶೋಕ್, ವಿರೋಧ ಪಕ್ಷದ ನಾಯಕನಾದ ನನಗೆ ಪ್ರತಿಭಟನೆ ನಡೆಸುವ ಹಕ್ಕಿದೆ. ಆದರೆ ಸರ್ಕಾರ ಪೊಲೀಸರ ಮೂಲಕ ನಮ್ಮ ಹಕ್ಕು ಕಸಿದು ಕೊಂಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ನಾಯಕರು ಸಂಸತ್ತಿನಲ್ಲಿ ಸಂವಿಧಾನ ಹಿಡಿದು ಪ್ರಮಾಣ ವಚನ ಸ್ವೀಕರಿಸುತ್ತಾರೆ. ಆದರೆ ಇಲ್ಲಿ ಸಂವಿಧಾನ ಬದ್ಧವಾಗಿರುವ ನಮ್ಮ ಹಕ್ಕು ಕಸಿದುಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇದರಿಂದ ಪೊಲೀಸರ ಕಣ್ತಪ್ಪಿಸಿ, ಅವರ ಭದ್ರಕೋಟೆ ಭೇದಿಸಿ ನಾನು ಹಾಗೂ ಡಾ.ಅಶ್ವಥ್ ನಾರಾಯಣ್ ಗೂಡ್ಸ್ ಆಟೋದಲ್ಲಿ ಇಲ್ಲಿಗೆ ಬಂದಿದ್ದೇವೆ. ಇದು ಇಂದಿರಾ ಗಾಂಧಿ ಹೇರಿದ್ದ ತುರ್ತು ಪರಿಸ್ಥಿತಿಯನ್ನು ನೆನಪಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಡಾ ಹಗರಣದಲ್ಲಿ ಇಬ್ಬರು ಮಹಾನ್ ಕಾಂಗ್ರೆಸ್ ನಾಯಕರು ಭಾಗಿಯಾಗಿದ್ದಾರೆಂದು ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಹರಿಪ್ರಸಾದ್ ಅವರೇ ಹೇಳಿದ್ದಾರೆ ಎಂದರು.

ಈ ಹಗರಣದಲ್ಲಿ ಬಿಜೆಪಿ ಸೇರಿದಂತೆ ಯಾರೇ ಭಾಗಿಯಾಗಿದ್ದರೂ ಅವರನ್ನು ಸರ್ಕಾರ ಬಂಧಿಸಲಿ. ಉಪ್ಪು ತಿಂದವರು ನೀರು ಕುಡಿಯಲಿ ಎಂದು ಅಶೋಕ್ ಹೇಳಿದರು.

ಬಿಜೆಪಿ ಭ್ರಷ್ಟಾಚಾರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

ಮುಡಾ ಕಚೇರಿಗೆ ಮುತ್ತಿಗೆ ಯತ್ನ ಹಿಮ್ಮೆಟ್ಟಿಸಿದ ಪೊಲೀಸರು



ಬಿಜೆಪಿ ಭ್ರಷ್ಟಾಚಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದ ಕಾಂಗ್ರೆಸ್ ಕಾರ್ಯಕರ್ತರು ಶುಕ್ರವಾರ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಗೆ ಮುತ್ತಿಗೆ ಹಾಕಲು ಮುಂದಾದರು.

ಮೈಸೂರು, ಜು.12(ಬಿಎಲ್‌ಯು)- ಮುಡಾ ಹಗರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸಿ ಬಿಜೆಪಿ ನಡೆಸುತ್ತಿರುವ ಪ್ರತಿಭಟನೆಗೆ ಪ್ರತಿರೋಧವಾಗಿ ಕಾಂಗ್ರೆಸ್ ಕಾರ್ಯಕರ್ತರು ಮುಡಾ ಕಚೇರಿ ಬಳಿ ಇಂದು ಬಿಜೆಪಿ ಭ್ರಷ್ಟಾಚಾರದ ವಿರುದ್ಧ ಪ್ರತಿಭಟನಾ ಸಭೆ ನಡೆಸಿದರು. ಈ ವೇಳೆ ಮುಡಾ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರು ತಡೆದಾಗ ಸ್ಥಳದಲ್ಲಿ ಹೈ ಡ್ರಾಮಾವೇ ನಡೆಯಿತು.

ನಗರದ ಮುಡಾ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ವಿರುದ್ಧ ಭ್ರಷ್ಟಾಚಾರದ ಆರೋಪದ ವಾಗ್ಬಾಣಗಳನ್ನು ಬಿಟ್ಟರು. ಮುಡಾ ಪಕ್ಕದ ಇನ್ಸಿಟ್ಯೂಷನ್ ಆಫ್ ಇಂಜಿನಿಯರ್ ಮುಂದೆ ಪೆಂಡಾಲ್ ಹಾಕಿ ಬೆಳಿಗ್ಗೆಯಿಂದ ಮಧ್ಯಾಹ್ನದ ತನಕ ಪ್ರತಿಭಟನೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ಭ್ರಷ್ಟಾಚಾರದ ಪ್ರಕರಣಗಳನ್ನು ಎಳೆ ಎಳೆಯಾಗಿ ಬಿಡಿಸಿಟ್ಟರು.

ಈ ವೇಳೆ ಮಾತನಾಡಿದ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ಕಾನೂನಿನ ನಿಯಮಾನುಸಾರ ನಿವೇಶನ ನೀಡಲಾಗಿದೆ. ನಿವೇಶನ ಹಂಚಿಕೆಯಲ್ಲಿ ಯಾವುದೇ ಅಕ್ರಮ ನಡೆದಿಲ್ಲ. ಆದರೆ ಬಿಜೆಪಿಯವರು ಸಿದ್ದರಾಮಯ್ಯ ಅವರ ತೇಜೋವಧೆ ಮಾಡುವ ದೃಷ್ಟಿಯಿಂದ ಆಧಾರ ರಹಿತ ಆರೋಪ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಬಿಜೆಪಿಯ ಬಹಳಷ್ಟು ನಾಯಕರ ವಿರುದ್ಧ ಭಾರೀ ಅವ್ಯವಹಾರದ ಪ್ರಕರಣಗಳಿವೆ. ಬಿಜೆಪಿಯ ಮುಖ್ಯಮಂತ್ರಿಯೊಬ್ಬರು ಚೆಕ್ ಮೂಲಕ ಲಂಚ ಪಡೆದಿರುವುದು ಸಾಬೀತಾಗಿದೆ. ಈ ಆರೋಪದಲ್ಲಿ ಜೈಲುವಾಸ ಕೂಡ ಅನುಭವಿಸಿದ್ದಾರೆ. ಆದರೆ ಯಾವುದೇ ಅವ್ಯವಹಾರದಲ್ಲಿ ಭಾಗಿಯಾಗದಿದ್ದರೂ ಸಿದ್ದರಾಮಯ್ಯ ಅವರಿಗೆ ಕೆಟ್ಟ ಹೆಸರು ತರಲು ಮುಡಾದಲ್ಲಿ ಅವರ ಪತ್ನಿ ನಿವೇಶನ ಪಡೆದಿರುವುದನ್ನು ವಿವಾದ ಮಾಡುತ್ತಿದ್ದಾರೆ ಎಂದು ಆಪಾದಿಸಿದರು. ಕೋವಿಡ್ ಸಂಕಷ್ಟದಲ್ಲಿ 22 ಸಾವಿರ ಕೋಟಿ ನುಂಗಿದ ಬಿಜೆಪಿ, ಹಗರಣಗಳ ಕರ್ತೃ ಬಿಜೆಪಿ. ಸಿದ್ದರಾಮಯ್ಯ ನಮ್ಮೆಲ್ಲರ ಹೆಮ್ಮೆ ಎಂಬ ಹಲವು ಘೋಷವಾಕ್ಯಗಳಿರುವ ಫಲಕ ಹಿಡಿದಿದ್ದ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಈ ವೇಳೆ ಸ್ಥಳಕ್ಕೆ ಆಗಮಿಸಿದ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿ ಮುತ್ತುರಾಜ್ ಪ್ರತಿಭಟನೆ ಕೈ ಬಿಡುವಂತೆ ಮನವೊಲಿಸಲೆತ್ನಿಸಿದರೂ ಕಾಂಗ್ರೆಸ್ ಕಾರ್ಯಕರ್ತರು ಒಪ್ಪಲಿಲ್ಲ.

ಈ ಸಂದರ್ಭದಲ್ಲಿ ದಿಢೀರ್ ಮಳೆ ಸುರಿದ ಕಾರಣ ಪ್ರತಿಭಟನಾಕಾರರು ಚೆಲ್ಲಾಪಿಲ್ಲಿಯಾದರು. ಹಾಗಾಗಿ ಹೋರಾಟ ಸ್ವಲ್ಪ ಮಟ್ಟಿಗೆ ಕಾವು ಕಳೆದುಕೊಂಡಿತು. ಮಳೆ ನಿಂತ ನಂತರವೂ ಮತ್ತೆ ಜಮಾವಣೆಗೊಂಡ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ಪುನರಾರಂಭಿಸಿದರು. ಈ ವೇಳೆ ದಿಢೀರ್ ಮುಡಾ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ಸಂದರ್ಭದಲ್ಲಿ ಪೊಲೀಸರು ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ತಳ್ಳಾಟ-ನೂಕಾಟ ನಡೆಯಿತು. ಇದರಿಂದ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಈ ವೇಳೆ ಪ್ರತಿಭಟನೆ ಕೈ ಬಿಡುವಂತೆ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ಕೈಬಿಟ್ಟು ಸ್ಥಳದಿಂದ ನಿರ್ಗಮಿಸಿದರು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಸೇರಿದಂತೆ ಸಾವಿರಾರು ಸಂಖ್ಯೆಯ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಿದ್ದರಾಮಯ್ಯ 'ಪ್ರಾಮಾಣಿಕತೆ' ಸಮರ್ಥನೆ ಕಾಂಗ್ರೆಸ್ ಒನ್ ಪಾಯಿಂಟ್ ಅಜೆಂಡಾ

ಮುಡಾದಲ್ಲಿ ಸಾವಿರಾರು ಕೋಟಿ ರೂಪಾಯಿ ಹಗರಣ ನಡೆದಿದ್ದರೂ ಇಂದಿನ ಕಾಂಗ್ರೆಸ್ ಪ್ರತಿಭಟನೆಯಲ್ಲಿ ಅದ್ಯಾವುದೇ ವಿಚಾರದ ಬಗ್ಗೆ ಯಾರೂ ಚಕಾರ ಎತ್ತಲಿಲ್ಲ.

ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಕಾನೂನು ಪ್ರಕಾರ ನಿವೇಶನ ಪಡೆದಿದ್ದಾರೆ ಎಂಬುದನ್ನು ಮನದಟ್ಟು ಮಾಡುವುದು ಮಾತ್ರ ಇಂದಿನ ಪ್ರತಿಭಟನೆಯ ಉದ್ದೇಶವಾಗಿತ್ತು.

ಇಂದಿನ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಪ್ರತಿಯೊಬ್ಬರು ಇದೇ ವಿಚಾರ ಪ್ರಸ್ತಾಪ ಮಾಡಿದರು. ಯಾರೂ ಕೂಡ ಮುಡಾದಲ್ಲಿ ನಡೆದಿರುವ ಸಾವಿರಾರು ಕೋಟಿ ರೂಪಾಯಿ ಹಗರಣವನ್ನು ಪಸ್ತಾಪಿಸಲಿಲ್ಲ. 50 ವರ್ಷ ರಾಜಕಾರಣ ಮಾಡಿರುವ ಸಿದ್ದರಾಮಯ್ಯ ಈ ತನಕ ಯಾವುದೇ ಅವ್ಯವಹಾರದಲ್ಲಿ ಭಾಗಿಯಾಗಿಲ್ಲ ಎಂದು ಎಲ್ಲರೂ ಸ್ಪಷ್ಟಪಡಿಸಿದರು.

ಬಿಜೆಪಿ, ಕಾಂಗ್ರೆಸ್ ಪ್ರತಿಭಟನೆಯಿಂದ ಜನಸಾಮಾನ್ಯರು ಹೈರಾಣ

ಮುಡಾ ಹಗರಣದಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರು ಭಾಗಿಯಾಗಿರುವ ಆರೋಪವಿದ್ದರೂ ಎರಡು ಪಕ್ಷದವರು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಇದರಿಂದ ಅಮಾಯಕ ಜನಸಾಮಾನ್ಯರು ಹೈರಾಣಾಗಿದ್ದಾರೆ. ಮುಡಾ ಮುಂದೆ ಕಾಂಗ್ರೆಸ್‌ನವರು ಪ್ರತಿಭಟನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಮಹಾರಾಜ ಕಾಲೇಜು ಮೈದಾನದ ಕೃಷ್ಣರಾಜ ಬುಲೆವಾರ್ಡ್ ರಸ್ತೆಯಲ್ಲಿ ಬಿಜೆಪಿಯವರು ಪ್ರತಿಭಟನೆ ನಡೆಸುತ್ತಿದ್ದ ಕಾರಣ ಪೊಲೀಸರು ಎರಡು ರಸ್ತೆಗಳನ್ನು ಬಂದ್ ಮಾಡಿದ್ದರು. ಜೆಎಲ್‌ಬಿ ರಸ್ತೆಯ ರಾಮಸ್ವಾಮಿ ವೃತ್ತದಿಂದ ದೇವರಾಜ ಅರಸ್ ರಸ್ತೆ ಜಂಕ್ಷನ್ ತನಕ ಬ್ಯಾರಿಕೇಡ್ ಹಾಕಿ ರಸ್ತೆ ಬಂದ್ ಮಾಡಲಾಗಿತ್ತು. ಹಾಗೆಯೇ ಮಹಾರಾಜ ಕಾಲೇಜು ಮೈದಾನದಿಂದ ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ತನಕ ಬ್ಯಾರಿಕೇಡ್ ಅಳವಡಿಸಿ ವಾಹನ ಸಂಚಾರ ನಿರ್ಬಂಧಿಸಲಾಗಿತ್ತು. ಬೆಳಿಗ್ಗೆಯಿಂದ ಮಧ್ಯಾಹ್ನದ ತನಕ ಈ ಎರಡು ರಸ್ತೆ ಸಂಪರ್ಕಿಸುವ ಮಾರ್ಗದಲ್ಲಿ ಜನ ಸಂಚಾರಕ್ಕೆ ಅವಕಾಶವೇ ಇರಲಿಲ್ಲ. ಇದರಿಂದ ಅಮಾಯಕ ಜನರು ತೀವ್ರ ತೊಂದರೆ ಅನುಭವಿಸಿದರು. ಹುಣಸೂರು ರಸ್ತೆ ಸೇರಿದಂತೆ ಇತರೆಡೆ ಹೋಗಲು ಸುತ್ತಿ ಬಳಸಿ ಹೋಗಬೇಕಾದ ಪರಿಸ್ಥಿತಿ ಎದುರಾಗಿತ್ತು.

ಮುಡಾ ಹಗರಣ ವಿರುದ್ಧ ಪ್ರತಿಭಟಿಸಲು ತೆರಳುತ್ತಿದ್ದ ಬಿಜೆಪಿ ನಾಯಕರ ಬಂಧನ

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ

ಬೆಂಗಳೂರು, ಜು.12(ಕೆಎಂಶಿ)-



ಮೈಸೂರು ಮುಡಾ ಹಗರಣದ ವಿರುದ್ಧ ಪ್ರತಿಭಟಿಸಿ ಮೈಸೂರು ಚಲೋ ನಡೆಸುತ್ತಿದ್ದ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರ ಬಂಧನ ಖಂಡನೀಯ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಇಂದಿಲ್ಲಿ ಟೀಕಿಸಿದ್ದಾರೆ.

ಮೈಸೂರಿಗೆ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗ್ಗೆ 7 ಗಂಟೆಯಿಂದಲೇ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರನ್ನು ಬಂಧಿಸಿದ್ದಾರೆ. ನೈಸ್ ರಸ್ತೆ ಬಳಿ ಪಕ್ಷದ ಬ್ಯಾನರ್, ಬಾವುಟಗಳನ್ನಲ್ಲದೆ, ಕಾರ್ಯಕರ್ತರಿಗಾಗಿ ತಂದಿದ್ದ ಉಪಹಾರವನ್ನೂ ಕಾಲಿನಿಂದ ಒಸಕಿ ಹಾಳು ಮಾಡಿದ್ದಾರೆ ಎಂದರು.

ಮೈಸೂರಿನ ಮುಡಾ ಎದುರು ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆಗೆ ಮುಂದಾದ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರನ್ನು ಮುಖ್ಯಮಂತ್ರಿಗಳ ಆದೇಶದ ಮೇರೆಗೆ ಪೊಲೀಸರು ಬಂಧಿಸಿದ್ದು, ಪ್ರತಿಭಟನೆ ಹತ್ತಿಕ್ಕುವ ಕೆಲಸ ನಡೆದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಾಮಾಣಿಕರಾಗಿದ್ದರೆ, ಜಿಲ್ಲಾಧಿಕಾರಿಗಳ ವರದಿ ನಂತರವೂ ಮುಡಾದಲ್ಲಿ ಭ್ರಷ್ಟಾಚಾರ ನಡೆದಿಲ್ಲ ಎನ್ನುವುದಾದರೆ, ನಿಷ್ಪಕ್ಷಪಾತ ತನಿಖೆಗೆ ಪ್ರಕರಣವನ್ನು ಸಿಬಿಐಗೆ ವಹಿಸಲಿ, ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ. ಸಿದ್ದರಾಮಯ್ಯ ಸರ್ಕಾರದ ದಬ್ಬಾಳಿಕೆಗಳಿಗೆ ಬಿಜೆಪಿ ಕಾರ್ಯಕರ್ತರು ಹೆದರುವುದಿಲ್ಲ. ಸರ್ಕಾರದ ಪಾಪದ ಕೊಡ ತುಂಬಿದೆ, ಯಾವುದೇ ಕ್ಷಣದಲ್ಲಿ ಪತನವಾಗಲಿದೆ ಎಂದರು.

ಮುಡಾ ಮೂಲಕ ಸಿದ್ದರಾಮಯ್ಯ ತಮ್ಮ ಕುಟುಂಬ ಹಾಗೂ ಕಾಂಗ್ರೆಸ್ ಮುಖಂಡರಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಿಕೊಂಡಿದ್ದು, ಇದು 5 ಸಾವಿರ ಕೋಟಿ ರೂ.ಗಳಿಗೂ ಮೀರಿದ ಹಗರಣವಾಗಿದೆ. ಕಾಂಗ್ರೆಸ್ ಸರ್ಕಾರದ ಬ್ರಹ್ಮಾಂಡ ಭ್ರಷ್ಟಾಚಾರ ಬಯಲಾಗಿದೆ. ಮುಖ್ಯಮಂತ್ರಿ ರಾಜ್ಯದ ಜನತೆಗೆ ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಜಾಗತಿಕ ನಾಯಕನಾಗುವ ಕನಸಿಗೆ ಬೆಂಗಳೂರೇ ಕೇಂದ್ರ ಬಿಂದು

ಬೆಂಗಳೂರು ಟೆಕ್ ಶೃಂಗಸಭೆಯಲ್ಲಿ ಪಾಲ್ಗೊಳ್ಳುವ ನಾಯಕರೊಂದಿಗೆ ಉಪಹಾರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ

ಬೆಂಗಳೂರು, ಜು.12(ಕೆಎಂಶಿ)- ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಜಾಗತಿಕ ನಾಯಕನಾಗಿ ಹೊರಹೊಮ್ಮುವ ಕನಸಿಗೆ ಬೆಂಗಳೂರು ಕೇಂದ್ರ ಬಿಂದುವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಟೆಕ್ ಶೃಂಗಸಭೆ-2024ರಲ್ಲಿ ಪಾಲ್ಗೊಳ್ಳುತ್ತಿರುವ ತಂತ್ರಜ್ಞಾನ ದಿಗ್ಗಜರೊಂದಿಗಿನ ಉಪಹಾರ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಬೆಂಗಳೂರು ಟೆಕ್ ಶೃಂಗಸಭೆ 27ನೇ ಆವೃತ್ತಿಯ ಥೀಮ್ ಬ್ರೇಕಿಂಗ್ ಬೌಂಡರೀಸ್ ಆಗಿದ್ದು, ಹೊಸತನ ಹೆಚ್ಚಿಸಲು ವೈವಿಧ್ಯಮಯ ವಲಯಗಳ ನಡುವಿನ ಸಹಯೋಗದ ಪ್ರಾಮುಖ್ಯತೆಯನ್ನು ಥೀಮ್ ಒಳಗೊಂಡಿದೆ ಎಂದರು. ಕರ್ನಾಟಕದ ಸಾಮಾಜಿಕ-ಆರ್ಥಿಕ ಅಭಿವೃದ್ಧಿಯಲ್ಲಿ ತಂತ್ರಜ್ಞಾನ ಉದ್ಯಮವು ಪ್ರಮುಖ ಪಾತ್ರ ವಹಿಸುತ್ತಿದೆ, ನಾವೀನ್ಯತೆ ಪೋಷಿಸುವ, ಹೂಡಿಕೆ ಪ್ರೋತ್ಸಾಹಿಸುವ, ಸುಸ್ಥಿರ ಬೆಳವಣಿಗೆ ಬೆಂಬಲಿಸುವ ಪರಿಸರ ಬೆಳೆಸಲು ನಾವು ಬದ್ಧ. ಕರ್ನಾಟಕ ಭಾರತದ ನಾಲ್ಕನೇ ಅತಿದೊಡ್ಡ ರಾಜ್ಯವಾಗಿದ್ದು, ದೇಶದ ಜಿಡಿಪಿಗೆ ಶೇ.8.2 ಕೊಡುಗೆ ನೀಡುತ್ತಿದೆ. ಉದ್ಯಮಿಗಳು ಮತ್ತು ವಹಿವಾಟುದಾರರಿಗೆ ಬೆಂಗಳೂರು ಸ್ವರ್ಗವಾಗಿದೆ. ಸ್ಟಾರ್ಟ್ ಅಪ್, ಐಟಿ, ಎವಿಜಿಸಿ, ಬಯೋಟೆಕ್ನಾಲಜಿ ಮತ್ತು ಇಎಸ್‌ಡಿಎಂಗಳಲ್ಲಿ ವಲಯ ನೀತಿ ಹೊಂದಿರುವ ಮೊದಲ ರಾಜ್ಯ ಕರ್ನಾಟಕ ಎಂದರು. ರಾಜ್ಯ ಸರ್ಕಾರದ ಮುಂಬರುವ ಜಿಸಿಸಿ ನೀತಿಯು ನಿಯಮಾವಳಿಗಳ ಸಡಿಲಿಕೆಯನ್ನು ಕೇಂದ್ರೀಕರಿಸಲಿದೆ. ವಿಶೇಷವಾಗಿ ಬೆಂಗಳೂರಿನ ಹೊರಗೆ ಘಟಕ ಸ್ಥಾಪನೆಗೆ ದೊಡ್ಡ ಕಂಪನಿಗಳನ್ನು ಉತ್ತೇಜಿಸುತ್ತದೆ.

ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ಎಐ), ಮೆಷಿನ್ ಲರ್ನಿಂಗ್, ಇಂಟರ್ನೆಟ್ ಆಫ್ ಥಿಂಗ್ಸ್, ಬ್ಲಾಕ್‌ಚೈನ್ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್, ಡಿಜಿಟಲ್ ವಿಕಾಸದ ಮುಂದಿನ ಹಾದಿಯಾಗಿದೆ.

ದೃಢವಾದ ಮೂಲಸೌಕರ್ಯ, ನುರಿತ ಕಾರ್ಯಪಡೆ, ನಾವೀನ್ಯತೆ ಮತ್ತು ಬೆಳವಣಿಗೆ ಉತ್ತೇಜಿಸುವ ನಿಯಂತ್ರಕ ಚೌಕಟ್ಟು ರಚಿಸಲು ಒಟ್ಟಾಗಿ ಶ್ರಮಿಸೋಣ, ಕರ್ನಾಟಕವನ್ನು ನಿರ್ವಿವಾದದ ನಾಯಕನನ್ನಾಗಿ ಮಾಡೋಣ.

ಕಳೆದ 26 ವರ್ಷಗಳಿಂದ ತಂತ್ರಜ್ಞಾನ ಮತ್ತು ನಾವೀನ್ಯತೆಗಳನ್ನು ಒಟ್ಟುಗೂಡಿಸಲು ಪರಿಣಾಮಕಾರಿ ವೇದಿಕೆ ಒದಗಿಸುತ್ತಿದೆ. ಬೆಂಗಳೂರು ಟೆಕ್ ಸಮ್ಮೇಳನ ಏಷ್ಯಾದ ಅತಿದೊಡ್ಡ ತಂತ್ರಜ್ಞಾನ ಸಮಾವೇಶ ವಾಗಿದ್ದು, ನವೆಂಬರ್ 19ರಿಂದ 21ರವರೆಗೆ ನಡೆಯಲಿದೆ ಎಂದರು. ಈ ವರ್ಷ ಹೊಸ ಇಎಸ್‌ಡಿಎಂ ಟ್ರ್ಯಾಕ್ ಅನ್ನು ಪರಿಚಯಿಸುತ್ತಿದ್ದು, ಇದು ಹೊಸಯುಗದ ಆರ್ಥಿಕತೆಯ ಆಧಾರ ಸ್ತಂಭಗಳಾಗಿರುವ ತಾಂತ್ರಿಕ ನಾವೀನ್ಯತೆ ಮತ್ತು ಉತ್ಪಾದನಾ ಸಾಮರ್ಥ್ಯದ ಸಂಗಮದಲ್ಲಿದೆ, ಬೆಂಗಳೂರು ಟೆಕ್ ಕೇವಲ ಸಾಮರ್ಥ್ಯಗಳನ್ನು ಪ್ರದರ್ಶಿಸುವ ವೇದಿಕೆಯಾಗಿರದೆ, ಉಜ್ವಲವಾದ, ಹೆಚ್ಚು ತಾಂತ್ರಿಕವಾಗಿ ಮುಂದುವರಿದ ಭವಿಷ್ಯದತ್ತ ಮುನ್ನಡೆಸಬಲ್ಲ ವಿಚಾರಗಳಾಗಿದೆ ಎಂದರು.



ಬೆಂಗಳೂರು ಟೆಕ್ ಶೃಂಗಸಭೆ-2024ರ ಮುನ್ನೋಟವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಬಿಡುಗಡೆ ಮಾಡಿದರು.

ಮೈಸೂರು ಮಿತ್ರ
ಶನಿವಾರ 13 ಜುಲೈ 2024

ತಮಿಳುನಾಡಿಗೆ ನೀರು ಬಿಡಲು ಆದೇಶ: ಮಂಡ್ಯದಲ್ಲಿ ರೈತರ ಆಕ್ರೋಶ

ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ರಸ್ತೆ ತಡೆ, ವಾಹನ ಸವಾರರ ಪರದಾಟ

● ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಮೊಳಗಿದ ಧಿಕ್ಕಾರದ ಘೋಷಣೆ ● ಕೇಂದ್ರ ಸಚಿವ ಕುಮಾರಸ್ವಾಮಿ ಮಧ್ಯ ಪ್ರವೇಶಕ್ಕೆ ಆಗ್ರಹ

ಮಂಡ್ಯ,ಜು.12– ಕಾವೇರಿ ಕೊಳ್ಳದ ಜಲಾಶಯಗಳಿಂದ ತಮಿಳುನಾಡಿಗೆ ಪ್ರತಿನಿತ್ಯ ಒಂದು ಟಿಎಂಸಿ ನೀರು ಹರಿಸುವಂತೆ ಸಿಡಬ್ಲ್ಯೂಆರ್‌ಸಿ ನೀಡಿರುವ ಆದೇಶ ವಿರುದ್ಧ ಆಕ್ರೋಶ ಭುಗಿಲೆದ್ದಿದ್ದು, ಶುಕ್ರವಾರ ರೈತರ ಜೊತೆಗೂಡಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಮಂಡ್ಯದಲ್ಲಿ ರಸ್ತೆ ತಡೆ ನಡೆಸಿದರು.

ಜಿಲ್ಲಾ ರೈತ ಹಿತ ರಕ್ಷಣಾ ಸಮಿತಿ ನೇತೃತ್ವದಲ್ಲಿ ಕನ್ನಡಪರ, ಪ್ರಗತಿಪರ ಹಾಗೂ ರೈತ ಸಂಘಟನೆಗಳ ಕಾರ್ಯಕರ್ತರು ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ವಾಹನ ಸಂಚಾರಕ್ಕೆ ಅಡ್ಡಿಪಡಿಸಿ ಪ್ರತಿಭಟಿಸಿದರು. ಇದರಿಂದ ಸಂಚಾರ ಅಸ್ತವ್ಯಸ್ತಗೊಂಡು ಪ್ರಯಾಣಿಕರು ಪರದಾಡುವಂತಾಯಿತು.

ಕಾವೇರಿ ನೀರು ನಿಯಂತ್ರಣ ಸಮಿತಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು ಪ್ರಾಧಿಕಾರ ಸಮಿತಿಯು ಕಾವೇರಿ ಕೊಳ್ಳದ ರೈತರಿಗೆ ಮರಣ ಶಾಸನ ಬರೆದು ರೈತರ ಬಾಳಿಗೆ ಬೆಂಕಿ ಇಡುತ್ತಿದೆ ಎಂದು ಕಿಡಿಕಾರಿದರು.



ರೈತರ ಜೊತೆಗೂಡಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಮಂಡ್ಯದಲ್ಲಿ ರಸ್ತೆ ತಡೆ ನಡೆಸಿದರು.

ಕಳೆದ ವರ್ಷ ಮುಂಗಾರು ಕೈ ಕೊಟ್ಟ ಹಿನ್ನೆಲೆಯಲ್ಲಿ ಬರ ಪರಿಸ್ಥಿತಿ ಎದುರಾಗಿ ಕೃಷ್ಣರಾಜ ಸಾಗರ ಜಲಾಶಯ ಭರ್ತಿಯಾಗಲಿಲ್ಲ ಇದರಿಂದ ರೈತರು ಬೆಳೆ ಬೆಳೆಯಲು ಸಾಧ್ಯವಾಗಲಿಲ್ಲ, ಈಗಲೂ ಸಹ ಎರಡನೇ ಬೆಳೆ ಹಾಕಿಲ್ಲ, ಇದ್ದ ನೀರನ್ನು ತಮಿಳುನಾಡಿಗೆ ನಿರಂತರವಾಗಿ ಹರಿಸಲಾಯಿತು. ಇದೀಗ ಜಲಾಶಯಕ್ಕೆ ಸ್ವಲ್ಪ ಪ್ರಮಾಣದ ನೀರು ಹರಿದು ಬಂದಿದ್ದು, ಬೆಳೆ ಬೆಳೆಯಲು ನೀರು ನೀಡಿಲ್ಲ. ಕೇವಲ ಕೆರೆ ಕಟ್ಟೆಗಳಿಗೆ ಮಾತ್ರ ನೀರು ಹರಿಸಲಾಗಿದೆ, ಇಂತಹ ಪರಿಸ್ಥಿತಿ ಇರುವಾಗ ಕಾವೇರಿ ನೀರು ನಿಯಂತ್ರಣ ಸಮಿತಿ ತಮಿಳುನಾಡಿಗೆ ಪ್ರತಿನಿತ್ಯ ಒಂದು ಟಿಎಂಸಿ ನೀರು ಬಿಡಲು ಆದೇಶ ಮಾಡಿರುವುದು ಅವೈಜ್ಞಾನಿಕ, ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಸಮಿತಿಯ ಆದೇಶವನ್ನು ಪಾಲನೆ ಮಾಡಬಾರದು, ಜಲಾಶಯದಲ್ಲಿ 26 ಟಿಎಂಸಿ ನೀರು ಸಂಗ್ರಹವಾಗಿದೆ, ನೆರೆ ರಾಜ್ಯಕ್ಕೆ 19 ಟಿಎಂಸಿ ನೀರು ಬಿಟ್ಟರೆ ಕಾವೇರಿ ಕೊಳ್ಳದ ರೈತರು ಗತಿ ಏನು ಎಂದು ಆತಂಕ ವ್ಯಕ್ತಪಡಿಸಿದರು.

ಕೇಂದ್ರ ಸಚಿವರಾಗಿರುವ ಎಚ್.ಡಿ.ಕುಮಾರಸ್ವಾಮಿಗೆ ವಾಸ್ತವ ಪರಿಸ್ಥಿತಿ ಗೊತ್ತಿದೆ, ಇಲ್ಲಿನ ರೈತರ ಬವಣೆಯನ್ನು ಕಣ್ಣಾರೆ ಕಂಡಿದ್ದಾರೆ. ರೈತರು ಬೆಳೆ ಹಾಕದ ಪರಿಸ್ಥಿತಿಯಲ್ಲಿದ್ದಾರೆ. ಆ ಹಿನ್ನೆಲೆಯಲ್ಲಿ ಕಾವೇರಿ ಕೊಳ್ಳದ ರೈತರಿಗೆ ಸಂಕಷ್ಟ ಪರಿಸ್ಥಿತಿಯಲ್ಲಿ ನ್ಯಾಯ ದೊರಕಿಸಿ ಕೊಡಲು ಮುಂದಾಗಬೇಕು ಎಂದರು.

ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಮಾತನಾಡಿ, ಸಮಿತಿ ಆದೇಶ ಮಾಡಿರುವುದು ಅವೈಜ್ಞಾನಿಕ, ಬರಗಾಲದ ಹಿನ್ನೆಲೆಯಲ್ಲಿ ರೈತರು ಬೆಳೆ ಬೆಳೆಯಲು ಸಾಧ್ಯವಾಗಲಿಲ್ಲ, ಈಗಲೂ ಬೆಳೆ ಬೆಳೆಯುವ ಪರಿಸ್ಥಿತಿಯಲ್ಲಿ ಇಲ್ಲ, ಜಲಾಶಯಗಳು ಭರ್ತಿಯಾಗಿಲ್ಲ, ಆದರೂ ಸಹ ನೀರು ಹರಿಸಿ ಎಂದು ಆದೇಶ ಮಾಡುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ನದಿ ಜೋಡಣೆಯಿಂದ ಎಲ್ಲಾ ರಾಜ್ಯಕ್ಕೂ ಸಮಾನವಾದ ನೀರಿನ ಪಾಲು ದೊರಕಬೇಕು, ಆದರೆ ಇಲ್ಲಿ ಕರ್ನಾಟಕ ರಾಜ್ಯಕ್ಕೆ ದೊಡ್ಡ ಮಟ್ಟದ ಅನ್ಯಾಯ ಆಗುತ್ತಿರುವುದರಿಂದ ಇಂತಹ ಯೋಜನೆಯನ್ನು ರಾಜ್ಯ ಸರ್ಕಾರ ಒಪ್ಪಬಾರದು ಎಂದು ಒತ್ತಾಯಿಸಿದರು.

ಕಾವೇರಿ ಬಿಕ್ಕಟ್ಟು ನಿವಾರಣೆಗೆ ಕುಮಾರಸ್ವಾಮಿ ನೇತೃತ್ವ ವಹಿಸಲಿ



ಮಂಡ್ಯ,ಜು.12– ಕಾವೇರಿ ನೀರು ಬಿಡುಗಡೆಗೆ ಸೂಚಿಸಿರುವ ಸಿಡಬ್ಲ್ಯೂಆರ್‌ಸಿ ತೀರ್ಮಾನ ಬಿಕ್ಕಟ್ಟು ನಿವಾರಣೆಗೆ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು. ಈ ಸಂಬಂಧ ಮಂಡ್ಯ ಜಿಲ್ಲೆಯ ಸಂಸದರು ಹಾಗೂ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ನೇತೃತ್ವ ವಹಿಸಬೇಕೆಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮನವಿ ಮಾಡಿದ್ದಾರೆ.

ಈ ಸಂಬಂಧ ದೂರವಾಣಿ ಮೂಲಕ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸಚಿವರು, ಕಾವೇರಿ ಜಲಾನಯನ ಪ್ರದೇಶದಲ್ಲಿ ಅಗತ್ಯ ಪ್ರಮಾಣದ ಮಳೆಯಾಗದ ಹಿನ್ನೆಲೆಯಲ್ಲಿ ಜಲಾಶಯಗಳಲ್ಲಿ ನೀರಿನ ಲಭ್ಯತೆ ಕ್ಷೀಣವಾಗಿದೆ. ಮಂಡ್ಯ ಜಿಲ್ಲೆಯ ರೈತರಿಗೆ ಕೃಷಿ ಚಟುವಟಿಕೆಗೆ ನೀರು ಬಿಡಲಾಗಿಲ್ಲ. ಕೇವಲ ಕೆರೆ-ಕಟ್ಟೆ ತುಂಬಿಸಿ ಜನ-ಜಾನುವಾರುಗಳಿಗೆ ಕುಡಿಯಲು ಕಳೆದೆರಡು ದಿನಗಳಿಂದ ನಾಲೆಯಲ್ಲಿ ನೀರು ಹರಿಸಲಾಗುತ್ತಿದೆ. ಈ ವಾಸ್ತವ ಸ್ಥಿತಿಯನ್ನು ಪ್ರಾಧಿಕಾರಕ್ಕೆ ಅರ್ಥೈಸಲು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮುತುವರ್ಜಿ ವಹಿಸಬೇಕೆಂದು ಒತ್ತಾಯಿಸಿದ್ದಾರೆ.

ಕಳೆದ ಲೋಕಸಭಾ ಚುನಾವಣೆ ವೇಳೆ ಕಾವೇರಿ ಸಮಸ್ಯೆ ಬಗೆಹರಿಸಲು ತಮಗೆ ಶಕ್ತಿ ತುಂಬುವಂತೆ ಕುಮಾರಸ್ವಾಮಿ ಅವರು ಮತದಾರರಲ್ಲಿ ಮನವಿ ಮಾಡಿದ್ದರು. ಅವರ ಮನವಿಗೆ ಪುರಸ್ಕರಿಸಿರುವ ಜಿಲ್ಲೆ ಹಾಗೂ ರಾಜ್ಯದ ಜನರ ಸಂಕಷ್ಟಕ್ಕೆ ಕೇಂದ್ರ ಸಚಿವರು ಧನಿಯಾಗಬೇಕು. ಈ ಸಂಬಂಧ ಸುದೀರ್ಘವಾಗಿ ಚರ್ಚಿಸಲು ಮುಖ್ಯಮಂತ್ರಿಗಳು ಜು.14ರ ಭಾನುವಾರದಂದು ಸರ್ವ ಪಕ್ಷಗಳ ಸಭೆ ಕರೆದಿದ್ದು, ಮುಂದಿನ ಸಾಧಕ-ಬಾಧಕಗಳ ಬಗ್ಗೆ ಸವಿಸ್ತಾರವಾಗಿ ಸಮಗ್ರವಾಗಿ ಚರ್ಚಿಸಲಾಗುವುದು ಎಂದು ಸಚಿವರು ತಿಳಿಸಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಅವರು ಕರ್ನಾಟಕ ರಾಜ್ಯದ ನೆರವಿಗೆ ಧಾವಿಸಬೇಕು. ರಾಜ್ಯದ ಸಂಸದರು ಕಾವೇರಿ ಪರವಾಗಿ ಧನಿ ಎತ್ತಬೇಕೆಂದು ಸಚಿವ ಎನ್. ಚಲುವರಾಯಸ್ವಾಮಿ ಕೋರಿದ್ದಾರೆ.

ನೀರು ಬಿಟ್ಟ ಎರಡೇ ದಿನಕ್ಕೆ ನಾಲೆಯ ಗಾರೆ ಕುಸಿತ

ಕಳಪೆ ಕಾಮಗಾರಿ ಎಂದು ರೈತರು, ಗ್ರಾಮಸ್ಥರ ಆಕ್ರೋಶ

ಪಾಂಡವಪುರ, ಜು.12– ವಿಸಿ ನಾಲೆ ಕಾಮಗಾರಿ ಮತ್ತೆ ಸುದ್ದಿ ಮಾಡಿದೆ. ನಾಲೆಗೆ ನೀರು ಬಿಟ್ಟು ಎರಡೇ ದಿನಕ್ಕೆ ನಾಲೆಯ ಗಾರೆ ಕಳಚಿ ಬಿದ್ದಿದ್ದು, ಇದು ಕಳಪೆ ಕಾಮಗಾರಿ ಎಂದು ಸಾಭೀತು ಪಡಿಸಿದೆ.

ನೀರು ಹರಿಸಿದ ಎರಡೇ ದಿನಕ್ಕೆ ಹೊಸದಾಗಿ ನಿರ್ಮಿಸಲಾಗಿದ್ದ ವಿಸಿ ನಾಲೆಯ ಏರಿಯ ಸಿಮೆಂಟ್ ಗಾರೆ ಕುಸಿದು ಬಿದ್ದಿದ್ದು, ರೈತರು, ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ವಿಸಿ ನಾಲೆ ತಡೆಗೋಡೆಯ ಗಾರೆ ಕುಸಿತಗೊಂಡಿರುವುದು.

ಪಟ್ಟಣದ ಬಾಲಕಿಯರ ಕಾಲೇಜಿನ ಹಿಂಭಾಗದಲ್ಲಿ ನಾಲೆಯ ಏರಿಯ ತಡೆಗೋಡೆಗೆ ಹಾಕಲಾಗಿದ್ದ ಸಿಮೆಂಟ್ ಗಾರೆ ನೀರಿನ ರಬಸಕ್ಕೆ ಕುಸಿತಗೊಂಡಿದೆ. ಜತೆಗೆ ನಾಲೆಯ ಕಾಮಗಾರಿ ಸಂಪೂರ್ಣವಾಗಿ ಮುಗಿಯದ ಹಿನ್ನೆಲೆಯಲ್ಲಿ ಕಾಮಗಾರಿ ನಡೆಯದ ಸ್ಥಳಗಳಲ್ಲಿ ನಾಲೆಯ ನೀರಿನ ರಬಸಕ್ಕೆ ಮಣ್ಣು ಸಹ ಕೊಚ್ಚಿಕೊಂಡು ಹೋಗಿವೆ. ಹೊಸದಾಗಿ ನಿರ್ಮಿಸಿರುವ ನಾಲೆಯ ಏರಿಯ ತಡೆಗೋಡೆಯ ಸಿಮೆಂಟ್ ಗಾರೆ ಕುಸಿತಗೊಂಡಿರುವುದಕ್ಕೆ ಗುತ್ತಿಗೆದಾರರ ವಿರುದ್ಧ ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.

ಸ್ಟಾರ್ ಬಿಲ್ಡರ್ ಕಂಪನಿಯ ವತಿಯಿಂದ ಅಂದಾಜು 300 ಕೋಟಿಗೂ ಅಧಿಕ ವೆಚ್ಚದಲ್ಲಿ ನಡೆಯುತ್ತಿರುವ ವಿಸಿ ನಾಲೆಯ ಕಾಮಗಾರಿಯ ಗುಣಮಟ್ಟ ಕಳಪೆಯಿಂದ ಕೂಡಿದೆ ಎಂದು ಸಾಕಷ್ಟು ಆರೋಪಗಳು ಕೇಳಿಬಂದಿದ್ದವು. ನಾಲೆಗೆ ನೀರು ಹರಿದ ಬಳಿಕ ಕಾಮಗಾರಿಯ ಗುಣಮಟ್ಟ ತಿಳಿಯಲಿದೆ ಎಂದು ಬಿಜೆಪಿ, ಜೆಡಿಎಸ್, ರೈತ ಸಂಘ ಸೇರಿದಂತೆ ಹಲವಾರು ಸಂಘಟನೆಗಳು ಆರೋಪಿಸಿದ್ದವು.

ಅದರಂತೆ ನಾಲೆಗೆ ನೀರು ಹರಿಸಿದ ಎರಡೇ ದಿನಕ್ಕೆ ಪಟ್ಟಣದಲ್ಲಿ ವಿಸಿ ನಾಲೆಯ ಏರಿಯಗೆ ಹಾಕಲಾಗಿದ್ದ ಸಿಮೆಂಟ್ ಗಾರೆ ನೀರಿನ ರಬಸಕ್ಕೆ ಶಿಥಿಲಗೊಂಡು ಕುಸಿದಿದ್ದು, ಸಾರ್ವಜನಿಕರು ಮಾಡಿದ ಆರೋಪಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಬಿಜೆಪಿ ಮುಖಂಡ ನವೀನ್‌ಕುಮಾರ್ ಆರೋಪಿಸಿದ್ದಾರೆ.

ನಾಲೆಯಲ್ಲಿ ಕೊಚ್ಚಿ ಹೋಗಿದ್ದ ಬಾಲಕನ ಶವ 17 ಗಂಟೆ ಬಳಿಕ ಪತ್ತೆ

ಮಂಡ್ಯ: ಅಂಗನವಾಡಿಯಿಂದ ಬಂದು ಮನೆ ಬಳಿ ಆಟವಾಡುತ್ತಿದ್ದ ಮಗು ಆಕಸ್ಮಿಕವಾಗಿ ನಾಲೆಗೆ ಬಿದ್ದು ಕೊಚ್ಚಿ ಹೋಗಿದ್ದು, 17 ಗಂಟೆ ಬಳಿಕ ಬಾಲಕನ ಮೃತದೇಹ ಪತ್ತೆಯಾಗಿದೆ. ತಾಲೂಕಿನ ಹೊನಗಹಳ್ಳಿ ಮಠ ಗ್ರಾಮದ ಬಳಿ ವಿಶ್ವೇಶ್ವರಯ್ಯ ನಾಲೆಯಲ್ಲಿ ಕೊಚ್ಚಿ ಹೋಗಿದ್ದ ಸಬಿನ್‌ರಾಜ್(4) ಎಂಬ ಬಾಲಕನ ಮೃತದೇಹ ಇಂದು ಬೆಳಿಗ್ಗೆ ಪತ್ತೆಯಾಗಿದೆ

ನಿನ್ನೆ ನಾಲೆಯ ಪಕ್ಕ ಆಟವಾಡುತ್ತಿದ್ದ ಬಾಲಕ ನಾಪತ್ತೆಯಾಗಿದ್ದ. ಬಾಲಕನಿಗಾಗಿ ಅಗ್ನಿಶಾಮಕ ಸಿಬ್ಬಂದಿ ಮತ್ತು ಪೊಲೀಸರು ಶೋಧ ಕಾರ್ಯಾಚರಣೆ ನಡೆಸಿದ್ದರು. ರಾತ್ರಿ 9 ಗಂಟೆಯವರೆಗೂ ಕಾರ್ಯಾಚರಣೆ ನಡೆದಿತ್ತು. ನಾಲೆಯಲ್ಲಿ ನೀರು ಸ್ಥಗಿತಗೊಂಡ ಕಾರಣ, ನಾಲೆಗೆ ಬಿದ್ದಿದ್ದ ಸ್ವಲ್ಪ ದೂರದಲ್ಲೇ ಬಾಲಕನ ಶವ ಪತ್ತೆಯಾಗಿದೆ.

ಘಟನಾ ಸ್ಥಳವಾದ ಹೊನಗಳ್ಳಿ ಮಠಕ್ಕೆ ಶಾಸಕ ಗಣಿಗ ರವಿಕುಮಾರ್ ಭೇಟಿ ನೀಡಿ, ಮೃತ ಬಾಲಕನ ಕುಟುಂಬಕ್ಕೆ ಸಾಂತ್ವನ ಹೇಳಿದರು. ಘಟನೆ ಸಂಬಂಧ ಮಂಡ್ಯ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಮುಡಾ ಪ್ರತಿಭಟನೆಗೆ ಹೊರಟಿದ್ದ ಬಿಜೆಪಿ ಕಾರ್ಯಕರ್ತರು ಪೊಲೀಸರ ವಶಕ್ಕೆ



ಮಂಡ್ಯ,ಜು.12– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ನಿವೇಶನ ಹಂಚಿಕೆ ಅಕ್ರಮದ ವಿರುದ್ಧ ಹೋರಾಟ ನಡೆಸಲು ಮೈಸೂರಿಗೆ ಹೊರಟಿದ್ದ ಬಿಜೆಪಿ ಮುಖಂಡರನ್ನು ಪೊಲೀಸರು ಮಂಡ್ಯದಲ್ಲಿ ವಶಕ್ಕೆ ಪಡೆದರು.

ಬಿಜೆಪಿ ಪಕ್ಷದ ಕಚೇರಿಯಿಂದ ಮೆರವಣಿಗೆ ಮೂಲಕ ಜಯಚಾಮರಾಜೇಂದ್ರ ಒಡೆಯರ್ ವೃತ್ತಕ್ಕೆ ಬಂದ ಪಕ್ಷದ ಮುಖಂಡರು, ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು.

ಪಕ್ಷದ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ಮುಖಂಡರಾದ ಅಶೋಕ್ ಜಯರಾಮ್, ಸಾದೊಳಲು ಸ್ವಾಮಿ, ವಿವೇಕ್, ಸಿ.ಟಿ.ಮಂಜುನಾಥ್ ಸೇರಿದಂತೆ ಐವತ್ತಕ್ಕೂ ಹೆಚ್ಚು ಕಾರ್ಯಕರ್ತರನ್ನು ಪೊಲೀಸ್ ವಾಹನದಲ್ಲಿ ಪೆರೇಡ್ ಮೈದಾನಕ್ಕೆ ಕರೆದುಕೊಂಡು ಹೋಗಲಾಯಿತು.

ರಾಜ್ಯ ಕಾಂಗ್ರೆಸ್ ಸರ್ಕಾರದ ಹಗರಣಗಳ ವಿರುದ್ಧ ಹೋರಾಟ ನಡೆಸಲು ಮುಂದಾಗಿದ್ದ ಬಿಜೆಪಿ ಪಕ್ಷದ ನಾಯಕರನ್ನು ಪೊಲೀಸ್ ಬಲಪ್ರಯೋಗಿಸಿ ಬಂಧಿಸುವ ಮೂಲಕ ಹೋರಾಟ ಹತ್ತಿಕ್ಕಲು ಮುಂದಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರಜಾಪ್ರಭುತ್ವ ವಿರೋಧಿ ನಡೆ ಅನುಸರಿಸಿರುವ ರಾಜ್ಯ ಸರ್ಕಾರ ಬಿಜೆಪಿ ನಾಯಕರನ್ನು ಬಂಧನದಿಂದ ಮುಕ್ತಗೊಳಿಸಬೇಕು. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅಕ್ರಮ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಅವರು ಅನೇಕ ತಪ್ಪು ಮಾಹಿತಿಗಳನ್ನು ನೀಡುತ್ತಿದ್ದು, ಮುಖವಾಡ ಕಳಚಿ ಬಿದ್ದಿದೆ. ಅಧಿಕಾರದಲ್ಲಿ ಮುಂದುವರೆಯುವ ಯಾವ ನೈತಿಕತೆಯೂ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಸ್ತೂರಮ್ಮ ನಿಧನ

ಕಿಕ್ಕೇರಿ, ಜು.12–ಪಟ್ಟಣದ ಹೊಸ ಬೀದಿಯ ನಿವಾಸಿ, ಹಿರಿಯ ನಾಗರೀಕರಾದ ಕಸ್ತೂರಮ್ಮ(86) ವಯೋಸಹಜ ಕಾಯಿಲೆಯಿಂದ ಗುರುವಾರ ರಾತ್ರಿ ನಿಧನರಾದರು. ಜವಳಿ ವ್ಯಾಪಾರಿ ನಗಾರಿ ಕರಿಯಣ್ಣ ಅವರ ಪತ್ನಿಯಾದ ಮೃತರಿಗೆ ಮೂವರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಹಿಂದೂ ರುದ್ರಭೂಮಿಯಲ್ಲಿ ಜರುಗಿತು.



ಮೂರನೇ ಪುಟದಿಂದ

ಹರಿದು ಬಂದ ಭಕ್ತ ಗಣ

ಮುಂಜಾನೆ 3 ಗಂಟೆಯಿಂದಲೇ ತಂಡೋಪತಂಡವಾಗಿ ಪ್ರತಿಯೊಂದು ಮೆಟ್ಟಿಲಿಗೂ ಹರಿಶಿನ, ಕುಂಕುಮ ಹಚ್ಚುತ್ತಾ ಆರತಿ ಬೆಳಗಿ ಬೆಟ್ಟ ಏರಿದರು. ಇದರಿಂದ ಮೆಟ್ಟಿಲುಗಳ ಮೂಲಕ ಬೆಟ್ಟಕ್ಕೆ ಬರುವವರು ಹಾಗೂ ನಿರ್ಗಮಿಸುವವರ ಸಂಖ್ಯೆ ಹೆಚ್ಚಾಗ ತೊಡಗಿತ್ತು.

ವಿಶೇಷ ಪೂಜೆ: ಶಕ್ತಿದೇವತೆ ತಾಯಿ ಚಾಮುಂಡೇಶ್ವರಿಗೆ ದೇವಾಲಯದ ಪ್ರಧಾನ ಆಗಮಿಕ ಡಾ.ಎನ್. ಶಶಿಶೇಖರ ದೀಕ್ಷಿತ್ ನೇತೃತ್ವದಲ್ಲಿ ಅರ್ಚಕರು ಮುಂಜಾನೆ 3.30ರಿಂದಲೇ ವಿವಿಧ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ಮುಂಜಾನೆ 3 ಗಂಟೆಗೆ ದೇವಿ ಕೆರೆಯಿಂದ ಪವಿತ್ರ ಜಲ ತಂದು ಚಾಮುಂಡೇಶ್ವರಿ ದೇವಿಗೆ ಮಹಾನ್ಯಾಸ ಪೂರ್ವಕ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ಸಹಸ್ರ ನಾಮಾರ್ಚನೆಯೊಂದಿಗೆ ಅಲಂಕಾರ ಮಾಡಲಾಯಿತು. ಬಳಿಕ ಷೋಡಶೋಪಚಾರ ಪೂಜೆ ನೆರವೇರಿಸಿ. ಮಂಗಳಾರತಿ ಮಾಡಲಾಯಿತು. ಬೆಳಗ್ಗೆ 6 ಗಂಟೆಗೆ ಭಕ್ತರ ದರ್ಶನಕ್ಕೆ ದೇವಾಲಯದ ಬಾಗಿಲು ತೆರೆಯಿತು. ಬೆಳಗ್ಗೆ 9.30ಕ್ಕೆ ದೇವಿಗೆ ಮಹಾಮಂಗಳಾರತಿ, ಸಂಜೆ 6 ರಿಂದ 7.30ರ ವರೆಗೆ ಅಭಿಷೇಕ ನಡೆಯಿತು. ಬೆಳಗ್ಗೆ 5.30 ರಿಂದ ರಾತ್ರಿ 10ರವರೆಗೂ ಭಕ್ತರ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು.

ಲಕ್ಷ್ಮೀ ಅಲಂಕಾರ: ಶಕ್ತಿ ದೇವತೆ ಚಾಮುಂಡೇಶ್ವರಿಗೆ ಇಂದು ವಿಶೇಷ ಲಕ್ಷ್ಮೀ ಅಲಂಕಾರ ಮಾಡಲಾಗಿತ್ತು. ಕೆಂಪು, ನೀಲಿ, ಬಿಳಿ, ಹಳದಿ, ಗುಲಾಬಿ ಹೂ, ಸೇವಂತಿ, ಚೆಂಡು ಹೂ ಸೇರಿದಂತೆ ವಿವಿಧ ಬಗೆಯ ಹೂಗಳಿಂದ ದೇವಸ್ಥಾನದ ಆವರಣವನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಅಲ್ಲದೆ ಹೊರ ಆವರಣವನ್ನೂ ಬಗೆ ಬಗೆಯ ಹೂಗಳ ಅಲಂಕಾರ ಭಕ್ತರಲ್ಲಿ ಭಕ್ತಿ ಇಮ್ಮಡಿಗೊಳ್ಳುವಂತಿತ್ತು.

ನಿರೀಕ್ಷೆಗೂ ಮೀರಿದ ಸಂಖ್ಯೆಯಲ್ಲಿ ಭಕ್ತರು: ಮೊದಲ ಆಷಾಢ ಶುಕ್ರವಾರವಾದ ಇಂದು ಬೆಟ್ಟಕ್ಕೆ ಹೆಚ್ಚು ಭಕ್ತರು ಆಗಮಿಸಿದ್ದರು. ದೇವಿಯ ದರ್ಶನಕ್ಕೆ ಮಧ್ಯರಾತ್ರಿಯಿಂದಲೇ ಧಾವಿಸಿ ಬಂದ ಭಕ್ತರಿಗೆ ಅಚ್ಚುಕಟ್ಟಾಗಿ ಸರತಿ ಸಾಲಿನ ವ್ಯವಸ್ಥೆ ಮಾಡಲಾಗಿತ್ತು. ಉಚಿತ ದರ್ಶನ, 50 ರೂ, ಹಾಗೂ 300 ರೂಗಳ ವಿಶೇಷ ದರ್ಶನಕ್ಕೆ ಪ್ರತ್ಯೇಕ ಸಾಲಿನ ವ್ಯವಸ್ಥೆ ಮಾಡಿದ್ದರಿಂದ ಯಾವುದೇ ನೂಕುನುಗ್ಗಲಿಲ್ಲದೆ ಅಚ್ಚುಕಟ್ಟಾಗಿ ದರ್ಶನ ಪಡೆಯಲು ಸಾಧ್ಯವಾಯಿತು. ಎತ್ತರದ ಬ್ಯಾರಿಕೇಡ್‌ಗಳನ್ನು ಹಾಕಿದ್ದರಿಂದ ಒಂದು ಸಾಲಿನಿಂದ ಮತ್ತೊಂದು ಸಾಲಿಗೆ ಜಿಗಿಯಲು ಅವಕಾಶವಿರಲಿಲ್ಲ. ಅಲ್ಲದೆ ಕಳೆದ ಬಾರಿಯಂತೆ ಈ ಬಾರಿಯೂ ದೇವಾಲಯದವರೆಗೆ ವಾಹನಗಳ ಪ್ರವೇಶ ನಿರ್ಬಂಧಿಸಿದ್ದರಿಂದ ಭಕ್ತರು

> **“ ಆಷಾಢ ಮಾಸದಲ್ಲಿ ಶಕ್ತಿ ದೇವರ ಆರಾಧನೆ, ಶ್ರಾವಣದಲ್ಲಿ ವಿಷ್ಣು, ಕಾರ್ತಿಕ ಮಾಸದಲ್ಲಿ ಶಿವನ ಆರಾಧನೆ ಮಾಡುವ ಸಂಪ್ರದಾಯವಿದೆ. ಅಂತೆಯೇ ನಮ್ಮ ಇಷ್ಟಾರ್ಥ ಸಿದ್ಧಿಯಾಗಬೇಕಾದರೆ ಆಷಾಢ ಮಾಸದಲ್ಲಿ ಶಕ್ತಿಯ ಆರಾಧನೆ ಮಾಡಬೇಕು. ಇಂದು ಚಾಮುಂಡೇಶ್ವರಿಗೆ ವಿಶೇಷ ಲಕ್ಷ್ಮಿ ಅಲಂಕಾರದೊಂದಿಗೆ ಪೂಜಿಸಲಾಗಿದೆ. ಸಂಪ್ರದಾಯದಂತೆ ಮುಂಜಾನೆಯಿಂದಲೇ ವಿವಿಧ ಪೂಜೆ ನೆರವೇರಿಸಲಾಗಿದೆ. ಅಪಾರ ಸಂಖ್ಯೆಯ ಭಕ್ತರು ದರ್ಶನ ಪಡೆದಿದ್ದಾರೆ.**
>
> **– ಡಾ.ಎನ್.ಶಶಿಶೇಖರ್ ದೀಕ್ಷಿತ್, ಪ್ರಧಾನ ಆಗಮಿಕ**

ಸರಾಗವಾಗಿ ಓಡಾಡಲು ಸಾಧ್ಯವಾಯಿತು. ಮಹಿಷಾಸುರ ಪ್ರತಿಮೆ ಬಳಿಯೇ ಬ್ಯಾರಿಕೇಡ್ ಹಾಕಿ ಗಣ್ಯರು, ಸಾರ್ವಜನಿಕರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿತ್ತು ಇದರಿಂದಾಗಿ ಯಾವುದೇ ಗೊಂದಲ, ನೂಕಾಟ, ತಳ್ಳಾಟಗಳಿಗೆ ಆಸ್ಪದವಿರಲಿಲ್ಲ. ಶಿಫಾರಸ್ಸು ಪತ್ರ ತಂದಿದ್ದ ಕೆಲವರು ಒಳ ಬಿಡುವಂತೆ ಪೊಲೀಸರೊಂದಿಗೆ ವಾಗ್ವಾದ ನಡೆಸುತ್ತಿದ್ದ ದೃಶ್ಯವೂ ಕಂಡು ಬಂತು.

ಬಸ್ ಸೌಲಭ್ಯ: ಜಿಲ್ಲೆ ಸೇರಿದಂತೆ ಬೆಂಗಳೂರು, ಮಂಡ್ಯ, ಹಾಸನ, ತಮಿಳುನಾಡು, ಹೊರ ರಾಜ್ಯಗಳಿಂದ ಆಗಮಿಸಿದ್ದ ಭಕ್ತರು ತಮ್ಮ ವಾಹನಗಳನ್ನು ಲಲಿತಮಹಲ್ ಬಳಿ ನಿಲ್ಲಿಸಿ ಸಾರಿಗೆ ಬಸ್‌ನಲ್ಲಿ ಬೆಟ್ಟಕ್ಕೆ ಬಂದು ದರ್ಶನ ಪಡೆದರು. ಇದಕ್ಕಾಗಿ 40 ಬಸ್‌ಗಳ ವ್ಯವಸ್ಥೆ ಮಾಡಲಾಗಿತ್ತು. ಮಹಿಳೆಯರಿಗೆ ಬಸ್ ಪ್ರಯಾಣ ಉಚಿತವಾಗಿರುವುದರಿಂದ ಬೆಟ್ಟದಲ್ಲಿ ಮಹಿಳಾ ಭಕ್ತರ ಸಂಖ್ಯೆ ಹೆಚ್ಚಿತ್ತು.

ಬೆಳಗ್ಗೆಯಿಂದಲೇ ಪ್ರಸಾದ ವಿತರಣೆ: ಭಕ್ತರಿಗೆ ಬೆಟ್ಟದ ಮಲ್ಟಿಲೆವೆಲ್ ಪಾರ್ಕಿಂಗ್ ಸ್ಥಳದಲ್ಲಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಮಲ್ಟಿಲೆವೆಲ್ ಪಾರ್ಕಿಂಗ್ ಕಟ್ಟಡದಲ್ಲಿ ಟೇಬಲ್‌ಗಳನ್ನು ಹಾಕಿ ಪ್ರಸಾದದ ವಿತರಣೆ ಮಾಡಲಾಗಿತ್ತು. ಚಾಮುಂಡೇಶ್ವರಿ ಸೇವಾ ಸಮಿತಿಯಿಂದ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಿದ್ದು, ಬೆಳಗ್ಗೆ ಉಪಹಾರಕ್ಕೆ ಫೈನಾಪಲ್ ಕೇಸರಿಬಾತ್, ಉಪ್ಪಿಟ್ಟು ನೀಡಿದರೆ, ಮಧ್ಯಾಹ್ನದ ಊಟಕ್ಕೆ ಕೋಸಂಬರಿ, ಪಲ್ಯಾ, ಬಿಸಿಬೇಳೆಬಾತ್, ರೈಸ್ ಬಾತ್, ಅನ್ನ ಸಾಂಬಾರ್, ಹಪ್ಪಳ, ಮೊಸರು ಹಾಗೂ ಮೈಸೂರು ಪಾಕ್ ನೀಡಲಾಯಿತು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಜಿ.ಟಿ.ದೇವೇಗೌಡ, ನರೇಂದ್ರಸ್ವಾಮಿ, ರಮೇಶ್ ಬಂಡಿಸಿದ್ದೇಗೌಡ, ವಿನಯ್ ಕುಲಕರ್ಣಿ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಮುಕ್ತ ವಿವಿ ಕುಲಪತಿ ಶರಣಪ್ಪ ವಿ.ಹಲಸೆ ಸೇರಿದಂತೆ ಹಲವು ಗಣ್ಯರು ಬೆಟ್ಟಕ್ಕೆ ಭೇಟಿ ನೀಡಿ, ಚಾಮುಂಡೇಶ್ವರಿಯ ದರ್ಶನ ಪಡೆದರು.

ಶಾಸಕ ನಾಗೇಂದ್ರ

ದಿನಗಳ ಹಿಂದೆ ನಾಗೇಂದ್ರ ಮತ್ತು ದದ್ದಲ್ ಸೇರಿದಂತೆ ಹಗರಣದಲ್ಲಿ ಭಾಗಿಯಾಗಿರುವ ಆರೋಪ ಎದುರಿಸುತ್ತಿರುವ ವ್ಯಕ್ತಿಗಳ ನಿವಾಸ ಮತ್ತು ಕಚೇರಿ ಮೇಲೆ ದಾಳಿ ನಡೆಸಿ ಕೆಲವರನ್ನು ವಶಕ್ಕೆ ಪಡೆದುಕೊಂಡಿತ್ತು. ಇವರು ನೀಡಿದ ಮಾಹಿತಿಯ ಆಧಾರದ ಮೇಲೆ ಇಡಿ ಅಧಿಕಾರಿಗಳು ಬೆಳ್ಳಂಬೆಳಗ್ಗೆ ಪ್ರಮುಖ ಆರೋಪಿಗಳಾದ ನಾಗೇಂದ್ರ ಮತ್ತು ದದ್ದಲ್ ಅವರನ್ನು ವಶಕ್ಕೆ ಪಡೆಯಲು ಮುಂದಾಯಿತು. ಮಾಜಿ ಸಚಿವರನ್ನು ಇಡಿ ವಶಕ್ಕೆ ಪಡೆಯಿತಾದರೂ, ದದ್ದಲ್ ಕೇಂದ್ರದ ತನಿಖಾ ಸಂಸ್ಥೆ ಅಧಿಕಾರಿಗಳ ಕಣ್ತಪ್ಪಿಸಿ ಅಡಗಿ ಕುಳಿತಿದ್ದಾರೆ.

ಹಗರಣ ಬಯಲಾಗುತ್ತಿದ್ದಂತೆ ಇಲಾಖೆ ಹೊಣೆ ಹೊತ್ತಿದ್ದ ನಾಗೇಂದ್ರ ಮತ್ತು ನಿಗಮದ ಅಧ್ಯಕ್ಷರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದರು. ಈ ಬೆಳವಣಿಗೆ ನಂತರ ರಾಜ್ಯ ಸರ್ಕಾರ ಪ್ರಕರಣವನ್ನು ಎಸ್‌ಐಟಿಗೆ ವಹಿಸಿತ್ತು.

ನಿಗಮದ ಅಧಿಕಾರಿಗಳನ್ನು ಬಂಧಿಸಿದ ಎಸ್‌ಐಟಿ, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ತನ್ನ ವಶಕ್ಕೆ ಪಡೆದುಕೊಂಡಿತು. ಅಷ್ಟೇ ಅಲ್ಲ, ಕಳೆದ ಮಂಗಳವಾರ ನಾಗೇಂದ್ರ ಮತ್ತು ದದ್ದಲ್ ಅವರನ್ನು ವಿಚಾರಣೆಗೆ ಒಳಪಡಿಸಿತ್ತು.

ಎಸ್‌ಐಟಿಯಿಂದ ಪ್ರಮುಖ ಆರೋಪಿಗಳು ಹೊರಬರುತ್ತಿದ್ದಂತೆ ಎಚ್ಚೆತ್ತ ಇ.ಡಿ., ಸಂಬಂಧಪಟ್ಟವರ ಮನೆಗಳ ಮೇಲೆ ದಾಳಿ ನಡೆಸಿದ್ದಲ್ಲದೆ, ಇವರನ್ನು ವಶಕ್ಕೆ ಪಡೆಯಲು ಮುಂದಾಯಿತು. ತನ್ನ ಮಾಜಿ ಸಹೋದ್ಯೋಗಿ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತುಟಿ ಬಿಚ್ಚುತ್ತಿಲ್ಲ. ಪತ್ರಕರ್ತರು ನಾಗೇಂದ್ರ ಅವರ ಬಗ್ಗೆ ಎಷ್ಟೇ ಪ್ರಶ್ನೆ ಕೇಳಿದರೂ ಪ್ರತಿಕ್ರಿಯೆಗೆ ನಿರಾಕರಿಸಿದರು.

ವಾಲ್ಮೀಕಿ ನಿಗಮ ಹಗರಣ: ಪ್ರಮುಖ ಆರೋಪಿ ವರ್ಮಾ ಖರೀದಿಸಿದ್ದ 3.3 ಕೋಟಿ ರೂ. ಮೌಲ್ಯದ ಲಂಬೋರ್ಗಿನಿ ಎಸ್‌ಐಟಿ ವಶಕ್ಕೆ

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ತನಿಖೆಗಾಗಿ ರಾಜ್ಯ ಸರ್ಕಾರ ರಚಿಸಿದ್ದ ವಿಶೇಷ ತನಿಖಾ ತಂಡ ಹೈದರಾಬಾದ್‌ನಲ್ಲಿ ಪ್ರಕರಣದ ಪ್ರಮುಖ ಆರೋಪಿ ಸತ್ಯನಾರಾಯಣ ವರ್ಮಾ ಖರೀದಿಸಿದ್ದ 3.3 ಕೋಟಿ ರೂಪಾಯಿ ಮೌಲ್ಯದ ಲಂಬೋರ್ಗಿನಿ ಕಾರನ್ನು ವಶಪಡಿಸಿಕೊಂಡಿದೆ. ನಿಗಮದಿಂದ ನಕಲಿ ಖಾತೆಗಳಿಗೆ ವರ್ಗಾವಣೆಯಾದ ಹಣದ ಜಾಡು ಹಿಡಿದ ಎಸ್‌ಐಟಿ, ಪ್ರಕರಣದಲ್ಲಿ ಬಂಧಿತನಾಗಿದ್ದ ಸತ್ಯನಾರಾಯಣ ವರ್ಮಾ ಐಷಾರಾಮಿ ಕಾರು ಡೀಲರ್‌ಗೆ 3.3 ಕೋಟಿ ರೂಪಾಯಿ ನೀಡಿದ್ದರು. ಎಸ್‌ಐಟಿ ಅಧಿಕಾರಿಗಳು ಕಾರನ್ನು ಪತ್ತೆಹಚ್ಚಿ ವಶಪಡಿಸಿಕೊಂಡು ಡೀಲರ್‌ಗೆ ಹಿಂತಿರುಗಿಸಿದ್ದು ಹಣವನ್ನೂ ಜಪ್ತಿ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಮೂಲಗಳ ಪ್ರಕಾರ, ಹಗರಣದಲ್ಲಿ ಸತ್ಯನಾರಾಯಣ ವರ್ಮಾ 13ನೇ ಆರೋಪಿಯಾಗಿದ್ದಾರೆ. ಇನ್ನು ನ್ಯಾಯಾಲಯದಲ್ಲಿ ಅಪರಾಧ ತನಿಖಾ ಇಲಾಖೆ (ಸಿಐಡಿ) ವಿರುದ್ಧ ಸತ್ಯನಾರಾಯಣ ಹಲವು ಆರೋಪಗಳನ್ನು ಮಾಡಿದ್ದಾರೆ. ಸಿಐಡಿ ಅಪರಾಧಿಗಳಿಗೆ ರಕ್ಷಣೆ ನೀಡುತ್ತಿದ್ದು, ಅಧಿ ಕಾರಿಗಳ ಮೇಲೆ ಒತ್ತಡ ಹೇರುತ್ತಿದೆ. ತನ್ನ ಬಂಧನದ ನಂತರ ನಾಲ್ಕು ದಿನಗಳ ಕಾಲ ಅಧಿಕಾರಿಗಳು ನನ್ನ ಕುಟುಂಬಕ್ಕೆ ತಿಳಿಸಲಿಲ್ಲ ಎಂದು ಸತ್ಯನಾರಾಯಣ ವರ್ಮಾ ನ್ಯಾಯಾಲಯಕ್ಕೆ ತಿಳಿಸಿದರು. ಸಿಐಡಿ ಅಧಿಕಾರಿಗಳ ಅನುಪಸ್ಥಿತಿಯಲ್ಲಿ ನ್ಯಾಯಾಲಯದ ಮುಂದೆ ಗೌಪ್ಯ ಹೇಳಿಕೆ ನೀಡಲು ಅವಕಾಶ ನೀಡುವಂತೆ ನ್ಯಾಯಾಲಯವನ್ನು ಕೋರಿದ್ದಾರೆ ಎಂದು ತಿಳಿದುಬಂದಿದೆ. ಸಿಐಡಿ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದಾಗ ಅರ್ಜಿ ಸಲ್ಲಿಕೆಯಾಗಿದೆ ಎಂದು ಮೂಲಗಳು ಬಹಿರಂಗಪಡಿಸಿವೆ.

ಪವರ್ ಟಿವಿ ಪ್ರಸಾರಕ್ಕೆ ನಿರ್ಬಂಧ ಹೇರಿದ್ದ ಹೈಕೋರ್ಟ್ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ

ನವದೆಹಲಿ, ಜು.12– ಪವರ್ ಟಿವಿ ಪ್ರಸಾರಕ್ಕೆ ನಿರ್ಬಂಧ ಹೇರಿದ್ದ ಕರ್ನಾಟಕ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ. ಸೂಕ್ತ ಪರವಾನಗಿ ಇಲ್ಲದೆ ಕನ್ನಡದ ಸುದ್ದಿ ವಾಹಿನಿಯಾದ ಪವರ್ ಟಿವಿ ಕಾರ್ಯನಿರ್ವಹಿಸುತ್ತಿತ್ತು ಎಂಬ ಆರೋಪದ ಮೇಲೆ ಕರ್ನಾಟಕ ಹೈಕೋರ್ಟ್ ಪ್ರಸಾರ ನಿರ್ಬಂಧ ಹೇರಿ ಆದೇಶ ಹೊರಡಿಸಿತ್ತು. ಇದೀಗ ಈ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ ನೀಡಿದೆ. ಹೀಗಾಗಿ, ಪವರ್ ಟಿವಿ ಎಂದಿನಂತೆ ಕಾರ್ಯನಿರ್ವಹಣೆ ಮಾಡಬಹುದಾಗಿದೆ. ಈ ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಸಾರಥ್ಯದ ಪೀಠವು, ಇದು ರಾಜಕೀಯ ದ್ವೇಷದ ಕ್ರಮ ಎನ್ನುವುದು ಸ್ಪಷ್ಟವಾಗುತ್ತಿದೆ ಎಂದಿದ್ದಾರೆ. ಟಿವಿಯ ದನಿಯನ್ನು ಸಂಪೂರ್ಣವಾಗಿ ಉಡುಗಿಸಬೇಕು ಎಂಬುದು ಉದ್ದೇಶವಾಗಿತ್ತು. ಹೀಗಾಗಿ ವಾಹಿನಿ ಪ್ರಸಾರಕ್ಕೆ ತಡೆ ಹಿಡಿಯಲಾಗಿತ್ತು. ಆದರೆ, ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರಕ್ಷಣೆ ಮಾಡೋದು ಸರ್ಕಾರಗಳ ಕರ್ತವ್ಯ ಎಂದು ಮುಖ್ಯ ನ್ಯಾಯಮೂರ್ತಿಗಳು ಚಾಟಿ ಬೀಸಿದ್ದಾರೆ.

ಚುನಾವಣಾ ಬಾಂಡ್: ಪಿಐಎಲ್ ವಿಚಾರಣೆಗೆ ಸುಪ್ರೀಂಕೋರ್ಟ್ ಸಮ್ಮತಿ


ನವದೆಹಲಿ, ಜು.12– ಚುನಾವಣಾ ಬಾಂಡ್ ಯೋಜನೆ ಸಂಬಂಧ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡದಿಂದ ತನಿಖೆಗೆ ನಿರ್ದೇಶಿಸಬೇಕೆಂದು ಕೋರಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ವಿಚಾರಣೆಗೆ ಪರಿಗಣಿಸಲು ಸುಪ್ರೀಂ ಕೋರ್ಟ್ ಶುಕ್ರವಾರ ಸಮ್ಮತಿಸಿದೆ.



ಕಾಮನ್ ಕಾಸ್ ಮತ್ತು ಸೆಂಟರ್ ಫಾರ್ ಪಬ್ಲಿಕ್ ಇಂಟರೆಸ್ಟ್ ಲಿಟಿಗೇಷನ್ (ಸಿಪಿಐಎಲ್) ಎಂಬ ಸ್ವಯಂಸೇವಾ ಸಂಸ್ಥೆಗಳು ಈ ಸಂಬಂಧ ಪಿಐಎಲ್ ಸಲ್ಲಿಸಿದ್ದವು. ರಾಜಕೀಯ ಪಕ್ಷಗಳು, ಕಾರ್ಪೊರೇಟ್ ಕಂಪನಿಗಳು ಮತ್ತು ತನಿಖಾ ಸಂಸ್ಥೆಗಳು ಕೊಡು ಕೊಳ್ಳುವಿಕೆಯಲ್ಲಿ ತೊಡಗಿವೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆ.ಬಿ.ಪಾರ್ದೀವಾಲಾ ಹಾಗೂ ಮನೋಜ್ ಮಿಶ್ರಾ ಅವರಿದ್ದ ಪೀಠವು ಎನ್‌ಜಿಒ ಪರ ವಕೀಲರಾದ ಪ್ರಶಾಂತ್ ಭೂಷಣ್ ಅವರ ವಾದವನ್ನು ಆಲಿಸಿದ ಬಳಿಕ ಅರ್ಜಿಯ ವಿಚಾರಣೆಗೆ ಒಪ್ಪಿಗೆ ಸೂಚಿಸಿದೆ. ಅರ್ಜಿಯನ್ನು ವಿಚಾರಣೆಗೆ ಪಟ್ಟಿ ಮಾಡುವಂತೆ ಕೋರಿ ಇ–ಮೇಲ್ ಕಳುಹಿಸಿ ಎಂದು ಸಿಜೆಐ ತಿಳಿಸಿದರು. ಅದಕ್ಕೆ ಭೂಷಣ್, ಈಗಾಗಲೇ ಇ–ಮೇಲ್ ಕಳುಹಿಸಲಾಗಿದೆ ಎಂದರು. ಮತ್ತೊಮ್ಮೆ ಇ–ಮೇಲ್ ಕಳುಹಿಸಿ, ಅರ್ಜಿಯನ್ನು ಪಟ್ಟಿಗೆ ಸೇರಿಸಲಾಗುವುದು ಎಂದು ಸಿಜೆಐ ಹೇಳಿದರು. ಚುನಾವಣಾ ಬಾಂಡ್ ಯೋಜನೆಯನ್ನು ಹಗರಣ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಶೆಲ್ ಕಂಪನಿಗಳು ಮತ್ತು ನಷ್ಟದಲ್ಲಿರುವ ಕಂಪನಿಗಳು ರಾಜಕೀಯ ಪಕ್ಷಗಳಿಗೆ ನೀಡಿದ ದೇಣಿಗೆಯ ಮೂಲವನ್ನು ಪತ್ತೆಹಚ್ಚಲು ತನಿಖೆ ನಡೆಸುವಂತೆ ಸಂಬಂಧಪಟ್ಟವರಿಗೆ ನಿರ್ದೇಶಿಸಬೇಕು ಎಂದು ಕೋರಲಾಗಿದೆ. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ಚುನಾವಣಾ ಬಾಂಡ್ ಯೋಜನೆಯನ್ನು ಐವರು ನ್ಯಾಯಮೂರ್ತಿಗಳನ್ನೊಳಗೊಂಡ ಸಂವಿಧಾನ ಪೀಠವು ಫೆ.15ರಂದು ರದ್ದುಗೊಳಿಸಿತ್ತು.

ಅದಿರು ಪೂರೈಕೆಯಲ್ಲಿ ಸಮತೋಲನ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಕೇಂದ್ರ ಉಕ್ಕು ಸಚಿವ ಕುಮಾರಸ್ವಾಮಿ ಸಲಹೆ



ಬೆಂಗಳೂರು, ಜು.12(ಕೆಎಂಶಿ)– ಅದಿರು ಪೂರೈಕೆ ಸ್ಥಿರತೆಯನ್ನು ಸಮರ್ಥವಾಗಿ ಕಾಪಾಡಿಕೊಂಡು, ಉಕ್ಕು ತಯಾರಿಕಾ ಘಟಕಗಳಿಗೆ ಕಬ್ಬಿಣದ ಅದಿರು ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಕೇಂದ್ರದ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಹೈದರಾಬಾದ್‌ನಲ್ಲಿಂದು ನಿಗಮದ ಪ್ರಗತಿ ಪರಿಶೀಲಿಸಿದ ಅವರು, ಬೃಹತ್ ಉಕ್ಕು ತಯಾರಿಕಾ ಘಟಕಗಳಿಗೆ ಅದಿರು ಪೂರೈಕೆ ಜೊತೆಗೆ ಮಧ್ಯಮ, ಸಣ್ಣ, ಅತಿಸಣ್ಣ ಉಕ್ಕು ತಯಾರಿಕಾ ಘಟಕಗಳಿಗೂ ಅದಿರು ಕೊರತೆ ಆಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.


ಅದಿರು ಪೂರೈಕೆಯಲ್ಲಿ ಸಮತೋಲನ, ಸ್ಥಿರತೆ ಕಾಪಾಡಿಕೊಂಡರೆ ಹೆಚ್ಚೆಚ್ಚು ಉದ್ಯೋಗ ಸೃಷ್ಟಿ ಮಾಡಬಹುದು, ಆ ಮೂಲಕ ಉಕ್ಕು ವಲಯದಿಂದ ದೇಶೀಯ ಜಿಡಿಪಿಗೆ ದೊಡ್ಡ ಕೊಡುಗೆ ನೀಡಬಹುದು. ಇದು ಪ್ರಧಾನಿ ನರೇಂದ್ರ ಮೋದಿ ಅವರ ಕನಸು ಎಂದರು.

2024ಕ್ಕೆ ವಾರ್ಷಿಕ 100 ದಶಲಕ್ಷ ಟನ್ ಕಬ್ಬಿಣದ ಅದಿರು ಹೊರತೆಗೆಯುವ ನಿಗಮದ ಗುರಿ ಬಗ್ಗೆ ಮಾಹಿತಿ ಪಡೆದ ಅವರು, ಗಣಿಗಾರಿಕೆಯನ್ನು ಇನ್ನೂ ಪರಿಣಾಮಕಾರಿ ಮಾಡುವ ಮೂಲಕ ಅದಿರು ಉತ್ಪಾದನೆಯಲ್ಲಿ ಹೆಚ್ಚಳ ಸಾಧಿಸಿ, ವಾರ್ಷಿಕ 300 ದಶಲಕ್ಷ ಟನ್ ಉಕ್ಕು ತಯಾರಿಸುವ ಗುರಿಯನ್ನು ಪ್ರಧಾನಿ ನೀಡಿದ್ದಾರೆ, ಅದನ್ನು ದುಪ್ಪಟ್ಟು ಮಾಡುವ ಮಾಡುವಲ್ಲಿ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ ಕೆಲಸ ಮಾಡಬೇಕು. ಹೆಚ್ಚು ಪ್ರಮಾಣದಲ್ಲಿ ಗಣಿಗಾರಿಕೆ ಮಾಡಬೇಕು, ಅದಕ್ಕಿಂತ ದೊಡ್ಡ ಪ್ರಮಾಣದಲ್ಲಿ ಅರಣ್ಯ ಬೆಳೆಸಬೇಕು, ಗಣಿಗಾರಿಕೆ, ಪೂರೈಕೆ ಹಾಗೂ ಉಕ್ಕು ತಯಾರಿಕೆ ಸರಪಳಿಯಲ್ಲಿ ವ್ಯತ್ಯಯ ಆಗದಂತೆ ನೋಡಿಕೊಳ್ಳಬೇಕು.

ಕಬ್ಬಿಣ, ಚಿನ್ನ, ವಜ್ರದ ಗಣಿಗಾರಿಕೆ ನಡೆಸುವ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮಕ್ಕೆ ಕೇಂದ್ರ ಸರ್ಕಾರದಿಂದ ಎಲ್ಲಾ ಸಹಕಾರ ಇರಲಿದೆ ಎಂದರು.

ತಮಿಳುನಾಡಿಗೆ ನಿತ್ಯವೂ 1 ಟಿಎಂಸಿ ನೀರು ಬಿಡಲು ಆದೇಶ: ಕಾನೂನು ತಜ್ಞರ ಜೊತೆ ಡಿಸಿಎಂ ಡಿಕೆಶಿ ಚರ್ಚೆ

ಬೆಂಗಳೂರು, ಜು.12(ಕೆಎಂಶಿ)–ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಆದೇಶದ ವಿಚಾರವಾಗಿ ಮುಂದೇನು ಮಾಡಬೇಕು ಎಂಬ ಬಗ್ಗೆ ಕಾನೂನು ತಜ್ಞರ ಜತೆ ಚರ್ಚೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ಕಾವೇರಿ ನೀರು ಹರಿಸುವಂತೆ ಸಿಡಬ್ಲ್ಯೂಆರ್‌ಸಿ ಆದೇಶ ನೀಡಿದ್ದು, ಕಾನೂನು ತಜ್ಞರ ತಂಡದ ಜತೆ ಚರ್ಚೆ ಸಿದ್ದು, ನೀರಾವರಿ ಇಲಾಖೆ ಅಧಿಕಾರಿ ಗಳೊಂದಿಗೂ ಮಾತುಕತೆ ನಡೆಸುತ್ತೇವೆ ಎಂದರು. ಮುಡಾ ಹಗರಣದಲ್ಲಿ ಬಿಜೆಪಿ ರಾಜಕಾರಣ ಮಾಡುತ್ತಿದೆ, ಆ ಪಕ್ಷದ ನಾಯಕರ ಆರೋಪದಲ್ಲಿ ಹುರುಳಿಲ್ಲ, ಸಮಯ ಬಂದಾಗ ತಕ್ಕ ಉತ್ತರ ನೀಡು ತ್ತೇವೆ. ಮುಡಾದಲ್ಲಿ ಏನೇ ಹಗರಣ ನಡೆದಿದ್ದರೂ ಬಿಜೆಪಿ ಅವಧಿಯಲ್ಲಿ ನಡೆದಿದೆ, ರಾಜಕೀಯ ಆರೋಪಗಳನ್ನು ಸಮರ್ಥವಾಗಿ ಎದುರಿಸುತ್ತೇವೆ. ಮಹರ್ಷಿ ವಾಲ್ಮೀಕಿ ನಿಗಮದ ಹಗರಣ ಕುರಿತು ಎಸ್‌ಐಟಿ ತನಿಖೆ ನಡೆಸುತ್ತಿದೆ. ಇ.ಡಿ. ವಿಚಾರಣೆ ಅವಶ್ಯಕತೆ ಇರಲಿಲ್ಲ, ಇ.ಡಿ. ತನಿಖೆ ಬಗ್ಗೆ ಮಾಹಿತಿ ಪಡೆದು ನಂತರ ಮಾತನಾಡುತ್ತೇನೆ ಎಂದರು.

ದೇಶ - ವಿದೇಶ

ನೇಪಾಳದಲ್ಲಿ ಭೂಕುಸಿತ: ಬಸ್‌ಗಳು ನದಿಗೆ ಬಿದ್ದು 63 ಪ್ರಯಾಣಿಕರು ನಾಪತ್ತೆ



ನೇಪಾಳ: ನೇಪಾಳದಲ್ಲಿ ಭಾರಿ ಮಳೆ ಸುರಿಯುತ್ತಿರುವ ಪರಿಣಾಮ ಭೂಕುಸಿತ ಉಂಟಾಗಿದ್ದು, ಎರಡು ಬಸ್‌ಗಳು ನದಿಗೆ ಬಿದ್ದು 63 ಪ್ರಯಾಣಿಕರು ನಾಪತ್ತೆಯಾಗಿದ್ದಾರೆ. ಮದನ್-ಆಶೀರ್ ಹೆದ್ದಾರಿಯಲ್ಲಿ ಭೂಕುಸಿತ ಸಂಭವಿಸಿದೆ, ಈ ವೇಳೆ ಎರಡು ಬಸ್‌ಗಳು ಅವಶೇಷಗಳಡಿ ಸಿಲುಕಿ ತ್ರಿಶೂಲಿ ನದಿಯಲ್ಲಿ ಕೊಚ್ಚಿ ಹೋಗಿವೆ. ಭಾರಿ ಮಳೆಯಿಂದಾಗಿ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದೆ ಎಂದು ತಿಳಿದುಬಂದಿದೆ. ಚಿತ್ವಾನ್ ಮುಖ್ಯ ಜಿಲ್ಲಾ ಅಧಿಕಾರಿ ಇಂದ್ರದೇವ್ ಯಾದವ್ ಅವರು ಈ ವಿಷಯವನ್ನು ಖಚಿತಪಡಿಸಿದ್ದಾರೆ. ಭೂಕುಸಿತದಿಂದ ರಸ್ತೆಯ ಮಧ್ಯದಲ್ಲಿಯೇ ಅವಶೇಷಗಳು ಶೇಖರಣೆಗೊಂಡು ರಸ್ತೆ ಸಂಚಾರ ಸ್ಥಗಿತಗೊಂಡಿದೆ. ಅಪಘಾತಕ್ಕೀಡಾದ ಒಂದು ಬಸ್ ಬಿರ್‌ಗಂಜ್‌ನಿಂದ ಕಠ್ಮಂಡುವಿಗೆ ಹೋಗುತ್ತಿತ್ತು ಮತ್ತು ಇನ್ನೊಂದು ಬಸ್ ಗೌರ್‌ನಿಂದ ಕಠ್ಮಂಡುವಿಗೆ ಹೋಗುತ್ತಿತ್ತು ಎಂದು ಹೇಳಲಾಗುತ್ತಿದೆ. ಪರ್ವತದ ಮೇಲೆ ಭೂಕುಸಿತದಿಂದ ಈ ಅಪಘಾತ ಸಂಭವಿಸಿದೆ. ನಾರಾಯಣಘಟ್ಟ ಮತ್ತು ಮುಗ್ಲಿಂಗ್ ನಡುವೆ ಈ ಘಟನೆ ನಡೆದಿದೆ.

ಕೋಳಿಗೆ ಸಾರು ಖಾರ ಇಲ್ಲ ಎಂದು ಪತ್ನಿಯ ಬಿಲ್ಡಿಂಗ್ ಮೇಲಿಂದ ದಬ್ಬಿದ ಪತಿ!

ಲಾಹೋರ್, ಜು.12-ಪತ್ನಿ ಮಾಡಿದ ಕೋಳಿ ಸಾರಿನ ಖಾರ ಮಿತವಾಗಿದೆ.



ಚಿಕನ್‌ಗೆ ಖಾರ ಮಾಸಾಲೆ ಯಾಕಿಲ್ಲ ಎಂದು ಪತ್ನಿ ವಿರುದ್ಧ ಕೆಂಡಾಮಂಡಲವಾದ ಪತಿ ಹಾಗೂ ಅತ್ತೆ ಜಗಳ ಶುರು ಮಾಡಿದ್ದಾರೆ. ಕೊನೆಗೆ ಮಹಡಿಯಿಂದ ಪತ್ನಿಯನ್ನು ಕೆಳಕ್ಕೆ ತಳ್ಳಿದ ಘಟನೆ ಪಾಕಿಸ್ತಾನದ ಲಾಹೋರ್‌ನಲ್ಲಿ ನಡೆದಿದೆ. ಸದ್ಯ ಆಕೆ ಗಾಯಗೊಂಡಿದ್ದಾರೆ.

ಮಹಿಳೆ ಮೊದಲ ಮಹಡಿಯಿಂದ ಕೆಳಕ್ಕೆ ಬೀಳುತ್ತಿರುವ ದೃಶ್ಯ, ಅಕ್ಕ ಪಕ್ಕದ ಮನೆಯವರು ಮಹಿಳೆಯ ನೆರವಿಗೆ ಧಾವಿಸಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ಕುರಿತು ಪ್ರಕರಣ ದಾಖಲಾಗಿತ್ತು ಪತಿ, ಪತಿಯ ಸಹೋದರ ಹಾಗೂ ತಾಯಿಯನ್ನು ಲಾಹೋರ್ ಪೊಲೀಸರು ಬಂಧಿಸಿದ್ದಾರೆ.

ಚಿಕನ್‌ಗೆ ಮಸಾಲೆ ಖಾರ ಇರಬೇಕು ಎಂಬುದು ಪತಿ ಹಾಗೂ ಆತನ ಕುಟುಂಬಸ್ಥರ ಷರತ್ತು ಆದರೆ ಹಲವು ಬಾರಿ ಪತಿ ಮಾಡಿದ ಕೋಳಿ ಸಾರು ಖಾರವಿಲ್ಲದ್ದು ಆಕ್ರೋಶಕ್ಕೆ ಕಾರಣವಾಗಿದೆ. ಪತಿಯ ಸ್ಪಷ್ಟ ಸೂಚನೆ ಹೊರತಾಗಿಯೂ ಪತ್ನಿ ಮಾಡಿದ ಕೋಳಿ ಸಾರು ಮಿತವಾದ ಖಾರದಿಂದ ಕೂಡಿತ್ತು. ಆದರೆ ಕೋಳಿ ಸಾರು ಖಾರ ಯಾಕಿಲ್ಲ, ತನ್ನ ಸೂಚನೆ, ಹಲವು ಎಚ್ಚರಿಕೆಯನ್ನೂ ಕಡೆಗಣಿಸಲಾಗಿದೆ ಎಂದು ಪತಿ ಹಾಗೂ ಪತಿಯ ತಾಯಿ ಆಕ್ರೋಶಗೊಂಡಿದ್ದಾರೆ. ಬಳಿಕ ಬಾಲ್ಕನಿ ಬದಿಯಲ್ಲಿದ್ದ ಪತ್ನಿಯನ್ನು ಕೆಳಕ್ಕೆ ತಳ್ಳಲಾಗಿದೆ ಎಂದು ಹೇಳಲಾಗುತ್ತಿದೆ.

ಸಂಸದೆ ಕಂಗನಾ ರಣಾವತ್ ಭೇಟಿಗೆ 'ಆಧಾರ್' ತರಲೇಬೇಕು!



ನವದೆಹಲಿ: ಬಾಲಿವುಟ್ ನಟಿ, ಬಿಜೆಪಿ ಸಂಸದೆ ಕಂಗನಾ ರಣಾವತ್ ಅವರು, ತಾವು ಪ್ರತಿನಿಧಿಸುವ ಹಿಮಾಚಲ ಪ್ರದೇಶದ ಮಂಡಿ ಲೋಕಸಭಾ ಕ್ಷೇತ್ರದ ಜನರು ತಮ್ಮನ್ನು ಭೇಟಿ ಮಾಡಲು ಬಯಸಿದರೆ, ತಮ್ಮ ಆಧಾರ್ ಕಾರ್ಡ್‌ಗಳನ್ನು ತರಬೇಕು ಎಂದು ಹೇಳಿದ್ದಾರೆ.

ದೊಡ್ಡ ಸಂಖ್ಯೆಯ ಪ್ರವಾಸಿಗಳು ಮತ್ತು ಹೊರಗಿನವರು ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಈ ನಿಯಮವನ್ನು ಜಾರಿಗೊಳಿಸುತ್ತಿರುವುದಾಗಿ ಕಂಗನಾ ಸ್ಪಷ್ಟಪಡಿಸಿದ್ದಾರೆ. ಮಂಡಿಯಲ್ಲಿ ಇರುವಾಗಲೆಲ್ಲ ನಿಯೋಜಿತ ಸಂವಾದ ಕೇಂದ್ರಗಳಲ್ಲಿ ಸಂದರ್ಶಕರನ್ನು ಭೇಟಿ ಮಾಡಲು ಲಭ್ಯವಿರುವುದಾಗಿ ವಿವರಿಸಿದ್ದಾರೆ.

ಕ್ಷೇತ್ರದಲ್ಲಿ ನಿಮ್ಮ ಕೆಲಸದ ಸಂಬಂಧದ ವಿವರವನ್ನು ಒಂದು ಪತ್ರದಲ್ಲಿ ಲಿಖಿತವಾಗಿ ನೀಡಬೇಕು. ಆದ್ದರಿಂದ ಯಾವುದೇ ಅನಾನುಕೂಲವಾಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು. ಜುಲೈ 11ರಂದು ನಡೆದ ಸಾರ್ವಜನಿಕ ಸಂವಾದದಲ್ಲಿ, ಸ್ಥಳೀಯ ಪಂಚಾಯ್ತಿ ಹಾಗೂ ವಿಧಾನಸಭೆ ಮಟ್ಟದ ಸಮಸ್ಯೆಗಳಿಗಿಂತ ಹೆಚ್ಚಾಗಿ ರಾಷ್ಟ್ರಮಟ್ಟದ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಸದೆಯಾಗಿ ನನ್ನ ಪಾತ್ರವನ್ನು ನಿರ್ವಹಿಸುವುದು ನನ್ನ ಆದ್ಯತೆ ಎಂದು ಅವರು ತಿಳಿಸಿದ್ದಾರೆ.

ದಲಿತ ಬಾಲಕನಿಗೆ ಮೂತ್ರ ಕುಡಿಸಲೆತ್ನ; ಮೂವರ ಬಂಧನ

ಶ್ರಾವಸ್ತಿ: ಉತ್ತರ ಪ್ರದೇಶದ ಶ್ರಾವಸ್ತಿ ಜಿಲ್ಲೆಯಲ್ಲಿ ಎರಡು ದಿನಗಳ ಹಿಂದೆ ದಲಿತ ಬಾಲಕನಿಗೆ ಮೂತ್ರ ಕುಡಿಯುವಂತೆ ಒತ್ತಾಯಿಸಿದ ಮೂವರು ಯುವಕರನ್ನು ಗುರುವಾರ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

15 ವರ್ಷ ವಯಸ್ಸಿನ ಸಂತ್ರಸ್ತ ತಂತ್ರಜ್ಞರಾಗಿ ಕೆಲಸ ಮಾಡುತ್ತಾರೆ. ಮಂಗಳವಾರ ರಾತ್ರಿ ಕೆಲಸ ಮುಗಿಸಿ ಮನೆಗೆ ತೆರಳುತ್ತಿದ್ದ ವೇಳೆ ಮದ್ಯದ ಅಮಲಿನಲ್ಲಿದ್ದ ಮೂವರು ಯುವಕರು ಆತನನ್ನು ಅಡ್ಡಗಟ್ಟಿದ್ದು, ಮದ್ಯದ ಬಾಟಲಿಯಲ್ಲಿ ಮೂತ್ರ ವಿಸರ್ಜನೆ ಮಾಡಿ, ಅದನ್ನು ಸಂತ್ರಸ್ತನ ಬಾಯಿಗೆ ಇಟ್ಟು ಕುಡಿಯಲು ಒತ್ತಾಯಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಬಾಲಕನೊಂದಿಗೆ ಅನುಚಿತವಾಗಿ ವರ್ತಿಸಿದ್ದು, ಹಲ್ಲೆ ಮಾಡಿದ್ದಾರೆ. ಅವರಲ್ಲಿ ಒಬ್ಬರು ಇಡೀ ಘಟನೆಯ ವೀಡಿಯೊವನ್ನು ಚಿತ್ರೀಕರಿಸಿದ್ದಾರೆ ಎಂದು ಗಿಲೌಲಾ ಪೊಲೀಸ್ ಠಾಣೆಯ ಠಾಣಾಧಿಕಾರಿ ಮಹಿಮಾ ನಾಥ್ ಉಪಾಧ್ಯಾಯ ಹೇಳಿದರು. ಸಂತ್ರಸ್ತ ಮನೆಗೆ ಬಂದು ವಿಷಯ ತಿಳಿಸಿದ ಮರುದಿನ ಆತನ ಪೋಷಕರು ಮತ್ತು ಸಹೋದರ ಪೊಲೀಸರಿಗೆ ದೂರು ನೀಡಿದ್ದರು. ಪ್ರತ್ಯಕ್ಷದರ್ಶಿಗಳ ಮಾಹಿತಿ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋ ಆಧರಿಸಿ ಪೊಲೀಸರು ಪ್ರಾಥಮಿಕ ತನಿಖೆ ನಡೆಸಿ ಆರೋಪಿಗಳನ್ನು ಗುರುವಾರ ಬಂಧಿಸಿದ್ದಾರೆ.

ಸೌದಿ ಏರ್‌ಲೈನ್ಸ್ ವಿಮಾನದಲ್ಲಿ ಬೆಂಕಿ; ಪ್ರಯಾಣಿಕರು ಪಾರು



ಪೇಶಾವರ: ರಿಯಾದ್‌ನಿಂದ ಬಂದ ಸೌದಿ ಏರ್‌ಲೈನ್ಸ್ ವಿಮಾನವು ಗುರುವಾರ ಪಾಕಿಸ್ತಾನದ ಪೇಶಾವರದ ಬಚಾ ಖಾನ್ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಯುವಾಗ ಬೆಂಕಿ ಹೊತ್ತಿಕೊಂಡಿದೆ. ಎಲ್ಲಾ 276 ಪ್ರಯಾಣಿಕರು ಮತ್ತು 21 ಸಿಬ್ಬಂದಿಯನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಪ್ರಾಧಿಕಾರ (ಸಿಎಎ) ತಿಳಿಸಿದೆ. ಏರ್ ಟ್ರಾಫಿಕ್ ಕಂಟ್ರೋಲರ್‌ಗಳು ವಿಮಾನದ ಎಡ ಲ್ಯಾಂಡಿಂಗ್ ಗೇರ್‌ನಿಂದ ಹೊಗೆ ಮತ್ತು ಬೆಂಕಿ ಕಿಡಿಗಳು ಬರುತ್ತಿರುವುದನ್ನು ಕಂಡು ಪೈಲಟ್‌ಗಳಿಗೆ ಎಚ್ಚರಿಕೆ ನೀಡಿದರು. ಅವರು ವಿಮಾನ ನಿಲ್ದಾಣದ ಅಗ್ನಿಶಾಮಕ ಮತ್ತು ರಕ್ಷಣಾ ಸೇವೆಗಳಿಗೂ ಮಾಹಿತಿ ನೀಡಿದ್ದಾರೆ. ಅಗ್ನಿಶಾಮಕ ಟೆಂಡರ್‌ಗಳು ಸಮಯಕ್ಕೆ ಸರಿಯಾಗಿ ಕಾರ್ಯನಿರ್ವಹಿಸಿದವು. ತಕ್ಷಣ ಲ್ಯಾಂಡಿಂಗ್ ಗೇರ್‌ನಲ್ಲಿ ಬೆಂಕಿಯನ್ನು ನಿಯಂತ್ರಿಸಿ, ವಿಮಾನವನ್ನು ದೊಡ್ಡ ಅಪಘಾತದಿಂದ ರಕ್ಷಿಸಲಾಗಿದೆ. ಎಲ್ಲಾ 276 ಪ್ರಯಾಣಿಕರು ಮತ್ತು 21 ಸಿಬ್ಬಂದಿಯನ್ನು ತುಂಬಬಹುದಾದ ಸ್ಲೈಡ್‌ನೊಂದಿಗೆ ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು ಎಂದು ಸೈಫುಲ್ಲಾ ಹೇಳಿದ್ದಾರೆ.

ಭ್ರಷ್ಟಾಚಾರ ಪ್ರಕರಣ: ಇಂಡೋನೇಷ್ಯಾ ಮಾಜಿ ಸಚಿವರಿಗೆ 10 ವರ್ಷ ಸಜೆ

ಜಕಾರ್ತ: ಭ್ರಷ್ಟಾಚಾರ, ಅಧಿಕಾರ ದುರುಪಯೋಗ ಮತ್ತು ಖಾಸಗಿ ಮಾರಾಟಗಾರರ ಜತೆಗಿನ ಸಚಿವಾಲಯದ ಒಪ್ಪಂದಗಳಿಗೆ ಸಂಬಂಧಿಸಿದ ಲಂಚದ ಆರೋಪಗಳ ಮೇಲೆ ಇಂಡೋನೇಷ್ಯಾದ ಮಾಜಿ ಕೃಷಿ ಸಚಿವರಿಗೆ ಇಲ್ಲಿನ ನ್ಯಾಯಾಲಯವು 10 ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ. ಮಾಜಿ ಸಚಿವ ಸಯಹ್ರುಲ್ ಯಾಸಿನ್ ಲಿಂಪೂ ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು, ಭ್ರಷ್ಟಾಚಾರದಲ್ಲಿ ತೊಡಗಿದ್ದರು ಎಂದು ನ್ಯಾಯಾಲಯ ಆದೇಶದಲ್ಲಿ ತಿಳಿಸಿದೆ 10 ವರ್ಷದ ಜೈಲು ವಾಸದ ಜತೆಗೆ ಅವರು 15.45 ಲಕ್ಷ ದಂಡ ಪಾವತಿಸಬೇಕು. ಒಂದು ವೇಳೆ ದಂಡ ಪಾವತಿಸಲು ವಿಫಲರಾದರೆ, ಇನ್ನೂ ನಾಲ್ಕು ತಿಂಗಳು ಜೈಲು ಶಿಕ್ಷೆ ಎದುರಿಸಬೇಕು ಎಂದು ಆದೇಶದಲ್ಲಿ ಹೇಳಲಾಗಿದೆ.

ಪರಿಶಿಷ್ಟರಿಗೆ ಮೀಸಲಿಟ್ಟ ಹಣ 'ಗ್ಯಾರಂಟಿ'ಗೆ ಬಳಕೆ ಖಂಡಿಸಿ

ಮಾನಸ ಗಂಗೋತ್ರಿಯಲ್ಲಿ ದಲಿತ ವಿದ್ಯಾರ್ಥಿ ಒಕ್ಕೂಟ ಪ್ರತಿಭಟನೆ



ಪರಿಶಿಷ್ಟರ ಅಭ್ಯುದಯಕ್ಕೆ ಮೀಸಲಾದ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗುತ್ತಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ದಲಿತ ವಿದ್ಯಾರ್ಥಿ ಒಕ್ಕೂಟ ಪ್ರತಿಭಟಿಸಿತು.

ಮೈಸೂರು, ಜು.12(ಎಸ್‌ಬಿಡಿ)- ಪರಿಶಿಷ್ಟ ಸಮುದಾಯಗಳ ಅಭ್ಯುದಯಕ್ಕಾಗಿ ಮೀಸಲಿಟ್ಟ ಹಣವನ್ನು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿ, ಮೈಸೂರು ವಿಶ್ವವಿದ್ಯಾನಿಲಯದ ದಲಿತ ವಿದ್ಯಾರ್ಥಿ ಒಕ್ಕೂಟದ ವತಿಯಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಮಾನಸಗಂಗೋತ್ರಿ ಕ್ಲಾಕ್ ಟವರ್ ವೃತ್ತದಲ್ಲಿ ಜಮಾಯಿಸಿ ಪ್ರತಿಭಟನೆ ನಡೆಸಿದ ಒಕ್ಕೂಟದ ಸದಸ್ಯರು, ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪರಿಶಿಷ್ಟ ಜಾತಿ ಮತ್ತು ವರ್ಗದವರ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಎಸ್‌ಸಿಪಿ-ಟಿಎಸ್‌ಪಿ ಹಣದಲ್ಲಿ 25 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ನೀಡಲಾಗಿದೆ. ಆ ಹಣವನ್ನು ವಾಪಸ್ ಪಡೆದು ನಿಗದಿತ ಉದ್ದೇಶಕ್ಕೆ ಬಳಸಬೇಕು ಎಂದು ಘೋಷಣೆ ಮೂಲಕ ಆಗ್ರಹಿಸಿದರು.

ಈ ವೇಳೆ ಒಕ್ಕೂಟದ ಅಧ್ಯಕ್ಷ ಸಚಿನ್ ಮಾತನಾಡಿ, ಐದು ಗ್ಯಾರಂಟಿಗಳಿಗೆ ಹಣ ಹೊಂದಿಸಲು ದಲಿತರ ಹಣವನ್ನು ಬಳಕೆ ಮಾಡಿಕೊಳ್ಳಲಾಗಿದೆ. ಅಲ್ಲದೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಎಸ್ಸಿ-ಎಸ್ಟಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲು ನಿಗದಿಗೊಳಿಸಿದ್ದ ಅಂಕವನ್ನು ಶೇ.60ರಿಂದ ಶೇ.75ಕ್ಕೆ ಹೆಚ್ಚಿಸುವ ಮೂಲಕ ಮತ್ತೊಂದು ರೀತಿಯಲ್ಲಿ ಅನ್ಯಾಯ ಮಾಡಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಎಲ್ಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಮುಂಗಡ ಶುಲ್ಕ ಪಾವತಿಸದೆಯೇ ಪ್ರವೇಶ ಪಡೆಯಬಹುದು ಎಂದು ಆದೇಶ ಹೊರಡಿಸಲಾಯಿತು. ಆದರೆ ಈ ಆದೇಶವನ್ನು ಎಷ್ಟು ಕಾಲೇಜುಗಳಲ್ಲಿ ಪಾಲಿಸಲಾಗುತ್ತಿದೆ?. ಮುಂಗಡ ಪಾವತಿಸದಿದ್ದರೆ ಎಲ್ಲಿಯೂ ದಾಖಲು ಮಾಡಿಕೊಳ್ಳುವುದಿಲ್ಲ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ಯಾವುದೇ ಕಾರಣಕ್ಕೂ ಎಸ್‌ಇಪಿ-ಟಿಎಸ್‌ಪಿ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳಬಾರದು. ಕೂಡಲೇ ಸರ್ಕಾರ ದಲಿತ ವಿರೋಧಿ ನೀತಿಗಳನ್ನು ಹಿಂತೆಗೆದುಕೊಳ್ಳಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಒಕ್ಕೂಟದ ಪದಾಧಿಕಾರಿಗಳಾದ ನವೀನ್ ಕೋಳೂರು, ಗಿರೀಶ್ ಬೆಂಡರವಾಡಿ, ಮುತ್ತುರಾಜ್, ರೋಹಿತ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ದೇವರಾಜ ಮಾರುಕಟ್ಟೆ ಮಳಿಗೆದಾರರಿಗೆ ಪಾಲಿಕೆ ಆಯುಕ್ತರಿಂದ ಕಿರುಕುಳ ಆರೋಪ

ಕಾನೂನು ಸಚಿವರು, ಮುಖ್ಯ ಕಾರ್ಯದರ್ಶಿ, ಜಿಲ್ಲಾಧಿಕಾರಿಗಳಿಗೆ ಪತ್ರ



ಮೈಸೂರು, ಜು.12(ಎಂಕೆ)- ಮೈಸೂರಿನ ಪಾರಂಪರಿಕ ದೇವರಾಜ ಮಾರುಕಟ್ಟೆಯಲ್ಲಿನ ಮಳಿಗೆದಾರರನ್ನು ಖಾಲಿ ಮಾಡಿಸುವ ಕುರಿತು ನೋಟಿಸ್ ನೀಡಿ, ಕೆಪಿಪಿಇ ಕಾಯ್ದೆಯಡಿ ವಿಚಾರಣೆ ನಡೆಸುತ್ತಿರುವ ನಗರಪಾಲಿಕೆ ಆಯುಕ್ತರ ವರ್ತನೆ ವಿರುದ್ಧ ಕ್ರಮಕೈಗೊಳ್ಳುವಂತೆ ಮಳಿಗೆದಾರರು ಕಾನೂನು ಸಚಿವರು, ಮುಖ್ಯ ಕಾರ್ಯದರ್ಶಿ ಹಾಗೂ ಜಿಲ್ಲಾಧಿಕಾರಿಗೆ ಪತ್ರ ಬರೆದಿದ್ದಾರೆ.

ಜು.3 ರಂದು ಪಾಲಿಕೆ ಕಚೇರಿಯಲ್ಲಿ ವಿಚಾರಣೆ ನಡೆಸುವುದಾಗಿ ಮಳಿಗೆದಾರರಿಗೆ ನೋಟಿಸ್ ನೀಡಿದ್ದ ಆಯುಕ್ತರು, ವಿಚಾರಣೆ ವೇಳೆ ಮಳಿಗೆದಾರರ ಪರ ವಕೀಲರಿಗೆ ಆಸನಗಳ ವ್ಯವಸ್ಥೆ ಮಾಡದೇ, ವಿಚಾರಣೆಯಲ್ಲಿಯೂ ಭಾಗವಹಿಸಲು ಅವಕಾಶ ನೀಡದೆ ಅಗೌರವ ತೋರಿದ್ದಾರೆ.

ತಮ್ಮ ಅನಾಗರಿಕ ವರ್ತನೆಯಿಂದ ವಕೀಲರ ಭಾಗವಹಿಸುವಿಕೆಗೆ ಅವಕಾಶ ನೀಡಿದೆ, ಅವರನ್ನು ನಿರ್ಬಂಧಿಸಿ ಅಧಿಕಾರ ದುರುಪಯೋಗ ಮಾಡಿಕೊಂಡಿರುವ ಪಾಲಿಕೆ ಆಯುಕ್ತರು, ಮೈಸೂರಿನಂತಹ ಸಾಂಸ್ಕೃತಿಕ ನಗರದ ದೇವರಾಜ ಮಾರುಕಟ್ಟೆ ವ್ಯಾಪಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ತರಾತುರಿಯಲ್ಲಿದ್ದಾರೆ. ಕಾನೂನಿನ ಅರಿವಿಲ್ಲದೆ ದುರುದ್ದೇಶದಿಂದ ವಕೀಲರ ಭಾಗವಹಿಸುವಿಕೆಗೆ ನಿರ್ಬಂಧ ವಿಧಿಸಿದ್ದೇಕೆ ಎಂಬುದೇ ತಿಳಿಯದಾಗಿದೆ. ಅಲ್ಲದೆ ವಿಚಾರಣೆ ದಿನಾಂಕವನ್ನು ಪದೇ ಪದೆ ಮುಂದೂಡಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ. ಆದ್ದರಿಂದ ಇಂತಹ ಅಧಿಕಾರಿಯಿಂದ ನಮ್ಮಗಳಿಗೆ ತೊಂದರೆಯಾಗದಂತೆ ತಾವು ಬದಲಿ ಅಧಿಕಾರಿಯನ್ನು ನೇಮಿಸಬೇಕು ಎಂದು ಮನವಿ ಮಾಡಿದ್ದಾರೆ.

250ಕ್ಕೂ ಹೆಚ್ಚು ಮಳಿಗೆದಾರರಿಗೆ ನೋಟಿಸ್: ದೇವರಾಜ ಮಾರುಕಟ್ಟೆಯಲ್ಲಿ 800ಕ್ಕೂ ಮಳಿಗೆಗಳಿದ್ದು, ಇದುವರೆಗೆ 250ಕ್ಕೂ ಹೆಚ್ಚು ಮಳಿಗೆದಾರರಿಗೆ ತೆರವು ಮಾಡುವಂತೆ ನೋಟಿಸ್ ನೀಡಲಾಗಿದೆ. ನೋಟಿಸ್ ಸಂಬಂಧದ ವಿಚಾರಣೆಗೆ ಒಮ್ಮೆಗೆ 25 ಮಳಿಗೆದಾರರಿಗೆ ಹಾಜರಾಗುವಂತೆ ನೋಟಿಸ್ ನೀಡುತ್ತಿದ್ದಾರೆ. ಆದರೆ ವಿನಾಕಾರಣ ವಿಚಾರಣೆ ದಿನಾಂಕವನ್ನು ಮುಂದೂಡಿದ್ದಾರೆ. ಜು.10ಕ್ಕಿದ್ದ ವಿಚಾರಣೆಯನ್ನು ಈಗಾಗಲೇ ಜು.27ಕ್ಕೆ ಮುಂದೂಡಿದ್ದಾರೆ ಎಂದು ದೇವರಾಜ ಮಾರುಕಟ್ಟೆ ಮಳಿಗೆದಾರರ ಸಂಘದ ಅಧ್ಯಕ್ಷ ಮಹದೇವ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಆಷಾಢ ಶುಕ್ರವಾರ: ಗಿಡ ನೆಡುವ ಕಾರ್ಯಕ್ರಮ



ಚಾಮುಂಡಿಬೆಟ್ಟದ ಮೆಟ್ಟಲಿನ ರಸ್ತೆಬದಿ ಆಷಾಢ ಶುಕ್ರವಾರದ ಹಿನ್ನೆಲೆಯಲ್ಲಿ ಶಾಸಕ ಶ್ರೀವತ್ಸ ನೇತೃತ್ವದಲ್ಲಿ ಗಿಡ ನೆಡಲಾಯಿತು. ಈ ವೇಳೆ ಎಸಿಎಫ್ ದಿವ್ಯಶ್ರೀ, ನಿವಾಸಿಗಳು ಉಪಸ್ಥಿತರಿದ್ದರು. ಇದೇ ವೇಳೆ ಅರಣ್ಯ ಇಲಾಖೆ ವತಿಯಿಂದ 500 ಸಸಿ ನೆಡಲಾಯಿತು.

ವೇಶ್ಯಾವಾಟಿಕೆ ಅಡ್ಡೆ ಮೇಲೆ ಸಿಸಿಬಿ ಪೊಲೀಸರ ದಾಳಿ

ಮೈಸೂರು, ಜು.12(ಎಂಕೆ)- ವೇಶ್ಯಾವಾಟಿಕೆ ನಡೆಯುತ್ತಿದ್ದ ಅಡ್ಡೆ ಮೇಲೆ ದಾಳಿ ನಡೆಸಿರುವ ಸಿಸಿಬಿ ಪೊಲೀಸರು, ಇಬ್ಬರು ಯುವತಿಯರ ರಕ್ಷಣೆ ಮಾಡಿದ್ದಾರೆ.

ಮೈಸೂರಿನ ವಿಜಯನಗರ ಪೊಲೀಸ್ ಠಾಣಾ ವ್ಯಾಪ್ತಿಯ ವಿಜಯನಗರ 2ನೇ ಹಂತ, ಮಹದೇಶ್ವರ ಬಡಾವಣೆ, ವಾಟರ್ ಟ್ಯಾಂಕ್ ಬಳಿ ಇರುವ ಕರಣ್ ರೆಸಿಡೆನ್ಸಿಯಲ್ಲಿ ವೇಶ್ಯಾವಾಟಿಕೆ ನಡೆಯುತ್ತಿರುವ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಸಿಸಿಬಿ ಪೊಲೀಸರು, ಸ್ಥಳೀಯ ಯುವತಿಯರನ್ನು ಹಣದ ಆಮಿಷವೊಡ್ಡಿ ವೇಶ್ಯಾವಾಟಿಕೆ ದಂಧೆಯಲ್ಲಿ ತೊಡಗಿಸಿದ್ದ ಓರ್ವ ಆಸಾಮಿಯನ್ನು ಬಂಧಿಸಿ, ಇಬ್ಬರು ಯುವತಿಯರನ್ನು ರಕ್ಷಣೆ ಮಾಡಿದ್ದಾರೆ. ಈ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣದ ದಾಖಲಾಗಿದೆ.

2ನೇ ಬಾರಿ ದಾಳಿ: ಈ ಮೊದಲು ಕೂಡ ಸಿಸಿಬಿ ಪೊಲೀಸರು, ಇದೇ ಕರಣ್ ರೆಸಿಡೆನ್ಸಿ ಮೇಲೆ ದಾಳಿ ನಡೆಸಿದ್ದರು. ದಾಳಿ ಬಳಿಕ ಪ್ರಕರಣ ದಾಖಲಿಸಿಕೊಂಡು, ಶಿಸ್ತುಕ್ರಮ ಕೈಗೊಳ್ಳದೇ ಇರುವುದರಿಂದ ಮತ್ತೆ ವೇಶ್ಯಾವಾಟಿಕೆ ನಡೆಯಲು ದಾರಿಮಾಡಿಕೊಟ್ಟಿದೆ. ಈ ಕರಣ್ ರೆಸಿಡೆನ್ಸಿಯಲ್ಲಿ ವೇಶ್ಯಾವಾಟಿಕೆ ನಿರಂತರವಾಗಿ ನಡೆಯುತ್ತಿದೆ. ಇದನ್ನು ತಡೆಗಟ್ಟುವಲ್ಲಿ ಪೊಲೀಸರ ವೈಫಲ್ಯವಿದೆ ಎಂದು ಸ್ಥಳೀಯರು ದೂರಿದ್ದಾರೆ.

ಕೆ.ಹೆಚ್.ರಾಮಯ್ಯ ಜಯಂತಿ ಆಚರಣೆ



ಮೈಸೂರಿನಲ್ಲಿ ಒಕ್ಕಲಿಗ ಮುಖಂಡರು ಶುಕ್ರವಾರ ರಾಜ್ಯ ಒಕ್ಕಲಿಗ ಸಂಘದ ಸಂಸ್ಥಾಪಕರಾದ ಕೆ.ಹೆಚ್.ರಾಮಯ್ಯ ಅವರ ಜಯಂತಿ ಆಚರಣೆ ಮಾಡಿದರು. ಚಾಮುಂಡಿಬೆಟ್ಟ ತಪ್ಪಲಿನಲ್ಲಿರುವ ಕೆ.ಹೆಚ್.ರಾಮಯ್ಯ ಸ್ಮಾರಕದಲ್ಲಿ ಪುಷ್ಪ ನಮನ ಸಲ್ಲಿಸಿ, ಸಿಹಿ ಹಂಚಲಾಯಿತು. ಈ ವೇಳೆ ಒಕ್ಕಲಿಗರ ಸಂಘದ ರಾಜ್ಯಾಧ್ಯಕ್ಷ ಸಿ.ಜಿ.ಗಂಗಾಧರ್, ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಜಗದೀಶ್, ಶಿವಶಂಕರ್, ಶಿವಲಿಂಗಯ್ಯ, ರಘುರಾಂ, ಹನುಮಂತಯ್ಯ, ಸುಬ್ಬೇಗೌಡ, ಯಶ್ವಂತ್, ಸ್ವಾಮಿ, ರವಿ ಒಲಂಪಿಯಾ, ತಾರಾಮಣಿ, ರಮೇಶ್, ಕುಮಾರ್ ಗೌಡ ಇನ್ನಿತರರು ಉಪಸ್ಥಿತರಿದ್ದರು.

ಎಂಆರ್‌ಸಿಗೆ ಆಫ್ ಬೆಟ್ಟಿಂಗ್ ರೇಸಿಂಗ್‌ಗೆ ಲೈಸೆನ್ಸ್



ಮೈಸೂರು, ಜು.12- ಮೈಸೂರು ರೇಸ್ ಕ್ಲಬ್ (ಎಂಆರ್‌ಸಿ) ನಲ್ಲಿ ಆಫ್ ಬೆಟ್ಟಿಂಗ್ ರೇಸಿಂಗ್‌ಗೆ ಸರ್ಕಾರ ಲೈಸೆನ್ಸ್ ನೀಡಿದೆ. ಆರು ರೇಸಿಂಗ್ ದಿನಗಳಿಗೆ ಅನುಮತಿಸಿದ್ದು, ನಾಳೆ (ಶನಿವಾರ) ರೇಸ್ ನಡೆಯಲಿದೆ ಎಂದು ಎಂಆರ್‌ಸಿ ಅಧ್ಯಕ್ಷ ಕೆ.ಎಂ.ಚಂದ್ರೇಗೌಡ ತಿಳಿಸಿದ್ದಾರೆ. ಈಗ ಪ್ರತಿ ರೇಸ್‌ಗೆ ಸರ್ಕಾರದ ಅನುಮತಿ ಪಡೆಯಬೇಕಿದೆ. ಬೆಂಗಳೂರು ಟರ್ಫ್ ಕ್ಲಬ್‌ಗೂ ರೇಸಿಂಗ್‌ಗೆ ಲೈಸೆನ್ಸ್ ನೀಡಲಾಗಿದೆ.

ನಿರೂಪಕಿ ಅಪರ್ಣಾ ಪಂಚಭೂತಗಳಲ್ಲಿ ಲೀನ



ಬೆಂಗಳೂರು, ಜು.12- ಶ್ವಾಸಕೋಶ ಕ್ಯಾನ್ಸರ್‌ನಿಂದ ನಿಧನರಾದ ಖ್ಯಾತ ನಿರೂಪಕಿ, ನಟಿ ಅಪರ್ಣಾ ಅವರ ಅಂತ್ಯಸಂಸ್ಕಾರ ಬನಶಂಕರಿ ವಿದ್ಯುತ್ ಚಿತಾಗಾರದಲ್ಲಿ ನೆರವೇರಿತು. ಕುಟುಂಬಸ್ಥರು, ಆಪ್ತರು, ಚಿತ್ರರಂಗದ ಗಣ್ಯರು ಸೇರಿ ನೂರಾರು ಜನರ ಸಮ್ಮುಖದಲ್ಲಿ ಪೊಲೀಸ್ ಗೌರದೊಂದಿಗೆ, ಸ್ಮಾರ್ತ ಬ್ರಾಹ್ಮಣ ಸಂಪ್ರದಾಯದ ಪ್ರಕಾರ ಅಂತ್ಯಕ್ರಿಯೆ ನಡೆಯಿತು. ಇದಕ್ಕೂ ಮುನ್ನ ಬನಶಂಕರಿಯ ಅಪರ್ಣಾ ಅವರ ಸ್ವಗೃಹದಲ್ಲೇ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಈ ವೇಳೆ 'ಸಪ್ತ ಸಾಗರದಾಚೆ ಎಲ್ಲೋ' ಹಾಡಿನ ಮೂಲಕ ಚಿತ್ರರಂಗದ ಆಪ್ತರು ಕಣ್ಣೀರ ವಿದಾಯ ಹೇಳಿದರು.



ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ, ಶಾಸಕ ಮುನಿರತ್ನ, ನಟ ಶ್ರೀನಾಥ್, ರಾಘವೇಂದ್ರ ರಾಜಕುಮಾರ್, ತೇಜಸ್ವಿನಿ ಅನಂತ ಕುಮಾರ್, ರಮೇಶ್ ಅರವಿಂದ್, ವಿನಯ್ ರಾಜಕುಮಾರ್, ನಿರೂಪಕಿ ಶ್ವೇತಾ ಚೆಂಗಪ್ಪ ಬ್ರಹ್ಮಾಂಡ ಗೂರೂಜಿ ನರೇಂದ್ರ ಬಾಬು ಶರ್ಮಾ, ಇಂದ್ರಜಿತ್ ಲಂಕೇಶ್, ಮಂಡ್ಯ ರಮೇಶ್, ತಾರಾ ಸೇರಿ ಚಿತ್ರರಂಗ ರಾಜಕೀಯ ನಾಯಕರು ಸೇರಿ ವಿವಿಧ ಗಣ್ಯರು ಅಂತಿಮ ದರ್ಶನ ಪಡೆದರು. ಸೃಜನ್ ಲೋಕೇಶ್ ಹಾಗೂ ಕುಟುಂಬಸ್ಥರು ಅಂತ್ಯಸಂಸ್ಕಾರದ ವೇಳೆ ಭಾಗಿಯಾಗಿದ್ದರು. ಈ ವೇಳೆ ಅಪರ್ಣಾ ಪತಿ ನಾಗರಾಜ್‌ಗೆ ಸೃಜನ್ ಲೋಕೇಶ್ ಸಾಂತ್ವನ ಹೇಳಿದರು.

ಮಾತೃಭಾಷೆ ಜೊತೆಗೆ ಇಂಗ್ಲಿಷ್, ಹಿಂದಿ ಕಲಿಕೆ ಅನಿವಾರ್ಯ



ಮೈಸೂರು ಮರಿಮಲ್ಲಪ್ಪ ಪ್ರೌಢಶಾಲೆ ಆವರಣದಲ್ಲಿ ಭಾಷಾ ಸಮ್ಮಿಲನ ಸಂಘ ಉದ್ಘಾಟಿಸಲಾಯಿತು.

ಮೈಸೂರು, ಜು.12(ಎಸ್‌ಪಿಎನ್)- ತಂತ್ರಜ್ಞಾನ ಮುಂದುವರೆದಂತೆ ಶೈಕ್ಷಣಿಕ ಕ್ಷೇತ್ರದಲ್ಲೂ ಸಾಕಷ್ಟು ಬದಲಾವಣೆಗಳಾತ್ತಿವೆ. ಪ್ರಸ್ತುತ ಪ್ರಪಂಚದಾದ್ಯಂತ ಸಂವಹನಕ್ಕೆ ಇಂಗ್ಲಿಷ್ ಕಲಿಕೆ ವಿದ್ಯಾರ್ಥಿಗಳಿಗೆ ಅನಿವಾರ್ಯ ಎಂದು ಮರಿಮಲ್ಲಪ್ಪ ಪ್ರೌಢ ಶಾಲೆಯ ಶೈಕ್ಷಣಿಕಾಧಿಕಾರಿ ಮಂಗಳ ಮುದ್ದುಮಾದಪ್ಪ ಅಭಿಪ್ರಾಯಪಟ್ಟರು.

ಮೈಸೂರು ಮರಿಮಲ್ಲಪ್ಪ ಪ್ರೌಢಶಾಲೆ ಆವರಣದಲ್ಲಿ ಭಾಷಾ ಸಮ್ಮಿಲನ ಸಂಘ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಒಂದೂವರೆ ಸಾವಿರ ವರ್ಷ ಇತಿಹಾಸವುಳ್ಳ ಕನ್ನಡವನ್ನು ಕಲಿತು, ಜೊತೆಗೆ ಇಂಗ್ಲಿಷ್, ರಾಷ್ಟ್ರದ ಅತೀ ಹೆಚ್ಚು ರಾಜ್ಯಗಳಲ್ಲಿ ಮಾತನಾಡುವ ಹಿಂದಿ ಭಾಷಾ ಕಲಿಕೆ ವಿದ್ಯಾರ್ಥಿಗಳಿಗೆ ಅನಿವಾರ್ಯ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಪ್ರೌಢಶಾಲಾ ಹಂತದಲ್ಲೇ ಪ್ರಯತ್ನಿಸಬೇಕು ಎಂದು ಕಿವಿಮಾತು ಹೇಳಿದರು.

ಸಂಸ್ಕೃತ ದೇವನಾಗರಿ ಭಾಷೆ. ಈ ಭಾಷೆಯಲ್ಲಿ ಮಹಾಭಾರತ, ರಾಮಾಯಣ ಸೇರಿದಂತೆ ಇತರೆ ಗ್ರಂಥಗಳು ರಚನೆಯಾಗಿದ್ದವು. ಈ ಗ್ರಂಥಗಳನ್ನು ಜನಸಾಮಾನ್ಯರು ಮಾತನಾಡುವ ಭಾಷೆಗಳಲ್ಲಿ ತರ್ಜುಮೆಗೊಂಡು ಪರಿಚಿತಗೊಂಡಿವೆ. ಹಾಗಾಗಿ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮುಂದಿನ ವಿದ್ಯಾಭ್ಯಾಸಕ್ಕೆ ಭಾಷೆಯ ಮಹತ್ವವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ತಿಳಿಹೇಳಿದರು.

ಇಂಜಿನಿಯರ್ ಹಾಗೂ ಯುವ ಬರಹಗಾರ ಮಂಜುನಾಥ್ ಕುಣಿಗಲ್ ಮಾತನಾಡಿ, ವಿಜ್ಞಾನ-ತಂತ್ರಜ್ಞಾನ ಆವಿಷ್ಕಾರಗೊಂಡಂತೆ ಇದರ ಸಂವಹನಕ್ಕಾಗಿ ಪ್ರಪಂಚದಾದ್ಯಂತ ವ್ಯವಹರಿಸುವ ಇಂಗ್ಲಿಷ್ ಭಾಷೆಯನ್ನು ಮಾತೃ ಭಾಷೆ ಜೊತೆಗೆ ಪ್ರತಿಯೊಬ್ಬರು ಕಲಿಯಬೇಕು. ಪ್ರೌಢಶಿಕ್ಷಣದ ನಂತರ ಮುಂದಿನ ವಿದ್ಯಾಭ್ಯಾಸಕ್ಕೆ ಭಾಷಾ ಸಂವಹನ ಅತೀ ಮುಖ್ಯವಾಗುತ್ತದೆ. ತಾಂತ್ರಿಕ ಶಿಕ್ಷಣ, ವೈದ್ಯಕೀಯ ಶಿಕ್ಷಣ, ಉನ್ನತ ಶಿಕ್ಷಣದ ವಿವಿಧ ವಿಷಯಗಳ ಅಧ್ಯಯನಕ್ಕೆ ಹಾಗೂ ಕಂಪ್ಯೂಟರ್ ಕ್ಷೇತ್ರದಲ್ಲಿ ಭಾಷಾ ವ್ಯವಹಾರಕ್ಕೆ ಇಂಗ್ಲಿಷ್ ಬಳಕೆಯನ್ನು ಒತ್ತಿ ಹೇಳಿದರು.

ಈ ವೇಳೆ ಮರಿಮಲ್ಲಪ್ಪ ಪ್ರೌಢ ಶಾಲೆಯ ಮುಖ್ಯಶಿಕ್ಷಕಿ ಎಸ್.ಮಮತ, ಸಹ ಮುಖ್ಯ ಶಿಕ್ಷಕ ಹೆಚ್.ಎಸ್.ಮಹೇಶ್ ಸೇರಿದಂತೆ ಇತರರು ಬೋಧಕ ವರ್ಗ ಉಪಸ್ಥಿತರಿದ್ದರು.

ಅತ್ಯಾಧುನಿಕ ಸಂಚಾರ ನಿಯಮ ಉಲ್ಲಂಘನೆ ನಿಯಂತ್ರಣ ಸಾಧನ ಎಐ ಕ್ಯಾಮರಾ ಅವಾಂತರ



ಸಂಚಾರಿ ನಿಯಮ ಪಾಲಿಸಿದವರಿಗೂ ದುಗುಡ ತಂದಿರುವ ದಂಡಾಸ್ತ್ರ ಸಂದೇಶ!

ಮೈಸೂರು, ಜು.12(ಎಂಕೆ)- ಮೈಸೂರು ನಗರದಾದ್ಯಂತ ಸಂಚಾರ ನಿಯಮ ಉಲ್ಲಂಘನೆ ನಿಯಂತ್ರಣಕ್ಕೆ ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ (ಐಟಿಎಂಎಸ್) ಅಡಿಯಲ್ಲಿ ಅಳವಡಿಸಿರುವ ಕೃತಕ ಬುದ್ಧಿವಂತೆ(Artificial Intelligence-AI)ಕ್ಯಾಮರಾಗಳು ಸವಾರರಲ್ಲಿ ಆತಂಕ ಸೃಷ್ಟಿಸಿವೆ...!

ನಗರದ 27 ಜಂಕ್ಷನ್‌ಗಳಲ್ಲಿ ಅಳವಡಿಸಿರುವ ಎಐ ಕ್ಯಾಮರಾಗಳು ಸಂಚಾರ ನಿಯಮ ಉಲ್ಲಂಘನೆ ಮಾಡದವರಿಗೂ ದಂಡ ಪಾವತಿಸುವಂತೆ ಸಂದೇಶಗಳನ್ನು ರವಾನಿಸುತ್ತಿರುವುದು ವಾಹನ ಸವಾರರ ಆತಂಕಕ್ಕೆ ಕಾರಣವಾಗಿದೆ. ಹೆಲ್ಮೆಟ್, ಸೀಟ್‌ಬೆಲ್ಟ್ ಹಾಕಿದ್ದರೂ ಸಂಚಾರ ನಿಯಮ ಉಲ್ಲಂಘಿಸಿದ್ದೀರಿ... ದಂಡ ಪಾವತಿಸಿ ಸಂದೇಶಗಳನ್ನು ಕಂಡ ಸವಾರರ ಎದೆ ಬಡಿತ ಹೆಚ್ಚಾಗಿದೆ.

ಹೆಲ್ಮೆಟ್ ಧರಿಸದೆ ವಾಹನ ಚಾಲನೆ ಮಾಡುವುದು, ಸಿಗ್ನಲ್ ಜಂಪ್ ಮಾಡುವುದು, ಅತೀ ವೇಗದ ಚಾಲನೆ, ಸೀಟ್ ಬೆಲ್ಟ್ ಧರಿಸದಿರುವುದು ಸೇರಿದಂತೆ ಹಲವು ರೀತಿಯ ಸಂಚಾರ ನಿಯಮಗಳ ಉಲ್ಲಂಘನೆ ವೇಳೆ ಫೋಟೋ ಸಹಿತ ಸೆರೆ ಹಿಡಿದು ಕೂಡಲೇ ವಾಹನ ಮಾಲೀಕರ ಮೊಬೈಲ್ ಸಂದೇಶ ರವಾನಿಸುವ ಕೃತಕ ಬುದ್ಧಿಮತ್ತೆ ಕ್ಯಾಮರಾಗಳಲ್ಲಿ ತಾಂತ್ರಿಕ ದೋಷದಿಂದಾಗಿ ಸಂಚಾರ ನಿಯಮ ಉಲ್ಲಂಘಿಸದವರಿಗೂ ಸಂದೇಶಗಳು ರವಾನೆಯಾಗುತ್ತಿವೆ.

ಮೈಸೂರು ನಗರದಲ್ಲಿ 120 ರೆಡ್‌ಲೈಟ್ ವೈಲೆಷನ್ ಡಿಟೆಕ್ಷನ್ ಕ್ಯಾಮರಾಗಳ ಜೊತೆಗೆ 250 ಆರ್ಟಿಫಿಷಿಯಲ್ ಇಂಟಲಿಜೆಂಟ್ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಅಡ್ಡಾದಿಡ್ಡಿಯಾಗಿ ಸಂಚರಿಸುವ, ಹೆಲ್ಮೆಟ್ ಧರಿಸದೆ ಸಂಚಾರ ನಿಯಮ ಉಲ್ಲಂಘಿಸುವವರ ಮೇಲೆ ವಿಧಿಸಬೇಕಾದ ದಂಡಾಸ್ತ್ರ ಅಮಾಯಕರ ಮೇಲೆ ಪ್ರಯೋಗವಾಗುತ್ತಿದೆ. ವ್ಯವಸ್ಥಿತವಾಗಿ ಕಾರ್ಯನಿರ್ವಹಿಸದ ಎಐ ಕ್ಯಾಮರಾಗಳನ್ನು ಕೂಡಲೇ ಸರಿಪಡಿಸಿ, ಇಲ್ಲವೇ ಕ್ಯಾಮರಾಗಳನ್ನು ತೆಗೆದುಹಾಕಿ. ಮೊದಲಿನಂತೆಯೇ ಕಾರ್ಯಚಟುವಟಿಕೆ ಕೈಗೊಳ್ಳಲಿ ಎಂದು ಸಂಚಾರ ನಿಯಮ ಉಲ್ಲಂಘಿಸದಿದ್ದರೂ ದಂಡ ಪಾವತಿ ಸಂದೇಶ ಪಡೆದವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕನಿಷ್ಠ ಮೂರು ತಿಂಗಳು ಬೇಕು: ಎಐ ಕ್ಯಾಮರಾಗಳಲ್ಲಿನ ತಾಂತ್ರಿಕ ದೋಷದಿಂದಾಗಿ ಸಂಚಾರ ನಿಯಮ ಉಲ್ಲಂಘಿಸದವರಿಗೂ ದಂಡ ಪಾವತಿಸಿ ಸಂದೇಶ ರವಾನೆಯಾಗುತ್ತಿರುವ ಕುರಿತು ಹಲವರು ದೂರಿದ್ದಾರೆ. ಕ್ಯಾಮರಾಗಳಲ್ಲಿ ತಾಂತ್ರಿಕ ದೋಷ ಇದ್ದು, ಸದ್ಯದಲ್ಲಿಯೇ ಸರಿಪಡಿಸುವ ಸಾಧ್ಯತೆ ಇದೆ. ಎಐ ಕ್ಯಾಮರಾಗಳು ತೆಗೆದ ಫೋಟೋಗಳನ್ನು ಪರಿಶೀಲಿಸಿ ನಂತರ ಪ್ರಕರಣ ದಾಖಲಿಸಲಾಗುವುದು. ಆದ್ದರಿಂದ ಸಂದೇಶ ಬಂದಾಗ ಸವಾರರು ಆತಂಕಪಡ ಬಾರದು ಎಂದು ಪೊಲೀಸ್ ಅಧಿಕಾರಿಯೊಬ್ಬರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಲೋಕಾಯುಕ್ತ ಅಧಿಕಾರಿಗಳ ಎದುರು ಕಣ್ಣೀರು

ದೂರು ಸ್ವೀಕಾರ ಸಭೆಯಲ್ಲಿ ಅರ್ಜಿದಾರರಿಂದ ಲಂಚದ ಬೇಡಿಕೆ ಆರೋಪ



ಮಡಿಕೇರಿ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ದೂರು ಸ್ವೀಕಾರ ಸಭೆಯಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಸಾರ್ವಜನಿಕರ ಕುಂದುಕೊರತೆ ಆಲಿಸಿದರು.

ಮಡಿಕೇರಿ, ಜು.12–ನಗರದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಸಾರ್ವಜನಿಕರ ದೂರು ಸ್ವೀಕಾರ ಸಭೆಯಲ್ಲಿ ಲೋಕಾಯುಕ್ತ ಅಧಿಕಾರಿಗಳ ಎದುರು ಕೆಲ ಅರ್ಜಿದಾರರು ಲಂಚದ ಬೇಡಿಕೆ ಪ್ರಸ್ತಾಪಿಸಿ ಕಣ್ಣೀರು ಸುರಿಸಿದರು.

ಮಡಿಕೇರಿ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ನೇತೃತ್ವದಲ್ಲಿ ನಡೆದ ಸಾರ್ವಜನಿಕರ ಕುಂದುಕೊರತೆ ಸಭೆಯಲ್ಲಿ ಸಾರ್ವಜನಿಕರೊಬ್ಬರು ಮಾತನಾಡಿ, ಪೊನ್ನಂಪೇಟೆಯಲ್ಲಿ ಐದೂವರೆ ಸೆಂಟ್ ಜಾಗವಿದ್ದು, ಪೌತಿಖಾತೆ ಮಾಡಲು ಅಧಿಕಾರಿಗಳು 50 ಸಾವಿರ ರೂ. ಲಂಚದ ಬೇಡಿಕೆ ಇಡುತ್ತಿದ್ದಾರೆ ಎಂದು ಕಣ್ಣೀರು ಸುರಿಸಿದರು.

ಬೆಂಗಳೂರಿನಲ್ಲಿ ವಾಸವಿರುವ ನನಗೆ ವಯಸ್ಸಾಗಿದೆ. ಪೊನ್ನಂಪೇಟೆಗೆ ಹೋಗಿ ಬರಲು ತುಂಬಾ ತೊಂದರೆಯಾಗುತ್ತಿದೆ. ಮಗಳ ಮದುವೆ ಮಾಡಬೇಕಿದ್ದು, ತುಂಬಾ ತೊಂದರೆಯಾಗಿದೆ. ಎರಡು ವರ್ಷದಿಂದ ಪೌತಿ ಖಾತೆ ಮಾಡಿಕೊಡದೆ ಸತಾಯಿಸುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.

ನಂತರ ಮಾತನಾಡಿದ ಲೋಕಾಯುಕ್ತ ಡಿವೈಎಸ್‌ಪಿ ಪವನ್‌ಕುಮಾರ್, ನಿಮ್ಮ ಕೆಲಸವನ್ನು ಕಾಲಮಿತಿಯ ಆದ್ಯತೆ ಮೇಲೆ ಮಾಡಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ಮತ್ತೊಬ್ಬ ಅರ್ಜಿದಾರರಾದ ಮಹಾಲಕ್ಷ್ಮಿ, ನಮ್ಮ ಜಾಗದ ಖಾತೆ ಮಾಡಿಕೊಡದೆ ಕಂದಾಯ ಅಧಿಕಾರಿಗಳು ಒಂದೂವರೆ ವರ್ಷದಿಂದ ಅಲೆದಾಡಿಸುತ್ತಿದ್ದಾರೆ. ಖಾತೆ ಮಾಡಿಸಿಕೊಡುವಂತೆ ಲೋಕಾಯುಕ್ತರಲ್ಲಿ ಮನವಿ ಮಾಡಿದರು. ಬಳಿಕ ಪೌರಾಯುಕ್ತ ವಿಜಯ್ ಮಾತನಾಡಿ, ಇವರಿಗೆ ಹೊಸದಾಗಿ ಖಾತೆ ಆಗಬೇಕಿದೆ ಶೀಘ್ರ ಖಾತೆ ಮಾಡಿಕೊಡಲಾಗುವುದು ಎಂದು ತಿಳಿಸಿದರು.

ಮತ್ತೊಬ್ಬ ದೂರುದಾರ ಸೋಮವಾರಪೇಟೆ ತಾಲೂಕಿನ ಬಿಳಿಗೇರಿ ಗ್ರಾಮದ ಪಿ.ಕೆ. ವಸಂತ ಮಾತನಾಡಿ, ಜಾಗವನ್ನು ದುರಸ್ತಿ ಮಾಡಿಕೊಡುವಂತೆ ಹಲವು ವರ್ಷಗಳಿಂದ ತಾಲೂಕು ಕಚೇರಿಗೆ ಮನವಿ ಸಲ್ಲಿಸಿದರೂ ಕೆಲಸಗಳು ಆಗಿಲ್ಲ ಎಂದು ದೂರಿದರು.

ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ

ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರ ದೂರುಗಳು ಕಡಿಮೆಯಾಗಿವೆ. ಇದರಿಂದ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ಮತ್ತು ಬದಲಾವಣೆಯಾಗುತ್ತಿರುವುದು ಕಂಡು ಬರುತ್ತಿದೆ ಎಂದು ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಹೇಳಿದರು.

ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸಿದಲ್ಲಿ ಕಲ್ಯಾಣ ರಾಜ್ಯ ನಿರ್ಮಾಣ ಮಾಡಬಹುದು. ಆ ನಿಟ್ಟಿನಲ್ಲಿ ಎಲ್ಲರೂ ಸ್ಪಂದಿಸಬೇಕು. ಒಳ್ಳೆಯ ಕೆಲಸ ಮಾಡಿದ್ದಲ್ಲಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆಯಲಿದೆ ಎಂದರು.

ಆಯಾ ಇಲಾಖೆ ಕಚೇರಿಯಲ್ಲಿ ಹಾಜರಾತಿಗಾಗಿ ಬಯೋಮೆಟ್ರಿಕ್ ಅಳವಡಿಸಬೇಕು. ಚಲನವಲನ ವಹಿಯನ್ನು ದಾಖಲಿಸಬೇಕು ಎಂದು ಸೂಚಿಸಿದರು.

ಬಿಜೆಪಿ ನಾಯಕರ ಬಂಧನ ಖಂಡಿಸಿ ಪ್ರತಿಭಟನೆ



ಮಡಿಕೇರಿ ಜನರಲ್ ತಿಮ್ಮಯ್ಯ ವೃತ್ತದ ಬಳಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಜು.12–ಮುಡಾ ಹಗರಣದ ವಿರುದ್ಧ ಪ್ರತಿಭಟನೆ ನಡೆಸಲು ಮೈಸೂರಿಗೆ ತೆರಳುತ್ತಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಹಲವು ಶಾಸಕರನ್ನು ಪೊಲೀಸರು ಬಂಧಿಸಿರುವುದನ್ನು ಖಂಡಿಸಿ ಕೊಡಗು ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ನೇತೃತ್ವದಲ್ಲಿ ನಗರದ ಜನರಲ್ ತಿಮ್ಮಯ್ಯ ವೃತ್ತದ ಬಳಿ ಜಮಾಯಿಸಿದ ಪಕ್ಷದ ಕಾರ್ಯಕರ್ತರು, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಮುಡಾ ನಿವೇಶನ ಹಂಚಿಕೆ ಹಗರಣ ಮತ್ತು ವಾಲ್ಮೀಕಿ ನಿಗಮದಲ್ಲಿ ಕೋಟ್ಯಾಂತರ ರೂ. ಭ್ರಷ್ಟಾಚಾರ ಎಸಗಲಾಗಿದೆ. ಈ ಹಿನ್ನೆಲೆಯಲ್ಲಿ ಪ್ರಕರಣದ ಪಾರದರ್ಶಕ ತನಿಖೆಗಾಗಿ ಸಿಬಿಐಗೆ ಒಪ್ಪಿಸಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್‌ನ ಭ್ರಷ್ಟಾಚಾರವನ್ನು ಬಯಲಿಗೆಳೆಯಲು ಮೈಸೂರಿಗೆ ಆಗಮಿಸುತ್ತಿದ್ದ ಬಿಜೆಪಿ ನಾಯಕರನ್ನು ಪೊಲೀಸರು ಬೆಂಗಳೂರಿನ ಕೆಂಗೇರಿಯಲ್ಲೇ ಬಂಧಿಸಿದ್ದಾರೆ. ಈ ಮೂಲಕ ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷದ ಹೋರಾಟವನ್ನು ಹತ್ತಿಕ್ಕಲು ಪ್ರಯತ್ನಿಸಿದೆ. ಮುಡಾ ಮತ್ತು ವಾಲ್ಮೀಕಿ ನಿಗಮದ ಹಗರಣದಲ್ಲಿ ಮುಖ್ಯಮಂತ್ರಿಗಳೇ ಶಾಮೀಲಾಗಿದ್ದಾರೆ. ಸರ್ಕಾರದ ಭ್ರಷ್ಟಾಚಾರ ವಿರೋಧಿಸುವ ಬಿಜೆಪಿ ಮುಖಂಡರನ್ನು ಗುರಿಯಾಗಿಸಿ ಬಂಧಿಸಲಾಗಿದೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಇದಕ್ಕೆ ಸರ್ಕಾರವೇ ಕಾರಣವಾಗಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಶಾಸಕ ಕೆ.ಜಿ. ಬೋಪಯ್ಯ, ಬಿಜೆಪಿ ಪ್ರಮುಖರಾದ ಮಹೇಶ್ ಜೈನಿ, ನೆಲ್ಲಿರ ಚಲನ್, ಬಿ.ಕೆ.ಅರುಣ್ ಕುಮಾರ್, ಸುಬ್ರಹ್ಮಣ್ಯ ಉಪಾಧ್ಯಾಯ, ಕನ್ನಂಡ ಸಂಪತ್, ಡೀನ್ ಬೋಪಣ್ಣ, ಅರುಣ್ ಶೆಟ್ಟಿ, ಬೆಪ್ಪುರನ ಮೇದಪ್ಪ, ಮನು ಮಂಜುನಾಥ್, ಪಾಂಡೀರ ಪೊಣಚ್ಚ, ಅನಿತಾ ಪೂವಯ್ಯ, ಚಿತ್ರಾವತಿ, ಸೌಮ್ಯ ಸುನೀಲ್ ಭಾಗವಹಿಸಿದ್ದರು.

ಸೆ.9ರವರೆಗೆ ವಾಹನ ಸಂಚಾರ ನಿಷೇಧ

ವಿರಾಜಪೇಟೆ, ಜು.12– ತಾಲೂಕಿನ ವಿರಾಜಪೇಟೆ–ಕರಡ ಜಿಲ್ಲಾ ಮುಖ್ಯರಸ್ತೆಯ ತೋರ ಬಳಿ ರಸ್ತೆಬದಿ ಬಿರುಕು ಬಿಟ್ಟು ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಈ ಮಾರ್ಗದಲ್ಲಿ ಎಲ್ಲಾ ವಾಹನಗಳ ಸಂಚಾರವನ್ನು ಸೆ.9ರ ವರೆಗೆ ನಿಷೇಧಿಸಲಾಗಿದೆ.

ವಿರಾಜಪೇಟೆ–ಕರಡ ಮುಖ್ಯ ರಸ್ತೆಯ ತೆರಮೆಮೊಟ್ಟೆಯ ತೋರ ಬಳಿ ಕುಸಿದಿರುವ ಭಾಗದಲ್ಲಿನ 400 ಮೀಟರ್ ರಸ್ತೆಯಲ್ಲಿ ಸಾರ್ವಜನಿಕರ ಹಿತದೃಷ್ಟಿ ಹಾಗೂ ಮುಂಜಾಗ್ರತಾ ಕ್ರಮವಾಗಿ ಮುಂಬರುವ ಸೆ.9ರವರೆಗೆ ಎಲ್ಲಾ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ.

ಸಾರ್ವಜನಿಕರು ತೋರ–ಕೆದಮುಳ್ಳೂರು–ಬೋಯಿಕೇರಿ, ತೋರ–ಹೆಗ್ಗಳ–ಆರ್ಜಿ ಮಾರ್ಗವಾಗಿ ಬದಲಿ ರಸ್ತೆಯಲ್ಲಿ ಸಂಚರಿಸಬೇಕು. ಈ ಬಗ್ಗೆ ಮೋಟಾರ್ ಕಾಯ್ದೆ ಹಾಗೂ ವಾಹನ ನಿಯಮ ಸೂಚನಾ ಫಲಕ ಅಳವಡಿಸಲು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಸೂಚನೆ ನೀಡಲಾಗಿದೆ.

ತಹಸೀಲ್ದಾರ್‌ಗೆ ಸಿಐಟಿಯು ಮನವಿ ಸಲ್ಲಿಕೆ



ವಿರಾಜಪೇಟೆ ತಹಸೀಲ್ದಾರ್ ರಾಮಚಂದ್ರ ಅವರಿಗೆ ಸಿಐಟಿಯು ಕಾರ್ಯಕರ್ತರು ವಿವಿಧ ಬೇಡಿಕೆ ಈಡೇರಿಸುವಂತೆ ಮನವಿ ಸಲ್ಲಿಸಿದರು.

ವಿರಾಜಪೇಟೆ, ಜು.12–ಕಾರ್ಮಿಕರು ಹಾಗೂ ರೈತರ ವಿವಿಧ ಬೇಡಿಕೆ ಈಡೇರಿಸುವಂತೆ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ ಸಂಘಟನೆ (ಸಿಐಟಿಯು) ಕಾರ್ಯಕರ್ತರು ತಹಸೀಲ್ದಾರ್ ರಾಮಚಂದ್ರ ಅವರಿಗೆ ಮನವಿ ಸಲ್ಲಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರ ಕಾರ್ಮಿಕರ ಕಾನೂನು ರಕ್ಷಣೆ ಹಾಗೂ ಸವಲತ್ತುಗಳನ್ನು ಖಾತರಿಪಡಿಸಬೇಕು. ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಬೇಕು. ರೈತ ವಿರೋಧಿ ಕೃಷಿ ಕಾನೂನುಗಳನ್ನು ವಾಪಸ್ ಪಡೆಯಬೇಕು. ಕೃಷಿಕರ ಬೆಳೆಗಳಿಗೆ ಬೆಂಬಲ ಬೆಲೆ ನೀಡಬೇಕು. ಕಾರ್ಮಿಕ ಸಂಘಟನೆಗಳಿಗೆ ಕಡ್ಡಾಯ ಮಾನ್ಯತೆ ನೀಡುವ ಕಾನೂನು ಜಾರಿಗೊಳಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಕರ್ನಾಟಕ ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಫಲಾನುಭವಿಗಳ ಮಕ್ಕಳಿಗೆ ಶೈಕ್ಷಣಿಕ ಧನಸಹಾಯ ನೀಡಬೇಕು. ಬೀಡಿ ಕಾರ್ಮಿಕರಿಗೆ ಪರ್ಯಾಯ ಉದ್ಯೋಗ ಯೋಜನೆ ರೂಪಿಸಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ ಖಾತ್ರಿಪಡಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರ ವಿವಿಧ ವಸತಿ ಯೋಜನೆಗಳನ್ನು ಎಲ್ಲಾ ಕಾರ್ಮಿಕರಿಗೂ ಕಾಲಮಿತಿಯೊಳಗೆ ಜಾರಿಗೊಳಿಸಬೇಕು. ಕಾರ್ಮಿಕರಿಗೆ ಕನಿಷ್ಠ 31 ಸಾವಿರ ರೂ. ವೇತನ ಹೆಚ್ಚಿಸಿ ನಿಗದಿಪಡಿಸಬೇಕು. ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಎ.ಸಿ.ಸಾಬು, ಖಜಾಂಚಿ ಎನ್.ಡಿ.ಕುಟ್ಟಪ್ಪ, ಉಪಾಧ್ಯಕ್ಷ ಶಾಜಿ ರಮೇಶ್, ಜಿಲ್ಲಾ ಸಮಿತಿ ಸದಸ್ಯರಾದ ಸಿ.ಎ.ಹಮೀದ್, ಖಾಸಿಂ, ಹೆಚ್.ಶಿವಪ್ಪ, ಸುರೇಶ್ ಮತ್ತಿತರರು ಹಾಜರಿದ್ದರು.

ಸಿಎಂ ರಾಜೀನಾಮೆಗೆ ಕೆ.ಜಿ.ಬೋಪಯ್ಯ ಒತ್ತಾಯ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿದರು.

ಮಡಿಕೇರಿ, ಜು.12–ಮೈಸೂರಿನ ಮುಡಾ ಮತ್ತು ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ನೈತಿಕ ಹೊಣೆ ಹೊತ್ತು ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಾಜಿ ಶಾಸಕ ಕೆ.ಜಿ.ಬೋಪಯ್ಯ ಒತ್ತಾಯಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿಗಳು ನೀಡುತ್ತಿರುವ ಸ್ಪಷ್ಟೀಕರಣಗಳು ಹಲವು ಸಂಶಯಗಳಿಗೆ ಎಡೆಮಾಡಿಕೊಟ್ಟಿವೆ. 14 ನಿವೇಶನಗಳ ಹಂಚಿಕೆಯಲ್ಲಿ ನಿಯಮ ಉಲ್ಲಂಘನೆಯಾಗಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. 2020ರ ನಿಯಮಾನುಸಾರ ಮುಡಾ ಯಾವುದೇ ನಿರ್ಣಯ ಕೈಗೊಂಡರು ಅದನ್ನು ಸರ್ಕಾರಕ್ಕೆ ಕಳುಹಿಸಿ ಅನುಮತಿ ಪಡೆಯಬೇಕು. ಆದರೆ, ಈ ಪ್ರಕರಣದಲ್ಲಿ ಮುಡಾ ನಿರ್ಣಯವನ್ನು ಸರ್ಕಾರಕ್ಕೆ ಕಳುಹಿಸಿಯೇ ಇಲ್ಲ ಎಂದು ಆರೋಪಿಸಿದರು.

ಈ ಹಗರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು. ಮುಡಾ ಹಗರಣದಲ್ಲಿ ಸ್ವತಃ ಮುಖ್ಯಮಂತ್ರಿಗಳ ಪತ್ನಿ ಹೆಸರೇ ಇರುವುದರಿಂದ ಅಧಿಕಾರಿಗಳು ಯಾವ ರೀತಿ ತನಿಖೆ ನಡೆಸಲು ಸಾಧ್ಯ? ಸಿಬಿಐ ತನಿಖೆಯಿಂದ ಮಾತ್ರ ಪಾರದರ್ಶಕ ತನಿಖೆ ನಡೆಯಲು ಸಾಧ್ಯ. ತಪ್ಪು ನಡೆದಿಲ್ಲವೆಂದಾದರೆ ಸಿದ್ದರಾಮಯ್ಯ ಧೈರ್ಯವಾಗಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಿ, ತಾವು ಶುದ್ಧ ಹಸ್ತರೆಂದು ಸಾಬೀತುಪಡಿಸಲಿ ಎಂದು ಸವಾಲು ಹಾಕಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲೂ ಕೋಟ್ಯಾಂತರ ರೂ. ಅನುದಾನ ನಿಯಮಬಾಹಿರವಾಗಿ ಹಂಚಿಕೆಯಾಗಿರುವುದು ಸಾಬೀತಾಗಿದೆ. ಹಣ ವರ್ಗಾವಣೆ ಸಂದರ್ಭ ಆರ್ಥಿಕ ಇಲಾಖೆಯ ಅನುಮತಿ ಪಡೆಯಬೇಕಾಗುತ್ತದೆ. ಆದರೆ, ಆರ್ಥಿಕ ಇಲಾಖೆ ಮುಖ್ಯಮಂತ್ರಿ ಬಳಿಯೇ ಇರುವುದರಿಂದ ಈ ಹಗರಣ ಸಂಬಂಧ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ, ಪ್ರಧಾನ ಕಾರ್ಯದರ್ಶಿಗಳಾದ ಮಹೇಶ್ ಜೈನಿ, ಚಲನ್ ಕುಮಾರ್ ಹಾಗೂ ವಕ್ತಾರ ಬಿ.ಕೆ.ಅರುಣ್ ಕುಮಾರ್ ಉಪಸ್ಥಿತರಿದ್ದರು.

ಸ್ಮಶಾನ ಜಾಗಕ್ಕೆ ಒತ್ತಾಯಿಸಿ ಬೈಚನಹಳ್ಳಿ ಗ್ರಾಮಸ್ಥರು ಪ್ರತಿಭಟನೆ



ಎಲ್ಲಾ ಸಮುದಾಯದವರಿಗೂ ಸ್ಮಶಾನಕ್ಕೆ ಜಾಗ ನೀಡಬೇಕು ಎಂದು ಒತ್ತಾಯಿಸಿ ಬೈಚನಹಳ್ಳಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು

ಕುಶಾಲನಗರ, ಜು.12–ಎಲ್ಲಾ ಸಮುದಾಯದವರಿಗೂ ಸ್ಮಶಾನಕ್ಕೆ ಜಾಗ ನೀಡಬೇಕು ಎಂದು ಒತ್ತಾಯಿಸಿ ಬೈಚನಹಳ್ಳಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಗೋಮಾಳದಲ್ಲೇ ಪ್ರತಿಭಟನೆ ನಡೆಸಿದ ಗ್ರಾಮದ ಗೆಳೆಯರ ಬಳಗ ಮತ್ತು ಗ್ರಾಮಸ್ಥರು, ಹಿಂದಿನಿಂದಲೂ ಗ್ರಾಮದ ಎಲ್ಲಾ ಸಮುದಾಯದವರು ಬಳಸುತ್ತಿದ್ದ ಸ್ಮಶಾನದ ಜಾಗವನ್ನು ಆದರೆ, ಕಂದಾಯ ಅಧಿಕಾರಿಗಳು ಸುಳ್ಳು ದಾಖಲೆ ಸೃಷ್ಟಿಸಿ, ಕೇವಲ ಒಂದು ಸಮುದಾಯಕ್ಕೆ ಜಾಗ ಮಂಜೂರು ಮಾಡಿದ್ದಾರೆ ಎಂದು ಆರೋಪಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ್ ಕಿರಣ್‌ಗೌರಯ್ಯ, ಮುಂದಿನ ದಿನಗಳಲ್ಲಿ ಕಾನೂನು ರೀತಿ ಎಲ್ಲಾ ದಾಖಲೆ ಪರಿಶೀಲಿಸಿ ಎಲ್ಲಾ ಜನಾಂಗಕ್ಕೂ ಸ್ಮಶಾನಕ್ಕೆ ಜಾಗ ನೀಡಲಾಗುವುದು ಎಂದು ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು.

ಪ್ರತಿಭಟನೆಯಲ್ಲಿ ಪುರಸಭೆ ಸದಸ್ಯರಾದ ಜಗದೀಶ್, ಅಮೃತ್ ರಾಜ್, ಗೆಳೆಯರ ಬಳಗದ ಅಧ್ಯಕ್ಷ ಶ್ರೀಕಾಂತ್, ಕುಡಾ ಮಾಜಿ ಅಧ್ಯಕ್ಷ ಚರಣ್, ಮುಖಂಡರಾದ ಕೆ.ಜಿ.ಮನು, ಉಮೇಶ್, ಅಣ್ಣಯ್ಯ, ಗೌರಮ್ಮ, ಪಾರ್ವತಮ್ಮ, ಶಿವಮ್ಮ ಗೋಪಾಲ್, ಶಂಕರ್ ಪಾಲ್ಗೊಂಡಿದ್ದರು.

ಮೂಡ್ಲುಪುರ ನಂದೀಶ್‌ಗೆ ಆಲೂರು ಮಲ್ಲು ಬೆಂಬಲ



ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಆಲೂರು ಮಲ್ಲು ಮಾತನಾಡಿದರು.

ಚಾಮರಾಜನಗರ, ಜು.12–ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಆಲೂರು ಮಲ್ಲು ಕಣದಿಂದ ಹಿಂದೆ ಸರಿದು ಹಾಲಿ ಅಧ್ಯಕ್ಷ ಮೂಡ್ಲುಪುರ ನಂದೀಶ್‌ಗೆ ಬೆಂಬಲ ವ್ಯಕ್ತಪಡಿಸಿ ಅವರ ಗೆಲುವಿಗೆ ಶ್ರಮಿಸುವುದಾಗಿ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ನಾನು ಸಹ ಮಹಾಸಭಾದ ಅಧ್ಯಕ್ಷನಾಗಬೇಕೆಂಬ ಇಚ್ಛೆಯೊಂದಿಗೆ ನಾಮಪತ್ರ ಸಲ್ಲಿಸಿದ್ದೆ. ಆದರೆ, ಹಾಲಿ ಅಧ್ಯಕ್ಷ ಮೂಡ್ಲುಪುರ ನಂದೀಶ್ ನನಗೆ ಮತ್ತೊಂದು ಅವಕಾಶ ನೀಡಿ. ಈಗಾಗಲೇ ಪ್ರಗತಿಯಲ್ಲಿರುವ ಬಸವ ಭವನ, ಬಸವೇಶ್ವರ ಪುತ್ಥಳಿ ನಿರ್ಮಾಣ ಸೇರಿದಂತೆ ಅನೇಕ ಕಾರ್ಯಕ್ರಮಗಳು ಚಾಲ್ತಿಯಲ್ಲಿವೆ. ಇವುಗಳನ್ನು ಪೂರ್ಣಗೊಳಿಸಲು ಮತ್ತೊಂದು ಅವಕಾಶ ನೀಡುವಂತೆ ಕೇಳಿಕೊಂಡರು. ಅದರಂತೆ ಕಣದಿಂದ ಹಿಂದೆ ಸರಿದು ಅವರಿಗೆ ಬೆಂಬಲ ನೀಡಲಾಗಿದೆ ಎಂದರು.

ಮತ್ತೊಂದು ಅವಕಾಶ ನೀಡಿ: ಮಹಾಸಭಾದ ಅಧ್ಯಕ್ಷ ಮೂಡ್ಲುಪುರ ನಂದೀಶ್ ಮಾತನಾಡಿ, ಈಗಾಗಲೇ ಮೂರು ವರ್ಷದ ಅವಧಿಗೆ ಅಧ್ಯಕ್ಷನಾಗಿ ಉತ್ತಮ ಸೇವೆ ಸಲ್ಲಿಸಿದ್ದೇನೆ. ನಾನು ಅಧಿಕಾರ ವಹಿಸಿಕೊಂಡ ದಿನದಿಂದ ಕೋವಿಡ್ ವ್ಯಾಪಕವಾಗಿ ಹಬ್ಬಿತ್ತು. ಎರಡು ವರ್ಷ ಕೋವಿಡ್ ಸಂತ್ರಸ್ತರಿಗೆ ನೆರವು, ನಂತರ ಸಿಕ್ಕ ಒಂದು ವರ್ಷದ ಅವಧಿಯಲ್ಲಿ ನೆನಗುದಿಗೆ ಬಿದ್ದಿದ್ದ ಬಸವ ಭವನ, ಬಸವ ಪುತ್ಥಳಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಮುಂದಿನ ದಿನಗಳಲ್ಲಿ ಪೂರ್ಣಗೊಳಿಸುವುದು. ಸಮುದಾಯದ ಅಭಿವೃದ್ಧಿಗೆ ಮತ್ತೊಂದು ಅವಕಾಶ ನೀಡಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಅಧ್ಯಕ್ಷ ಕೋಡಸೋಗೆ ಶಿವಬಸಪ್ಪ, ತಾಪಂ ಮಾಜಿ ಸದಸ್ಯರಾದ ರಾಜಶೇಖರ ಮೂರ್ತಿ, ನಾಗನತ್ತ ಗುರುಮಲ್ಲಪ್ಪ, ಮುಖಂಡರಾದ ಭೃಂಗೇಶ್ ಕಟ್ಟೆ, ಬಸವನಪುರದ ಗೌಡಿಗೆ ರೇವಣ್ಣಸ್ವಾಮಿ ಇತರರು ಇದ್ದರು.

ಸಿಎಂಗೆ ನೀಡಿದ್ದ ಮನವಿ ಪತ್ರಗಳು ಅನಾಥ

● ವೇದಿಕೆಯಲ್ಲೇ ಬಿದ್ದಿದ್ದ ಮನವಿ ಪತ್ರ ಕಂಡು ಸಾರ್ವಜನಿಕರ ಆಕ್ರೋಶ ● ಕಬ್ಬು ಬೆಳೆಗಾರರ ಸಂಘದಿಂದ ಪ್ರತಿಭಟನೆ



ಜಿಲ್ಲಾಡಳಿತ ಭವನದ ಎದುರು ಮುಖ್ಯಮಂತ್ರಿ ವಿರುದ್ಧ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.



ನಗರದ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಮತದಾರರ ಕೃತಜ್ಞತಾ ಸಭೆಯ ವೇದಿಕೆಯಲ್ಲಿ ಬೀಸಾಡಿರುವ ಮನವಿಗಳು.

ಚಾಮರಾಜನಗರ, ಜು.12–ನಗರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಿದ್ದ ವೇಳೆ ವಿವಿಧ ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರು ನೀಡಿದ್ದ ಕೆಲ ಮನವಿಗಳು ವೇದಿಕೆಯಲ್ಲೇ ಅನಾಥವಾಗಿ ಬಿದ್ದಿದ್ದವು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜು.10ರಂದು ಲೋಕಸಭಾ ಕ್ಷೇತ್ರದ ಮತದಾರರ ಕೃತಜ್ಞತಾ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಸಿಎಂ ಸೇರಿದಂತೆ ಸಚಿವರು, ಶಾಸಕರು, ಸಂಸದರು ಭಾಗವಹಿಸಿದ್ದರು. ಈ ವೇಳೆ ಹಲವು ಸಂಘ–ಸಂಸ್ಥೆಗಳು ತಮ್ಮ ಹಕ್ಕೊತ್ತಾಯಗಳ ಮನವಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವೇದಿಕೆ ಹಾಗೂ ಕಾರ್ಯಕ್ರಮ ಮುಗಿದ ಬಳಿಕ ಸಲ್ಲಿಸಿದ್ದವು. ಆದರೆ, ಇವುಗಳ ಪೈಕಿ ಕೆಲವೊಂದು ಮನವಿಗಳನ್ನು ವೇದಿಕೆ ಬಳಿಯೇ ಎಸೆಯಲಾಗಿದೆ.

ಕಾರ್ಯಕ್ರಮಕ್ಕೆ ಅಳವಡಿಸಿದ್ದ ಶಾಮಿಯಾನವನ್ನು ಇನ್ನೂ ತೆರವುಗೊಳಿಸಿಲ್ಲ. ಈ ವೇಳೆ ಸಾರ್ವಜನಿಕರು ವೇದಿಕೆ ಬಳಿ ತೆರಳಿ ನೋಡಿದಾಗ ಮನವಿಗಳನ್ನು ಬೀಸಾಡಿರುವುದು ಬೆಳಕಿಗೆ ಬಂದಿದ್ದು, ಇದನ್ನು ಕೆಲವರು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ. ಸಿಎಂ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ.

ತಮ್ಮ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂಬ ಉದ್ದೇಶದಿಂದ ಮನವಿಗಳನ್ನು ಮುಖ್ಯಮಂತ್ರಿಗೆ ನೀಡಿದರೆ, ಅದನ್ನು ಅವರು ಅಲ್ಲೇ ಎಸೆದು ಹೋದರೆ ಹೇಗೆ? ಇವರು ಜನರ ಸಮಸ್ಯೆಗಳನ್ನು ಬಗೆಹರಿಸುತ್ತಾರೆಯೇ, ಈ ರೀತಿ ಎಸೆಯುವ ಬದಲು ಮನವಿಯನ್ನು ಸ್ವೀಕರಿಸದೆ ತೆರಳಬಹುದಿತ್ತು. ಈ ರೀತಿ ಕಸದಲ್ಲಿ ನಮ್ಮ ಮನವಿ ಪತ್ರಗಳನ್ನು ಬೀಸಾಡಿರುವುದು ಸರಿಯಲ್ಲ, ಮುಖ್ಯಮಂತ್ರಿಗಳ ಈ ನಡೆಯಿಂದ ನೋವುಂಟಾಗಿದೆ ಎಂದು ಮನವಿ ಸಲ್ಲಿಸಿದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ವಿರುದ್ಧ ರೈತರ ಪ್ರತಿಭಟನೆ: ಮುಖ್ಯಮಂತ್ರಿ ಸಿದ್ದರಾಮಯ್ಯ ರೈತರ ಹಕ್ಕೊತ್ತಾಯ ಮನವಿಯನ್ನು ಸ್ವೀಕರಿಸಿ, ನಂತರ ಅವುಗಳನ್ನು ಕಸದ ಬುಟ್ಟಿಗೆ ಬಿಸಾಕಿ ಹೋಗಿದ್ದಾರೆ ಎಂದು ರಾಜ್ಯ ಕಬ್ಬು ಬೆಳೆಗಾರ ಸಂಘದ ಕಾರ್ಯಕರ್ತರು ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು.

ಜಿಲ್ಲಾಡಳಿತ ಭವನದ ಎದುರು ಸಮಾವೇಶಗೊಂಡ ಸಂಘದ ಪದಾಧಿಕಾರಿಗಳು ಮುಖ್ಯಮಂತ್ರಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಮತದಾರರ ಕೃತಜ್ಞತೆ ಸಮಾರಂಭದಲ್ಲಿ ರೈತ ಸಂಘಟನೆ ಸೇರಿದಂತೆ ಸಾರ್ವಜನಿಕರು ಮುಖ್ಯಮಂತ್ರಿಗೆ ಸಲ್ಲಿಸಿದ್ದ ಕೆಲ ಮನವಿಗಳನ್ನು ವೇದಿಕೆಯಲ್ಲೇ ಬಿಸಾಡಿ ಹೋಗುವ ಮೂಲಕ ಜಿಲ್ಲೆಯ ರೈತ ಸಂಘಟನೆಗಳಿಗೆ ಅಪಮಾನ ಮಾಡಿದ್ದಾರೆ. ಇವರು ಸಾಮಾನ್ಯ ಜನರ ಕಷ್ಟ ಕಾರ್ಪಣ್ಯದ ಪತ್ರಗಳನ್ನು ಯಾವ ರೀತಿ ರಕ್ಷಿಸಿ ಅವರಿಗೆ ನ್ಯಾಯ ಕೊಡಿಸುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜು, ಚಾ.ನಗರ ಜಿಲ್ಲಾಧ್ಯಕ್ಷ ಹಾಲಿನ ನಾಗರಾಜ್, ಮೈಸೂರು ಜಿಲ್ಲಾಧ್ಯಕ್ಷ ಹಾಡ್ಯ ರವಿ, ಜಿಲ್ಲಾ ಕಾರ್ಯದರ್ಶಿ ಮಹೇಂದ್ರ, ಸೋಮೇಶ್, ಗುರು, ಚಂದ್ರು, ಮಂಜು, ಸುರೇಶ್, ರಾಜು, ಅಶೋಕ್, ಪ್ರಸನ್ನ ಭಾಗವಹಿಸಿದ್ದರು.

ಸಭೆಗೆ ಗೈರಾದ ಅಧಿಕಾರಿಗಳ ವಿರುದ್ಧ ಶಾಸಕರು ಗರಂ



ಕೊಳ್ಳೇಗಾಲ ತಾಪಂ ಸಭಾಂಗಣದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿದರು.

ಕೊಳ್ಳೇಗಾಲ, ಜು.12– ಕೆಲ ಅಧಿಕಾರಿಗಳು ಕೆಡಿಪಿ ಸಭೆಯನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಇಂದು ನಡೆದ ಸಭೆಗೆ ಶೇ.35ರಷ್ಟು ಅಧಿಕಾರಿಗಳು ಗೈರಾಗಿದ್ದಾರೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಕಿಡಿಕಾರಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಕೆಲ ಇಲಾಖೆ ಅಧಿಕಾರಿಗಳು ತಮ್ಮ ಕೆಳಹಂತದ ನೌಕರರನ್ನು ಸಭೆಗೆ ಕಳುಹಿಸಿ ಬೇಜವಾಬ್ದಾರಿ ಪ್ರದರ್ಶಿಸಿದ್ದಾರೆ. ಕೆಡಿಪಿ ಸಭೆಯನ್ನು ಗೆಜೆಟೆಡ್ ಅಧಿಕಾರಿಗಳೇ ಗಂಭೀರವಾಗಿ ಪರಿಗಣಿಸಿಲ್ಲ. ಸಭೆಯಲ್ಲಿ ಸಲ್ಲಿಸಿರುವ ವರದಿಯಲ್ಲಿ ಕೆಲ ಅಧಿಕಾರಿಗಳ ಸಹಿಯೇ ಇಲ್ಲ. ಇದನ್ನು ದೃಢಿಕರಿಸಬೇಕಾದ ತಾಪಂ ಇಓ ಸಹಿಯೂ ಇಲ್ಲ, ಇಓನೇ ತಮ್ಮ ಜವಾಬ್ದಾರಿ ನಿರ್ವಹಿಸುತ್ತಿಲ್ಲ. ಈ ಬೆಳವಣಿಗೆ ಸರಿಯಲ್ಲ ಎಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಇಂದಿನ ಸಭೆಗೆ ಗೈರಾದ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಿ, ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಿ ಎಂದು ತಾಪಂ ಇಓಗೆ ಶಾಸಕರು ಸೂಚಿಸಿದರು. ಸಭೆ ಪ್ರಾರಂಭದಲ್ಲಿ ಡೆಂಗ್ಯೂ ಪ್ರಕರಣ ಹೆಚ್ಚಾದಂತೆ ಮುಂಜಾಗ್ರತೆ ವಹಿಸಿ, ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡ ಬೇಕು. ರಾಮಾಪುರದಲ್ಲಿ ನಿರುಪಯುಕ್ತವಾಗಿರುವ ಎರಡು ಡಯಾಲಿಸಿಸ್ ಯಂತ್ರ ಗಳನ್ನು ಕೊಳ್ಳೇಗಾಲ ಉಪವಿಭಾಗ ಅಥವಾ ಯಳಂದೂರಿಗೆ ತಂದು ರೋಗಿಗಳ ಅನುಕೂಲಕ್ಕೆ ಉಪಯೋಗಿಸಬೇಕು ಎಂದು ಉಪವಿಭಾಗೀಯ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ರಾಜಶೇಖರ್‌ಗೆ ಶಾಸಕರು ತಿಳಿಸಿದರು. ಸಭೆಯಲ್ಲಿ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಎಸ್.ಜಯಣ್ಣ, ತಹಸೀಲ್ದಾರ್ ಮಂಜುಳಾ, ತಾಪಂ ಇಓ ಶ್ರೀನಿವಾಸ್ ಇದ್ದರು.

ಟಿ.ಎಸ್.ರವಿ ನಿಧನ



ಚಾಮರಾಜನಗರ: ತಾಲೂಕಿನ ತಮ್ಮಡಹಳ್ಳಿ ಗ್ರಾಮದ ನಿವಾಸಿ ಟಿ.ಎಸ್.ರವಿ(40) ಶುಕ್ರವಾರ ಹೃದಯಾಘಾತದಿಂದ ನಿಧನರಾದರು. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಶನಿವಾರ ಸ್ವಗ್ರಾಮ ತಮ್ಮಡಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಸಹೋದರ ಮಂಜುನಾಥ ತಿಳಿಸಿದ್ದಾರೆ.

ಡೆಂಗ್ಯೂ ನಿಯಂತ್ರಣಕ್ಕೆ ಮುಂಜಾಗ್ರತೆ ವಹಿಸಿ

ಲಾರ್ವ ಸಮೀಕ್ಷೆ ಅಭಿಯಾನದಲ್ಲಿ ಸಾರ್ವಜನಿಕರಿಗೆ ಡಿಸಿ ಶಿಲ್ಪನಾಗ್ ಸೂಚನೆ



ಜಿಲ್ಲಾಧಿಕಾರಿ ಶಿಲ್ಪನಾಗ್ ಹೌಸಿಂಗ್‌ಬೋರ್ಡ್‌ನ ಮನೆಯೊಂದರ ಟ್ಯಾಂಕ್ ನೀರಿಗೆ ಟೆಮಿನಾಸ್ ಲಿಕ್ವಿಡ್ ಸಿಂಪಡಿಸಿ ಸಾರ್ವಜನಿಕರಿಗೆ ಡೆಂಗ್ಯೂ ಜಾಗೃತಿ ಮೂಡಿಸಿದರು.

ಚಾಮರಾಜನಗರ, ಜು.12–ಡೆಂಗ್ಯೂ ಸೊಳ್ಳೆ ಉತ್ಪತ್ತಿಗೆ ಕಾರಣವಾಗುವ ಲಾರ್ವ ಬೆಳವಣಿಗೆ ತಡೆಯಲು ಸಾರ್ವಜನಿಕರು ಮನೆಯ ಸುತ್ತಲಿನ ಪರಿಸರದಲ್ಲಿ ನೀರು ನಿಲ್ಲದಂತೆ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದರು.

ನಗರದ ಹೌಸಿಂಗ್ ಬೋರ್ಡ್‌ನ 26ನೇ ವಾರ್ಡ್‌ನಲ್ಲಿರುವ ಅಂಬೇಡ್ಕರ್ ಉದ್ಯಾನವ ಬಳಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಲಾರ್ವ ಸಮೀಕ್ಷೆ ಆಂದೋಲನ ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಡೆಂಗ್ಯೂ ನಿಯಂತ್ರಣ ಆರೋಗ್ಯ ಇಲಾಖೆ ಕೆಲಸ ಮಾತ್ರವಲ್ಲ. ಸಾರ್ವಜನಿಕರ ಸಹಕಾರವು ಅಗತ್ಯವಾಗಿದೆ. ಸಾಮಾನ್ಯವಾಗಿ ಹಗಲಿನಲ್ಲಿ ಕಚ್ಚುವ ಈಡೀಸ್ ಸೊಳ್ಳೆಯಿಂದ ಡೆಂಗ್ಯೂ ಉಲ್ಬಣವಾಗಲಿದೆ. ಜಿಲ್ಲೆಯಲ್ಲಿ 65 ಪಾಸಿಟಿವ್ ಪ್ರಕರಣಗಳನ್ನು ಗುರುತಿಸಲಾಗಿತ್ತು. ಒಂದು ಪ್ರಕರಣ ಹೊರತುಪಡಿಸಿ ಉಳಿದ ಎಲ್ಲರಿಗೂ ಅಗತ್ಯ ಚಿಕಿತ್ಸೆ ನೀಡಿ ಗುಣಮುಖರನ್ನಾಗಿ ಮಾಡಲಾಗಿದೆ ಎಂದರು.

ಎಲ್ಲೆಡೆ ವ್ಯಾಪಕವಾಗಿ ಹರಡುತ್ತಿರುವ ಡೆಂಗ್ಯೂ ತಡೆಗಟ್ಟಲು ನಾಗರಿಕರು ಮನೆಯ ಸುತ್ತಮುತ್ತ 2–3 ದಿನ ನೀರು ಸಂಗ್ರಹವಾಗದಂತೆ ಎಚ್ಚರ ವಹಿಸಬೇಕು. ಸಂಗ್ರಹವಾದರೂ ಅದನ್ನು ಸೂಕ್ತವಾಗಿ ವಿಲೇವಾರಿ ಮಾಡಬೇಕು. ಈ ನಿಟ್ಟಿನಲ್ಲಿ ಈಗಾಗಲೇ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿ, ನಗರ ಪ್ರದೇಶಗಳಲ್ಲಿ ಡೆಂಗ್ಯೂ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ನಿರ್ದೇಶನ ನೀಡಲಾಗಿದೆ ಎಂದರು.

ಇದೇ ವೇಳೆ ಹೌಸಿಂಗ್‌ಬೋರ್ಡ್ ನಿವಾಸಿಯೊಬ್ಬರ ಮನೆಗೆ ತೆರಳಿ ನೀರು ಸಂಗ್ರಹಿಸಿದ್ದ ಟ್ಯಾಂಕ್ ಅನ್ನು ಪರಿಶೀಲಿಸಿ ಲಾರ್ವ ಬೆಳವಣಿಗೆ ವೀಕ್ಷಿಸಲಾಯಿತು. ಅದೇ ನೀರಿಗೆ ಟೆಮಿನಾಸ್ ಲಿಕ್ವಿಡ್ ಸಿಂಪಡಿಸಿ ಸಾರ್ವಜನಿಕರಿಗೆ ಡೆಂಗ್ಯೂ ನಿರ್ವಹಣೆ ಬಗ್ಗೆ ಜಾಗೃತಿ ಮೂಡಿಸಲಾಯಿತು. ಅಲ್ಲದೇ ಅಲ್ಲಿನ ನಿವಾಸಿಗಳು ನೀಡಿದ ಕುಡಿಯುವ ನೀರನ್ನು ಜಿಲ್ಲಾಧಿಕಾರಿ ಪರಿಶೀಲಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಚಿದಂಬರ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ರಾಜೇಶ್ ಕುಮಾರ್, ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ನಗರಾಭಿವೃದ್ಧಿ ಕೋಶದ ಪ್ರಭಾರ ಯೋಜನಾ ನಿರ್ದೇಶಕ ರಾಮಚಂದ್ರ, ನಗರಸಭೆ ಪರಿಸರ ಇಂಜಿನಿಯರ್ ಗಿರಿಜಮ್ಮ, ಹಿರಿಯ ಆರೋಗ್ಯ ನಿರೀಕ್ಷರಾದ ಮಂಜುನಾಥ್, ನಾರಾಯಣಸ್ವಾಮಿ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ವೆಂಕಟೇಶ್, ಹಿರಿಯ ಪ್ರಯೋಗ ಶಾಲಾ ತಾಂತ್ರಿಕಾಧಿಕಾರಿ ದ್ವಾರಕೀಶ್, ಆರೋಗ್ಯಾಧಿಕಾರಿಗಳು ಇದ್ದರು.

ಮುಂಗಾರು ಇಳಿಮುಖ; ರೈತರಲ್ಲಿ ಆತಂಕ



ಮೈಸೂರು, ಜು.12(ಎಂಕೆ)– ಹಳೇ ಮೈಸೂರು ಭಾಗದಲ್ಲಿ ಮುಂಗಾರು ಕ್ಷೀಣಿಸುತ್ತಿದ್ದು, ಇನ್ನೊಂದು ವಾರ ಮಳೆ ಬೀಳದಿದ್ದರೆ ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಹೆಚ್ಚಿದೆ. ಕರಾವಳಿ ಭಾಗದ ಮಂಗಳೂರು, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಉತ್ತಮ ಮಳೆಯಾದರೆ ಹಳೇ ಮೈಸೂರು ಭಾಗದ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಕೊಡಗು ಜಿಲ್ಲೆಯಲ್ಲಿ ಮುಂಗಾರು ಕ್ಷೀಣಿಸುತ್ತಿದೆ. ಮೈಸೂರು ಜಿಲ್ಲೆಯಲ್ಲಿ ಜನವರಿಯಿಂದ ಇಲ್ಲಿಯವರೆಗೆ ವಾಡಿಕೆಗಿಂತ ಶೇ.52 ರಷ್ಟು ಹೆಚ್ಚು ಮಳೆ ಬಿದ್ದಿದ್ದರೂ, ಜುಲೈ ತಿಂಗಳಲ್ಲಿ ಬೀಳಬೇಕಿದ್ದ ಮಳೆ ಪ್ರಮಾಣ ಇಲ್ಲಿವರೆಗೆ ಶೇ.50 ರಷ್ಟು ಕಡಿಮೆಯಾಗಿದೆ.

ಜೂನ್ ತಿಂಗಳಿನಲ್ಲಿ ಬಿದ್ದ ಜೋರು ಮಳೆಗೆ ಕೊಚ್ಚಿ ಹೋಗಿದ್ದ ಹೊಗೆಸೊಪ್ಪು, ಮುಸುಕಿನ ಜೋಳ ಇನ್ನಿತರ ಬೆಳೆಗಳು ಸೊಂಪಾಗಿ ಬೆಳೆಯುವ ಹೊತ್ತಿನಲ್ಲಿ ಮಳೆ ಕೊರತೆ ಉಂಟಾಗುವ ಸಾಧ್ಯತೆ ಎದುರಾಗಿದೆ. ಮಳೆ ಮೋಡ ಇದ್ದು, ಆಗಾಗ ತುಂತುರು ಮಳೆ ಬೀಳುತ್ತಿದೆ. ಹೊರತು ಸರಿಯಾಗಿ ಬೀಳುತ್ತಿಲ್ಲ. ಇದರಿಂದ ಕೆರೆ–ಕಟ್ಟೆಗಳು ಇನ್ನು ತುಂಬಿಲ್ಲ ಎಂದು ಕೃಷಿ ಇಲಾಖೆ ಅಧಿಕಾರಿಯೊಬ್ಬರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮೇ ತಿಂಗಳಿನಲ್ಲಿ ವಾಡಿಕೆ ಮಳೆ 198.1 ಮಿಲಿ ಮೀಟರ್‌ಗಿಂತ 251 ಮಿ.ಮೀ ಬಿದ್ದಿದ್ದು, ಶೇ.27 ರಷ್ಟು ಅಧಿಕ ಮಳೆಯಾಗಿತ್ತು. ಹಾಗೆಯೇ ಜೂನ್‌ನಲ್ಲಿ ಶೇ.13 ರಷ್ಟು ಹೆಚ್ಚು ಮಳೆ ಬಿದ್ದರೆ, ಜುಲೈ ತಿಂಗಳಿನಲ್ಲಿ ಇದುವರೆಗೆ ಶೇ.53 ರಷ್ಟು ಮಳೆ ಕಡಿಮೆಯಾಗಿದೆ. ಜೂನ್‌ನಿಂದ ಇಲ್ಲಿಯವರೆಗೆ ವಾಡಿಕೆ ಮಳೆಗಿಂತ ಶೇ.1 ರಷ್ಟು ಮಳೆ ಕೊರತೆಯಾಗಿದೆ. ಒಟ್ಟಾರೆ ಮೈಸೂರು ಜಿಲ್ಲೆಯಲ್ಲಿ ಮಳೆ ವಾಡಿಕೆಗಿಂತ ಇಲ್ಲಿಯವರೆಗೆ ಶೇ.17 ರಷ್ಟು ಹೆಚ್ಚು ಬಿದ್ದಿದ್ದರೂ, ಮುಂದಿನ ದಿನಗಳಲ್ಲಿ ಮಳೆ ಬೀಳದಿದ್ದರೆ ಬೆಳೆಗಳಿಗೆ ತೊಂದರೆಯಾಗಲಿದೆ. ರೋಗಗಳು ಬಾಧಿಸುವ ಸಾಧ್ಯತೆ ಹೆಚ್ಚು ಎಂದು ಮಾಹಿತಿ ನೀಡಿದ್ದಾರೆ.

ಮೊದಲ ಆಷಾಢ ಶುಕ್ರವಾರ ಹಿನ್ನೆಲೆ

ನಂಜನಗೂಡು ಶ್ರೀ ಚಾಮುಂಡೇಶ್ವರಿ ದೇಗುಲಕ್ಕೆ ಹರಿದು ಬಂದ ಭಕ್ತಸಾಗರ



ಆಷಾಢ ಶುಕ್ರವಾರ ಅಂಗವಾಗಿ ಚಾಮುಂಡೇಶ್ವರಿ ದೇವಾಲಯದಲ್ಲಿ ಭಕ್ತರು ಪೂಜೆ ಸಲ್ಲಿಸಿದರು.

ನಂಜನಗೂಡು, ಜು.12– ಮೊದಲ ಆಷಾಢ ಶುಕ್ರವಾರ ಹಿನ್ನೆಲೆಯಲ್ಲಿ ನಂಜನಗೂಡಿನ ಕಪಿಲಾ ನದಿ ತೀರದಲ್ಲಿರುವ ಶ್ರೀಚಾಮುಂಡೇಶ್ವರಿ ದೇವಾಲಯಕ್ಕೆ ತಾಲೂಕಿನ ವಿವಿಧೆಡೆಯಿಂದ ಸಾವಿರಾರು ಭಕ್ತರು ಆಗಮಿಸಿ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು.

ಮುಂಜಾನೆಯಿಂದಲೇ ದೇವಾಲಯದಲ್ಲಿ ಅಮ್ಮನವರಿಗೆ ಹಾಲು, ಮೊಸರು, ಜೇನುತುಪ್ಪ, ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ ಮಹಾಮಂಗಳಾರತಿ ಬಳಿಕ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು.

ದೇವಾಲಯದ ಸುತ್ತಮುತ್ತ ಹಾಗೂ ಚಾಮುಂಡೇಶ್ವರಿ ಅಮ್ಮನವರ ಮೂರ್ತಿಗೆ ವಿಶೇಷ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ಭಕ್ತರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಧನ್ಯತಾ ಭಾವದಿಂದ ಪರವಶರಾದರು. ಮುಂಜಾನೆಯೇ ಭಕ್ತರು ಅಮ್ಮನವರ ದರ್ಶನ ಪಡೆಯಲು ಸರತಿ ಸಾಲಿನಲ್ಲಿ ನಿಂತು ದೇವಾಲಯದ ಆವರಣದಲ್ಲಿ ನಿಂಬೆ ಹಣ್ಣಿನ ದೀಪದ ಆರತಿ ಮಾಡಿ ಹರಕೆ ತೀರಿಸಿ, ಮುತ್ತೈದೆಯರು ಬನ್ನಿ ಮರವನ್ನು ಪ್ರದಕ್ಷಿಣೆ ಹಾಕಿ ಬಳೆ, ಅರಿಶಿಣ–ಕುಂಕುಮ ಬಾಗಿನ ನೀಡಿ, ಮದುವೆಯಾಗದ ಮಹಿಳೆಯರು ಕಂಕಣ ಭಾಗ್ಯ ಕೂಡಿ ಬರಲಿ ಎಂದು ದೀಪ ಹಚ್ಚಿದರೆ, ಮದುವೆಯಾದವರು ಮಕ್ಕಳ ಭಾಗ್ಯ ದೊರಕಿಸುವಂತೆ ಹರಕೆ ಕಟ್ಟುವ ದೃಶ್ಯ ಸಾಮಾನ್ಯವಾಗಿತ್ತು.

ಚಾಮುಂಡೇಶ್ವರಿ ದೇಗುಲದಲ್ಲಿ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಶ್ರೀಕಂಠೇಶ್ವರಸ್ವಾಮಿ ದೇಗುಲದ ಇಓ ಜಗದೀಶ್ ನೇತೃತ್ವದಲ್ಲಿ ಸಕಲ ವ್ಯವಸ್ಥೆ ಮಾಡಲಾಗಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಸರಗೂರು: ಚಿಕ್ಕದೇವಮ್ಮನ ಬೆಟ್ಟದಲ್ಲೂ ವಿಶೇಷ ಪೂಜೆ



ಮೊದಲ ಆಷಾಢ ಶುಕ್ರವಾರ ಅಂಗವಾಗಿ ಶ್ರೀಚಿಕ್ಕದೇವಮ್ಮನವರ ಬೆಟ್ಟದಲ್ಲಿ ವಿಶೇಷ ಪೂಜೆ ನಡೆಯಿತು

ಸರಗೂರು, ಜು.12– ಆಷಾಢ ಶುಕ್ರವಾರ ಅಂಗವಾಗಿ ತಾಲೂಕಿನ ಶ್ರೀಚಿಕ್ಕದೇವಮ್ಮನವರ ಬೆಟ್ಟದಲ್ಲಿ ವಿಶೇಷ ಪೂಜೆ ನಡೆಯಿತು. ಮುಂಜಾನೆಯೇ ಶ್ರೀಚಿಕ್ಕದೇವಮ್ಮನವರಿಗೆ ಮಹಾನ್ಯಾಸಪೂರ್ವಕ ರುದ್ರಾಭಿಷೇಕ, ಪಂಚಾಮೃತಾಭಿಷೇಕ, ಸಹಸ್ರ ನಾಮಾರ್ಚನೆ ಬಳಿಕ ವಿವಿಧ ಹೂಗಳಿಂದ ಅಮ್ಮನವರನ್ನು ಅಲಂಕರಿಸಿ ಮಹಾಮಂಗಳಾರತಿ ನೆರವೇರಿಸಿ ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು. ಈ ವೇಳೆ ಪಾರುಪತ್ತೇದಾರ್ ಎನ್.ಮಹದೇವಸ್ವಾಮಿ ಮಾತನಾಡಿ, ಶ್ರೀಚಿಕ್ಕದೇವಮ್ಮನವರ ಬೆಟ್ಟದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಭಕ್ತರ ಇಷ್ಟಾರ್ಥಗಳೆಲ್ಲಾ ನೆರವೇರಲಿ ಎಂದು ಶುಭ ಹಾರೈಸಿದರು. ಇದೇ ವೇಳೆ ಸಾವಿರಾರು ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು. ಈ ಸಂದರ್ಭ ಅರ್ಚಕರಾದ ವೀರಣ್ಣ, ಸಂತೋಷ, ನಿಂಗಣ್ಣ, ಶಿವಕುಮಾರ, ಸಿದ್ದಲಿಂಗಸ್ವಾಮಿ, ರವಿ, ನಿಂಗರಾಜು ಸೇರಿದಂತೆ ಇನ್ನಿತರರಿದ್ದರು.

ರೈತರಿಗೆ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಿ

● ನೀರಾವರಿ ಇಲಾಖೆ ಅಧಿಕಾರಿಗಳಿಗೆ ಶಾಸಕ ಡಿ.ರವಿಶಂಕರ್ ಸೂಚನೆ ● ನಾಲೆಗಳಿಗೆ ನೀರು ಹರಿಸುವ ಕಾರ್ಯಕ್ಕೆ ಚಾಲನೆ



ನಾಲೆಗಳಿಗೆ ನೀರು ಹರಿಸುವ ಕಾರ್ಯಕ್ಕೆ ಶಾಸಕ ಡಿ.ರವಿಶಂಕರ್ ಚಾಲನೆ ನೀಡಿದರು.

ಕೆ.ಆರ್.ನಗರ, ಜು.12– ನೀರಾವರಿ ಇಲಾಖೆ ಅಧಿಕಾರಿಗಳು ರೈತರಿಗೆ ಯಾವುದೇ ತೊಂದರೆಯಾಗದಂತೆ ಮುಂಜಾಗ್ರತೆ ವಹಿಸಿ ಕೆಲಸ ಮಾಡಬೇಕು. ಸಮಸ್ಯೆ ಎದುರಾದಲ್ಲಿ ಕೂಡಲೇ ನನ್ನ ಗಮನಕ್ಕೆ ತರಬೇಕು ಎಂದು ಶಾಸಕ ಡಿ.ರವಿಶಂಕರ್ ಸೂಚಿಸಿದರು.

ಸಾಲಿಗ್ರಾಮ ತಾಲೂಕಿನ ಬಳ್ಳೂರು ಅಣೆಕಟ್ಟೆಯಿಂದ ಚಾಮರಾಜ, ರಾಮಸಮುದ್ರ ಎಡ ಮತ್ತು ಬಲದಂಡ ನಾಲೆಗಳಿಗೆ ಹಾಗೂ ಮಿರ್ಲೆ ಶ್ರೇಣಿ ನಾಲೆಗಳಿಗೆ ನೀರು ಬಿಡುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮೊದಲು ಕೆರೆಕಟ್ಟೆಗಳಿಗೆ ನೀರು ತುಂಬಿಸಲು ಆದ್ಯತೆ ನೀಡಲಾಗಿದ್ದು, ಉತ್ತಮ ಮಳೆಯಾದಲ್ಲಿ ರೈತರ ಜಮೀನುಗಳಿಗೆ ನೀರು ಹರಿಸಲಾಗುವುದು. ಅಲ್ಲಿವರೆಗೆ ರೈತ ಬಾಂಧವರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ರೈತರ ಸಮಸ್ಯೆಗಳಿಗೆ ನೀರಾವರಿ ಇಲಾಖೆ ಕೆಲವು ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬಂದಿದ್ದು, ಅದಕ್ಕೆ ಆಸ್ಪದ ಕೊಡದೆ ರೈತರ ಸಮಸ್ಯೆಗಳನ್ನು ಶೀಘ್ರ ಪರಿಹರಿಸಬೇಕು. ಪ್ರತಿಯೊಬ್ಬ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡಬೇಕೆಂದು ತಾಕೀತು ಮಾಡಿದರು.

ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕುಗಳಲ್ಲಿ ನೀರಾವರಿಗೆ ಸಂಬಂಧಿಸಿದಂತೆ ಹಲವು ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಬಗ್ಗೆ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿದ್ದು, ಸದ್ಯದಲ್ಲೇ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸುವುದಾಗಿ ತಿಳಿಸಿದರು.

ಮೈದುಂಬಿ ಹರಿಯುತ್ತಿರುವ ಕಾವೇರಿ ನದಿಗೆ ಬಳ್ಳೂರು ಕಟ್ಟೆ ಬಳಿ ಆಷಾಢ ಶುಕ್ರವಾರವಾದ ಇಂದು ವಿಶೇಷ ಪೂಜೆ ಸಲ್ಲಿಸಿದ್ದು, ರೈತರ ಬಾಳು ಹಸನಾಗಿ ಅನ್ನದಾತನಿಗೆ ಶುಭವಾಗಲೆಂದು ದೇವರಲ್ಲಿ ಪ್ರಾರ್ಥಿಸಿ ಬಾಗಿನ ಅರ್ಪಿಸಿದ ಶಾಸಕ ಡಿ.ರವಿಶಂಕರ್, ಈ ಬಾರಿ ರಾಜ್ಯದಲ್ಲಿ ಉತ್ತಮ ಮಳೆಯಾಗಿ ರೈತರು ಬೆಳೆ ಬೆಳೆದು ಅವರ ಬದುಕು ಹಸನಾಗಲೆಂದು ಕೋರಿದರು. ಈ ವೇಳೆ ಲಕ್ಷ್ಮಿಪುರ ಗ್ರಾಪಂ ಅಧ್ಯಕ್ಷೆ ಮಣಿ, ಸದಸ್ಯರಾದ ಹುಚ್ಚೇಗೌಡ, ನಾಗೇಂದ್ರ, ನಿತಿನ್, ರಂಗೇಗೌಡ, ಪಾಪಣ್ಣ, ತಾಪಂ ಮಾಜಿ ಅಧ್ಯಕ್ಷ ಹೆಚ್.ಟಿ.ಮಂಜುನಾಥ್, ಮಾಜಿ ಸದಸ್ಯ ಎಲ್.ಎಂ.ಸಣ್ಣಪ್ಪ, ವಿಎಸ್‌ಎಸ್‌ಎನ್ ಅಧ್ಯಕ್ಷ ಲೋಕೇಶ್, ಉಪಾಧ್ಯಕ್ಷ ದೇವರಾಜು, ಪುರಸಭೆ ಮಾಜಿ ಅಧ್ಯಕ್ಷ ಪ್ರಕಾಶ್, ನರಸಿಂಹರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ಎಂ.ಎಸ್.ಮಹದೇವ್, ವಕ್ತಾರ ಸೈಯದ್ ಜಾಬೀರ್, ಸಾಲಿಗ್ರಾಮ ಎಸ್‌ಸಿ ಘಟಕದ ಅಧ್ಯಕ್ಷ ಕಂಠಿಕುಮಾರ್, ನಗರಾಧ್ಯಕ್ಷ ಪ್ರಭಾಕರ್, ಯುವ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಮಹಮ್ಮದ್, ಮುಖಂಡರಾದ ಶ್ರೀನಿವಾಸ್, ಗುಣಪಾಲ್ ಜೈನ್, ಹೇಮಂತ್ ಕುಮಾರ್, ಬಲರಾಮೇಗೌಡ, ಜಿ.ಕೆ.ತೋಟಪ್ಪ ನಾಯಕ, ಕುಶುಕುಮಾರ್, ಆಯಾಜ್ ಪಾಷ, ಈಶ್ವರ್, ಕಿರಣ್, ಉದಯ್ ಮತ್ತಿತರರಿದ್ದರು.

> ಹವಾಮಾನ ಇಲಾಖೆ ವಾಡಿಕೆಗಿಂತ ಈ ಬಾರಿ ಹೆಚ್ಚು ಮಳೆಯಾಗಲಿದೆ ಎಂದು ಮಾಹಿತಿ ನೀಡಿದೆ. ಆದ್ದರಿಂದ ರೈತರು ಯಾವುದೇ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಕೃಷಿ ಚಟುವಟಿಕೆಗೆ ನೀರು ಸಿಗಲಿದ್ದು, ರೈತರಿಗೆ ಬೇಕಾಗುವ ಬಿತ್ತನೆ ಬೀಜ, ರಸಗೊಬ್ಬರ ಇತರ ಪರಿಕರಗಳನ್ನು ಸಕಾಲದಲ್ಲಿ ವಿತರಿಸುವಂತೆ ಕೃಷಿ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಗಿದೆ.
>
> – ಡಿ.ರವಿಶಂಕರ್, ಶಾಸಕ

ಉಪಾಧ್ಯಕ್ಷರಾಗಿ ನೇಮಕ



ತಿ.ನರಸೀಪುರ, ಜು.12– ಕನ್ನಡ ಸೇನೆ ಮೈಸೂರು ಜಿಲ್ಲಾ ಕಾರ್ಮಿಕ ಘಟಕದ ಉಪಾಧ್ಯಕ್ಷರಾಗಿ ಪಟ್ಟಣದ ಭೈರಾಪುರ ಬಡಾವಣೆ ನಿವಾಸಿ ಕೆ.ರಾಜು ಆಯ್ಕೆಯಾಗಿದ್ದಾರೆ. ಸೇನೆ ರಾಜ್ಯ ಕಾರ್ಮಿಕ ಘಟಕದ ಅಧ್ಯಕ್ಷ ಕೆ.ಆರ್.ಕುಮಾರ್, ಜಿಲ್ಲಾಧ್ಯಕ್ಷೆ ಶೈಲಜಾ ಅವರ ಆದೇಶದ ಮೇರೆಗೆ ಕೆ.ರಾಜು ಅವರನ್ನು ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಜು.21, ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ

ನಂಜನಗೂಡು, ಜು.12– ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷರಾಗಿ ಸಿಂಧುವಳ್ಳಿ ಕೆಂಪಣ್ಣ ಹಾಗೂ 7 ಮಹಿಳಾ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದು, ಉಳಿದ ಸಾಮಾನ್ಯ ನಿರ್ದೇಶಕರ 13 ಸ್ಥಾನಗಳಿಗೆ ಜು.21 ರಂದು ಬೆಳಗ್ಗೆ 8 ರಿಂದ 5 ಗಂಟೆವರೆಗೆ ನಗರದ ಶಿವಪಾದಸ್ವಾಮಿ ಗದ್ದುಗೆ ಆವರಣದಲ್ಲಿ ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ ಶಿವಲಿಂಗಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾಸಭೆ ಒಟ್ಟು 21 ಸ್ಥಾನಗಳ ಪೈಕಿ ಈಗಾಗಲೇ ಸಿಂಧುವಳ್ಳಿ ಕೆಂಪಣ್ಣ ಅಧ್ಯಕ್ಷರಾಗಿ ಮತ್ತು ನಂಜಮಣ್ಣಿ ಗುರುಮಲ್ಲಪ್ಪ, ಹೆಚ್.ಎಂ.ಮಧು, ಕೋಮಲ ಮಹಾಲಿಂಗಪ್ಪ, ನಂದಿನಿ, ಮಂಜುಳಾ, ಸುಧಾ ಸೇರಿದಂತೆ 7 ಮಹಿಳಾ ನಿರ್ದೇಶಕರು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಉಳಿದ 13 ಸ್ಥಾನಗಳಿಗೆ ಒಟ್ಟು 19 ಮಂದಿ ಸ್ಪರ್ಧಿಸಿದ್ದು ಸಮಾಜದ ಬಂಧುಗಳು ಚುನಾವಣೆಯಲ್ಲಿ ಸಕ್ರೀಯವಾಗಿ ಪಾಲ್ಗೊಂಡು ನಿರ್ದೇಶಕರನ್ನು ಆರಿಸುವ ಮೂಲಕ ಅಖಿಲ ಭಾರತ ವೀರಶೈವ ಮಹಾಸಭಾ ಸುಗಮ ಆಡಳಿತಕ್ಕೆ ನೆರವು ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಸಾಲಬಾಧೆಯಿಂದ ರೈತ ಆತ್ಮಹತ್ಯೆ



ಬೆಟ್ಟದಪುರ, ಜು.12– ಸಾಲಬಾಧೆ ತಾಳಲಾರದೆ ರೈತರೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿ ಕೊಂಡಿರುವ ಘಟನೆ ಸಮೀಪದ ಚಪ್ಪರದಹಳ್ಳಿ ಗ್ರಾಮದಲ್ಲಿ ಶುಕ್ರವಾರ ನಡೆದಿದೆ.

ಗ್ರಾಮದ ಸಿ.ಕೆ.ಜಗದೀಶ್ ಅವರ ಪುತ್ರ ಸಿ.ಜೆ.ಮಂಜು(26) ಆತ್ಮಹತ್ಯೆ ಮಾಡಿಕೊಂಡವರು. ಈತ ತನ್ನ ಹೆಸರಿನಲ್ಲಿದ್ದ 3 ಎಕರೆ, ತಾಯಿ ಕವಿತಾ ಹೆಸರಿನಲ್ಲಿದ್ದ ಎರಡೂವರೆ ಎಕರೆ ಹಾಗೂ ತಂದೆ ಹೆಸರಿನಲ್ಲಿದ್ದ ಒಂದು ಎಕರೆ ಹನ್ನೊಂದು ಗುಂಟೆಯಲ್ಲಿ ವ್ಯವಸಾಯ ಮಾಡುತ್ತಿದ್ದ. ಕೃಷಿಗಾಗಿ ಕುಶಾಲನಗರದ ಕೆನರಾ ಬ್ಯಾಂಕ್‌ನಲ್ಲಿ ತನ್ನ ಹೆಸರಲ್ಲಿ 7.5 ಲಕ್ಷ, ತಾಯಿ ಕವಿತಾ ಹೆಸರಲ್ಲಿ ಚಪ್ಪರದಹಳ್ಳಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ 3.5 ಲಕ್ಷ ಹಾಗೂ ಖಾಸಗಿಯವರಿಂದ 4 ಲಕ್ಷ ಕೈಸಾಲ ಸೇರಿದಂತೆ 15 ಲಕ್ಷ ರೂ. ಸಾಲ ಮಾಡಿ ತಂಬಾಕು ಮತ್ತು ಶುಂಠಿ ಬೆಳೆಯುತ್ತಿದ್ದರು. ಕಳೆದ ಎರಡ್ಮೂರು ವರ್ಷಗಳಿಂದ ಸರಿಯಾಗಿ ಫಸಲು ಸಿಗದೇ ನಷ್ಟ ಅನುಭವಿಸಿದ್ದರು. ಅಲ್ಲದೇ ಮಾಡಿದ ಸಾಲ ತೀರಿಸಲಾಗದೇ ಮನನೊಂದಿದ್ದ ಮಂಜು ಜಮೀನಿನಲ್ಲಿದ್ದ ಮರಕ್ಕೆ ನೇಣು ಹಾಕಿಕೊಂಡಿದ್ದಾರೆ. ಇದನ್ನು ಗಮನಿಸಿದ ಕುಟುಂಬದವರು ಆತನನ್ನು ಕಾಪಾಡಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಮಂಜು ಸಾವನ್ನಪ್ಪಿದ್ದಾರೆ. ಈ ಸಂಬಂಧ ಮೃತರ ತಂದೆ ನೀಡಿದ ದೂರಿನ ಮೇರೆಗೆ ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಟ್ರ್ಯಾಕ್ಟರ್ ಉರುಳಿ ಬಿದ್ದು ಚಾಲಕ ಸಾವು



ಭೇರ್ಯ, ಜು.12– ಟ್ರ್ಯಾಕ್ಟರ್ ಉರುಳಿ ಬಿದ್ದ ಪರಿಣಾಮ ಚಾಲಕ ಮೃತಪಟ್ಟಿರುವ ಘಟನೆ ಸಾಲಿಗ್ರಾಮ ತಾಲೂಕಿನ ಹಳೆ ಮಿರ್ಲೆ ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಗ್ರಾಮದ ಕುಮಾರ್ ಎಂಬುವರ ಪುತ್ರ ಮನೋಜ್ (23) ಮೃತಪಟ್ಟವರು. ಈತ ಜಮೀನು ಉಳುಮೆ ಮಾಡಲು ಚಾಮರಾಜ ನಾಲೆ ಏರಿಯ ಮೇಲೆ ಹೋಗುತ್ತಿದ್ದ ವೇಳೆ ಆಕಸ್ಮಿಕವಾಗಿ ಟ್ರ್ಯಾಕ್ಟರ್ ಜಮೀನಿಗೆ ಉರುಳಿ ಬಿದ್ದಿದೆ. ಈ ವೇಳೆ ಟ್ರ್ಯಾಕ್ಟರ್ ಅಡಿ ಸಿಲುಕಿದ್ದ ಮನೋಜ್‌ನನ್ನು ರಕ್ಷಣೆ ಮಾಡಿ ಚಿಕಿತ್ಸೆಗಾಗಿ ಕೆ.ಆರ್.ನಗರ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಈ ಸಂಬಂಧ ಸಾಲಿಗ್ರಾಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೈಲಕುಪ್ಪೆ ನೂತನ ಅಧ್ಯಕ್ಷರಿಗೆ ಅಭಿನಂದನೆ



ಬೈಲಕುಪ್ಪೆ ಗ್ರಾಪಂ ನೂತನ ಅಧ್ಯಕ್ಷ ರಘು ಅವರನ್ನು ಚೌಡಮ್ಮ ದೇವಿ ಟ್ರಸ್ಟ್ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ರೋಟರಿ ತಾಲೂಕು ಮಾಜಿ ಅಧ್ಯಕ್ಷ ರಾಜೇಗೌಡ, ಗ್ರಾಪಂ ಸದಸ್ಯ ಬಾಲಾಜಿ ರಘು, ಮಹದೇವ ನಾಯಕ, ಚೌಡಮ್ಮ ಸಂಘದ ಪದಾಧಿಕಾರಿಗಳು, ಸದಸ್ಯರಿದ್ದರು.

ಕೋಟೆಯಲ್ಲಿ ಡೆಂಗ್ಯೂ ಜಾಗೃತಿ ಜಾಥಾ



ಹೆಚ್.ಡಿ.ಕೋಟೆಯಲ್ಲಿ ಡೆಂಗ್ಯೂ ಜಾಗೃತಿ ಜಾಥಾ ನಡೆಯಿತು.

ಹೆಚ್.ಡಿ.ಕೋಟೆ, ಜು.12– ಪಟ್ಟಣದ ಲಯನ್ಸ್ ಕ್ಲಬ್, ಆರೋಗ್ಯ ಇಲಾಖೆ, ತಾರಕ ವಿದ್ಯಾಸಂಸ್ಥೆ ವತಿಯಿಂದ ಪಟ್ಟಣದಲ್ಲಿ ಡೆಂಗ್ಯೂ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಾಗೃತಿ ಜಾಥಾ ನಡೆಯಿತು.

ಲಯನ್ಸ್ ಕ್ಲಬ್ ಅಧ್ಯಕ್ಷ ಬೀಚನಹಳ್ಳಿ ಭಾಸ್ಕರ್ ಮಾತನಾಡಿ, ಪ್ರಸ್ತುತ ಡೆಂಗ್ಯೂ ಜ್ವರ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತೆ ವಹಿಸುವಂತೆ ಪಟ್ಟಣದ ಜನರಿಗೆ ಅರಿವು ಮೂಡಿಸಲು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ. ಹೀಗಾಗಿ ಪ್ರತಿಯೊಬ್ಬರೂ ನಿಮ್ಮ ಮನೆ ಬಳಿ ನೀರು ನಿಲ್ಲದ ಹಾಗೆ ನೋಡಿಕೊಳ್ಳಬೇಕು. ಅಲ್ಲದೇ ಮನೆ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದರು.

ಇದೇ ವೇಳೆ ವಿದ್ಯಾರ್ಥಿಗಳೊಂದಿಗೆ ತಾರಕ ವಿದ್ಯಾಸಂಸ್ಥೆಯಿಂದ ಹೊರಟ ಜಾಥಾ ಯರಹಳ್ಳಿ ಗ್ರಾಮದಲ್ಲಿ ಸಂಚರಿಸಿ ಡೆಂಗ್ಯೂ ಬಗ್ಗೆ ಅರಿವು ಮೂಡಿಸಿತು.

ಈ ವೇಳೆ ಲಯನ್ಸ್ ಕಾರ್ಯದರ್ಶಿ ಅಶೋಕ್, ಖಜಾಂಚಿ ಬಸವರಾಜು, ಸದಸ್ಯರಾದ ಸುರೇಂದ್ರ ಡಿ.ಗೌಡ, ರಾಜೇಶ್, ನಾಗನಾಯಕ, ಚೆಲುವರಾಜು, ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ಅಶೋಕ್ ಕುಮಾರ್, ನಾಗೇಂದ್ರ, ರವಿರಾಜ್, ಅರುಣಪ್ಪ, ಆಶಾ ಕಾರ್ಯಕರ್ತೆಯರಾದ ಮಂಜುಳ, ಶೀಲಾ, ತಾರಕ ವಿದ್ಯಾಸಂಸ್ಥೆಯ ನಾರಾಯಣ, ಶಿವಲಿಂಗಯ್ಯ, ಸಿದ್ದಯ್ಯ, ವರದನಾಯಕ, ರಾಮನಾಯಕ, ಶಿಕ್ಷಕರು, ಮಕ್ಕಳು ಇದ್ದರು.

ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ



ಕಂಪಲಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಗಿಡ ನೆಡುವ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಮುಖ್ಯ ಶಿಕ್ಷಕ ಮಹದೇವಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣ, ಗ್ರಾಪಂ ಉಪಾಧ್ಯಕ್ಷೆ ಸುಮಾ, ಪಿಡಿಓ ಪರಮೇಶ್, ಸುಮಿತ್ರಾ, ಇಂಜಿನಿಯರ್ ರಕ್ಷಿತ್, ಮೇಲ್ವಿಚಾರಕಿ ರವಿಕಲಾಶೆಟ್ಟಿ, ಜಯಶ್ರೀ ಇನ್ನಿತರರಿದ್ದರು.

ವಿಜೃಂಭಣೆಯ ಕಂಡಾಯ ಉತ್ಸವ



ತಿ.ನರಸೀಪುರದಲ್ಲಿ ಕಂಡಾಯ ಉತ್ಸವ ವಿಜೃಂಭಣೆಯಿಂದ ನಡೆಯಿತು.

ತಿ.ನರಸೀಪುರ, ಜು.12– ಆಷಾಢ ಮಾಸದ ಮೊದಲ ಶುಕ್ರವಾರ ಅಂಗವಾಗಿ ಪಟ್ಟಣದ ನಾಯಕರ ಬೀದಿಯಲ್ಲಿ 6ನೇ ವರ್ಷದ ಕಂಡಾಯ ಉತ್ಸವ ಹಾಗೂ ದಾಸೋಹ ವಿಜೃಂಭಣೆಯಿಂದ ನಡೆಯಿತು.

ಪಟ್ಟಣದ ನಾಯಕರ ಬೀದಿ, ವಿಶ್ವಕರ್ಮ ಬೀದಿ ಹಾಗೂ ತೇರಿನ ಬೀದಿಗಳಲ್ಲಿ ಕಂಡಾಯ ಉತ್ಸವ ಹಿನ್ನೆಲೆಯಲ್ಲಿ ಹಬ್ಬದ ವಾತಾವರಣ ಕಂಡು ಬಂತು. ವಿವಿಧ ಹೂ, ತೋರಣಗಳಿಂದ ಅಲಂಕರಿಸಿದ ಕಂಡಾಯಗಳಿಗೆ ಬೆಳಗ್ಗೆ ಕಾವೇರಿ ನದಿಯಲ್ಲಿ ಪೂಜೆ ಸಲ್ಲಿಸಿ, ಹೂ ಹೊಂಬಾಳೆ ಕಳಸಗಳನ್ನು ತಂದು ಮೆರವಣಿಗೆ ಮಾಡಲಾಯಿತು. ನಂತರ ನಿಗದಿತ ಸ್ಥಳದಲ್ಲಿ ಪ್ರತಿಷ್ಠಾಪಿಸಿ ಸಾರ್ವಜನಿಕರ ದರ್ಶನ ಹಾಗೂ ಪೂಜೆಗೆ ಅನುವು ಮಾಡಿ ಕೊಡಲಾಯಿತು. ಉತ್ಸವದ ಬಳಿಕ ಸಾವಿರಾರು ಜನರಿಗೆ ದಾಸೋಹ ಏರ್ಪಡಿಸಲಾಗಿತ್ತು. ಟೌನ್ ನಾಯಕ ಸಮಾಜದ ಯಜಮಾನರು ಹಾಗೂ ವಿನಾಯಕ ಗೆಳೆಯರ ಸ್ನೇಹಿತರ ಬಳಗ ಉತ್ಸವ ಯಶಸ್ವಿಯಾಗಿ ನಡೆಸಿದರು.

ಇಂದು ಹನುಮಾನ್ ಚಾಲೀಸಾ ಪಠಣ, ಹೋಮ

ನಂಜನಗೂಡು, ಜು.12– ನಗರದ ಶ್ರೀವೀರಾಂಜನೇಯ ಧರ್ಮ ಜಾಗೃತಿ ಬಳಗದಿಂದ 10ನೇ ವರ್ಷದ ಹನುಮ ಜಯಂತಿ ಪ್ರಯುಕ್ತ ಜು.13ರಂದು ನಗರದ ಶ್ರೀಅಯ್ಯಪ್ಪಸ್ವಾಮಿ ದೇವಸ್ಥಾನದ ಆವರಣದಲ್ಲಿ ಲೋಕ ಕಲ್ಯಾಣಾರ್ಥ ಹನುಮಾನ್ ಚಾಲೀಸಾ ಪಠಣ ಮತ್ತು ಹೋಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಸಂಚಾಲಕ ಎನ್.ಜೆ.ಸುನೀಲ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಅವಧೂತ ದತ್ತ ಪೀಠದ ಶ್ರೀದತ್ತ ವಿಜಯಾನಂದ ಸ್ವಾಮೀಜಿ ಶನಿವಾರ ಬೆಳಗ್ಗೆ 7 ಗಂಟೆಗೆ ಸಾಮೂಹಿಕ ಹನುಮಾನ್ ಚಾಲೀಸಾ ಪಠಣಕ್ಕೆ ಚಾಲನೆ ನೀಡಲಿದ್ದಾರೆ. ಈ ಸಂದರ್ಭ 300ಕ್ಕೂ ಹೆಚ್ಚು ಭಕ್ತರು ಸ್ಥಳದಲ್ಲೇ ಹನುಮಾನ್ ಚಾಲೀಸಾ ಪಠಿಸಲಿದ್ದಾರೆ. ಬಳಿಕ ಲೋಕ ಕಲ್ಯಾಣಾರ್ಥ ಹೋಮ ನಡೆಯಲಿದ್ದು, ಸಾರ್ವಜನಿಕರು ಧಾರ್ಮಿಕ ಪೂಜಾ ಕಾರ್ಯದಲ್ಲಿ ಭಾಗಿಯಾಗುವಂತೆ ಮನವಿ ಮಾಡಿದರು.

ಜು.20ರ ಶನಿವಾರ ಶ್ರೀವೀರಾಂಜನೇಯ ಧರ್ಮ ಜಾಗೃತಿ ಬಳಗದಿಂದ ಹನುಮ ಜಯಂತಿ ಹಮ್ಮಿಕೊಂಡಿದ್ದು ಮಧ್ಯಾಹ್ನ 2 ಗಂಟೆಗೆ ಹನುಮಂತನ ಅಲಂಕೃತ ಉತ್ಸವ ಮೂರ್ತಿಯೊಂದಿಗೆ ನಗರದಲ್ಲಿ ಮೆರವಣಿಗೆ ನಡೆಯಲಿದೆ. ಈ ಬಾರಿ ಮೆರವಣಿಗೆಯಲ್ಲಿ ನಾಡಿನ ಕಲೆ, ಸಂಸ್ಕೃತಿ ಬಿಂಬಿಸುವ ಕಂಸಾಳೆ, ವೀರಗಾಸೆ, ಡೊಳ್ಳು, ಪೂಜಾ ಕುಣಿತ ಸೇರಿದಂತೆ ಕೇರಳದ ಕಲಾ ತಂಡಗಳು ಭಾಗಿಯಾಗಲಿದ್ದು, ನಂಜನಗೂಡಿನ ಸಂಘ ಸಂಸ್ಥೆಗಳು ಹಾಗೂ ಸ್ಥಳೀಯ ನಾಗರಿಕರ ನೆರವಿನೊಂದಿಗೆ ನಡೆಯುವ ಹನುಮ ಜಯಂತಿಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀವೀರಾಂಜನೇಯ ಧರ್ಮಜಾಗೃತಿ ಬಳಗದ ಅನಂತು, ನಿತಿನ್, ನಂದ ಕುಮಾರ್, ಮಹದೇವ್, ಆನಂದ್ ಭಾಗವಹಿಸಿದ್ದರು.

ಶೀಘ್ರ ವಿದ್ಯುತ್ ಸೌರ ಘಟಕಕ್ಕೆ ಚಾಲನೆ

ರೇಷ್ಮೆ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್



ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಸಚಿವ ಕೆ.ವೆಂಕಟೇಶ್ ಚಾಲನೆ ನೀಡಿದರು.

ಪಿರಿಯಾಪಟ್ಟಣ, ಜು.12– ಅತೀ ಶೀಘ್ರದಲ್ಲಿ ಕುಸುಮ್ ಯೋಜನೆಯಡಿ ಸುಮಾರು 260 ಎಕರೆ ಪ್ರದೇಶದಲ್ಲಿ ವಿದ್ಯುತ್ ಸೌರ ಘಟಕ ಸ್ಥಾಪಿಸಲಾಗುವುದು ಎಂದು ರೇಷ್ಮೆ ಹಾಗೂ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಕಾವೇರಿ ನೀರಾವರಿ ನಿಗಮ ಹಾಗೂ ಜಲ ಸಂಪನ್ಮೂಲ ಇಲಾಖೆ ವತಿಯಿಂದ ಮುತ್ತಿನ ಮುಳುಸೋಗೆ ಗ್ರಾಮದ ಬಳಿ ಕಾವೇರಿ ನದಿಯಿಂದ ತಾಲೂಕಿನ 133 ಕೆರೆ ಹಾಗೂ 17 ಕಟ್ಟೆಗಳಿಗೆ ನೀರನ್ನು ತುಂಬಿಸುವ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಕಾವೇರಿ ನದಿ ಪಾತ್ರದ ಈ ಯೋಜನೆ 6 ತಿಂಗಳ ಹಿಂದೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಉದ್ಘಾಟನೆಯಾಗಿದ್ದು, ಮಳೆಗಾಲದ 3 ತಿಂಗಳಲ್ಲಿ ಮಾತ್ರ 155 ಕೆರೆಗಳಿಗೆ ನೀರು ತುಂಬುವ ಈ ಯೋಜನೆಗೆ ಸುಮಾರು 300 ಕೋಟಿ ವೆಚ್ಚವಾಗಿದ್ದು, ಈಗಾಗಲೇ 75 ಕೆರೆಗಳಿಗೆ ನೀರು ತುಂಬಿಸುವ ಪ್ರಕ್ರಿಯೆ ನಡೆಯುತ್ತಿದೆ. ತಾಲೂಕಿನ ಲಕ್ಷಾಂತರ ರೈತರ ಹಿತದೃಷ್ಟಿಯಿಂದ ಈ ಬೃಹತ್ ಯೋಜನೆ ಪ್ರಾರಂಭಿಸಲಾಗಿದೆ. ನಾವು ಈಗಾಗಲೇ ಈ ಕಾಮಗಾರಿಗೆ ಇಂತಿಷ್ಟು ಕೆರೆಗಳಿಗೆ ನೀರು ಉಳಿಸುವ ಟಾರ್ಗೆಟ್ ನೀಡಿದ್ದು, ಇದು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಕೈ ಬಿಡುವ ಪ್ರಶ್ನೆ ಇಲ್ಲ ಎಂದರು.

ತಾಲೂಕಿನಲ್ಲಿ ವಿದ್ಯುತ್ ಅಭಾವವಿದ್ದು, ಗ್ರಾಮೀಣ ಪ್ರದೇಶಗಳಿಗೆ 7 ಗಂಟೆ ಮಾತ್ರ ವಿದ್ಯುತ್ ಪೂರೈಸಲಾಗುತ್ತಿದೆ. ಇಡೀ ತಾಲೂಕಿಗೆ 32 ಮೆಗಾ ವ್ಯಾಟ್ ವಿದ್ಯುತ್ ಬೇಕಾಗಿದೆ. ಈ ಬಗ್ಗೆ ನಾನು ಈಗಾಗಲೇ ಮುಖ್ಯಮಂತ್ರಿಯೊಂದಿಗೆ ಮಾತನಾಡಿದ್ದೇನೆ. 4 ಎಕರೆಯಲ್ಲಿ ಒಂದು ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಯೊಂದಿಗೆ 260 ಎಕರೆ ಜಾಗದಲ್ಲಿ ವಿದ್ಯುತ್ ಸೋಲಾರ್ ಉತ್ಪಾದನಾ ಘಟಕವನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಮುಖ್ಯಮಂತ್ರಿಗಳೊಂದಿಗೆ ಪ್ರಸ್ತಾಪಿಸಿದ್ದು, ಇದಕ್ಕೆ ಚಾಲನೆ ನೀಡಲಾಗುತ್ತಿದೆ. ಇದರಿಂದಾಗಿ ತಾಲೂಕಿನಲ್ಲಿ ವಿದ್ಯುತ್ ಕೊರತೆ ನೀಗುವುದಲ್ಲದೆ ರೈತರ ಕೃಷಿ ಚಟುವಟಿಕೆಗೂ ಅನುಕೂಲವಾಗುತ್ತದೆ. ಅಭಿವೃದ್ಧಿ ಕಾರ್ಯ ಎಂದರೆ ಇಂತಹ ಯೋಜನೆಗಳನ್ನು ಜಾರಿಗೊಳಿಸುವುದು. ಅದನ್ನು ಬಿಟ್ಟು ಚರಂಡಿ, ರಸ್ತೆ ಕಾಮಗಾರಿ ಮಾಡುವುದು ಮಾತ್ರ ಅಭಿವೃದ್ಧಿ ಕಾರ್ಯವಲ್ಲ ಎಂದು ಮಾಜಿ ಶಾಸಕ ಕೆ.ಮಹದೇವ್ ಹೆಸರೇಳದೇ ಕಾಲೆಳೆದರು.

ಆವರ್ತಿ ಗ್ರಾಪಂ ಸದಸ್ಯ ಎಂ.ಬಿ.ಶಿವಕುಮಾರ್ ಮಾತನಾಡಿ, ಗ್ರಾಮದ ಚೌಡೇಶ್ವರಿ ದೇಗುಲಕ್ಕೆ 20 ಲಕ್ಷ ರೂ.ಗಳ ಸಮುದಾಯ ಭವನವನ್ನು ಶೀಘ್ರ ಮಂಜೂರು ಮಾಡಬೇಕೆಂದು ಮನವಿ ಸಲ್ಲಿಸಿದರು. ಈ ವೇಳೆ ತಾಲೂಕು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಡಿ.ಟಿ.ಸ್ವಾಮಿ, ರೆಹಮದ್ ಜಾನ್ ಬಾಬು, ಆಶ್ರಯ ಸಮಿತಿ ಅಧ್ಯಕ್ಷ ನಿತಿನ್, ಗ್ರಾಪಂ ಅಧ್ಯಕ್ಷೆ ಶಶಿಕಲಾ, ಎಕ್ಸಿಕ್ಯೂಟಿವ್ ಇಂಜಿನಿಯರ್ ಪುಟ್ಟಸ್ವಾಮಿ, ತಹಸೀಲ್ದಾರ್ ಕುಂಜಿ ಅಹಮದ್, ಇಓ ಸುನೀಲ್, ಶೇಖರ್ ಸೇರಿದಂತೆ ನೂರಾರು ಕಾರ್ಯಕರ್ತರು ಹಾಗೂ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

ನಿರ್ಗಮಿತ ಬಿಇಓಗೆ ಬೀಳ್ಕೊಡುಗೆ: ನೂತನ ಬಿಇಓಗೆ ಸ್ವಾಗತ



ನಿರ್ಗಮಿತ ಬಿಇಓ ಶೋಭಾ, ನೂತನ ಬಿಇಓ ಶಿವಮೂರ್ತಿ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಜು.12– ತಾಲೂಕಿನ ಶೈಕ್ಷಣಿಕ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆಗೆ ಮುನ್ನುಡಿ ಬರೆದಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಶೋಭಾ ಅವರನ್ನು ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಯನ್ನಾಗಿ (ಸಮಗ್ರ ಶಿಕ್ಷಣ ಕರ್ನಾಟಕ, ಉಪನಿರ್ದೇಶಕರ ಕಚೇರಿ) ನೇಮಕ ಮಾಡಿ ವರ್ಗಾವಣೆ ಮಾಡಲಾಗಿದ್ದು, ತಾಲೂಕು ನೂತನ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಶಿವಮೂರ್ತಿ ಅವರನ್ನು ನಿಯೋಜಿಸಲಾಗಿದೆ.

ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯಲ್ಲಿ ತಾಲೂಕು ಶಿಕ್ಷಕರ ಸಂಘದಿಂದ ನಡೆದ ಜಿ.ಶೋಭಾ ಅವರಿಗೆ ಬೀಳ್ಕೊಡುಗೆ ಹಾಗೂ ನೂತನ ಬಿಇಓ ಶಿವಮೂರ್ತಿ ಅವರಿಗೆ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದ ಜಿ.ಶೋಭಾ ಅವರು, ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಕಳೆದ ಒಂದು ವರ್ಷದಿಂದ ಕರ್ತವ್ಯ ನಿರ್ವಹಿಸಿದ್ದೇನೆ. ಈ ವೇಳೆ ನಿಮ್ಮೆಲ್ಲರ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಿದ್ದೇನೆ. ಕರ್ತವ್ಯದ ವೇಳೆ ಯಾರಿಗಾದರೂ ಮನ ನೋಯಿಸುವ ಕೆಲಸ ನನ್ನಿಂದಾಗಿದ್ದಲ್ಲಿ ಯಾರೂ ಮನಸ್ಸಿನಲ್ಲಿಟ್ಟುಕೊಳ್ಳಬೇಡಿ. ಕೆಲಸದ ಪ್ರಾಮಾಣಿಕತೆಯ ನಡುವೆ ಕೆಲವೊಮ್ಮೆ ಹೀಗೆಲ್ಲಾ ಆಗಲಿದೆ. ಸೇವಾವಧಿಯಲ್ಲಿ ನನಗೆ ಸಹಕರಿಸಿದ ತಾಲೂಕು ಪ್ರಾಥಮಿಕ ಶಿಕ್ಷಕರ ಸಂಘ, ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಸೇರಿದಂತೆ ಶಿಕ್ಷಕರು, ವಿವಿಧ ಸಂಘಟನೆಗಳು, ಕಚೇರಿ ಸಿಬ್ಬಂದಿಗೆ ನಾನು ಕೃತಜ್ಞತೆ ಸಲ್ಲಿಸಲು ಬಯಸುತ್ತೇನೆ. ನಿಮ್ಮೆಲ್ಲರ ಸಹಕಾರ ಇಲ್ಲದಿದ್ದರೆ ಯಾವುದೇ ಕಾರ್ಯ ಸಾಧ್ಯವಿರಲಿಲ್ಲ. ಎಲ್ಲಾ ಒಗ್ಗೂಡಿದಾಗ ಮಾತ್ರ ಸಾಧನೆ ಸಾಧ್ಯ. ಹಾಗಾಗಿ ನೂತನ ಬಿಇಓ ಶಿವಮೂರ್ತಿ ಅವರಿಗೆ ನನಗಿಂತ ಹೆಚ್ಚಿನ ಅನುಭವ ಇದೆ. ನನ್ನಂತೆಯೇ ಅವರೂ ಸಹ ಇಲ್ಲಿ ಸೇವೆ ಸಲ್ಲಿಸಿ ನಂತರ ಉನ್ನತ ಹುದ್ದೆಗೆ ಬಂದಿದ್ದಾರೆ. ಅವರ ಸೇವಾನುಭವ ಉತ್ತಮವಾಗಿದೆ. ಶೈಕ್ಷಣಿಕವಾಗಿ ಉತ್ತಮ ಆಲೋಚನೆಗಳನ್ನು ಹೊಂದಿರುವ ಅವರಿಗೆ ನನಗೆ ನೀಡಿದ ಸಹಕಾರಕ್ಕಿಂತ ಹೆಚ್ಚಿನ ಸಹಕಾರ ನೀಡಿ ಎಂದು ಮನವಿ ಮಾಡಿದರು.

ನೂತನ ಬಿಇಓ ಶಿವಮೂರ್ತಿ ಮಾತನಾಡಿದರು. ಈ ವೇಳೆ ನಿಕಟಪೂರ್ವ ಅಧ್ಯಕ್ಷ ಹೆಚ್.ಡಿ. ಮಾದಪ್ಪ, ಪ್ರಧಾನ ಕಾರ್ಯದರ್ಶಿ ಪುಟ್ಟಸ್ವಾಮಿ, ಖಜಾಂಚಿ ಸೋಸಲೆ ನಾಗೇಶ್, ಉಪಾಧ್ಯಕ್ಷೆ ಚಾಮುಂಡೇಶ್ವರಿ, ಸಹ ಕಾರ್ಯದರ್ಶಿ ಚಿತ್ರ ವಿಶಾಲಾಕ್ಷಿ ಮತ್ತು ಸುಬ್ಬಣ್ಣ, ಸಂಘಟನೆ ಕಾರ್ಯದರ್ಶಿ ಗೌರಮ್ಮ, ಗೌರಮ್ಮಣ್ಣಿ, ಸೋಮಶೇಖರ್, ನಿರ್ದೇಶಕರಾದ ಶಿವಶಂಕರ್ ಮೂರ್ತಿ, ಸುಬ್ರಹ್ಮಣ್ಯ, ಗಜೇಂದ್ರ ಅಕ್ಕಮಹಾದೇವಿ, ಬಿಆರ್‌ಸಿ ನಾಗೇಶ್, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಮದ್ದಾನಪ್ಪ, ದೈಹಿಕ ಶಿಕ್ಷಣ ಪರಿವೀಕ್ಷಕ ಮರಿಸ್ವಾಮಿ, ಶಿಕ್ಷಕರು ಹಾಜರಿದ್ದರು.

> ಬಿಇಓ ಶೋಭಾ ಅವರು ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ನಮ್ಮ ತಾಲೂಕು ಮೈಸೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆಯಲು ಶ್ರಮಿಸಿದ್ದರು. ಅಲ್ಲದೇ ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ವಿಶೇಷ ತರಬೇತಿ ನೀಡುವ ಜೊತೆಗೆ ಪೋಷಕರೊಂದಿಗೆ ಉತ್ತಮ ಬಾಂಧವ್ಯ ಹೊಂದಿ ವಿದ್ಯಾರ್ಥಿಗಳ ಮನೆ ಮನೆಗೆ ತೆರಳಿ ಅರಿವು ಮೂಡಿಸುವ ಮೂಲಕ ಉತ್ತಮ ಸಾಧನೆಗೆ ಬುನಾದಿ ಹಾಕಿದ್ದರು. ಇದೀಗ ಅವರು ವರ್ಗಾವಣೆಗೊಂಡಿದ್ದಾರೆ. ವರ್ಗಾವಣೆ ಸಾಮಾನ್ಯ ಪ್ರಕ್ರಿಯೆ. ಹಾಗಾಗಿ ನೂತನ ಬಿಇಓ ಶಿವಮೂರ್ತಿ ಅವರಿಗೆ ಸಾಕಷ್ಟು ಅನುಭವ ಇರುವುದರಿಂದ ಅವರೂ ಉತ್ತಮ ಕೆಲಸ ಮಾಡುವುದರಲ್ಲಿ ಯಾವುದೇ ಸಂಶಯವಿಲ್ಲ.
>
> – ಟಿ.ಎನ್.ನಾಗೇಂದ್ರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ.

ಇಂದು ರಾಷ್ಟ್ರೀಯ ಮೆಗಾ ಲೋಕ್ ಅದಾಲತ್

ಸುಮಾರು 10 ಸಾವಿರ ಪ್ರಕರಣಗಳ ಇತ್ಯರ್ಥ; ಮೈಸೂರು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಗುರಿ

• ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರವೀಂದ್ರ ಹೆಗಡೆ ಮಾಹಿತಿ • ಜಿಲ್ಲೆಯಲ್ಲಿ 1.19 ಲಕ್ಷ ಪ್ರಕರಣ ವಿಚಾರಣಾ ಹಂತದಲ್ಲಿದ್ದು 34667 ವಿಲೇವಾರಿಗೆ ಅರ್ಹ

ಮೈಸೂರು, ಜು.12(ಎಸ್‌ಬಿಡಿ)– ದೇಶಾದ್ಯಂತ ಶನಿವಾರ(ಜು.13) ರಾಷ್ಟ್ರೀಯ ಮೆಗಾ ಲೋಕ್ ಅದಾಲತ್ ನಡೆಯಲಿದ್ದು, ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಸುಮಾರು 10 ಸಾವಿರ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ರವೀಂದ್ರ ಹೆಗಡೆ ತಿಳಿಸಿದರು.



ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ರವೀಂದ್ರ ಹೆಗಡೆ ರಾಷ್ಟ್ರೀಯ ಲೋಕ್ ಅದಾಲತ್ ಕುರಿತು ಸುದ್ದಿಗೋಷ್ಠಿಯಲ್ಲಿ ವಿವರಣೆ ನೀಡಿದರು.

ಮೈಸೂರಿನ ಮಳಲವಾಡಿ ನ್ಯಾಯಾಲಯಗಳ ಸಂಕೀರ್ಣದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಅದಾಲತ್ ಕುರಿತು ವಿವರಣೆ ನೀಡಿದ ಅವರು, ಮೈಸೂರು ನಗರ ಸೇರಿದಂತೆ ಜಿಲ್ಲೆಯ ಒಟ್ಟು 65 ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್‌ಗೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಒಟ್ಟು 1.19 ಲಕ್ಷ ಪ್ರಕರಣಗಳು ವಿಚಾರಣೆಯಲ್ಲಿದ್ದು, ಅವುಗಳಲ್ಲಿ 61,345 ಪ್ರಕರಣಗಳು ಕ್ರಿಮಿನಲ್ ಸ್ವರೂಪ ಮತ್ತು 58,581 ಸಿವಿಲ್ ವ್ಯಾಜ್ಯಗಳಾಗಿವೆ ಎಂದರು.

ಲೋಕ್ ಅದಾಲತ್‌ನಲ್ಲಿ ಸುಮಾರು 34,667 ಪ್ರಕರಣಗಳು ವಿಲೇವಾರಿಗೆ ಅರ್ಹವಾಗಿವೆ. ಸುಮಾರು 5,300 ಪ್ರಕರಣಗಳಲ್ಲಿ ಪಕ್ಷಗಳು ವಿವಾದಗಳನ್ನು ಕೊನೆಗೊಳಿಸಲು ಒಪ್ಪಿಕೊಂಡಿವೆ. ಆದರೆ ವಕೀಲರು ಹಾಗೂ ಸಾರ್ವಜನಿಕರ ಸಹಕಾರದಿಂದ ನಾವು ಈ ಬಾರಿ ಅದಾಲತ್‌ನಲ್ಲಿ ಸುಮಾರು 10,000 ಪ್ರಕರಣಗಳನ್ನು ವಿಲೇವಾರಿ ಮಾಡುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.

ಮುಡಾ ಪ್ರಕರಣಗಳಿವೆ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಿಂದ ಬಾಕಿ ಇರುವ ಸುಮಾರು 206 ಭೂಸ್ವಾಧೀನ ಪರಿಹಾರ ಪ್ರಕರಣಗಳನ್ನು ಪಟ್ಟಿ ಮಾಡಲಾಗಿದ್ದು, ಲೋಕ ಅದಾಲತ್‌ನಲ್ಲಿ ಅವುಗಳನ್ನು ಪರಿಹರಿಸುವ ಭರವಸೆಯಿದೆ. ಕಳೆದ ಬಾರಿ 27 ಪ್ರಕರಣಗಳನ್ನು ಪಟ್ಟಿ ಮಾಡಲಾಗಿತ್ತಾದರೂ ಮುಡಾ ಅದಾಲತ್‌ಗೆ ಹಾಜರಾಗಿರಲಿಲ್ಲ ಎಂದರು.

ಸುಪ್ರೀಂ ಹಸ್ತಾಂತರ: ಮೈಸೂರು ನ್ಯಾಯಾಲಯಕ್ಕೆ ಸುಪ್ರೀಂಕೋರ್ಟ್ 33 ಪ್ರಕರಣಗಳನ್ನು ಇತ್ಯರ್ಥಕ್ಕೆ ಹಸ್ತಾಂತರಿಸಿದೆ. ಆ ಪ್ರಕರಣಗಳನ್ನು ಜುಲೈ 29 ರಿಂದ ಆಗಸ್ಟ್ 3 ರವರೆಗೆ ವಿಶೇಷ ಅಧಿವೇಶನಗಳಲ್ಲಿ ವಿಚಾರಣೆಗೆ ಕೈಗೆತ್ತಿಕೊಳ್ಳಲಾಗುವುದು ಎಂದು ಇದೇ ವೇಳೆ ತಿಳಿಸಿದರು.

ಸಹಕಾರ ಮುಖ್ಯ: ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಒಂದು ಲಕ್ಷ ಪ್ರಕರಣಗಳನ್ನು ಅದಾಲತ್‌ನಲ್ಲಿ ಬಗೆಹರಿಸಬೇಕೆಂಬ ಉದ್ದೇಶ ಹೊಂದಿದೆ. ಇದರಿಂದ ಎಲ್ಲರಿಗೂ ಅನುಕೂಲವಾಗಲಿದೆ. ಪ್ರಕರಣ ಇತ್ಯರ್ಥವಾದರೆ ವೈಮನಸ್ಸು ಮರೆತು ಪರಸ್ಪರ ಸಂತೋಷದಿಂದ ಇರಬಹುದು. ಮಾನಸಿಕ ಒತ್ತಡವಿಲ್ಲದೆ ನೆಮ್ಮದಿಯಿಂದ ಜೀವನ ಮುನ್ನಡೆಸಬಹುದು. ಅದಾಲತ್‌ನಲ್ಲಿ ಪ್ರಕರಣಗಳನ್ನು ಬಗೆಹರಿಸುವಲ್ಲಿ ವಕೀಲರುಗಳ ಪಾತ್ರ ಮಹತ್ವವಾದುದು. ಅದಾಲತ್‌ನಲ್ಲಿ ಪ್ರಕರಣ ಇತ್ಯರ್ಥವಾಗುವುದರಿಂದ ಆಗುವಂತಹ ಪ್ರಯೋಜನದ ಬಗ್ಗೆ ಕಕ್ಷಿದಾರರಿಗೆ ಮನದಟ್ಟು ಮಾಡಿಕೊಡಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ನ್ಯಾಯಾಧೀಶರಾದ ಡಿ.ಪುಟ್ಟಸ್ವಾಮಿ, ಸಾವಿತ್ರಿ ಶಿವಪುತ್ರ ಕುಜ್ಜಿ, ನಾಗರಾಜ್ ಸಿದ್ದಪ್ಪ ಅಂಕಸದೊಡ್ಡಿ, ಬಿ.ಹೆಚ್.ಕಾವ್ಯ, ಕೆ.ಅಫ್ತಾಬ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್, ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಸ್. ಲೋಕೇಶ್, ಪ್ರಧಾನ ಕಾರ್ಯದರ್ಶಿ ಎ.ಜಿ.ಸುಧೀರ್ ಮತ್ತು ಉಪಾಧ್ಯಕ್ಷ ಚಂದ್ರಶೇಖರ್ ಹಾಜರಿದ್ದರು.

ಯಾವೆಲ್ಲಾ ಪ್ರಕರಣ ಇತ್ಯರ್ಥವಾಗಬಹುದು...

ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಲು ರಾಷ್ಟ್ರೀಯ ಲೋಕ್ ಅದಾಲತ್ ಸುವರ್ಣಾವಕಾಶವಾಗಿದೆ. ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಚೆಕ್ ಅಮಾನ್ಯ(ಚೆಕ್‌ಬೌನ್ಸ್) ಪ್ರಕರಣಗಳು, ಮೋಟಾರ್ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂ ಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪಿಂಚಣಿ ಪ್ರಕರಣಗಳು, ವಿಚ್ಛೇದನ ಹೊರತುಪಡಿಸಿ ವೈವಾಹಿಕ, ಕುಟುಂಬ ನ್ಯಾಯಾಲಯದ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದ್ದು, ಉಭಯ ಪಕ್ಷಕಾರರಿಗೂ ಸೂಕ್ತ ಮಾರ್ಗದರ್ಶನ ನೀಡಿ, ಒಪ್ಪಿಗೆಯಾದಲ್ಲಿ ಮಾತ್ರ ಪ್ರಕರಣವನ್ನು ತೀರ್ಮಾನಿಸಲಾಗುತ್ತದೆ. ಇತ್ಯರ್ಥಪಡಿಸಿಕೊಂಡವರಿಗೆ ನ್ಯಾಯಾಲಯದ ಶುಲ್ಕವನ್ನೂ ವಾಪಸ್ ನೀಡಲಾಗುವುದು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಹಿಂದೂಸ್ತಾನಿ 2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಇಂಡಿಯನ್ 2 (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಸರ್ಫಿರಾ (ಹಿಂ)	4 ಪ್ರದರ್ಶನಗಳು
ಸಂಗಂ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಲಿಡೋ	
ಶಾಸ್ತ್ರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಪ್ರಭಾ	
ಜಾಕಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಲ್ಕಿ 2898 ಎಡಿ (3ಡಿ) (ತೆ): ಬೆ.9.35ಕ್ಕೆ, ಇಂಡಿಯನ್ 2 (ತ): ಮ.1ಕ್ಕೆ, ಇನ್‌ಸೈಟ್ ಔಟ್ 2 (3ಡಿ)(ಇಂ): ಸಂ.4.35ಕ್ಕೆ, ಕಲ್ಕಿ 2898 ಎಡಿ (ಕ): ಸಂ.6.45ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಸರ್ಫಿರಾ (ಹಿಂ): ಬೆ.9.45ಕ್ಕೆ, ಮ.12.50ಕ್ಕೆ, ರಾ.7.20ಕ್ಕೆ, ರಾ.10.20ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.55ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (ಕ): ಬೆ.9.30ಕ್ಕೆ, ಮ.12.55ಕ್ಕೆ, ಫ್ಲೈ ಮಿ ಟು ದಿ ಮೂನ್ (ಇಂ): ಸಂ.4.20ಕ್ಕೆ, ರಾ.10.25ಕ್ಕೆ, ಕಲ್ಕಿ 2898 ಎಡಿ (3ಡಿ) (ಹಿಂ): ರಾ.7ಕ್ಕೆ.
ಸ್ಕ್ರೀನ್ 4	ಇಂಡಿಯನ್ 2 (ತ): ಬೆ.9.25ಕ್ಕೆ, ಮ.3.10ಕ್ಕೆ, ಸಂ.6.40ಕ್ಕೆ, ರಾ.10.10ಕ್ಕೆ, ಡೆಸ್ಪಿಕಬಲ್ ಮಿ 4 (3ಡಿ) (ಇಂ): ಮ.1ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಕಲ್ಕಿ 2898 ಎಡಿ (3ಡಿ) (ಹಿಂ): ಬೆ.11.15ಕ್ಕೆ, ಸಂ.6.45ಕ್ಕೆ, ಕಲ್ಕಿ 2898 ಎಡಿ (3ಡಿ) (ತೆ): ಮ.3ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.10.15ಕ್ಕೆ, ಮ.2ಕ್ಕೆ, ಸಂ.5.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (ತೆ): ಬೆ.10.45ಕ್ಕೆ, ಸಂ.6.15ಕ್ಕೆ, ಕಲ್ಕಿ 2898 ಎಡಿ (ಹಿಂ): ಮ.2.30ಕ್ಕೆ, ರಾ.10ಕ್ಕೆ.
ಸ್ಕ್ರೀನ್ 4	ಡೆಸ್ಪಿಕಬಲ್ ಮಿ 4 (3ಡಿ) (ಇಂ): ಬೆ.10.40ಕ್ಕೆ, ಮ.3.20ಕ್ಕೆ, ರಾ.8ಕ್ಕೆ, ರಾ.10.15ಕ್ಕೆ, ಕಿಲ್ (ಹಿಂ): ಮ.12.55ಕ್ಕೆ, ಸಂ.5.35ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ಕಲ್ಕಿ 2898 ಎಡಿ (ಕ): ಬೆ.10.30ಕ್ಕೆ, ಸಂ.6ಕ್ಕೆ, ಲವ್ ಲಿ (ಕ): ಮ.1.55ಕ್ಕೆ.
ಸ್ಕ್ರೀನ್ 2	ಇಂಡಿಯನ್ 2 (ತ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (3ಡಿ)(ತೆ): ಬೆ.11.10ಕ್ಕೆ, ಮ.2.40ಕ್ಕೆ, ಇಂಡಿಯನ್ 2 (ತ): ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಇಂಡಿಯನ್ 2 (ತ): ಬೆ.10ಕ್ಕೆ, ಕಲ್ಕಿ 2898 ಎಡಿ (ಕ): ಮ.1.25ಕ್ಕೆ, ರಾ.7.45ಕ್ಕೆ, ಖಾಲಿ ಕುಡುಕರು (ಕ): ಸಂ.4.50ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಗಣ್ಯರಿಗೆ ಸನ್ಮಾನ



ಕೆ.ಹೆಚ್.ರಾಮಯ್ಯ ಅವರ ಜಯಂತಿ ಅಂಗವಾಗಿ ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ವತಿಯಿಂದ ಮೈಸೂರು ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಗಣ್ಯರನ್ನು ಸನ್ಮಾನಿಸಲಾಯಿತು

ಮುಡಾ ಹಗರಣ ಬಯಲಾದ ಮೇಲೆ ಜನ ಸಾಮಾನ್ಯರ ಕೆಲಸ ಕಾರ್ಯಕ್ಕೆ ತಡೆ

ಮೈಸೂರು, ಜು.12(ಬಿಎಲ್‌ಯು)– ಮುಡಾದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರ ಬಯಲಾದ ಮೇಲೆ ಜನ ಸಾಮಾನ್ಯರು ತಮ್ಮ ಕೆಲಸ ಕಾರ್ಯಗಳಿಗಾಗಿ ಮುಡಾ ಕಚೇರಿಗೆ ಹೋಗುವುದು ಕಷ್ಟಕರವಾಗಿದೆ.



ಕಳೆದ 20 ದಿನದಿಂದ ನಡೆದಿರುವ ಹಲವು ಬೆಳವಣಿಗೆಗಳಿಂದ ಮುಡಾ ಕಚೇರಿಯ ವಾತಾವರಣವೇ ಬದಲಾಗಿದೆ. ಅಧಿಕಾರಿಗಳು ಹಾಗೂ ನೌಕರರು ಆತಂಕದಲ್ಲೇ ಇದ್ದಾರೆ. ಜನ ಸಾಮಾನ್ಯರು ಯಾವುದಾದರೂ ಕೆಲಸ ಕಾರ್ಯಗಳಿಗೆ ಹೋದರೆ ಯಾರೂ ಕೈಗೆ ಸಿಗುತ್ತಿಲ್ಲ.

ಹಗರಣದಲ್ಲಿ ತಾವು ಎಲ್ಲಿ ಸಿಕ್ಕಿ ಬೀಳುತ್ತೇವೊ ಎಂಬ ಆತಂಕ ಕೆಲವು ಅಧಿಕಾರಿಗಳು ಹಾಗೂ ನೌಕರರನ್ನು ಕಾಡುತ್ತಿದೆ. ಐಎಎಸ್ ಅಧಿಕಾರಿ ನೇತೃತ್ವದ ತನಿಖಾ ತಂಡ ಬೆಳಿಗ್ಗೆಯಿಂದ ರಾತ್ರಿ ತನಕ ತನಿಖೆ ನಡೆಸುತ್ತಿದೆ. ಹಾಗಾಗಿ ಮೊದಲಿನಂತೆ ಮುಡಾ ಅಧಿಕಾರಿಗಳು ಹಾಗೂ ನೌಕರರು ಬೇಕು ಬೇಕಾದ ಹಾಗೆ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.


ಮುಡಾದಲ್ಲಿ ಯಾವುದೇ ಕೆಲಸ ಆಗಬೇಕೆಂದರೂ ಮಧ್ಯವರ್ತಿಗಳನ್ನು ಆಶ್ರಯಿಸಬೇಕಿತ್ತು. ಆದರೆ ಈಗ ತನಿಖೆ ನಡೆಸುತ್ತಿರುವ ಕಾರಣ ಯಾವ ಅಧಿಕಾರಿ ಹಾಗೂ ನೌಕರರು ಮಧ್ಯವರ್ತಿಗಳನ್ನು ಹತ್ತಿರಕ್ಕೆ ಸೇರಿಸುತ್ತಿಲ್ಲ. ಅಲ್ಲದೆ ಮುಡಾ ಕಚೇರಿ ಸುತ್ತ ಮುತ್ತ ಓಡಾಡುತ್ತಿದ್ದ ಮಧ್ಯವರ್ತಿಗಳು ಈಗ ಕಾಣೆಯಾಗಿದ್ದಾರೆ.

ಇನ್ನು ಜನ ಸಾಮಾನ್ಯರು ಖಾತಾ ಬದಲಾವಣೆ, ನಕ್ಷೆ ಮಂಜೂರಾತಿ ಸೇರಿದಂತೆ ಇತರೆ ಕಾರ್ಯಗಳಿಗೆ ಮುಡಾಗೆ ಹೋಗುವುದೇ ಕಷ್ಟವಾಗಿದೆ. ಬಿಜೆಪಿ, ಕಾಂಗ್ರೆಸ್ ಇಂದು ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ಮುಡಾಗೆ ಖಾಕಿ ಸರ್ಪಗಾವಲು ಹಾಕಲಾಗಿತ್ತು. ಮುಡಾ ಕಚೇರಿ ಸುತ್ತ ಬ್ಯಾರಿಕೇಡ್ ಅಳವಡಿಸಿ ಯಾರನ್ನು ಕೂಡ ಒಳಗೆ ಬಿಡುತ್ತಿರಲಿಲ್ಲ. ಇದರಿಂದ ತಮ್ಮ ಕೆಲಸ ಕಾರ್ಯಗಳಿಗೆ ಜನ ಸಾಮಾನ್ಯರು ಮುಡಾ ಒಳಗೆ ಹೋಗದ ಪರಿಸ್ಥಿತಿ ನಿರ್ಮಾಣವಾಗಿತ್ತು.

ಪೋಕ್ಸೊ ಪ್ರಕರಣ: ಖುದ್ದು ಹಾಜರಿಯಿಂದ

ಬಿ.ಎಸ್.ಯಡಿಯೂರಪ್ಪಗೆ ಹೈಕೋರ್ಟ್ ವಿನಾಯ್ತಿ

ಬೆಂಗಳೂರು, ಜು.12– ಪೋಕ್ಸೊ ಪ್ರಕರಣದ ವಿಚಾರಣೆ ಎದುರಿಸುತ್ತಿರುವ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪಗೆ ಕರ್ನಾಟಕ ಹೈಕೋರ್ಟ್ ಖುದ್ದು ಹಾಜರಾತಿಯಿಂದ ವಿನಾಯಿತಿ ನೀಡಿದೆ.



ಕರ್ನಾಟಕ ಹೈಕೋರ್ಟ್ ಏಕಸದಸ್ಯ ಪೀಠ ಇಂದು ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣದಲ್ಲಿ ಮಧ್ಯಂತರ ಆದೇಶ ನೀಡಿದ್ದು, ಖುದ್ದು ಹಾಜರಾತಿಯಿಂದ ವಿನಾಯಿತಿ ನೀಡಿದೆ. ಬಿಎಸ್‌ವೈ ಮಾತ್ರವಲ್ಲದೇ ಇತರೆ ಆರೋಪಿಗಳಿಗೂ ಖುದ್ದು ಹಾಜರಿಯಿಂದ ವಿನಾಯಿತಿ ನೀಡಲಾಗಿದೆ.

ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಜೂನ್ 27ರಂದು ಸಿಐಡಿ ಅಧಿಕಾರಿಗಳು ಚಾರ್ಜ್‌ಶೀಟ್ ಸಲ್ಲಿಸಿದ್ದರು. 75 ಸಾಕ್ಷಿಗಳ ಹೇಳಿಕೆ ಸೇರಿದಂತೆ 750 ಪುಟಗಳ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಲಾಗಿದ್ದು.

ಬಿ.ಎಸ್.ಯಡಿಯೂರಪ್ಪ ವಿರುದ್ಧ ಪೋಕ್ಸೊ ಕಾಯ್ದೆ ಸೆಕ್ಷನ್ 8, ಐಪಿಸಿ ಸೆಕ್ಷನ್‌ಗಳಾದ 354(ಎ), 204, 214 ಅಡಿ, 2ನೇ ಆರೋಪಿ ಅರುಣ್ ಎಂ.ವೈ, 3ನೇ ಆರೋಪಿ ಎಂ.ರುದ್ರೇಶ್ ಮತ್ತು 4ನೇ ಆರೋಪಿ ಜಿ.ಮರಿಸ್ವಾಮಿ ಅವರ ವಿರುದ್ಧ ಐಪಿಸಿ ಸೆಕ್ಷನ್‌ಗಳಾದ 204, 214ರ ಅಡಿ ಆರೋಪ ಪಟ್ಟಿ ಸಲ್ಲಿಕೆ ಮಾಡಲಾಗಿತ್ತು.

ವಿಚಾರಣೆ ಜುಲೈ 26ಕ್ಕೆ ಮುಂದೂಡಿಕೆ: ಇದೇ ವೇಳೆ ಪೋಕ್ಸೊ ಪ್ರಕರಣ ರದ್ದು ಕೋರಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಜುಲೈ 26ಕ್ಕೆ ನಡೆಸಲು ಹೈಕೋರ್ಟ್ ದಿನಾಂಕ ನಿಗದಿಪಡಿಸಿದೆ. ಅಲ್ಲಿಯವರೆಗೆ ಪ್ರಕರಣದಲ್ಲಿ ಖುದ್ದು ಹಾಜರಿಗೆ ಮಾಜಿ ಸಿಎಂಗೆ ಕೋರ್ಟ್ ವಿನಾಯಿತಿ ನೀಡಿದೆ.

ಏನಿದು ಪ್ರಕರಣ?: ಫೆಬ್ರವರಿ 2 ರಂದು ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ತಮ್ಮ ನಿವಾಸದಲ್ಲಿ ನಡೆದ ಸಭೆಯಲ್ಲಿ ಯಡಿಯೂರಪ್ಪ ತನ್ನ ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ 17 ವರ್ಷದ ಬಾಲಕಿಯ ತಾಯಿ ನೀಡಿದ ದೂರಿನ ಆಧಾರದ ಮೇಲೆ ಈ ವರ್ಷ ಮಾರ್ಚ್ 14 ರಂದು ಪ್ರಕರಣ ದಾಖಲಿಸಲಾಗಿತ್ತು. 2024ರ ಫೆಬ್ರವರಿ 2ರಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರು 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಮಾರ್ಚ್ 14ರಂದು ಪೋಕ್ಸೊ ಕಾಯ್ದೆ ಅಡಿಯಲ್ಲಿ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿತ್ತು.

7ನೇ ವೇತನ ಆಯೋಗ, OPS ಜಾರಿಗೆ ನೌಕರರ ಆಗ್ರಹ: ಜು. 29ರಿಂದ ಮುಷ್ಕರದ ಎಚ್ಚರಿಕೆ

ಬೆಂಗಳೂರು, ಜು.12– 7ನೇ ವೇತನ ಆಯೋಗ ವರದಿ ಹಾಗೂ ಹಳೆಯ ಪಿಂಚಣಿ ಯೋಜನೆ ಜಾರಿಗೆ ಆಗ್ರಹಿಸಿ ವಿಧಾನಸೌಧದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಪ್ರತಿಭಟನೆ ಮಾಡಲಾಗಿದೆ. ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ ನೇತೃತ್ವದಲ್ಲಿ ಪ್ರತಿಭಟನೆ ಮಾಡಿದ್ದು, ಒಂದು ವೇಳೆ ಹಳೆಯ ಪಿಂಚಣಿ ಯೋಜನೆ ಜಾರಿಯಾಗದಿದ್ದರೆ ಜುಲೈ 29ರಿಂದ ಮುಷ್ಕರ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ತಮ್ಮ ಬೇಡಿಕೆ ಈಡೇರಿಸಿದರೆ ಮಾತ್ರ ಕೆಲಸಕ್ಕೆ ಹಾಜರಾಗುತ್ತೇವೆ. ಬೇಡಿಕೆ ಈಡೇರಿಸದಿದ್ದರೆ ಕೆಲಸ ಮಾಡದೇ ಮನೆಯಲ್ಲಿರುತ್ತೇವೆ ಎಂದು ರಾಜ್ಯ ಸರ್ಕಾರಕ್ಕೆ ಸರ್ಕಾರಿ ನೌಕರರ ಸಂಘದಿಂದ ಎಚ್ಚರಿಕೆ ನೀಡಲಾಗಿದೆ.


ಜೂನ್ 20ರಂದು ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ 7ನೇ ವೇತನ ಆಯೋಗದ ಶಿಫಾರಸು ಜಾರಿಗೆ ಅಧಿಕಾರವನ್ನು ಸಿದ್ದರಾಮಯ್ಯಗೆ ನೀಡಲಾಗಿತ್ತು. ಈ ಮೂಲಕ ಏಳನೇ ವೇತನ ಆಯೋಗ ಜಾರಿ ಮಾಡಬೇಕೆಂಬ ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಗೆ ಕಾಲ ಸನ್ನಿಹಿತವಾದಂತಾಗಿತ್ತು.

ಏಳನೇ ವೇತನ ಆಯೋಗ ಮಾರ್ಚ್ 16ರಂದು ಅಂತಿಮ ವರದಿ ಸಲ್ಲಿಸಲಾಗಿತ್ತು. ಸಿಎಂ ಸಿದ್ದರಾಮಯ್ಯಗೆ ಅಂತಿಮ ವರದಿ ಸಲ್ಲಿಸಿದ್ದ ಆಯೋಗ ಕರ್ನಾಟಕ ಸರ್ಕಾರಿ ನೌಕರರಿಗೆ 27.5% ವೇತನವನ್ನು ಹೆಚ್ಚಿಸಲು ಶಿಫಾರಸು ಮಾಡಿತ್ತು.

7ನೇ ವೇತನ ಆಯೋಗದ ವರದಿ ಜಾರಿಗಾಗಿ ಮತ್ತು ಹಳೆ ಪಿಂಚಣಿ ವ್ಯವಸ್ಥೆಗೆ ಬೇಡಿಕೆಯಿಟ್ಟು ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಸರ್ಕಾರಿ ನೌಕರರ ಸಂಘ ಈ ಹಿಂದೆ ಕೂಡ ಕರೆಕೊಟ್ಟಿತ್ತು. ಸರ್ಕಾರಿ ಸೇವೆಗಳಲ್ಲಿ ವ್ಯತ್ಯಯವಾಗಬಾರದು. ಸಾರ್ವಜನಿಕರಿಗೆ ತೊಂದರೆಯಾಗಬಾರದು ಸರ್ಕಾರ ಕಸರತ್ತು ನಡೆಸಿತ್ತು. ಸರ್ಕಾರದ ಮುಖ್ಯಕಾರ್ಯದರ್ಶಿ ಸಭೆ ನಡೆಸಿದರೂ ಸಕ್ಸಸ್ ಆಗಿರಲಿಲ್ಲ.

ಸಿಎಂ ಸಿದ್ದರಾಮಯ್ಯ ಈ ವಿಚಾರ ಸಂಬಂಧ ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ಮಾಡಿದ್ದರು. ಸಚಿವರು ಸೇರಿದಂತೆ ಸರ್ಕಾರದ ಮುಖ್ಯಕಾರ್ಯದರ್ಶಿ ವಂದಿತಾ ಶರ್ಮಾ ಹಾಗೂ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು. ಮೊದಲಿಗೆ 7ನೇ ಆಯೋಗದ ಮಧ್ಯಂತರ ವರದಿ ಕುರಿತಂತೆ ಚರ್ಚೆ ನಡೆಸಿ, ಇದರ ಅನುಷ್ಠಾನದ ಸಾಧಕ ಬಾಧಕಗಳ ಪರಾಮರ್ಶೆ ಮಾಡಿದ್ದರು. ಇದಾದ ಬಳಿಕ ಸರ್ಕಾರಿ ನೌಕರರ ಸಂಘದ ಮುಖಂಡರ ಜತೆ ಸಭೆ ನಡೆಸಿದ ಸಿಎಂ ಬೇಡಿಕೆ ಈಡೇರಿಸೋದಾಗಿ ಭರವಸೆ ನೀಡಿ ಮುಷ್ಕರ ಕೈಬಿಡುವಂತೆ ಮನವಿ ಮಾಡಿದ್ದರು.


ಕರ್ನಾಟಕದಲ್ಲಿ ಸ್ಮಾರ್ತ ಬ್ರಾಹ್ಮಣರು : ನೆಲೆ ಹಿನ್ನೆಲೆ ಪುಸ್ತಕ ಲೋಕಾರ್ಪಣೆ ಸಮಾರಂಭ



ಮೈಸೂರು, ಜು. 12– ಹರಿವು ಬುಕ್ಸ್ ವತಿಯಿಂದ ಡಾ. ಟಿ.ಆರ್. ಅನಂತರಾಮು ಅವರು ಸಂಪಾದಿಸಿರುವ ಕರ್ನಾಟಕದಲ್ಲಿ ಸ್ಮಾರ್ತ ಬ್ರಾಹ್ಮಣರು : ನೆಲೆ ಹಿನ್ನೆಲೆ ಪುಸ್ತಕ ಲೋಕಾರ್ಪಣೆ ಸಮಾರಂಭವನ್ನು ಜು. 14 ರಂದು ಬೆಳಗ್ಗೆ 10 ಗಂಟೆಗೆ ಕುವೆಂಪುನಗರ, ಆದಿಚುಂಚನಗಿರಿ ರಸ್ತೆಯಲ್ಲಿರುವ ಗಾನಭಾರತಿ ಸಂಗೀತ ಮತ್ತು ನೃತ್ಯ ಶಾಲೆಯಲ್ಲಿ ಏರ್ಪಡಿಸಲಾಗಿದೆ.

ಹಿರಿಯ ಸಂಸ್ಕೃತ ವಿದ್ವಾಂಸರಾದ ಡಾ. ಎಚ್.ವಿ. ನಾಗರಾಜರಾವ್ ಕೃತಿ ಲೋಕಾರ್ಪಣೆ ಮಾಡುವರು. ಹಿರಿಯ ವಿದ್ವಾಂಸರು, ಪಂಪ ಪ್ರಶಸ್ತಿ ಪುರಸ್ಕೃತರಾದ ಡಾ. ಟಿ.ವಿ. ವೆಂಕಟಾಚಲಶಾಸ್ತ್ರಿ ಅಧ್ಯಕ್ಷತೆ ವಹಿಸಲಿದ್ದಾರೆ. ನಿವೃತ್ತ ಕನ್ನಡ ಪ್ರಾಧ್ಯಾಪಕ ಡಾ. ಎಸ್.ಎಸ್. ತಾರಾನಾಥ ಅತಿಥಿಗಳಾಗಿ ಆಗಮಿಸಲಿದ್ದು, ಕರ್ನಾಟಕದಲ್ಲಿ ಸ್ಮಾರ್ತ ಬ್ರಾಹ್ಮಣರು : ನೆಲೆ ಹಿನ್ನೆಲೆ ಪುಸ್ತಕದ ಸಂಪಾದಕ ಡಾ. ಟಿ.ಆರ್. ಅನಂತರಾಮು ಉಪಸ್ಥಿತರಿರುವರು.

ಕೆಆರ್‌ಎಸ್ ನೀರಿನ ಮಟ್ಟ




ಗರಿಷ್ಠ ಮಟ್ಟ	124.80 ಅಡಿ
ಶುಕ್ರವಾರ	104.55 ಅಡಿ
ಒಳಹರಿವು	3667 ಕ್ಯೂಸೆಕ್
ಹೊರಹರಿವು	2257 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಶುಕ್ರವಾರ	2283 ಅಡಿ
ಒಳಹರಿವು	5500 ಕ್ಯೂಸೆಕ್
ಹೊರಹರಿವು	5000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಶುಕ್ರವಾರ	2851.30 ಅಡಿ
ಒಳಹರಿವು	1673 ಕ್ಯೂಸೆಕ್
ಹೊರಹರಿವು	200 ಕ್ಯೂಸೆಕ್

ಹೆಣ್ಣು ಮಕ್ಕಳು ಉನ್ನತ ಹುದ್ದೆ ಗುರಿಯೊಂದಿಗೆ ಅಧ್ಯಯನ ಮಾಡಬೇಕು

ಕ್ಷೇತ್ರ ಶಿಕ್ಷಣಾಧಿಕಾರಿ ವಿವೇಕಾನಂದ ಸಲಹೆ

ಮೈಸೂರು, ಜು.12(ಎಂಟಿವೈ)– ಹೆಣ್ಣು ಮಕ್ಕಳು ಉನ್ನತ ಶಿಕ್ಷಣ ಪಡೆಯುವ ಮೂಲಕ ಉನ್ನತ ಹುದ್ದೆಗಳನ್ನು ಅಲಂಕರಿಸುವ ಗುರಿಯೊಂದಿಗೆ ಅಧ್ಯಯನ ಮಾಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಿವೇಕಾನಂದ ಸಲಹೆ ನೀಡಿದ್ದಾರೆ.



ಮೈಸೂರು ತಾಲೂಕಿನ ವರಕೋಡು ಗ್ರಾಮದ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ನಿಲಯದಲ್ಲಿ ನೂತನ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ ಜರುಗಿತು.

ಮೈಸೂರು ತಾಲೂಕಿನ ವರಕೋಡು ಗ್ರಾಮದ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ನಿಲಯದಲ್ಲಿ ನೂತನ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದ ವತಿಯಿಂದ ನಡೆಯುವ ವಿದ್ಯಾರ್ಥಿನಿಲಯಕ್ಕೆ ಬಡ ಹಾಗೂ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳೇ ಹೆಚ್ಚಾಗಿ ಬರುತ್ತಾರೆ. ವಿದ್ಯಾರ್ಥಿನಿಲಯಗಳು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಸಮಾಜದಲ್ಲಿ ಉತ್ತಮ ಪ್ರಜೆಯಾಗಿ ರೂಪಿಸುವ ಮಹತ್ತರ ಜವಾಬ್ದಾರಿಯನ್ನು ನಿಭಾಯಿಸುತ್ತಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಗುರಿಯನ್ನಿಟ್ಟುಕೊಂಡು ಓದಬೇಕು ಎಂದರು.

ದೊಡ್ಡಮಟ್ಟದಲ್ಲಿ ಕನಸು ಕಂಡು ಉನ್ನತ ಶಿಕ್ಷಣ ಪಡೆಯಲು ಪ್ರಯತ್ನಿಸಿದರೆ, ಯಾವುದಾದರೂ ಸಾಧನೆ ಮಾಡಲು ಸಹಕಾರಿಯಾಗುತ್ತದೆ. ಅದರಲ್ಲೂ ಹೆಣ್ಣು ಮಕ್ಕಳಿಗೆ ಎಲ್ಲಾ ಕ್ಷೇತ್ರದಲ್ಲಿಯೂ ಉತ್ತಮ ಅವಕಾಶ ದೊರಕುತ್ತಿದೆ. ಎಲ್ಲಾ ಕ್ಷೇತ್ರಗಳಲ್ಲೂ ಹೆಣ್ಣು ಮಕ್ಕಳು ಸಾಧನೆ ಮಾಡುತ್ತಿದ್ದಾರೆ. ಇದನ್ನೇ ಪ್ರೇರಣೆಯಾಗಿಸಿಕೊಂಡು ವಿದ್ಯಾರ್ಥಿನಿಯರು ಶಿಕ್ಷಣ ಕ್ಷೇತ್ರ ಮಾತ್ರವಲ್ಲದೆ, ಔದ್ಯೋಗಿಕ ಕ್ಷೇತ್ರದಲ್ಲೂ ಸಾಧನೆ ಮಾಡಬೇಕು. ವರಕೋಡು ಗ್ರಾಮದಲ್ಲಿ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ನಿಲಯ ನಿರ್ಮಿಸಿರುವುದು ಈ ಭಾಗದ ವಿದ್ಯಾರ್ಥಿನಿಯರು ಮಾತ್ರವಲ್ಲದೆ, ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳ ವಿದ್ಯಾರ್ಥಿನಿಯರಿಗೂ ವರದಾನವಾಗಿದೆ. ಮುಂಬರುವ ವರ್ಷದಲ್ಲಿ ವರಕೋಡು ಗ್ರಾಮದಲ್ಲೇ ಪದವಿ ಪೂರ್ವ ಕಾಲೇಜು ಸ್ಥಾಪನೆಯಾಗುವ ಸಂಭವವಿದೆ ಎಂದರು.

ನಿಲಯ ಪಾಲಕರಾದ ಕವಿತಾ ಪಟೇಲ್ ಮಾತನಾಡಿ, ನಾಲ್ಕು ವರ್ಷದ ಹಿಂದೆ ಹೊಸದಾಗಿ ಆರಂಭವಾದ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ನಿಲಯದಲ್ಲಿ ಪ್ರಸ್ತುತ 9ರಿಂದ ದ್ವಿತೀಯ ಪಿಯುಸಿವರೆಗಿನ 42 ವಿದ್ಯಾರ್ಥಿನಿಯರು ದಾಖಲಾಗಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳ ವಿದ್ಯಾರ್ಥಿನಿಯರು ನಮ್ಮ ವಿದ್ಯಾರ್ಥಿನಿಲಯಕ್ಕೆ ದಾಖಲಾಗಿ, ಮೈಸೂರಿನ ವಿವಿಧ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವ್ಯಾಸಾಂಗ ಮಾಡುತ್ತಿದ್ದಾರೆ. ಶೈಕ್ಷಣಿಕ ಕ್ಷೇತ್ರವಲ್ಲದೆ, ಪಠ್ಯೇತರ ಚಟುವಟಿಕೆಯಲ್ಲಿಯೂ ವಿದ್ಯಾರ್ಥಿನಿಯರು ಸಾಧನೆ ಮಾಡುತ್ತಿದ್ದು, ವಿವಿಧೆಡೆ ನಡೆದ ಸ್ಪರ್ಧೆಗಳಲ್ಲಿ ವಿದ್ಯಾರ್ಥಿನಿಲಯದ ತಂಡಕ್ಕೆ ಹಲವು ಬಹುಮಾನ ಲಭಿಸಿದೆ. ಕಳೆದ ನಾಲ್ಕು ವರ್ಷಗಳಿಂದ ಹಲವು ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದು ಉತ್ತೀರ್ಣರಾಗಿದ್ದಾರೆ. ಶಾಲಾ-ಕಾಲೇಜಿನಿಂದ ವಾಪಸ್ಸಾದ ಬಳಿಕ ವಿದ್ಯಾರ್ಥಿನಿಯರಿಗೆ ವಿಷಯವಾರು ಅಧ್ಯಯನ ಮಾಡಲು ಕೆಲ ನಿಯಮ ಅನುಸರಿಸಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಸಂಪನ್ಮೂಲ ಅಧಿಕಾರಿ ಮಹದೇವು, ವರಕೋಡು ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕ ಎಂ.ಸಿ.ಶಿವಕುಮಾರ್, ಸಿಆರ್‌ಪಿ ದೀಪು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಹಸಿರು ನಮ್ಮ ಉಸಿರು

ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ

● ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶದ ವಿರುದ್ಧ ಮೇಲ್ಮನವಿ ● ಜು.14ರಂದು ಡಿಸಿಎಂ ಡಿಕೆಶಿ ನೇತೃತ್ವದಲ್ಲಿ ಸರ್ವಪಕ್ಷ ಸಭೆ



ಜಲ ಸಂಪನ್ಮೂಲ ಇಲಾಖೆಯೊಂದಿಗೆ ತುರ್ತು ಸಭೆ ನಡೆಸಿದ ನಂತರ ಸಿಎಂ ಸಿದ್ದರಾಮಯ್ಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಬೆಂಗಳೂರು, ಜು.12– ನಮ್ಮ ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಒಟ್ಟು 60 ಟಿಎಂಸಿ ನೀರು ಮಾತ್ರ ಇದೆ. ನಮಗೆ ಕುಡಿಯಲು, ಬೇಸಾಯಕ್ಕೆ ನೀರಿನ ಅಗತ್ಯವಿದೆ. ಹೀಗಾಗಿ ಜುಲೈ ಅಂತ್ಯದ ವರೆಗೆ ತಮಿಳುನಾಡಿಗೆ ನೀರು ಕೊಡಲು ಸಾಧ್ಯವಿಲ್ಲ. ಪ್ರತಿ ದಿನ 1 ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಕಾವೇರಿ ನಿಯಂತ್ರಣ ಸಮಿತಿ ನೀಡಿರುವ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲಾಗುವುದು. ರಾಜ್ಯದ ಮುಂದಿನ ನಡೆ ಬಗ್ಗೆ ಜುಲೈ 14ರಂದು ಸರ್ವಪಕ್ಷ ಸಭೆ ನಡೆಸಿ ತೀರ್ಮಾನಿಸಲಾಗುವುದು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಜುಲೈ 31ರವರೆಗೆ ತಮಿಳುನಾಡಿಗೆ ಪ್ರತಿನಿತ್ಯ 1 ಟಿಎಂಸಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣಾ ಸಮಿತಿ ಶಿಫಾರಸು ಮಾಡಿದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರಿಂದು ಜಲ ಸಂಪನ್ಮೂಲ ಇಲಾಖೆಯೊಂದಿಗೆ ತುರ್ತು ಸಭೆ ನಡೆಸಿದರು. ಗೃಹಕಚೇರಿ ಕೃಷ್ಣಾದಲ್ಲಿ ನಡೆದ ಈ ಮಹತ್ವದ ಸಭೆಯಲ್ಲಿ ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ಇಲಾಖೆಯ ಹಿರಿಯ ಅಧಿಕಾರಿಗಳು, ಕಾವೇರಿ ಕಣಿವೆ ಭಾಗದ ಸಚಿವರು ಭಾಗ ವಹಿಸಿದ್ದರು. ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸಿ ಮುಖ್ಯಮಂತ್ರಿ ಮಾತನಾಡಿದರು.

ಈ ಬಾರಿ ವಾಡಿಕೆ ಮಳೆ ಆಗುವುದೆಂಬ ಹವಾಮಾನ ಮುನ್ಸೂಚನೆ ಇದ್ದರೂ ಈವರೆಗೆ ಶೇ.28ರಷ್ಟು ಒಳಹರಿವಿನ ಕೊರತೆ ಇದೆ. ಇದನ್ನು ಸಿಡಬ್ಲ್ಯುಆರ್‌ಸಿಗೆ ಸ್ಪಷ್ಟವಾಗಿ ನಮ್ಮ ನಿಲುವನ್ನು ಹೇಳಿದ್ದೆವು. ಜೊತೆಗೆ ಜುಲೈ ಅಂತ್ಯದವರೆಗೆ ಯಾವುದೇ ತೀರ್ಮಾನ ಮಾಡದಂತೆ ಮನವಿ ಮಾಡಿದ್ದೆವು. ಆದರೂ ಸಿಡಬ್ಲ್ಯುಆರ್‌ಸಿ ಅವರು ಜುಲೈ 12ರಿಂದ ಪ್ರತಿ ದಿನ ಒಂದು ಟಿಎಂಸಿ ನೀರು ಬಿಡುಗಡೆ ಮಾಡುವಂತೆ ತಿಳಿಸಿದ್ದಾರೆ.

ಸರ್ಕಾರ ಈ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಬೇಕೆಂಬ ಅಭಿಪ್ರಾಯ ಇಂದಿನ ಸಭೆಯಲ್ಲಿ ವ್ಯಕ್ತವಾಯಿತು ಎಂದರು. ಜುಲೈ 14ರಂದು ಸಂಜೆ 4 ಗಂಟೆಗೆ ಸರ್ವಪಕ್ಷ ಸಭೆ ನಡೆಸಲು ತೀರ್ಮಾನಿಸಲಾಯಿತು. ಕರ್ನಾಟಕದ ನೀರಿನ ವಿಚಾರದಲ್ಲಿ ಎಲ್ಲ ಪಕ್ಷದವರೂ ಒಟ್ಟಾಗಿದ್ದೇವೆ. ಆದ್ದರಿಂದ ಸರ್ವಪಕ್ಷ ಸಭೆ ನಡೆಸಲಾಗುವುದು ಎಂದರು. ಕೇಂದ್ರ ಮಂತ್ರಿಗಳು, ಕಾವೇರಿ ಭಾಗದ ಲೋಕಸಭೆ, ರಾಜ್ಯಸಭೆ ಸದಸ್ಯರು ಮತ್ತು ಶಾಸಕರನ್ನು ಸಹ ಸಭೆಗೆ ಆಹ್ವಾನಿಸಲಾಗುವುದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದು ಕೊಂಡು ಸರ್ಕಾರದ ಮುಂದಿನ ಹೆಜ್ಜೆಯನ್ನು ತೀರ್ಮಾನಿಸ ಲಾಗುವುದು ಎಂದರು.

ಬಿಳಿಗುಂಡ್ಲುವಿನಲ್ಲಿ ಅಳತೆ ಮಾಡುವಾಗ, ಕಬಿನಿ ಅಣೆಕಟ್ಟಿನ ಒಳಹರಿವಿನಷ್ಟು ನೀರನ್ನು ತಮಿಳು ನಾಡಿಗೆ ಬಿಡಲಾಗುತ್ತಿದೆ ಎಂದು ಅವರು ತಿಳಿಸಿದರು. ಕಾವೇರಿ ಜಲಾನಯನ ಪ್ರದೇಶದ ಎಲ್ಲಾ 4 ಜಲಾಶಯಗಳಲ್ಲಿ ಒಟ್ಟು ಕೇವಲ 60 ಟಿಎಂಸಿ ನೀರು ಲಭ್ಯವಿದೆ. ಕೃಷಿ ಚಟುವಟಿಕೆಗಳಿಗೂ ನಾವು ನೀರು ಒದಗಿಸಬೇಕಾಗಿದೆ. ಮಳೆ ಕೊರತೆಯನ್ನು ಗಮನದಲ್ಲಿರಿಸಿ ಜುಲೈ ಅಂತ್ಯದವರೆಗೆ ಕಾಯಲು ಮನವಿ ಮಾಡಿದ್ದೇವೆ. ಕಳೆದ ಮೂರು ದಿನಗಳಿಂದ ಕಬಿನಿ ಜಲಾಶಯದಿಂದ ನೀರು ಬಿಡುತ್ತಿದ್ದೇವೆ ಕಬಿನಿಗೆ ಎಷ್ಟು ಒಳಹರಿವು ಇದೆಯೋ, ಅಷ್ಟೇ ಹೊರಹರಿವು ಸಹ ಬಿಡ್ತಿದ್ದೇವೆ. ಕಬಿನಿ ಜಲಾಶಯ 96% ತುಂಬಿರುವ ಕಾರಣ ನೀರು ಹರಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಜು.15ರಿಂದ ವಿಧಾನ ಮಂಡಲ ಅಧಿವೇಶನ



ಬೆಂಗಳೂರು, ಜು.12–ಜುಲೈ 15ರಿಂದ ಜು.26ರವರೆಗೆ 16ನೇ ವಿಧಾನಸಭೆಯ 4ನೇ ಅಧಿವೇಶನ ನಡೆಯಲಿದೆ. ಒಟ್ಟು 9 ದಿನಗಳ ಕಾಲ ನಡೆಯುವ ಅಧಿವೇಶನದಲ್ಲಿ ಸರ್ಕಾರದಿಂದ ಸ್ವೀಕರಿಸಲಾಗುವ ವಿಧೇಯಕಗಳನ್ನು ಪರ್ಯಾಯಾಲೋಚನೆಗೆ ಒಳಪಡಿಸುವುದು ಹಾಗೂ ಅಂಗೀಕಾರಕ್ಕೆ ತೆಗೆದುಕೊಳ್ಳುವುದಾಗಿ ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ಮಾತನಾಡಿದ ಅವರು, 9 ದಿನಗಳ ಕಾಲ ಪ್ರಶ್ನೋತ್ತರ ಕಲಾಪ ನಿಗದಿಪಡಿಸಲಾಗಿದೆ. ಇದರೊಂದಿಗೆ ಗಮನ ಸೆಳೆಯುವ ಸೂಚನೆ, ಶೂನ್ಯವೇಳೆ, ನಿಲುವಳಿ ಸೂಚನೆ, ನಿಯಮ 69ರ ಸೂಚನೆಗಳು, ಖಾಸಗಿ ಸದಸ್ಯರ ಕಾರ್ಯಕಲಾಪಗಳನ್ನು ನಡೆಸಲಾಗುವುದು. ಅಲ್ಲದೇ 2023–24ನೇ ಸಾಲಿನ ವಿಧಾನ ಮಂಡಲ ಅಥವಾ ವಿಧಾನಸಭೆಯ ಸ್ಥಾಯಿ ಸಮಿತಿಗಳ ಅವಧಿ ಆಗಸ್ಟ್ 8ಕ್ಕೆ ಮುಕ್ತಾಯಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ 2024–25ನೇ ಸಾಲಿಗೆ ಹೊಸದಾಗಿ ಸಮಿತಿಗಳನ್ನು ರಚಿಸುವ ಸಂಬಂಧ ಚುನಾವಣಾ ಪ್ರಸ್ತಾಪವನ್ನು ಮಂಡಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪೀಕರ್ ಮಾಹಿತಿ ನೀಡಿದ್ದಾರೆ.

'ಅತ್ಯುತ್ತಮ ಶಾಸಕ ಪ್ರಶಸ್ತಿ ಆಯ್ಕೆ ಸಮಿತಿ' ರಚನೆಯಾಗಿದೆ. ಈ ಬಾರಿ ಅತ್ಯುತ್ತಮ ಶಾಸಕರಿಗೆ ಪ್ರಶಸ್ತಿ ನೀಡುತ್ತಿದ್ದೇವೆ. ಸಭೆಗೆ ಬೇಗ ಹಾಜರಾಗುವ ಶಾಸಕರಿಗೆ ಟೀ ಕಪ್ ವಿತರಿಸಲಾಗುತ್ತದೆ. ಕಳೆದ ಬಾರೀ ನೀಡಿದ ಅವಕಾಶವನ್ನು ಶಾಸಕರಿಗೆ ಈ ಬಾರಿಯೂ ನೀಡಲಾಗುತ್ತದೆ. ಇಡೀ ದಿನ ಇರುವ ಸದಸ್ಯರಿಗೆ ವಿಶೇಷ ಅವಕಾಶ ನೀಡಲಾಗುತ್ತೆ. ಅವರು ಎಷ್ಟೊತ್ತಿಗೆ ಬರುತ್ತಾರೆ, ಹೋಗುತ್ತಾರೆ ಎಂಬುದನ್ನು ಗಮನದಲ್ಲಿಟ್ಟುಕೊಂಡು ಕಾಲಾವಕಾಶ ನೀಡುತ್ತೇವೆ. ಕಲಾಪ ವೀಕ್ಷಣೆಗೆ ಬರುವ ಮಕ್ಕಳು, ವಿದ್ಯಾರ್ಥಿಗಳಿಗೆ ಎಂದಿನಂತೆ ವ್ಯವಸ್ಥೆ ಇರಲಿದೆ ಎಂದು ವಿವರಿಸಿದ್ದಾರೆ.

ಇದೇ ವೇಳೆ ವಿಧಾನ ಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, 2022–23ನೇ ಸಾಲಿನ ಅತ್ಯುತ್ತಮ ಶಾಸಕರ ಪ್ರಶಸ್ತಿ ಬಹುತೇಕ ಆಯ್ಕೆ ಆಗಿದೆ. ಮೊದಲ ದಿನದ ಅಧಿವೇಶನ ಬೆಳಗ್ಗೆ 11 ಗಂಟೆಗೆ ಆರಂಭವಾಗಲಿದೆ. ವರ್ಷಕ್ಕೆ 60 ದಿನ ಅಧಿವೇಶನ ನಡೆಯಬೇಕು, ಆದರೆ ಇತ್ತೀಚಿನ ದಿನಗಳಲ್ಲಿ ಆಗುತ್ತಿಲ್ಲ. ಸಿಎಂ ಬಳಿ ಈ ಬಗ್ಗೆ ಚರ್ಚೆ ಮಾಡುತ್ತೇವೆ ಎಂದರು. ಸಚಿವರ ಕೊಠಡಿ ನವೀಕರಣ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ವಿಧಾನಸೌಧದಲ್ಲಿರೋ ಸಚಿವರ ಕೊಠಡಿಗಳಿಗೆ ಅನುಮತಿ ಪಡೆದು ಸುಣ್ಣ–ಬಣ್ಣ ಬಳಿಸಲು ಅವಕಾಶ ಇದೆ. ಆದರೆ ಹೇಗೆ ಬೇಕೋ ಹಾಗೆ ನವೀಕರಣ ಮಾಡಲು ಅವಕಾಶ ವಿಲ್ಲ. ವಿಧಾನಸೌಧ ವಾಸ್ತು ಪ್ರಕಾರವಾಗಿಯೇ ನಿರ್ಮಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

PUBLIC NOTICE

Notice is hereby given that SRI-.P.M.BELLIAPPA, son of Late P.M. Medappa, is desirous to sell the under mentioned property to my client and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at DOOR No.2765/1A D13/A1, "KEYANS", 5TH MAIN ROAD, V.V. PURAM (V.V. MOHALLA), MYSORE – 570002, within 15 (Fifteen) days from the date of this publication, as otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

SCHEDULE PROPERTY

Model House No.07, situated at T.N.Pura Road, 2nd Stage Layout, Siddarthnagara, Nazar bad Mohalla, Mysore, site measuring East to West 50.00 feet and North to South 71.00 feet, with building thereon, bounded on: East: Model House No.06, West: Model House No.08, North: Model House No.10 and 11 (Big House) and South: Road.

Sd/- Dhirendra Kumar R. Mehta
Advocate , KEY-ANS LAW SOLUTIONS
Date: 12.07.2024, Place: Mysore

16 ಸಾವಿರ ವೈದ್ಯಕೀಯ ಸಿಬ್ಬಂದಿ ಕೊರತೆ: ಕೇಂದ್ರ, ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಖಡಕ್ ಸೂಚನೆ



ಬೆಂಗಳೂರು, ಜು.12– ಕರ್ನಾಟಕದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 16 ಸಾವಿರ ವೈದ್ಯಕೀಯ ಸಿಬ್ಬಂದಿ ಕೊರತೆ ಸಂಬಂಧ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಸಲ್ಲಿಸಿದ್ದ ಸಾರ್ವ ಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ಮಾಡ ಲಾಗಿದೆ. ಜು.26ರೊಳಗೆ ಪ್ರತಿಕ್ರಿಯೆ ಸಲ್ಲಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ. ರಾಜ್ಯದಲ್ಲಿ ಡೆಂಗ್ಯೂಯಿಂದ ಜನರಿಗೆ ಸಮಸ್ಯೆಯಾಗುತ್ತಿದೆ. ಕೇಂದ್ರ ಸರ್ಕಾರದ ಹಣಕಾಸಿನ ನೆರವನ್ನು ರಾಜ್ಯ ಬಳಸಿಲ್ಲ. ವೈದ್ಯರ ಕಡ್ಡಾಯ ಗ್ರಾಮೀಣ ಸೇವೆ ಯನ್ನೂ ಸ್ಥಗಿತಗೊಳಿಸಿದೆ. ಹೀಗಾಗಿ ನಗರ, ಹಳ್ಳಿಗಳಲ್ಲಿ ಸಮಸ್ಯೆಯಾಗಿದೆ ಎಂದು ಹೈಕೋರ್ಟ್‌ಗೆ ಅಮೈಕಸ್ ಕ್ಯೂರಿ ಶ್ರೀಧರ ಪ್ರಭು ಮಾಹಿತಿ ನೀಡಿದ್ದಾರೆ.

ಇದೇ ವಿಚಾರವಾಗಿ ಇತ್ತೀಚೆಗೆ ಹೈಕೋರ್ಟ್ ಕಳವಳ ವ್ಯಕ್ತಪಡಿ ಸಿತ್ತು. ಅಷ್ಟೇ ಅಲ್ಲದೇ ಸ್ವಯಂ ಪ್ರೇರಿತವಾಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ದಾಖಲಿಸಿಕೊಂಡಿತ್ತು. ಅಲ್ಲದೇ ಈ ಬಗ್ಗೆ ರಾಜ್ಯ ಸರ್ಕಾರಕ್ಕೆ ನೋಟಿಸ್ ಕೂಡ ಜಾರಿ ಮಾಡಿತ್ತು. ಫೆಡರೇಶನ್ ಆಫ್ ಇಂಡಿಯನ್ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಎಫ್‌ಐಸಿಸಿಐ) ನಡೆಸಿದ ಅಧ್ಯಯನದ ಆಧಾರದ ಮೇಲೆ ಪತ್ರಿಕೆಯ ವರದಿಯನ್ನು ಹೈಕೋರ್ಟ್ ಗಮನಕ್ಕೆ ತರಲಾಗಿದ್ದು, ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯನ್ನು ಸಲ್ಲಿಸುವಂತೆ ರಿಜಿಸ್ಟ್ರಾರ್ ಜನರಲ್‌ಗೆ ನಿರ್ದೇಶನ ನೀಡಿತು. ಬಳಿಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ್ದ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರ ಪೀಠವು ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಮುಂದೂಡಿತು.

ವಿಶ್ವಾಸ ಮತ ಗಳಿಸುವಲ್ಲಿ ವಿಫಲ: ನೇಪಾಳದಲ್ಲಿ ಪುಷ್ಪ ಕಮಲ್ ದಹಲ್ ಸರ್ಕಾರ ಪತನ



ಕಠ್ಮಂಡು: ನೇಪಾಳದ ಪ್ರಧಾನಿ ಪುಷ್ಪ ಕಮಲ್ ದಹಾಲ್ 'ಪ್ರಚಂಡ' ಭಾರೀ ಹಿನ್ನಡೆ ಅನುಭವಿಸಿದ್ದಾರೆ. 'ಪ್ರಚಂಡ' ಸಂಸತ್ತಿನಲ್ಲಿ ವಿಶ್ವಾಸ ಮತ ಕಳೆದು ಕೊಂಡಿದ್ದಾರೆ. ಮಾಜಿ ಪ್ರಧಾನಿ ಕೆಪಿ ಶರ್ಮಾ ಓಲಿ ನೇತೃತ್ವದ ಸಿಪಿಎನ್–ಯುಎಂಎಲ್ ಅವರ ಸರ್ಕಾರಕ್ಕೆ ಬೆಂಬಲವನ್ನು ಹಿಂತೆಗೆದುಕೊಂಡ ನಂತರ 'ಪ್ರಚಂಡ' ಅವರು ವಿಶ್ವಾಸ ಮತ ಸಾಬೀತುಪಡಿಸಬೇಕಾಗಿತ್ತು. ಪ್ರಚಂಡ ಅವರು ಸಂಸತ್ತಿನಲ್ಲಿ ಅವಿಶ್ವಾಸ ಮತವನ್ನು ಎದುರಿಸಿದ್ದು ಇದು ಐದನೇ ಬಾರಿ. ಇದಕ್ಕೂ ಮುನ್ನ ನಾಲ್ಕು ಪ್ರಯತ್ನಗಳಲ್ಲಿ ವಿಶ್ವಾಸಮತ ಪಡೆಯುವಲ್ಲಿ ಯಶಸ್ವಿಯಾಗಿದ್ದರು. ದಹಾಲ್‌ನ ಅತಿದೊಡ್ಡ ಒಕ್ಕೂಟದ ಪಾಲುದಾರ CPN-UML ಜುಲೈ 3ರಂದು ತನ್ನ ಬೆಂಬಲವನ್ನು ಹಿಂತೆಗೆದುಕೊಂಡಿತು. 2022ರ ಡಿಸೆಂಬರ್ 25ರಂದು ಪ್ರಧಾನಿಯಾದ ನಂತರ, ದಹಾಲ್ ನಿರಂತರವಾಗಿ ಅಲ್ಪಸಂಖ್ಯಾತ ಸರ್ಕಾರವನ್ನು ಮುನ್ನಡೆಸುತ್ತಿದ್ದು ಸುಮಾರು 19 ತಿಂಗಳಲ್ಲೇ ಪತನವಾಗಿದೆ. 275 ಸದಸ್ಯರ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನಲ್ಲಿ 69 ವರ್ಷದ ಪ್ರಚಂಡ ಅವರು 63 ಮತಗಳನ್ನು ಪಡೆದರು, ಪ್ರಸ್ತಾವನೆಗೆ ವಿರುದ್ಧವಾಗಿ 194 ಮತಗಳು ಚಲಾವಣೆಯಾಗಿವೆ.

ಜೂನ್ 25 'ಸಂವಿಧಾನ ಹತ್ಯೆ ದಿನ'ವಾಗಿ ಆಚರಣೆ

ಕೇಂದ್ರ ಸರ್ಕಾರ ಘೋಷಣೆ

ನವದೆಹಲಿ, ಜು.12– ಕೇಂದ್ರ ಸರ್ಕಾರ ಜೂನ್ 25ನ್ನು ಸಂವಿಧಾನ ಹತ್ಯೆ ದಿನ ಎಂದು ಘೋಷಿಸಿದೆ. ಈ ಸಂಬಂಧ ಕೇಂದ್ರ ಸರ್ಕಾರ ಅಧಿಸೂಚನೆಯನ್ನೂ ಹೊರಡಿಸಿದೆ. ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗ 1975ರ ಜೂನ್ 25ರಂದು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದರು. ಹೀಗಾಗಿ ಆ ದಿನವನ್ನು ಸಂವಿಧಾನ ಹತ್ಯೆ ದಿನವಾಗಿ ಆಚರಣೆ ಮಾಡಲಾಗುವುದು ಎಂದು ಕೇಂದ್ರ ಸರ್ಕಾರ ಹೇಳಿದೆ.

1975ರ ಜೂನ್ 25ರಂದು ಅಂದಿನ ಪ್ರಧಾನಿ ಇಂದಿರಾಗಾಂಧಿಯವರು ತಮ್ಮ ಸರ್ವಾಧಿಕಾರಿ ಮನಸ್ಥಿತಿಯನ್ನು ಪ್ರದರ್ಶಿಸಿ, ದೇಶದಲ್ಲಿ ತುರ್ತು ಪರಿಸ್ಥಿತಿ ಹೇರುವ ಮೂಲಕ ಭಾರತದ ಪ್ರಜಾಪ್ರಭುತ್ವದ ಕತ್ತು ಹಿಸುಕಿದ್ದರು. ಲಕ್ಷಗಟ್ಟಲೆ ಜನರನ್ನು ವಿನಾಕಾರಣ ಜೈಲಿಗೆ ಹಾಕಲಾಯಿತು ಮತ್ತು ಮಾಧ್ಯಮಗಳ ಧ್ವನಿಯನ್ನು ಹತ್ತಿಕ್ಕಲಾಯಿತು. ಭಾರತ ಸರ್ಕಾರವು ಪ್ರತಿ ವರ್ಷ ಜೂನ್ 25 ಅನ್ನು 'ಸಂವಿಧಾನ ಹತ್ಯೆ ದಿನ' ಎಂದು ಆಚರಿಸಲು ನಿರ್ಧರಿಸಿದೆ. 1975ರ ತುರ್ತುಪರಿಸ್ಥಿತಿಯ ಅಮಾನವೀಯ ನೋವನ್ನು ಸಹಿಸಿಕೊಂಡವರೆಲ್ಲರ ಅಪಾರ ಕೊಡುಗೆಯನ್ನು ಈ ದಿನ ನೆನಪಿಸುತ್ತದೆ ಎಂದು ಕೇಂದ್ರ ಸಚಿವ ಅಮಿತ್ ಶಾ ಟ್ವೀಟ್ ಮಾಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೈಗೊಂಡಿರುವ ಈ ನಿರ್ಧಾರದ ಉದ್ದೇಶವು ಸರ್ವಾಧಿಕಾರಿ ಸರ್ಕಾರದ ಅಸಂಖ್ಯಾತ ಚಿತ್ರಹಿಂಸೆ ಮತ್ತು ದಬ್ಬಾಳಿಕೆಯನ್ನು ಎದುರಿಸುತ್ತಿದ್ದರೂ ಪ್ರಜಾಪ್ರಭುತ್ವವನ್ನು ಪುನರುಜ್ಜೀವನಗೊಳಿಸಲು ಹೋರಾಡಿದ ಲಕ್ಷಾಂತರ ಜನರ ಹೋರಾಟವನ್ನು ಗೌರವಿಸುವುದಾಗಿದೆ. 'ಸಂವಿಧಾನ ಹತ್ಯೆ ದಿನ' ಪ್ರಜಾಪ್ರಭುತ್ವವನ್ನು ರಕ್ಷಿಸಲು ಮತ್ತು ಪ್ರತಿಯೊಬ್ಬ ಭಾರತೀಯನೊಳಗೆ ವೈಯಕ್ತಿಕ ಸ್ವಾತಂತ್ರ್ಯದ ಅಮರ ಜ್ವಾಲೆಯನ್ನು ಜೀವಂತವಾಗಿಡಲು ಕೆಲಸ ಮಾಡುತ್ತದೆ, ಇದರಿಂದ ಭವಿಷ್ಯದಲ್ಲಿ ಕಾಂಗ್ರೆಸ್ ನಂತಹ ಯಾವುದೇ ಸರ್ವಾಧಿಕಾರಿ ಮನಸ್ಥಿತಿ ಪುನರಾವರ್ತನೆಯಾಗುವುದಿಲ್ಲ ಎಂದು ಹೇಳಿದೆ.

ರಾಮನಗರ ಜಿಲ್ಲೆ ಮರುನಾಮಕರಣಕ್ಕೆ ಸಂಸದ ಡಾ.ಮಂಜುನಾಥ್ ವಿರೋಧ: ಸಿಎಂಗೆ ಪತ್ರ



ರಾಮನಗರ, ಜು.12–ಜಿಲ್ಲೆಯ ಹೆಸರು ಮರು ನಾಮಕರಣ ವಿಚಾರಕ್ಕೆ ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್ ಮಂಜುನಾಥ್ ವಿರೋಧ ವ್ಯಕ್ತಪಡಿಸಿದ್ದಾರೆ. ಹೆಸರು ಬದಲಿಸದಂತೆ ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದಿದ್ದಾರೆ.

ರಾಮನಗರಕ್ಕೆ ಭಾವನಾತ್ಮಕ, ಐತಿಹಾಸಿಕ ಹಿನ್ನೆಲೆಯಿದೆ. ಅಭಿವೃದ್ಧಿ ಮಾಡಬೇಕಾದರೆ ಮರುನಾಮಕರಣ ಮಾಡುವ ಬದಲು ರಾಮನಗರವನ್ನೇ ಬ್ರ್ಯಾಂಡ್ ರಾಮನಗರವನ್ನಾಗಿ ಮಾಡಿ. ಹಾಗಿದ್ದಾಗ ಮಾತ್ರ ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಬಹು ದಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈಗಾಗಲೇ ಬೆಂಗಳೂರು ಮಹಾನಗರವು ಬಹಳಷ್ಟು ವಿಸ್ತಾರವಾಗಿ ಬೆಳೆದಿದೆ. ಇಲ್ಲಿ ವಾಸಿಸುತ್ತಿರುವ ನಾಗರೀಕರಿಗೆ ಸೂಕ್ತ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದೇ ದುಸ್ತರವಾಗಿದೆ ಎಂದರು.

University of Mysore
Department of Studies in Physics
Manasagangotri, Mysuru-570006.

ಟೆಂಡರ್ ಪ್ರಕಟಣೆ

"ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https://kppp.karnataka.gov.in ನಲ್ಲಿ ಎರಡು ಬಿಡ್ ವ್ಯವಸ್ಥೆಗಳ ಮೂಲಕ ಆನ್‌ಲೈನ್ ಟೆಂಡರ್‌ಗಳನ್ನು, ಮೈಸೂರು ವಿಶ್ವವಿದ್ಯಾನಿಲಯದ ಭೌತಶಾಸ್ತ್ರದ ವಿಭಾಗದಿಂದ High-performance Computational Workstation ಪೂರೈಸಲು ಮತ್ತು ಸ್ಥಾಪಿಸಲು ಟೆಂಡರ್‌ದಾರರಿಂದ ಆಹ್ವಾನಿಸಲಾಗಿದೆ. ವಿವರಗಳಿಗಾಗಿ ಮುಂದಿನ ಟೆಂಡರ್ ಉಲ್ಲೇಖ :UOM/2024-25/IND0023, https://kppp.karnataka.gov.in/#/ portal/searchTender/reserve ವೆಬ್‌ಸೈಟ್‌ಗೆ ಭೇಟಿ ನೀಡಿ

Sd/- Chairperson

ದೇವರಾಜ ಅರಸ್ ಟರ್ಮಿನಲ್ ಹಗರಣ

ಬಿಜೆಪಿ ಮಾಜಿ ಶಾಸಕ ಡಿ.ಎಸ್.ವೀರಯ್ಯ ಬಂಧನ



ವೀರಯ್ಯ

ಬೆಂಗಳೂರು, ಜು.12– ಡಿ.ದೇವರಾಜ ಅರಸು ಟ್ರಕ್ ಟರ್ಮಿನಲ್ ಹಗರಣ ಸಂಬಂಧ ಬಿಜೆಪಿ ನಾಯಕ, ವಿಧಾನ ಪರಿಷತ್ ಮಾಜಿ ಸದಸ್ಯ ಡಿ.ಎಸ್. ವೀರಯ್ಯ ಅವರನ್ನು ಸಿಐಡಿ ಪೊಲೀಸರು ಬಂಧಿಸಿದ್ದಾರೆ. 2021ರಿಂದ 2023ರ ಅವಧಿಯಲ್ಲಿ ಡಿಡಿಯುಟಿಟಿಎಲ್‌ನಲ್ಲಿ ಗುತ್ತಿಗೆ ನೀಡಿಕೆಯಲ್ಲಿ ಅಕ್ರಮ ನಡೆದಿದೆ ಎಂದು ವಿಲ್ಸನ್ ಗಾರ್ಡನ್ ಠಾಣೆಗೆ ಹಾಲಿ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ್ ದೂರು ನೀಡಿದ್ದರು. ಈ ಪ್ರಕರಣವನ್ನು ಸಿಐಡಿ ತನಿಖೆಗೆ ಸರ್ಕಾರ ವಹಿಸಿತ್ತು. ತನಿಖೆಗಿಳಿದ ಸಿಐಡಿ ಅಧಿಕಾರಿಗಳು ಇಂದು (ಜುಲೈ 12) ಮಾಜಿ ಶಾಸಕ ವೀರಯ್ಯ ಅವರನ್ನು ಬಂಧಿಸಿದ್ದಾರೆ.

2021ರಿಂದ 2023ರ ನಡುವೆ ಡಿ.ಎಸ್.ವೀರಯ್ಯ ಡಿ.ದೇವರಾಜ ಅರಸು ಟ್ರಕ್ ಟರ್ಮಿನಲ್ ನಿಗಮದ ಅಧ್ಯಕ್ಷರಾಗಿದ್ದಾಗ ತುಂಡು ಗುತ್ತಿಗೆ ಕಾಮಗಾರಿಯಲ್ಲಿ 47.10 ಕೋಟಿ ರೂಪಾಯಿ ಅಕ್ರಮ ನಡೆದಿದೆ ಎಂಬ ಆರೋಪದ ಮೇರೆಗೆ ವೀರಯ್ಯ ವಿರುದ್ಧ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆ ಪೊಲೀಸರು ಭಾರತೀಯ ದಂಡ ಸಂಹಿತೆ 1860(ಐಪಿಸಿ) ಕಲಂ 120ಬಿ, 409, 420, 465, 468 ಮತ್ತು 471ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದರು.

ಏನಿದು ಅಕ್ರಮ: 2021ರ ಅಕ್ಟೋಬರ್ 25ರಂದು ಡಿ.ದೇವರಾಜ ಅರಸು ಟ್ರಕ್ ಟರ್ಮಿನಲ್‌ನಲ್ಲಿ 194ನೇ ನಿರ್ದೇಶಕ ಮಂಡಳಿ ಸಭೆಯಲ್ಲಿ ಟ್ರಕ್ ಟರ್ಮಿನಲ್‌ಗಳ ದುರಸ್ತಿ ಹಾಗೂ ನಿರ್ವಹಣೆಗೆ 10 ಕೋಟಿವರೆಗೆ ತುಂಡು ಗುತ್ತಿಗೆ ನೀಡಲು ಅನುಮೋದನಾ ನಿರ್ಣಯ ಮಾಡಲಾಗಿತ್ತು. ಆದರೆ ಆನಂತರ ಕಾಮಗಾರಿ ನಡೆಸದೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಹಣ ಪಡೆದಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಈ ಬಗ್ಗೆ ವಿಚಾರಣೆ ನಡೆಸಿದ ನಿಗಮದ ಹಾಲಿ ಎಂಡಿ, ಬಳಿಕ ವಿಲ್ಸನ್ ಗಾರ್ಡನ್ ಠಾಣೆಗೆ ತುಂಡು ಗುತ್ತಿಗೆ ಕಾಮಗಾರಿಯಲ್ಲಿ 47.10 ಕೋಟಿ ಅಕ್ರಮ ನಡೆದಿದೆ ಎಂದು ದೂರು ನೀಡಿದ್ದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು

ಹುಲ್ಲಹಳ್ಳಿ ರಸ್ತೆ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ – 571 301
ದೂರವಾಣಿ: 08221–226309, ಇಮೇಲ್: apmcnanjangud@rediffmail.com

ಸಂಖ್ಯೆ: ಕೃಉಮಾಸ(ನಂ)/162/2024–25 ದಿನಾಂಕ: 11.07.2024

ಪ್ರಕಟಣೆ

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ನಂಜನಗೂಡು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ನಿರ್ಮಿಸಿರುವ **50 ಮೆ.ಟನ್ ಸಾಮರ್ಥ್ಯದ ವೇಬ್ರಿಡ್ಜ್ (ಎಲೆಕ್ಟ್ರಾನಿಕ್ ತೂಕದ ಯಂತ್ರವನ್ನು) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವತ್ತಿನ ಹಂಚಿಕೆ ನಿಯಂತ್ರಣ)** ನಿಯಮಗಳು 2004ರ ರ ಪ್ರಕಾರ ಲೀವ್ ಅಂಡ್ ಲೈಸನ್ಸ್ ಆಧಾರದ ಮೇಲೆ ಟೆಂಡರ್–ಕಂ–ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಲು ಅರ್ಹ ಪೇಟೆ ಕಾರ್ಯಕರ್ತರು ಹಾಗೂ ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಲೆಕ್ಟ್ರಾನಿಕ್ ತೂಕದ ಯಂತ್ರದ ವಿವರ	ಎಲೆಕ್ಟ್ರಾನಿಕ್ ತೂಕದ ಯಂತ್ರ	ನಿಗಧಿಪಡಿಸಿದ ಮಾಸಿಕ ಲೀವ್ ಅಂಡ್ ಲೈಸನ್ಸ್ ಶುಲ್ಕ	ಪಾವತಿಸಬೇಕಾದ ಮುಂಗಡ ಠೇವಣಿ
ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ನಿರ್ಮಿಸಿರುವ 50 ಮೆ.ಟನ್ ಸಾಮರ್ಥ್ಯದ ಎಲೆಕ್ಟ್ರಾನಿಕ್ ತೂಕದ ಯಂತ್ರ	01	15,500-00	31,000

ಷರತ್ತು ಹಾಗೂ ನಿಭಂಧನೆಗಳು

1. **ದಿನಾಂಕ : 29/07/2024** ಒಳಗಾಗಿ **ರೂ. 500–00 ಗಳನ್ನು** ಕಛೇರಿಯಲ್ಲಿ ಪಾವತಿಸಿ ಅರ್ಜಿ ಸಲ್ಲಿಸಿ ನೋಂದಾವಣೆ ಮಾಡಿಕೊಳ್ಳತಕ್ಕದ್ದು.
2. ನೋಂದಾವಣೆ ಪಡೆದ ಅರ್ಜಿದಾರರು ನಮೂನೆ 6ರ ಅರ್ಜಿಯನ್ನು ಮುಚ್ಚಿದ ಲಕೋಟೆಯಲ್ಲಿ ಅರ್ಜಿ ಸಲ್ಲಿಸಲು **ಕೊನೆಯ ದಿನಾಂಕ: 03/08/2024 ರ ಮಧ್ಯಾಹ್ನ 12–00 ಗಂಟೆಯವರೆಗೆ**
3. ಬಹಿರಂಗ ಹರಾಜನ್ನು **03/08/2024 ರಂದು ಮಧ್ಯಾಹ್ನ 3–00 ಗಂಟೆಗೆ** ನಂಜನಗೂಡು ಸಮಿತಿಯ ಆಡಳಿತ ಕಛೇರಿಯ ಸಭಾಂಗಣದಲ್ಲಿ ನಡೆಸಲಾಗುವುದು.
4. **ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು** ಇವರ ಹೆಸರಿನಲ್ಲಿ ಮುಂಗಡ ಠೇವಣಿಯ ಡಿ.ಡಿ ಯನ್ನು ಖರೀದಿಸಿ ನಂಜನಗೂಡಿನಲ್ಲಿ ನಗದಾಗುವಂತೆ ಪ್ರತ್ಯೇಕ ಲಕೋಟೆಯಲ್ಲಿ ಟೆಂಡರ್ ಪೆಟ್ಟಿಗೆಯಲ್ಲಿ ಹಾಕುವುದು.
5. ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಟೆಂಡರ್ ಹಾಗು ಬಹಿರಂಗ ಹರಾಜು ಎರಡರಲ್ಲೂ ಭಾಗವಹಿಸತಕ್ಕದ್ದು. ಒಂದರಲ್ಲಿ ಭಾಗವಹಿಸಿದರೆ ಪರಿಗಣಿಸಲಾಗುವುದಿಲ್ಲ.
6. ಹೆಚ್ಚಿನ ಷರತ್ತು ಹಾಗೂ ನಿಭಂದನೆಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

ಸಹಿ/– (ಮಹೇಶ .ಬಿ)
ಕಾರ್ಯದರ್ಶಿ
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ

ಸಹಿ/– (ಶಿವಕುಮಾರ್ ಕಾಸ್ನೂರ್)
ಆಡಳಿತಾಧಿಕಾರಿ
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ

DIPR/MYS/KAVITA/250/24-25